

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಆಗಸ್ಟ್ 20 ಮಂಗಳವಾರ 2024

ಸಂಪುಟ: 45 | ಸಂಚಿಕೆ: 125 | ಪುಟಗಳು: 12 | ₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಮುಡಾ ನಿವೇಶನ ಹಂಚಿಕೆ ಹಗರಣ; ಸಿಎಂ ರಿಟ್ ಅರ್ಜಿ ಸಲ್ಲಿಕೆ
ಕೋರ್ಟ್ ಕಟಕಟೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭವಿಷ್ಯ

ವಿಚಾರಣೆ ಆ.29ಕ್ಕೆ ಮುಂದೂಡಿದ ಹೈಕೋರ್ಟ್

ಬೆಂಗಳೂರು, ಆ.19(ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಹಗರಣದ ವಿಚಾರಣೆಯನ್ನು ರಾಜ್ಯ ಹೈಕೋರ್ಟ್ ಈ ತಿಂಗಳ 29ಕ್ಕೆ ಮುಂದೂಡಿದೆ.

ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ನಾಳೆ ತನ್ನ ತೀರ್ಪನ್ನು ಪ್ರಕಟಿಸದಂತೆ ಹಾಗೂ ಈ ತಿಂಗಳ 29ರವರೆಗೂ ವಿಚಾರಣೆ ಮುಂದೂಡುವಂತೆ ಸೂಚಿಸಿದೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ (ಮುಡಾ) ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಬಿ.ಎಂ.ಪಾರ್ವತಿ ಅವರು ಅಕ್ರಮವಾಗಿ 14 ನಿವೇಶನ ಪಡೆದಿದ್ದಾರೆ ಎಂಬ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ತಮ್ಮ ವಿರುದ್ಧ ತನಿಖೆಗೆ ಅನುಮತಿ ನೀಡಿರುವುದನ್ನು ಸಿದ್ದರಾಮಯ್ಯ ಹೈಕೋರ್ಟ್‌ನಲ್ಲಿ ಇಂದು ಪ್ರಶ್ನಿಸಿದ್ದರು.

ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ವಿಶೇಷ ನ್ಯಾಯಪೀಠದ ಮುಂದೆ ಅರ್ಜಿ ವಿಚಾರಣೆಗೆ ಬಂದಿತು. ಮುಖ್ಯಮಂತ್ರಿ ಪರ ಸುಪ್ರೀಂಕೋರ್ಟ್‌ನ ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ ವಾದ ಮಂಡಿಸಿದರೆ, ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಪರ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅಲ್ಲದೆ, ಪ್ರತಿವಾದಿಗಳ ಪರ ಘಟಾನುಘಟಿ ವಕೀಲರಾದ ರಂಗನಾಥ್ ರೆಡ್ಡಿ, ಪ್ರಭುಲಿಂಗ ನಾವಡಗಿ, ಲಕ್ಷ್ಮಿ ಐಯ್ಯಂಗಾರ್ ಮತ್ತಿತರರು ವಾದ ಮಂಡಿಸಿದರು.



■ಹೈಕೋರ್ಟ್ ಮಧ್ಯ ಪ್ರವೇಶದಿಂದ ಸಿಎಂ ಸಿದ್ದರಾಮಯ್ಯ ಕೊಂಚ ನಿರಾಳ
■ತೀರ್ಪು ಪ್ರಕಟಿಸದಂತೆ ವಿಚಾರಣಾ ನ್ಯಾಯಾಲಯ ಜನಪ್ರತಿನಿಧಿಗಳ ಕೋರ್ಟ್‌ಗೆ 'ಹೈ' ಸೂಚನೆ



ಮೊದಲಿಗೆ ಮುಖ್ಯಮಂತ್ರಿ ಪರ ವಾದ ಮಂಡಿಸಿದ ಸಿಂಘ್ವಿ, ಪ್ರಕರಣದಲ್ಲಿ ಸಂವಿಧಾನಾತ್ಮಕ ಮತ್ತು ಆಡಳಿತಾತ್ಮಕ ವಿಚಾರಗಳಿವೆ, ಆ.20ರಂದು ಜನಪ್ರತಿನಿಧಿಗಳ ನ್ಯಾಯಾಲಯದ ಮುಂದೆ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ತೀರ್ಪು ಬಾಕಿ ಇದೆ.

ರಾಜ್ಯಪಾಲರು ಇದಾವುದನ್ನೂ ಗಮನಕ್ಕೆ ತೆಗೆದುಕೊಂಡಿಲ್ಲ. ಅಲ್ಲದೆ, ರಾಜ್ಯ ಸಚಿವ ಸಂಪುಟ ಸಭೆ ತೆಗೆದುಕೊಂಡಿರುವ ತೀರ್ಮಾನಕ್ಕೂ ಸುದೀರ್ಘ ಸ್ಪಷ್ಟನೆ ನೀಡಿಲ್ಲ.

ರಾಜ್ಯಪಾಲರು ಯಾವ ಆಧಾರದ ಮೇಲೆ ಮುಖ್ಯಮಂತ್ರಿಗಳ ವಿರುದ್ಧ ತನಿಖೆಗೆ ಆದೇಶ ನೀಡಿದ್ದಾರೆ ಎಂದು ತಿಳಿಸಿಲ್ಲ. ಸ್ವತಃ ಸಿದ್ದರಾಮಯ್ಯ ಹಾಗೂ ಸಂಪುಟ ಸಭೆ, ರಾಜ್ಯಪಾಲರ ಶೋಕಾಸ್ ನೋಟಿಸ್‌ಗೆ ನೀಡಿದ್ದ ಉತ್ತರವನ್ನೂ ಪರಿಗಣಿಸಿಲ್ಲ.

ರಾಜ್ಯಪಾಲರಿಗೆ ಸಿದ್ದರಾಮಯ್ಯ ಅವರ ರಾಜೀನಾಮೆ ಅಷ್ಟೇ ಬೇಕಿದೆ. ಅದಕ್ಕೆ ಒಂದೇ ಒಂದು ಸರಿಯಾದ ಕಾರಣ ನೀಡದೆ ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಡಲಾಗಿದೆ.

ಸರ್ಕಾರಿ ಸೇವಕನಾಗಿ ಮುಖ್ಯಮಂತ್ರಿ ಯಾವುದೇ ಶಿಫಾರಸು ಮಾಡಿಲ್ಲ. ಮುಡಾ ಕಡತಕ್ಕೆ ಸಂಬಂಧಿಸಿದಂತೆ ಯಾವುದೇ ನಿರ್ಧಾರ ತೆಗೆದುಕೊಂಡಿಲ್ಲ. ರಾಜ್ಯಪಾಲರು ನೂತನ ಬಿಎನ್‌ಎಸ್‌ಎಸ್ ಕಾಯಿದೆಯನ್ನು ತಪ್ಪಾಗಿ ಅರ್ಥೈಸಿಕೊಂಡಿದ್ದಾರೆ.

ಸ್ವತಂತ್ರವಾಗಿ ಪ್ರಾಸಿಕ್ಯೂಷನ್ ಅನುಮತಿಗೆ ನಿರ್ಧರಿಸಿದ್ದೇನೆ ಎಂದಷ್ಟೇ ರಾಜ್ಯಪಾಲರು ಹೇಳಿದ್ದಾರೆ. ಅವರು ಸೆಕ್ಷನ್ 17ಎ ಅಡಿಯಲ್ಲಿ ತನಿಖೆಗೆ ಅನುಮತಿ ನೀಡುವಾಗ ಇರುವ ನಿಯಮಗಳನ್ನೂ ಪಾಲಿಸಿಲ್ಲ.

ಕರ್ನಾಟಕ ಸರ್ಕಾರದ ಸಂಪುಟ ನೀಡಿರುವ 100 ಪುಟಗಳ ಉತ್ತರಕ್ಕೆ ರಾಜ್ಯಪಾಲರು ಎರಡು ಪುಟಗಳ ಉತ್ತರ ನೀಡಿದ್ದು, ಮಂತ್ರಿಮಂಡಲದ ಸಭೆಯ ನಿರ್ಣಯವನ್ನೇ ಪರಿಗಣಿಸಿಲ್ಲ. ■9ನೇ ಪುಟಕ್ಕೆ

> **"** ಸಂವಿಧಾನ ಮತ್ತು ನ್ಯಾಯಾಂಗ ವ್ಯವಸ್ಥೆಯ ಮೇಲೆ ಅಪಾರ ನಂಬಿಕೆ ಇಟ್ಟಿರುವ, ಈ ನೆಲದ ಕಾನೂನನ್ನು ಗೌರವಿಸುವ ಓರ್ವ ಪ್ರಜೆಯಾಗಿ ಸುಳ್ಳು ಪ್ರಕರಣದಲ್ಲಿ ನನ್ನ ಮೇಲೆ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ರಾಜಕೀಯ ಪ್ರೇರಿತ ನಿರ್ಣಯದ ವಿರುದ್ಧ ಘನ ಉಚ್ಚ ನ್ಯಾಯಾಲಯದ ಮೊರೆ ಹೋಗಿದ್ದೇನೆ. ಉಚ್ಚ ನ್ಯಾಯಾಲಯವು ಈ ವಿಚಾರಣೆಯನ್ನು ಆಲಿಸಿ, ಮುಂದಿನ ವಿಚಾರಣೆಯವರೆಗೆ ವಿಶೇಷ ನ್ಯಾಯಾಲಯಗಳು ವಿಚಾರಣೆ ಮುಂದೂಡಬೇಕು. ಯಾವುದೇ ಆತುರದ ನಿರ್ಧಾರಗಳನ್ನು ತೆಗೆದುಕೊಳ್ಳಬಾರದು ಎಂಬ ಮಧ್ಯಂತರ ಆದೇಶವನ್ನು ನೀಡಿದೆ. ನ್ಯಾಯಾಲಯದ ಈ ಆದೇಶವನ್ನು ವಿನಮ್ರವಾಗಿ ಸ್ವೀಕರಿಸುತ್ತಾ, ನನ್ನ ಧನ್ಯವಾದ ಸಲ್ಲಿಸುತ್ತೇನೆ. ಅಂತಿಮ ಗೆಲುವು ಸತ್ಯದ್ದೇ ಆಗಿರಲಿ ಎಂಬುದು ನನ್ನ ದೃಢ ನಂಬಿಕೆಯಾಗಿದೆ. ಸತ್ಯಮೇವ ಜಯತೆ.
>
> –ಮುಖ್ಯಮಂತ್ರಿ ಸಿದ್ದರಾಮಯ್ಯ ಟ್ವೀಟ್

ಅಂದು ಯಡಿಯೂರಪ್ಪ ಯಾಕೆ ರಾಜೀನಾಮೆ ನೀಡಬೇಕು ಎಂದವರು ಈಗ ನನ್ನ ರಾಜೀನಾಮೆ ಕೇಳುತ್ತಿದ್ದಾರೆ...

ಬಿಜೆಪಿ ನಾಯಕರ ಆಗ್ರಹಕ್ಕೆ ಸಿಎಂ ಸಿದ್ದರಾಮಯ್ಯ ಲೇವಡಿ

ಬೆಂಗಳೂರು, ಆ. 19(ಕೆಎಂಶಿ)– ರಾಜ್ಯಪಾಲ ಹಂಸರಾಜ ಭಾರದ್ವಾಜ 2011ರಲ್ಲಿ ಆಗಿನ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿರುದ್ಧದ ರಾಚೇನಹಳ್ಳಿ ಡಿ–ನೋಟಿಫಿಕೇಷನ್ ಹಗರಣಕ್ಕೆ ಸಂಬಂಧಿಸಿದಂತೆ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದಾಗ ಮುಖ್ಯಮಂತ್ರಿ ರಾಜೀನಾಮೆ ಏಕೆ ನೀಡಬೇಕು ಎಂಬುದಾಗಿ ಕೇಳಿದ್ದ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಇಂದು ನನ್ನ ರಾಜೀನಾಮೆ ಕೇಳುತ್ತಿರುವುದು ಹಾಸ್ಯಾಸ್ಪದ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವ್ಯಂಗ್ಯವಾಡಿದ್ದಾರೆ.

ಈ ಸಂಬಂಧ ಟ್ವೀಟ್ ಮಾಡಿರುವ ಅವರು, 2011ರ ಜನವರಿ 21ರಂದು, ಯಡಿಯೂರಪ್ಪ ವಿರುದ್ಧ ಅರ್ಜಿದಾರರು ನೀಡಿದ್ದ 1,600 ಪುಟಗಳ ದಾಖಲೆಗಳ ಸಾಕ್ಷ್ಯ ಪರಿಶೀಲಿಸಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದರು. ಆದರೂ, ಯಡಿಯೂರಪ್ಪ ಮುಖ್ಯಮಂತ್ರಿ ಸ್ಥಾನಕ್ಕೆ ■6ನೇ ಪುಟಕ್ಕೆ

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ರಾಜ್ಯಪಾಲರ ಅನುಮತಿ; ವಿರುದ್ಧ, ಪರ

ರಾಜ್ಯಾದ್ಯಂತ ಕಾಂಗ್ರೆಸ್; ಬಿಜೆಪಿ–ಜೆಡಿಎಸ್ ಹೋರಾಟ



ಬೆಂಗಳೂರಲ್ಲಿ ಸೋಮವಾರ ಕಾಂಗ್ರೆಸ್ ಸಚಿವರು, ಜನಪ್ರತಿನಿಧಿಗಳು, ಕಾರ್ಯಕರ್ತರು ರಾಜ್ಯಪಾಲರ ನಿಲುವಿನ ಬಗ್ಗೆ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.



ಬೆಂಗಳೂರಲ್ಲಿ ಸೋಮವಾರ ಬಿಜೆಪಿ–ಜೆಡಿಎಸ್ ಶಾಸಕರು ಮತ್ತು ಕಾರ್ಯಕರ್ತರು ವಿಧಾನಸೌಧದ ಮಹಾತ್ಮಗಾಂಧಿ ಪ್ರತಿಮೆ ಬಳಿ ಧರಣಿ ನಡೆಸಿದರು.

ಬೆಂಗಳೂರು, ಆ. 19(ಕೆಎಂಶಿ)– ಮುಡಾ ಬಿಡಿ ನಿವೇಶನಗಳ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಆದೇಶ ನೀಡಿದ ಬೆನ್ನಲ್ಲೇ ಮುಖ್ಯಮಂತ್ರಿ ಪರ ಹಾಗೂ ವಿರೋಧ ಧರಣಿ, ಪ್ರತಿಭಟನೆ, ಮುತ್ತಿಗೆ ಯತ್ನಗಳು ರಾಜ್ಯಾದ್ಯಂತ ನಡೆದವು.

ರಾಜ್ಯಪಾಲರ ನಿರ್ಧಾರವನ್ನು ಸ್ವಾಗತಿಸಿ ಬಿಜೆಪಿ–ಜೆಡಿಎಸ್ ಶಾಸಕರು ಮತ್ತು ಕಾರ್ಯಕರ್ತರು ವಿಧಾನಸೌಧದ ಮಹಾತ್ಮ ಗಾಂಧಿ ಪ್ರತಿಮೆ ಬಳಿ ಧರಣಿ ನಡೆಸಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿದರು.

ಮತ್ತೊಂದೆಡೆ ಕಾಂಗ್ರೆಸ್‌ನ ಸಚಿವರು, ಜನಪ್ರತಿನಿಧಿಗಳು, ಕಾರ್ಯಕರ್ತರು ರಾಜ್ಯಪಾಲರ ನಿಲುವಿನ ಬಗ್ಗೆ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯಪಾಲರ ನಿಲುವನ್ನು ವಿರೋಧಿಸಿ ಕಾಂಗ್ರೆಸ್ ಕಾರ್ಯಕರ್ತರು ರಾಜಭವನ ಮುತ್ತಿಗೆಗೂ ಮುಂದಾದರು. ಪ್ರದೇಶ ಕಾಂಗ್ರೆಸ್ ಕರೆ ಮೇರೆಗೆ ಕೇವಲ ರಾಜಧಾನಿ ಅಷ್ಟೇ ಅಲ್ಲದೆ, ರಾಜ್ಯಾದ್ಯಂತ, ಕೇಂದ್ರ ಸರ್ಕಾರ ಹಾಗೂ ರಾಜ್ಯಪಾಲರ ವಿರುದ್ಧ ಪ್ರತಿಭಟನೆಗಳು ನಡೆದವು.

ಫ್ರೀಡಂಪಾರ್ಕ್‌ನಲ್ಲಿ ಕಾಂಗ್ರೆಸ್ ಆಯೋಜಿಸಿದ್ದ ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಸಿದ್ದರಾಮಯ್ಯ ಸಂಪುಟದ ಹಲವು ಸದಸ್ಯರು ಹಾಗೂ ಪಕ್ಷದ ಕಾರ್ಯಕರ್ತರು ಭಾಗವಹಿಸಿ, ಸಂವಿಧಾನ ವಿರೋಧಿ ರಾಜ್ಯಪಾಲರನ್ನು ಹಿಂದಕ್ಕೆ ಕರೆಸಿ ಎಂದು ಒತ್ತಾಯ ಮಾಡಿದರು. ಕೇಂದ್ರದ ಕೈಗೊಂಬೆಯಂತೆ ■6ನೇ ಪುಟಕ್ಕೆ

ಜಮ್ಮು–ಕಾಶ್ಮೀರ ವಿಧಾನಸಭೆ ಚುನಾವಣೆಗೆ ಎನ್‌ಸಿ ಪ್ರಣಾಳಿಕೆ ಬಿಡುಗಡೆ

ಆರ್ಟಿಕಲ್ 370 ಮರುಸ್ಥಾಪನೆ ಸೇರಿ 12 ಗ್ಯಾರಂಟಿ ಘೋಷಣೆ

ಶ್ರೀನಗರ: ಜಮ್ಮು ಮತ್ತು ಕಾಶ್ಮೀರ ವಿಧಾನಸಭೆ ಚುನಾವಣೆಗೆ ನ್ಯಾಷನಲ್ ಕಾನ್ಫರೆನ್ಸ್(ಎನ್‌ಸಿ) ಸೋಮವಾರ ಪ್ರಣಾಳಿಕೆ ಬಿಡುಗಡೆ ಮಾಡಿದ್ದು, ಜಮ್ಮು ಮತ್ತು ಕಾಶ್ಮೀರಕ್ಕೆ ಮತ್ತೆ ರಾಜ್ಯದ ಸ್ಥಾನಮಾನ ಹಾಗೂ ವಿಶೇಷ ಸ್ಥಾನಮಾನ ಕಲ್ಪಿಸುವ ಆರ್ಟಿಕಲ್ 370ರ ಮರುಸ್ಥಾಪನೆ ಸೇರಿದಂತೆ 12 ಗ್ಯಾರಂಟಿಗಳನ್ನು ಘೋಷಿಸಿದೆ. ■6ನೇ ಪುಟಕ್ಕೆ

ಮುಡಾದಲ್ಲಿ ಮತ್ತೊಂದು 'ರಿಯಲ್...' ದಂಧೆ ಬೆಳಕಿಗೆ

ರಿಯಲ್ ಎಸ್ಟೇಟ್ ಉದ್ಯಮಿಗೆ ಒಂದೇ ತಿಂಗಳಲ್ಲಿ


23ಕ್ಕೂ ಅಧಿಕ ನಿವೇಶನ ಮಂಜೂರು

ಲೋಕಾಯುಕ್ತಕ್ಕೆ ದೂರು ಸಲ್ಲಿಸಿದರೂ ವಿಚಾರಣೆಗೆ 'ಶುಭ'ಕಾಲ ಬಂದಿಲ್ಲ



ಮೈಸೂರು, ಆ.19(ಎಸ್‌ಬಿಡಿ)–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿನ ಹಗರಣ ಬಗೆದು ಮೊಗೆದಷ್ಟೂ ಭಾರಿ ಭಾರಿ ಬಯಲಾಗುತ್ತಿದೆ. ಓರ್ವ ರಿಯಲ್ ಎಸ್ಟೇಟ್ ಉದ್ಯಮಿಗೆ ಪ್ರತಿಷ್ಠಿತ ಬಡಾವಣೆಗಳಲ್ಲಿ ಒಂದೇ ತಿಂಗಳಲ್ಲಿ 30ಕ್ಕೂ ಹೆಚ್ಚು ನಿವೇಶನಗಳನ್ನು ಕಾನೂನು ಬಾಹಿರವಾಗಿ ಮಂಜೂರು ಮಾಡಿರುವುದು ಬೆಳಕಿಗೆ ಬಂದಿದೆ. ಈ ಸಂಬಂಧ ಸಾಮಾಜಿಕ ಕಾರ್ಯಕರ್ತರೊಬ್ಬರು ಲೋಕಾಯುಕ್ತಕ್ಕೆ ದೂರು ನೀಡಿ ಹತ್ತು ತಿಂಗಳಾಗಿವೆ.

ರಿಯಲ್ ಎಸ್ಟೇಟ್ ಉದ್ಯಮಿಗಳ ದಂಧಾಕೇಂದ್ರ ಮುಡಾ: ರಿಯಲ್ ಎಸ್ಟೇಟ್ ಉದ್ಯಮಿಯೊಂದಿಗೆ ಶಾಮೀಲಾಗಿ ಮುಡಾಗೆ ಸೇರಿದ ಕೋಟ್ಯಾಂತರ ರೂ. ಬೆಲೆಬಾಳುವ ನಿವೇಶನಗಳನ್ನು ಕಾನೂನುಬಾಹಿರವಾಗಿ ಹಂಚಿಕೆ ಮಾಡಿ ಪ್ರಾಧಿಕಾರ ಹಾಗೂ ಸರ್ಕಾರಕ್ಕೆ ಸುಮಾರು 300 ಕೋಟಿಗೂ ಹೆಚ್ಚು ನಷ್ಟವನ್ನುಂಟು ಮಾಡುವುದರ ಜೊತೆಗೆ ಅಧಿಕಾರಿಗಳು ಅಕ್ರಮವಾಗಿ ವೈಯಕ್ತಿಕ ಲಾಭ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿ ಸಾಮಾಜಿಕ ಕಾರ್ಯಕರ್ತ ಕೆ.ಕೃಷ್ಣ ಅವರು 2023ರ ಅಕ್ಟೋಬರ್ 11ರಂದು ಲೋಕಾಯುಕ್ತರಿಗೆ ಬೆಂಗಳೂರಿನ ಪ್ರಧಾನ ಕಚೇರಿಯಲ್ಲಿ ದೂರು ಸಲ್ಲಿಸಿ, ಮುಡಾ ಆಯುಕ್ತರಾಗಿದ್ದ ಜಿ.ಟಿ.ದಿನೇಶ್‌ಕುಮಾರ್, ವಿಶೇಷ ತಹಶೀಲ್ದಾರ್ ಶಿವಕುಮಾರ್, ಹೆಚ್ಚುವರಿ ಜಿಲ್ಲಾ ನೋಂದಣಾಧಿಕಾರಿ ಕಾವ್ಯ, ರಿಯಲ್ ಎಸ್ಟೇಟ್



Acknowledgement
Karnataka Lokayukta
(Under Section 7 of the Karnataka Lokayukta Act, 1984)

CASE NUMBER : COMPT/LOK/MYS/5740/2023
District : Mysore-LOK

BY :
1. Krishna K
S/o late S. Kadappa Shetty, Social Activist, R/at H.No.M-43, 3rd Stage, Kuvempu Nagara, Mysore. 570023

COMPLAINANT/S

AGAINST :
1. G.T.Dinesh Kumar
Commissioner, Mysore Urban Development Authority, Mysore.
2. Shiva Kumar
Special Tahasildar, Mysore Urban Development Authority, Mysore.
3. Kavya
Additional District Registrar, Mysore.

RESPONDENT/S

Allegation/Grievance Brief :	Corruption and Dereliction of duty.
Received From :	In person
Received On :	11-10-2023
Complaint stands allotted to :	ARLO-2
Phone Number :	080-22257013 Extn - 255

11/10/2023


ಸಾಮಾಜಿಕ ಕಾರ್ಯಕರ್ತ ಕೆ.ಕೃಷ್ಣ ನೀಡಿದ ದೂರಿಗೆ ಲೋಕಾಯುಕ್ತ ಕಚೇರಿಯಲ್ಲಿ ನೀಡಿರುವ ಸ್ವೀಕೃತಿ ಪ್ರತಿ

> **"** ಸಾಮಾಜಿಕ ಕಾರ್ಯಕರ್ತ ಕೆ.ಕೃಷ್ಣ 2023ರ ಅಕ್ಟೋಬರ್ 11ರಂದು ಲೋಕಾಯುಕ್ತಕ್ಕೆ ದೂರು ನೀಡಿದ್ದು, 2024ರ ಜುಲೈ 25ರಂದು ಎಆರ್‌ಎಲ್‌ಒ–2(Assistant Registrar Legal Opinion) ಅವರಿಂದ ಡಿಆರ್‌ಇ–1 (Deputy Registrar Enquires)ಗೆ ದೂರು ವರ್ಗಾವಣೆಯಾಗಿದೆ. ದೂರು ನೀಡಿದ ನಂತರವೂ ಮುಡಾ ಆಯುಕ್ತರಾಗಿದ್ದ ದಿನೇಶ್ ಕುಮಾರ್ ಇದೇ ಎಂ.ಎನ್.ಮಂಜುನಾಥ್‌ಗೆ 5 ನಿವೇಶನಗಳನ್ನು ಮಂಜೂರು ಮಾಡಿಕೊಟ್ಟಿದ್ದಾರೆ. ಡಿ.ಬಿ.ನಟೇಶ್ ಆಯುಕ್ತರಾಗಿದ್ದಾಗಲೂ ಈ ಮಂಜುನಾಥ್‌ಗೆ 2021ರಲ್ಲಿ 4 ನಿವೇಶನಗಳನ್ನು ಮಂಜೂರು ಮಾಡಲಾಗಿದೆ. ಕಾನೂನು ರೀತ್ಯಾ ಕ್ರಮ ವಹಿಸಬೇಕೆಂಬ ನ್ಯಾಯಾಲಯದ ಆದೇಶವನ್ನೇ ರಕ್ಷಣಾತ್ಮಕ ಅಸ್ತ್ರವನ್ನಾಗಿಸಿಕೊಂಡು ರಿಯಲ್ ಎಸ್ಟೇಟ್ ಉದ್ಯಮಿಗೆ 23ಕ್ಕೂ ಹೆಚ್ಚು ನಿವೇಶನ ಮಂಜೂರು ಮಾಡಿ, ಕೋಟ್ಯಾಂತರ ಹಣ ನುಂಗಿದ್ದಾರೆ. ಕಾನೂನು–ನಿಯಮಗಳನ್ನು ಗಾಳಿಗೆ ತೂರಿ ಅಕ್ರಮವೆಸಗಿದ್ದಾರೆ ಎಂದರೆ ಇವರ ಪ್ರಭಾವ ಅರಿವಾಗುತ್ತದೆ. ಲೋಕಾಯುಕ್ತ ದೂರನ್ನು ಗಂಭೀರವಾಗಿ ಪರಿಗಣಿಸಿ ತ್ವರಿತ ಕ್ರಮ ವಹಿಸಿದ್ದರೆ ಅಕ್ರಮಕ್ಕೆ ಹತ್ತು ತಿಂಗಳ ಹಿಂದೆಯೇ ಕಡಿವಾಣ ಬೀಳುತ್ತಿತ್ತು ಎಂಬುದು ನೊಂದವರ ಅಳಲಾಗಿದೆ.

ಉದ್ಯಮಿ ಎನ್.ಮಂಜುನಾಥ್ ಸೇರಿದಂತೆ ಸಂಬಂಧಪಟ್ಟ ಪ್ರಾಧಿಕಾರದ ಸದಸ್ಯರು, ಅಧಿಕಾರಿಗಳು ಹಾಗೂ ನೌಕರರು ಇನ್ನಿತರ ತಪ್ಪಿತಸ್ಥರ ■9ನೇ ಪುಟಕ್ಕೆ



ಶ್ರೀ ಯೋಗ ನರಸಿಂಹಸ್ವಾಮಿ ದೇವಸ್ಥಾನದಲ್ಲಿ ಸಾಮೂಹಿಕ ಯಜುರ್ವೇದ ಯಜುರ್ ಉಪಾಕರ್ಮ



ಮೈಸೂರಿನ ವಿಜಯನಗರದಲ್ಲಿರುವ ಯೋಗ ನರಸಿಂಹಸ್ವಾಮಿ ದೇವಾಲಯದಲ್ಲಿ ಸೋಮವಾರ ನಡೆದ ಸಾಮೂಹಿಕ ಯಜುರ್ವೇದ ಯಜುರ್ ಉಪಾಕರ್ಮದಲ್ಲಿ ಹಲವರು ಜನಿವಾರ ಬದಲಿಸಿಕೊಂಡರು.

ಮೈಸೂರು,ಆ.19(ಎಂಟಿವೈ)– ಮೈಸೂರಿನ ವಿಜಯನಗರದಲ್ಲಿರುವ ಯೋಗ ನರಸಿಂಹಸ್ವಾಮಿ ದೇವಾಲಯದಲ್ಲಿ ಸೋಮವಾರ ನಡೆದ ಸಾಮೂಹಿಕ ಯಜುರ್ವೇದದ ಯಜುರ್ ಉಪಾಕರ್ಮದಲ್ಲಿ ಹಲವರು ಜನಿವಾರ ಬದಲಿಸಿಕೊಂಡು ಹೋಮದಲ್ಲಿ ಪಾಲ್ಗೊಂಡರು.

ಯೋಗ ನರಸಿಂಹಸ್ವಾಮಿ ದೇವಾಲಯದ ಆವರಣದಲ್ಲಿ ಆಯೋಜಿಸಿದ್ದ ಯಜುರ್ವೇದದ ಯಜುರ್ ಉಪಾಕರ್ಮದಲ್ಲಿ ಬ್ರಾಹ್ಮಣರು ಜನಿವಾರ ಬದಲಾಯಿಸಿಕೊಂಡು ಸಂಧ್ಯಾವಂದನೆ, ಗಾಯತ್ರಿ ಜಪ, ಹೋಮ ನೆರವೇರಿಸಿದರು.

ಇದೇ ವೇಳೆ ಜನಿವಾರ ಧಾರಣೆ ಮಾಡಿದ ದೇವಾಲಯದ ಸಂಸ್ಥಾಪಕ ಡಾ.ಭಾಷ್ಯಂ ಸ್ವಾಮೀಜಿ ಮಾತನಾಡಿ, ಶ್ರೇಷ್ಠವಾದ ಹಿಂದೂ ಧರ್ಮಕ್ಕೆ ಸೇರಿದ ಮಕ್ಕಳಲ್ಲಿ ಧಾರ್ಮಿಕತೆಯ ವಾಸ್ತವದ ವಿಚಾರಗಳ ಅರಿವಿನ ಕೊರತೆ ಎದ್ದು ಕಾಣುತ್ತಿದೆ. ಇದರಿಂದಾಗಿ ಧರ್ಮಕ್ಕೆ ಹಿನ್ನಡೆಯಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ಜನತೆಯಲ್ಲಿ ಸಂಸ್ಕಾರ ಹಾಗೂ ಜೀವನ ಮೌಲ್ಯಗಳ ಕೊರತೆಯಿಂದಾಗಿ ಹಿರಿಯರ ಬಗ್ಗೆ ಗೌರವವಿಲ್ಲದಂತಾಗಿದೆ. ಇದರ ಪರಿಣಾಮ ಹಿರಿಯರನ್ನು ವೃದ್ಧಾಶ್ರಮಕ್ಕೆ ಸೇರಿಸುತ್ತಿರುವುದು ವಿಷಾದನೀಯ. ದೇವಾಲಯಗಳು ಕೇವಲ ಪೂಜೆ ಹಾಗೂ ಧಾರ್ಮಿಕ ಆಚರಣೆಗಳಿಗೆ ಮಾತ್ರ ಸೀಮಿತವಾಗದೆ, ಸಾಮಾಜಿಕ ಕ್ಷೇತ್ರಗಳ ಅಭಿವೃದ್ಧಿಯ ಚಟುವಟಿಕೆಗಳೊಂದಿಗೆ ಸಮಾಜದ ಕುಂದು ಕೊರತೆಗಳಿಗೆ ಸ್ಪಂದಿಸುವ ಕೇಂದ್ರಗಳಾಗಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ದೇವಾಲಯದ ವ್ಯವಸ್ಥಾಪಕ ಎನ್.ಶ್ರೀನಿವಾಸನ್, ಶೇಷಾದ್ರಿ, ಗಿರೀಶ್, ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆಯ ಪ್ರಧಾನ ಕಾರ್ಯದರ್ಶಿ ವಿಕ್ರಮ್ ಅಯ್ಯಂಗಾರ್, ಚಕ್ರಪಾಣಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಕೊಲ್ಕತ್ತಾದ ಕಿರಿಯ ವೈದ್ಯೆ ಅತ್ಯಾಚಾರ, ಕೊಲೆ ಖಂಡಿಸಿ ವಿದ್ಯಾರ್ಥಿಗಳ ಪ್ರತಿಭಟನೆ



ಕೊಲ್ಕತ್ತಾದ ಆರ್.ಜಿ.ಕರ್ ಆಸ್ಪತ್ರೆಯ ವೈದ್ಯಕೀಯ ವಿದ್ಯಾರ್ಥಿನಿ ಅತ್ಯಾಚಾರ ಹಾಗೂ ಹತ್ಯೆ ಖಂಡಿಸಿ ಎಐಡಿಎಸ್‌ಓ ನೇತೃತ್ವದಲ್ಲಿ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು.

ಮೈಸೂರು,ಆ.19(ಎಂಟಿವೈ)– ಕೊಲ್ಕತ್ತಾದ ಆರ್.ಜಿ.ಕರ್ ಆಸ್ಪತ್ರೆಯ ವೈದ್ಯಕೀಯ ವಿದ್ಯಾರ್ಥಿನಿ ಅತ್ಯಾಚಾರ ಹಾಗೂ ಹತ್ಯೆ ಖಂಡಿಸಿ ಆಲ್ ಇಂಡಿಯಾ ಡೆಮಾಕ್ರೆಟಿಕ್ ಸ್ಟೂಡೆಂಟ್ಸ್ ಆರ್ಗನೈಜೇಷನ್ (ಎಐಡಿಎಸ್‌ಒ) ನೇತೃತ್ವದಲ್ಲಿ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು.

ಮೈಸೂರಿನ ರಾಮಸ್ವಾಮಿ ವೃತ್ತದಲ್ಲಿ ಸೋಮವಾರ ಬೆಳಗ್ಗೆ ಪ್ರತಿಭಟನೆ ನಡೆಸಿದ ವಿದ್ಯಾರ್ಥಿಗಳು, ಕೃತ್ಯ ಎಸಗಿದ ಆರೋಪಿಗೆ ಕಠಿಣ ಶಿಕ್ಷೆ ವಿಧಿಸಿ, ದೌರ್ಜನ್ಯ ಪ್ರಕರಣ ಮರುಕಳಿಸದಂತೆ ಕಟ್ಟುನಿಟ್ಟಿನ ನಿಯಮ ರೂಪಿಸುವಂತೆ ಆಗ್ರಹಿಸಿದರು.

ಸಮಾಜ ಇಂದು ಅತ್ಯಂತ ತೀವ್ರ ಸಾಂಸ್ಕೃತಿಕ ಬಿಕ್ಕಟ್ಟನ್ನು ಎದುರಿಸುತ್ತಿದೆ. ಯಾವುದೇ ವಯಸ್ಸಿನ ಮಿತಿ ಇಲ್ಲದೆ ಮಹಿಳೆಯರ ಮೇಲೆ ಅಪರಾಧಗಳು ಅವ್ಯಾಹತವಾಗಿ ನಡೆಯುತ್ತಿವೆ. ಕಳೆದ ತಿಂಗಳು ಆಂಧ್ರ ಪ್ರದೇಶದಲ್ಲಿ, 12–13 ವರ್ಷದ ಮೂವರು ಶಾಲಾ ಮಕ್ಕಳು 3 ವರ್ಷದ ಬಾಲಕಿ ಮೇಲೆ ಅತ್ಯಾಚಾರ ನಡೆಸಿ ಕೊಂದರು. ಮುಂಬೈನಲ್ಲಿ ಇದೇ ವಯಸ್ಸಿನ ಬಾಲಕಿ ಮೇಲೆ ಬಾಲಕನೊಬ್ಬ ಅತ್ಯಾಚಾರವೆಸಗಿದ್ದಾನೆ. ಕೊಲ್ಕತ್ತಾದ ವೈದ್ಯಕೀಯ ಕಾಲೇಜೊಂದರಲ್ಲಿ ಕಾಮುಕನಿಗೆ ಬಲಿಯಾಗಿ ಘೋರ ಸಾವಿಗೀಡಾದ ವೈದ್ಯೆ ಈ ಪ್ರಕರಣಗಳಿಗೆ ಇನ್ನೊಂದು ಸೇರ್ಪಡೆ. ನಾಗರಿಕ ಸಮಾಜ ತಲೆತಗ್ಗಿಸುವಂತೆ ಮಾಡಿರುವ ಈ ಅತ್ಯಾಚಾರದ ಮಾರಿ ತೀವ್ರವಾಗಿ ಎಲ್ಲೆಡೆ ಹಬ್ಬುತ್ತಿದೆ. ಈ ಮಾರಿಯ ಮೂಲ ಅಡಗಿರುವುದು ಇಂದಿನ ಸಾಂಸ್ಕೃತಿಕ ಅಧಃಪತನದಲ್ಲಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ವೈದ್ಯೆಯ ಮೇಲಿನ ಅತ್ಯಾಚಾರ ಮತ್ತು ಕೊಲೆಯ ವಿರುದ್ಧ ಈಗಾಗಲೇ ಜನರು ಬೀದಿಗಿಳಿದಿದ್ದಾರೆ. ಈ ಘಟನೆಯ ವಿರುದ್ಧ ನಡೆಯುತ್ತಿರುವ ಪ್ರತಿಭಟನೆಯ ದಿಕ್ಕು ತಪ್ಪಿಸುವ ಹೀನ ಪ್ರಯತ್ನವನ್ನು ಆಡಳಿತಾರೂಢ ಟಿಎಂಸಿ ಸರ್ಕಾರ ಸೇರಿದಂತೆ ಪಟ್ಟಭದ್ರರು ನಡೆಸುತ್ತಿದ್ದಾರೆ. ಇಂದು ಎಲ್ಲೆಡೆ ವ್ಯಾಪಕವಾಗಿ ಹರಿದಾಡುತ್ತಿರುವ ಅಶ್ಲೀಲ ಸಿನಿಮಾ, ಸಾಹಿತ್ಯ ಮತ್ತು ಪೋರ್ನ್ ವೆಬ್‌ಸೈಟ್‌ಗಳು ಸಮಾಜದ ಸ್ವಾಸ್ಥ್ಯ ಹಾಳುಗೆಡವಿ ಸಾಂಸ್ಕೃತಿಕ ಅಧಃಪತನಕ್ಕೆ ಕಾರಣವಾಗಿವೆ. ಕೂಡಲೇ ಕರ್ತವ್ಯ ನಿರತ ಎಲ್ಲಾ ಮಹಿಳೆಯರಿಗೂ ಸೂಕ್ತ ಭದ್ರತೆ ಒದಗಿಸಬೇಕು. ಈ ಕೃತ್ಯ ಎಸಗಿರುವ ಆರೋಪಿಗಳಿಗೆ ಅತ್ಯಂತ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಎಐಡಿಎಸ್‌ಓ ಜಿಲ್ಲಾಧ್ಯಕ್ಷೆ ಚಂದ್ರಕಲಾ, ಜಿಲ್ಲಾ ಕಾರ್ಯದರ್ಶಿ ಸುಮಾ, ಪದಾಧಿಕಾರಿಗಳಾದ ಸೀಮಾ ನೀತುಶ್ರೀ, ಪುಷ್ಪ, ನಿತಿನ್ ಸ್ವಾತಿ, ಚಂದನ, ಚಂದ್ರಿಕಾ, ಹೇಮ, ದಿಶಾ, ಅಂಜಲಿ ಸೇರಿದಂತೆ ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನ

ಮೈಸೂರು,ಆ.19–ಮೆಟ್ರಿಕ್ ನಂತರದ ಪಿಯುಸಿ ಮತ್ತು ಸಮಾನಂತರ, ಸಾಮಾನ್ಯ ಪದವಿ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸ್‌ಗಳಿಗೆ (Integrated Degree Courses) ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2024–25ನೇ ಸಾಲಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ 'ಶುಲ್ಕ ಮರು ಪಾವತಿ' ಮತ್ತು 'ವಿದ್ಯಾಸಿರಿ' (ಊಟ ಮತ್ತು ವಸತಿ ಸಹಾಯ ಯೋಜನೆ) ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು htt ps://ssp.postmatric.karnataka.gov.in/ ಮೂಲಕ ಸೆ.15ರೊಳಗೆ ಸಲ್ಲಿಸಬೇಕು. ಕಾರ್ಯಕ್ರಮಗಳ ವಿವರ, ಅರ್ಹತೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ https://bcwd.karnataka.gov.in ಅಥವಾ ಸಹಾಯವಾಣಿ ಸಂ: 8050770005, bcwdhelpline@gmail.com ಅಥವಾ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ದೂ.ಸಂ: 1902, postmatrichelp@karnataka.gov.in ಅನ್ನು ಸಂಪರ್ಕಿಸಬಹುದು.

ಆ.22, ವಿದ್ಯುತ್ ವ್ಯತ್ಯಯ

ಮೈಸೂರು,ಆ.19– ನಂಜನಗೂಡು ಉಪವಿಭಾಗ–2ರ ತಗಡೂರು ಶಾಖೆಯ ನಿರ್ವಹಣಾ ಕಾಮಗಾರಿ ನಿಮಿತ್ತ ಆಗಸ್ಟ್ 22ರಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಗೆಜ್ಜಗನಹಳ್ಳಿ, ಕಾಹಳ್ಳಿ, ಕಲ್ಲುಂದ ಹಾಗೂ ಹಾರೋಪುರ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ಕರುಮಾರಿಯಮ್ಮನ್ ದೇವಸ್ಥಾನದ 94ನೇ ಕರಗ ಮಹೋತ್ಸವದ ಅಂಗವಾಗಿ ಶಾಲಾ ಮಕ್ಕಳಿಗೆ ಪ್ರತಿಭಾ ಪುರಸ್ಕಾರ...



ಮೈಸೂರಿನ ವಿದ್ಯಾರಣ್ಯಪುರಂ ಶ್ರೀ ಕರುಮಾರಿಯಮ್ಮನ್ ದೇವಸ್ಥಾನ ವತಿಯಿಂದ 94ನೇ ವರ್ಷದ ಕರಗ ಮಹೋತ್ಸವ ಅಂಗವಾಗಿ ಪ್ರತಿಭಾವಂತ ಶಾಲಾ ಮಕ್ಕಳನ್ನು ಪುರಸ್ಕರಿಸಲಾಯಿತು. ಈ ವೇಳೆ ಪಾಲಿಕೆ ಮಾಜಿ ಸದಸ್ಯರಾದ ಮಾ.ವಿ.ರಾಮಪ್ರಸಾದ್, ಶೋಭಾ ಸುನಿಲ್, ಡಿ.ಎಂ.ಸತ್ಯನಾರಾಯಣಸ್ವಾಮಿ, ಪುರುಷೋತ್ತಮ, ಶಿವಪ್ರಕಾಶ್, ಸುಬ್ರಮಣಿ, ಆನಂದಕುಮಾರ್, ಸುಧಾಕರ್, ಸೋಮಶೇಖರ್, ಶಿವಪ್ರಸಾದ್, ಮಹೇಶ್, ಕೆ.ಪಾಂಡುರಂಗ ಇನ್ನಿತರರು ಉಪಸ್ಥಿತರಿದ್ದರು.

78ನೇ ಸ್ವಾತಂತ್ರ್ಯೋತ್ಸವ...



ಶ್ರೀರಂಗಪಟ್ಟಣದ ಪರಿವರ್ತನಾ ಶಿಕ್ಷಣ ಸಂಸ್ಥೆಯಲ್ಲಿ 78ನೇ ಸ್ವಾತಂತ್ರ್ಯೋತ್ಸವ ಆಚರಿಸಲಾಯಿತು. ಡಾ.ರಂಗನಾಥಯ್ಯ, ಸುಪ್ರೀಂಕೋರ್ಟ್‌ನಲ್ಲಿ ಲಾ ಕ್ಲರ್ಕ್ ಕಂ ರೀಸರ್ಚ್ ಅಸಿಸ್ಟೆಂಟ್ ಆಗಿರುವ ಸಂಸ್ಥೆಯ ಮೊದಲ ಬ್ಯಾಚ್ ವಿದ್ಯಾರ್ಥಿ ವಿಶಾಕ್ ಹೆಗ್ಡೆ(ವಕೀಲ), ಸಂಸ್ಥೆಯ ಸಂಸ್ಥಾಪಕ ಪುಟ್ಟೇಗೌಡ, ಖಜಾಂಚಿ ಕುಮಾರ್, ನಿರ್ದೇಶಕ ಮಂಜುರಾಮ್, ಡೀನ್ ಚೇತನ್‌ರಾಮ್, ಪ್ರಾಂಶುಪಾಲರಾದ ಜೆರೋಲಿನ್ ಇನ್ನಿತರರಿದ್ದರು.

ಅಂಗನವಾಡಿ ಮಕ್ಕಳಿಗೆ ಸಮವಸ್ತ್ರ ವಿತರಿಸಿ ಸ್ವಾತಂತ್ರ್ಯ ದಿನ ಆಚರಣೆ



ಶ್ರೀ ಮನೆ ಮಂಚಮ್ಮ ದೇವಸ್ಥಾನ ಸೇವಾ ಟ್ರಸ್ಟ್ ವತಿಯಿಂದ ಅಂಗನವಾಡಿ ಮಕ್ಕಳಿಗೆ ಸಮವಸ್ತ್ರ ವಿತರಿಸುವ ಮೂಲಕ ಸ್ವಾತಂತ್ರ್ಯೋತ್ಸವ ಆಚರಿಸಲಾಯಿತು.

ಮೈಸೂರು, ಆ.19–ತಾಲೂಕಿನ ಹುಯಿಲಾಳು ಗ್ರಾಮದ ಶ್ರೀ ಮನೆ ಮಂಚಮ್ಮ ದೇವಸ್ಥಾನ ಸೇವಾ ಟ್ರಸ್ಟ್ ವತಿಯಿಂದ ಅಂಗನವಾಡಿ ಮಕ್ಕಳಿಗೆ ಸಮವಸ್ತ್ರ ವಿತರಿಸುವ ಮೂಲಕ ಸ್ವಾತಂತ್ರ್ಯೋತ್ಸವ ಆಚರಿಸಲಾಯಿತು. ಟ್ರಸ್ಟ್ ವತಿಯಿಂದ ಮೂರು ಅಂಗನವಾಡಿ ಕೇಂದ್ರಗಳ ಮಕ್ಕಳಿಗೆ ಸಮವಸ್ತ್ರ ವಿತರಿಸಿ, ಗ್ರಾಮದ ಹಿರಿಯ ನಾಗರಿಕರನ್ನು ಸನ್ಮಾನಿಸಿ, ಸಿಹಿ ಹಂಚಲಾಯಿತು. ಈ ವೇಳೆ ಟ್ರಸ್ಟ್ ಅಧ್ಯಕ್ಷ ಹಾಗೂ ರಂಗ ಕಲಾವಿದ ಹುಯಿಲಾಳು ರಾಮಸ್ವಾಮಿ, ಹಿರಿಯರಾದ ರಾಮಕೃಷ್ಣೇಗೌಡ, ಜವರೇಗೌಡ, ಸಿದ್ದೇಗೌಡ, ಶಿವಣ್ಣ, ರಾಮಮ್ಮ, ಹುಯಿಲಾಳು ಮಂಜುನಾಥ್ ಪ್ರಸಾದ್, ಅಂಗನವಾಡಿ ಕಾರ್ಯಕರ್ತೆಯರಾದ ರೋಹಿಣಿ, ರೇಣುಕಾ, ಅಂಬಿಕಾ ಇದ್ದರು.

ರಸ್ತೆ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ...



ಮೈಸೂರಿನ ಕೆ.ಆರ್.ಕ್ಷೇತ್ರದ ವಾರ್ಡ್ ನಂ.63ರಲ್ಲಿ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ 262 ಲಕ್ಷ ರೂ. ಕಾಮಗಾರಿ ಹಾಗೂ ವಾರ್ಡ್ ನಂ.51ರ ವೀಣೆ ಶೇಷಣ್ಣ ರಸ್ತೆಯ 3ನೇ ಕ್ರಾಸ್ ಮತ್ತು ಅಡ್ಡ ರಸ್ತೆಯಲ್ಲಿ 38 ಲಕ್ಷ ರೂ.ನಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಾಣ ಕಾಮಗಾರಿಗೆ ಶಾಸಕ ಟಿ.ಎಸ್.ಶ್ರೀವತ್ಸ ಗುದ್ದಲಿಪೂಜೆ ನೆರವೇರಿಸಿದರು. ಈ ವೇಳೆ ಕ್ಷೇತ್ರದ ಬಿಜೆಪಿ ಅಧ್ಯಕ್ಷ ಗೋಪಾಲ್‌ರಾಜೇ ಅರಸ್, ಪ್ರಧಾನ ಕಾರ್ಯದರ್ಶಿ ಜಯರಾಮ್, ಬಿಜೆಪಿ ಮುಖಂಡರಾದ ಎನ್.ಪ್ರದೀಪ್ ಕುಮಾರ್, ಬಾಲಕೃಷ್ಣ, ಸಂತೋಷ್, ವಿ.ರವಿ, ದೀಪಕ್, ರಾಧಮ್ಮ, ಮೀನಾ, ವೆಂಕಟೇಶ್, ಸುರೇಶ್, ವಾರ್ಡಿನ ಪ್ರಮುಖ ಕಾರ್ಯಕರ್ತರು ಇತರರಿದ್ದರು.

ಆ.25, ಅಂತರ ಪ್ರೌಢಶಾಲೆ ಕನ್ನಡ ಚರ್ಚಾಸ್ಪರ್ಧೆ

ಮೈಸೂರು, ಆ.19– ಮೈಸೂರಿನ ದಿನೇಶ್ ಕೋಚಿಂಗ್ ಸೆಂಟರ್ ವತಿಯಿಂದ ಆ.25ರಂದು ಜಿಲ್ಲಾ ಮಟ್ಟದ ಅಂತರ ಪ್ರೌಢಶಾಲಾ ಕನ್ನಡ ಚರ್ಚಾಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ನಗರದ ಜೆಎಲ್‌ಬಿ ರಸ್ತೆಯಲ್ಲಿನ ಐಡಿಯಲ್ ಜಾವಾ ರೋಟರಿ ಕೇಂದ್ರದ ಸಭಾಂಗಣದಲ್ಲಿ ಅಂದು ಬೆಳಗ್ಗೆ 10ಕ್ಕೆ ಹಿರಿಯ ಪತ್ರಿಕಾ ಛಾಯಾಗ್ರಾಹಕ ಪ್ರಗತಿ ಗೋಪಾಲಕೃಷ್ಣ ಸ್ಪರ್ಧೆಗೆ ಚಾಲನೆ ನೀಡಲಿದ್ದಾರೆ. ನಂತರ 'ಸಾಮಾಜಿಕ ಜಾಲತಾಣಗಳು ವಾಸ್ತವದಲ್ಲಿ ಜನರನ್ನು ಸಮಾಜದಿಂದ ದೂರ ಮಾಡುತ್ತಿವೆ' ಕುರಿತು ಚರ್ಚಾಸ್ಪರ್ಧೆ ನಡೆಯಲಿದೆ. ವಿಷಯ ಸೂಚಕರಾದ ಎ.ವಿಶ್ವನಾಥ ಮತ್ತಿತರರು ಉಪಸ್ಥಿತರಿರಲಿದ್ದಾರೆ ಎಂದು ಸಂಸ್ಥೆಯ ಮುಖ್ಯಸ್ಥ ಎನ್.ವಿ.ದಿನೇಶ್ ತಿಳಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

20.08.2024 ಮಂಗಳವಾರ, ಮಳೆ ನಕ್ಷತ್ರ: ಮಖ 17.08.2024 ರಿಂದ 30.08.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಶ್ರಾವಣ ಮಾಸ, ಕೃಷ್ಣ ಪಕ್ಷ,
ತಿಥಿ: ಪಾಡ್ಯ, ನಕ್ಷತ್ರ: ಧನಿಷ್ಠ, ರಾಹುಕಾಲ : ಮಧ್ಯಾಹ್ನ 3 ರಿಂದ 4.30 ರವರೆಗೆ

■ **ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳವರ ಮಠ :** ಶ್ರೀ ರಾಘವೇಂದ್ರ ತೀರ್ಥ ಗುರು ಸಾರ್ವಭೌಮರ 353ನೇ ಆರಾಧನಾ ಮಹೋತ್ಸವ, ಪೂರ್ವಾರಾಧನೆ, ಬೆಳಗ್ಗೆ 7ಕ್ಕೆ ಉತ್ಸವರಾಯರಿಗೆ ಪಾದಪೂಜೆ, ಪಂಚಾಮೃತ, ಮಧ್ಯಾಹ್ನ 12ಕ್ಕೆ ಹಸ್ತೋದಕ ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ರಾತ್ರಿ 7.30ಕ್ಕೆ ಅಶಿಕಾ ಮತ್ತು ಹರಿಹರನ್, ಡ್ಯಾನ್ಸ್ ಅಕೌಸ್ಟಿಕ್ ನೃತ್ಯ ಸಂಸ್ಥೆ, ಬೆಂಗಳೂರು ಇವರಿಂದ ಭರತನಾಟ್ಯ ಮತ್ತು ಕಥಕ್ ನೃತ್ಯ, ಸಂಜೆ 6.30ಕ್ಕೆ ಸನ್ಮಾನ ಸಮಾರಂಭ (ಪೂರ್ವಾರಾಧನೆ), ಮುಖ್ಯ ಅತಿಥಿಗಳು : ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಟಿ.ಎಸ್. ಶ್ರೀವತ್ಸ, ಅಧ್ಯಕ್ಷತೆ : ಶಾಸಕ ಹರೀಶ್‌ಗೌಡ, ಸನ್ಮಾನಿತರು : ಡಾ. ರವಿಶಂಕರ್, ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ. ದೀಪಕ್, ವಾಕ್ ಶ್ರವಣ ಸಂಸ್ಥೆ ನಿರ್ದೇಶಕರಾದ ಡಾ. ಪುಷ್ಪಾವತಿ, ಪ್ರಗತಿ ಲಾಜಿಸ್ಟಿಕ್ಸ್ ಮಾಲೀಕ ಕುಮಾರ್, ಸ್ಥಳ: ಮಠದ ಆವರಣ, ಸುಬ್ಬರಾಯನಕೆರೆ, ನಾರಾಯಣಶಾಸ್ತ್ರಿ ರಸ್ತೆ.

■ **ವೀರಭದ್ರಸ್ವಾಮಿ ಹಾಗೂ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನ:** ಶ್ರೀ ವೀರಭದ್ರೇಶ್ವರಸ್ವಾಮಿಯ ಜಯಂತ್ಯುತ್ಸವ, ಮಹಾರಥೋತ್ಸವ ಹಾಗೂ ಶ್ರಾವಣ ಮಾಸದ ಪೂಜಾ ಕಾರ್ಯಕ್ರಮ, ಸ್ಥಳ: ದೇವಸ್ಥಾನದ ಪ್ರಾಂಗಣ, ಡಿ.ಬನುಮಯ್ಯ ರಸ್ತೆ, ಕೆ.ಆರ್.ಮೊಹಲ್ಲಾ, ಬೆಳಗ್ಗೆಯಿಂದ.

■ **ಸಂಘಟನಾ ಸಮಿತಿ :** ಮಾಜಿ ಮುಖ್ಯಮಂತ್ರಿ ದಿವಂಗತ ಡಿ. ದೇವರಾಜ ಅರಸು ಅವರ 109ನೇ ಜಯಂತಿ ಆಚರಣೆ, ಅಧ್ಯಕ್ಷತೆ : ಬಿಜೆಪಿ ಮುಖಂಡ ಎಲ್. ಚೌಡಪ್ಪ, ಪುಷ್ಪಾರ್ಚನೆ : ಮೈಮುಲ್ ಮಜಿ ಅಧ್ಯಕ್ಷ ಕೆ. ಉಮಾಶಂಕರ್, ಸ್ಥಳ: ಶ್ರೀ ಮಹರ್ಷಿ ವಾಲ್ಮೀಕಿ ನಾಮಫಲಕ, ಪೆಟ್ರೋಲ್ ಬಂಕ್, ಪಡುವಾರಹಳ್ಳಿ, ಬೆಳಗ್ಗೆ 10.30ಕ್ಕೆ.

■ **ಜೆಎಸ್‌ಎಸ್ ಮಹಿಳಾ ಕಾಲೇಜು :** ದೀಕ್ಷಾರಂಭ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ : ಡಾ. ಎನ್.ಎಸ್. ಹರಿನಾರಾಯಣನ್, ಮುಖ್ಯ ಅತಿಥಿಗಳು : ಜೆಎಸ್‌ಎಸ್ ಮಹಾವಿದ್ಯಾಪೀಠ ಪ್ರಕಟಣಾ ವಿಭಾಗದ ನಿರ್ದೇಶಕ ಪ್ರೊ. ಮೊರಬದ ಮಲ್ಲಿಕಾರ್ಜುನ, ಅಧ್ಯಕ್ಷತೆ : ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ. ಆರ್. ಮೂಗೇಶಪ್ಪ, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 10.30ಕ್ಕೆ.

■ **ದೇವರಾಜ ಅರಸು ಪ್ರತಿಮೆ ಪ್ರತಿಷ್ಠಾಪನಾ ಸಮಿತಿ :** ಡಿ. ದೇವರಾಜ ಅರಸು ಜಯಂತಿ ಆಚರಣೆ, ಉಪಸ್ಥಿತರು : ಶಾಸಕರಾದ ತನ್ವೀರ್ ಸೇಠ್, ಹೆಚ್. ವಿಶ್ವನಾಥ್, ರಘು ಕೌಟಿಲ್ಯ, ಸ್ಥಳ: ಮಹಾರಾಣಿ ಕಾಲೇಜು ವೃತ್ತ, ಬೆಳಗ್ಗೆ 11ಕ್ಕೆ.

■ **ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮೈಸೂರು ಮಹಾನಗರ ಪಾಲಿಕೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ :** ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ರವರ 109ನೇ ಜನ್ಮ ದಿನಾಚರಣೆ, ಘನ ಉಪಸ್ಥಿತರು : ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಉಕ್ಕು ಮತ್ತು ಬೃಹತ್ ಕೈಗಾರಿಕಾ ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ, ಉದ್ಘಾಟನೆ : ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಚಿವರಾದ ಡಾ.ಹೆಚ್.ಸಿ ಮಹದೇವಪ್ಪ, ಅಧ್ಯಕ್ಷತೆ : ಶಾಸಕ ಕೆ.ಹರೀಶ್‌ಗೌಡ, ಉಪಸ್ಥಿತರು : ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವ ಕೆ.ವೆಂಕಟೇಶ್, ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ನಿಗಮದ ಅಧ್ಯಕ್ಷ ಅನಿಲ್ ಕುಮಾರ್ ಸಿ, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷ ಎ.ಬಿ ರಮೇಶ್ ಬಂಡಿಸಿದ್ದೇಗೌಡ ಹಾಗೂ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ.ಪುಷ್ಪಾ ಅಮರನಾಥ್, ಸಂಸದರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಸುನಿಲ್ ಬೋಸ್, ಶಾಸಕರಾದ ತನ್ವೀರ್ ಸೇಠ್, ಜಿ.ಟಿ.ದೇವೇಗೌಡ, ಡಿ. ರವಿಶಂಕರ್, ಟಿ.ಎಸ್ ಶ್ರೀವತ್ಸ, ಜಿ.ಡಿ ಹರೀಶ್ ಗೌಡ, ದರ್ಶನ್ ಧ್ರುವನಾರಾಯಣ, ವಿಧಾನಪರಿಷತ್‌ನ ಸದಸ್ಯರಾದ ಹೆಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ.ಮಾದೇಗೌಡ, ಡಾ.ಯತೀಂದ್ರ ಎಸ್ ಮತ್ತು ವಿವೇಕಾನಂದ ಕೆ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕೆ.ಮರೀಗೌಡ, ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷರಾದ ಅಯೂಬ್‌ಖಾನ್ ಹಾಗೂ ಕಾವೇರಿ ಜಲಾನಯನ ಯೋಜನೆಯ ಅಚ್ಚುಕಟ್ಟು ಪ್ರಾಧಿಕಾರದ ಅಧ್ಯಕ್ಷರಾದ ಮರಿಸ್ವಾಮಿ, ಸ್ಥಳ: ಕಲಾಮಂದಿರ, ಬೆಳಗ್ಗೆ 11.30ಕ್ಕೆ.

■ **ಕರ್ನಾಟಕ ಜಾನಪದ ಅಕಾಡೆಮಿ, ಬೆಂಗಳೂರು, ಪ್ರಾದೇಶಿಕ ಜಾನಪದ ಅಧ್ಯಯನ ಮತ್ತು ಜನಪದ ಕಲಿಕಾ ಕೇಂದ್ರ, ಕರ್ನಾಟಕ ಜಾನಪದ ವಿಶ್ವವಿದ್ಯಾನಿಲಯ, ಏಕತಾರಿ ಸಾಂಸ್ಕೃತಿಕ ಸಂಘಟನೆ :** ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಜನಪದ ನೃತ್ಯಗಳು ಮತ್ತು ಜನಪದ ಗೀತೆಗಳ ಕಲಿಕಾ ತರಬೇತಿ ಶಿಬಿರ, ಸ್ಥಳ: ಕಿರು ರಂಗಮಂದಿರ ಆವರಣ, ಕಲಾಮಂದಿರ, ಸಂಜೆ 4 ರಿಂದ.

■ **ಬಸವ ಭಾರತ ಪ್ರತಿಷ್ಠಾನ, ಸಮಸ್ತ ಬಸವಪರ ಸಂಘಟನೆಗಳ ಸಹಭಾಗಿತ್ವ :** ಬಸವ ಧರ್ಮ ಜಾಗೃತಿ, ಅಭಿಯಾನ, ಇಷ್ಟಲಿಂಗ ಧಾರಣೆ ಶಿವಯೋಗ, ವಚನ ಪಠಣ, ಶ್ರಾವಣ ಮಾಸದ ಪ್ರವಚನ ಕಾರ್ಯಕ್ರಮ, ಪ್ರಾಧ್ಯಾಪಕರಾದ ಶ್ರೀಮತಿ ಡಾ. ಶಶಿಕಲಾ ಅವರಿಂದ 12ನೇ ಶತಮಾನದ ವಚನಕಾರ್ತಿಯರ ಚಿಂತನೆಗಳ ಪ್ರಸ್ತುತತೆ ಕುರಿತು ಉಪನ್ಯಾಸ, ಸ್ಥಳ: ಡಾ. ಮಾತೆ ಬಸವಾಂಜಲಿ, ಬಸವ ಜ್ಞಾನಮಂದಿರ, ಮುನೇಶ್ವರನಗರ, ಸಂಜೆ 5.30ಕ್ಕೆ.

■ **ಯೋಗ ವಿತ್ ಶ್ರೀನಾಥ, ಹಿಮಾಲಯ ಪ್ರತಿಷ್ಠಾನ :** ಡಾ. ಬಿ.ಕೆ.ಎಸ್. ಅಯ್ಯಂಗಾರ್ ಸಂಸ್ಮರಣೆ ಹಾಗೂ ಡಾ. ಬಿ. ಶ್ರೀನಾಥ ಅವರ ಯೋಗಭೀಷ್ಮ ಕೃತಿ ಲೋಕಾರ್ಪಣೆ ಸಮಾರಂಭ, ಡಾ. ಬಿ.ಕೆ.ಎಸ್. ಭಾವಚಿತ್ರಕ್ಕೆ ಪುಷ್ಪಾರ್ಚನೆ : ಅಂತಾರಾಷ್ಟ್ರೀಯ ಯೋಗ ಶಿಕ್ಷಕ ಭರತ್ ಶೆಟ್ಟಿ, ಕೃತಿ ಬಿಡುಗಡೆ : ಶಾಸಕ ದರ್ಶನ್ ಧ್ರುವನಾರಾಯಣ್, ಅಧ್ಯಕ್ಷತೆ : ಯೋಗ ವಿತ್ ಶ್ರೀನಾಥ ಸಂಸ್ಥಾಪಕ ಡಾ. ಬಿ. ಶ್ರೀನಾಥ, ಮುಖ್ಯ ಅತಿಥಿಗಳು : ಯೋಗಕುಮಾರ್, ವಾಂಡೆ ವಿಲ್ಲೆ ಥಾಮಸ್, ಸ್ಥಳ: ಯೋಗ ವಿತ್ ಶ್ರೀನಾಥ, ಕಾಂಟೂರು ರಸ್ತೆ, ಗೋಕುಲಂ 3ನೇ ಹಂತ, ಸಂಜೆ 5.30ಕ್ಕೆ.

■ **ಶ್ರೀ ಗಾಯತ್ರಿದೇವಿ ಅಮ್ಮನವರ ದೇವಸ್ಥಾನ:** ಕಳಸ ಸ್ಥಾಪನೆ ಮತ್ತು ಗಾಯತ್ರಿದೇವಿ ಅಮ್ಮನವರ ಹೋಮ, ಶ್ರೀ ಗಾಯತ್ರಿ ಪ್ರತಿಪತ್ ಪ್ರಯುಕ್ತ ಬೆಳಗ್ಗೆ 7.30ಕ್ಕೆ ಮಹಾಗಣಪತಿ ಹೋಮ, ನವಗ್ರಹ ಹೋಮ, ಪರಿವಾರ ದೇವತಾ ಹೋಮ ಮತ್ತು ಶ್ರೀ ಗಾಯತ್ರಿದೇವಿ ಅಮ್ಮನವರ ಹೋಮ, ಮಧ್ಯಾಹ್ನ 12ಕ್ಕೆ ಪೂರ್ಣಾಹುತಿ, ಮಧ್ಯಾಹ್ನ 1ಕ್ಕೆ ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನದ ಪ್ರಾಂಗಣ, ಅರಮನೆ ಕೋಟೆ ಆವರಣ.

■ **ಶರಣ ಸಾಹಿತ್ಯ ಪರಿಷತ್ತು (ಮೈಸೂರು ನಗರ ಘಟಕ) ಕದಳಿ ಮಹಿಳಾ ವೇದಿಕೆ :** ವಚನ–ಶ್ರಾವಣ, ಮನೆ ಮನೆಗೆ ಶ್ರಾವಣ ಮಾಸದ ಶರಣ ಸಂದೇಶ, ಪ್ರಾಧ್ಯಾಪಕ ಪ್ರೊ. ಕೆ.ಎಂ. ಸಿದ್ದಪ್ಪ ಅವರಿಂದ ಜನಮೆಚ್ಚಿ ಶುದ್ಧನಲ್ಲದೆ ಮನ ಮೆಚ್ಚಿ ಶುದ್ಧನಲ್ಲಯ್ಯಾ–ಸಕಲೇಶ ಮಾದರಸ ಕುರಿತು ಉಪನ್ಯಾಸ, ಸ್ಥಳ: ಡಾ. ಶರತ್ ಕುಮಾರ್, ಶ್ರೀ ಬಸವೇಶ್ವರ ಬಳಗ, ಸಾಂಸ್ಕೃತಿಕ ಭವನ, ಗೋಕುಲಂ 3ನೇ ಹಂತ, ಸಂಜೆ 5.30ಕ್ಕೆ.


■ **ಸಂಸ್ಕೃತ ಭಾರತಿ, ಮೈಸೂರು :** ಸಂಸ್ಕೃತ ಸಪ್ತಾಹದ ಅಂಗವಾಗಿ ಉಪನ್ಯಾಸ, ಡಾ. ಸತ್ಯನಾರಾಯಣ ಅವರಿಂದ ಸಂಸ್ಕೃತ ಭಾಷಾ ಪರಂಪರಾ ವೈಶಿಷ್ಟ್ಯಂಚ ಕುರಿತು ಉಪನ್ಯಾಸ, ಸ್ಥಳ: ಭಗಿನಿ ಸೇವಾ ಸಮಾಜ, ವಿದ್ಯೋದಯ, ಕೃಷ್ಣಮೂರ್ತಿಪುರಂ, ಸಂಜೆ 6ರಿಂದ.

■ **ಶ್ರೀ ಸುತ್ತೂರು ಮಠ, ಮೈಸೂರು ಶಾಖೆ :** ಶ್ರಾವಣಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ಮಹಾರಾಣಿ ಕಲಾ ಕಾಲೇಜು ಪ್ರಾಂಶುಪಾಲ ಡಾ.ಬಿ.ವಿ. ವಸಂತಕುಮಾರ್ ಅವರಿಂದ ಪ್ರವಚನ, ವಿದುಷಿ ವಸಂತ ವೆಂಕಟೇಶ್ ಅವರಿಂದ ವಾಚನ, ಸಂಜೆ 6ಕ್ಕೆ ಸಾಮೂಹಿಕ ಪ್ರಾರ್ಥನೆ, ಸಂಜೆ 6.30ಕ್ಕೆ ಪ್ರವಚನ, ಸ್ಥಳ: ಶ್ರೀ ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6.30 ರಿಂದ.

■ **ಶ್ರೀ ರಾಘವೇಂದ್ರಸ್ವಾಮಿ ಸೇವಾ ಸಮಿತಿ :** ಶ್ರೀ ರಾಘವೇಂದ್ರತೀರ್ಥ ಗುರುಸಾರ್ವಭೌಮರ 353ನೇ ಆರಾಧನಾ ಮಹೋತ್ಸವ, ಬೆಳಗ್ಗೆ 5.30ಕ್ಕೆ ಸುಪ್ರಭಾತ, 7 ರಿಂದ ಮಹಾಪಂಚಾಮೃತ ಅಭಿಷೇಕ, 8 ರಿಂದ ಕನಕಾಭಿಷೇಕ, ಸರ್ವಸೇವೆ, ಮಧ್ಯಾಹ್ನ 12ಕ್ಕೆ ಮಹಾಮಂಗಳಾರತಿ, 12.30 ರಿಂದ ಪ್ರಸಾದ ವಿನಿಯೋಗ, ಸಂಜೆ 7ಕ್ಕೆ ಸ್ವಸ್ತಿವಾಚನ, ಶ್ರೇಯಃಪ್ರಾರ್ಥನೆ, ಮಹಾಮಂಗಳಾರತಿ, ಸಂಜೆ 6.30 ರಿಂದ ವಿದ್ವಾನ್ ಸಮೀರಾಚಾರ್ಯ ಅವರಿಂದ ಗಾಯನ, ವಿದ್ವಾನ್ ಗಣೇಶ್ ಭಟ್–ಕೀಬೋರ್ಡ್, ವಿದ್ವಾನ್ ಆತ್ಮಾರಾಮ್–ತಬಲ, ವಿದ್ವಾನ್ ವಿನಯ್ ರಂಗಧೂಳ್–ರಿಧಂ ಪಾಡ್ಸ್, ಸ್ಥಳ: ಶ್ರೀ ರಾಘವೇಂದ್ರಸ್ವಾಮಿ ಮಠ, ಜಯಲಕ್ಷ್ಮಿಪುರಂ.

■ **ಶ್ರೀ ಗುರುರಾಘವೇಂದ್ರ ಆರಾಧನಾ ಸಮಿತಿ :** ಶ್ರೀ ರಾಘವೇಂದ್ರ ಸ್ವಾಮಿಗಳ ಆರಾಧನಾ ಮಹೋತ್ಸವ, ಬೆಳಗ್ಗೆ 6ಕ್ಕೆ ಸುಪ್ರಭಾತ, 8ಕ್ಕೆ ರಾಘವೇಂದ್ರ ಅಷ್ಟಾಕ್ಷರ ಜಪ, ಬೆಳಗ್ಗೆ 9ಕ್ಕೆ ಹೋಮ, ಬೆಳಗ್ಗೆ 11ಕ್ಕೆ ಅಷ್ಟೋತ್ತರ ಸೇವೆ, ಬೆಳಗ್ಗೆ 11.30ಕ್ಕೆ ಅಭಿಷೇಕ, ಮಹಾಪೂಜೆ, ಮಹಾಮಂಗಳಾರತಿ, ಬೆಳಗ್ಗೆ 8ಕ್ಕೆ ಸೋಮನಾಥನಗರದ ಶ್ರೀ ಸೋಮನಾಥೇಶ್ವರ ದೇವಸ್ಥಾನದಿಂದ ವಾಹನೋತ್ಸವ, ಸಂಜೆ 6 ರಿಂದ ಶ್ರೀ ಆದ್ಯ ಗೋವಿಂದಾಚಾರ್ಯರಿಂದ ಉಪನ್ಯಾಸ, ಸಂಜೆ 7 ರಿಂದ ಪಂಡಿತ್ ವಿಶ್ವನಾಥ ನಾಕೋಡ ಅವರಿಂದ ಲಘು ಶಾಸ್ತ್ರೀಯ ಸಂಗೀತ, ಪಂಡಿತ್ ಶ್ರೀರಾಮ್ ಭಟ್–ಹಾರ್ಮೋನಿಯಂ, ಪಂಡಿತ್ ಭೀಮಾಶಂಕರ್ ಬಿದನೂರು–ತಬಲಾ, ರಾತ್ರಿ 9.30ಕ್ಕೆ ಮಹಾಮಂಗಳಾರತಿ, ಅಷ್ಟಾವಧಾನ ಸೇವೆ, ತೊಟ್ಟಿಲು ಸೇವೆ, ಸ್ಥಳ: ಶ್ರೀ ರಾಘವೇಂದ್ರಸ್ವಾಮಿ ಮಠ, ಸೋಮನಾಥನಗರ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 'ಶ್ರದ್ಧೆಯ ಶಿಲ್ಪ' ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ. ಎಸ್. ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಹಂಸಿನಿ. ಎಸ್. ಕುಮಾರ್, ವ್ಯಾಖ್ಯಾನ–ಕೆ.ಎಲ್.ಪದ್ಮಿನಿ ಹೆಗಡೆ, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ: ಅ.ನ.ಕೃ ಅವರ 'ಉದಯರಾಗ' ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ : ಉಮೇಶ್ ಎಸ್.ಎಸ್., 8.30 ಬಾನುಲಿ ಇಂಗ್ಲೀಷ್ ಪಾಠ, ಪ್ರಸ್ತುತಿ : ಸದಾನಂದ. ಆರ್, 8.40 ಕರೆಗೊಂದು ಗೀತೆ– ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರ ಫೋನ್ ಇನ್ ಕಾರ್ಯಕ್ರಮ, 9.00 ರಾಷ್ಟ್ರೀಯ ಬಾಹ್ಯಾಕಾಶ ದಿನದ ಸಂದರ್ಭದಲ್ಲಿ ವಿಶೇಷ ಕಾರ್ಯಕ್ರಮ ಸರಣಿ –ಬಾಹ್ಯಾಕಾಶ ವಿಸ್ಮಯ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಆರ್. ಮೋಹನ್ – ಕ್ಲಾರಿಯೋನೆಟ್, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಥೆಯಲ್ಲಿದೆ ಉತ್ತರ, ಪ್ರಸ್ತುತಿ : ಪ್ರಭುಸ್ವಾಮಿ ಮಳಿಮಠ್ ಹಾಗೂ ಚೈತ್ರಿಕಾ

ಮಧ್ಯಾಹ್ನ: 12.05 ವನಿತಾ ವಿಹಾರ–ಹೀಗಿದೆ ನೋಡಿ ನಮ್ ಜೋಡಿ ಒಡನಾಡಿಯ ಸ್ಟ್ಯಾನ್ಲೀ ಮತ್ತು ಸಮಾಜಕಾರ್ಯ ವಿಭಾಗದ ಪ್ರಾಧ್ಯಾಪಕಿ ಕುಮುದಿನಿ ಅಚ್ಚಿ ದಂಪತಿಯೊಂದಿಗೆ ಮಾತುಕತೆ. ಪ್ರಸ್ತುತಿ : ಅಬ್ದುಲ್ ರಶೀದ್, 12.30 ದೇವರನಾಮ–ನೀಲಾ. ಎನ್.ಸಿ, 12.45 ಕನ್ನಡದಲ್ಲಿ ಭಾಷಣ, 1.00 ಬಾನುಲಿ ಇಂಗ್ಲೀಷ್ ಪಾಠ, ಪ್ರಸ್ತುತಿ : ಸದಾನಂದ. ಆರ್, 1.20 ಭಾವಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ನಿತ್ಯಶ್ರೀ ಮಹದೇವನ್ – ಹಾಡುಗಾರಿಕೆ, 4.00 ಕಥಾ ಕಾಲಕ್ಷೇಪ–ಗದಾಯುದ್ಧ, ಪ್ರಸ್ತುತಿ–ವಿದ್ವಾನ್. ಭದ್ರಗಿರಿ ಅಚ್ಯುತದಾಸರು, 6.50 ಕೃಷಿರಂಗ: ಕಿಸಾನ್ ವಾಣಿ–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ರೇಷ್ಮೆ ಐಸಿರಿ – ರೇಷ್ಮೆ ಕೃಷಿ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ ಚಂದ್ರಿಕೆ ವಿಧಗಳು ಹಾಗೂ ಅವುಗಳ ಪ್ರಾಮುಖ್ಯತೆ. ಈ ಕುರಿತು ಮೈಸೂರಿನ ಕೇಂದ್ರ ರೇಷ್ಮೆ ಸಂಶೋಧನೆ ಹಾಗೂ ತರಬೇತಿ ಸಂಸ್ಥೆಯ ವಿಜ್ಞಾನಿ ಡಾ. ಎನ್. ಚಂದ್ರಕಾಂತ್ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್. ಕೇಶವಮೂರ್ತಿ, 7.45 'ಮೈಸೂರು ಜಂಕ್ಷನ್' ಸಾಪ್ತಾಹಿಕ ಸಂಚಿಕೆ, ಪ್ರಸ್ತುತಿ: ಜಾಂಪಣ್ಣ ಆಶೀಹಾಳ್, 8.00 ಕ್ರೀಡಾಲೋಕ, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ : ರವಿಕಿರಣ್ – ಚಿತ್ರವೀಣಾ, 10.00 ಚೈತ್ರವನ – ಲಕ್ಷ್ಮೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ. ವಾಚನ : ಹೆಚ್. ಎಲ್. ಶ್ರೀ ಕಂಠ, ವ್ಯಾಖ್ಯಾನ : ಹೆಚ್. ಎಸ್. ಗೋಪಾಲ್, ಪ್ರಸ್ತುತಿ: ಡಾ. ಎ. ಎಸ್. ಶಂಕರನಾರಾಯಣ

ಮುಡಾ ನಿವೇಶನ ಹಂಚಿಕೆ ಹಗರಣ: ಮುಖ್ಯಮಂತ್ರಿಗಳ ತನಿಖೆಗೆ ರಾಜ್ಯಪಾಲರ ಅನುಮತಿ ಖಂಡಿಸಿ

ಮೈಸೂರಲ್ಲಿ ಕಾಂಗ್ರೆಸ್ ಕಾರ್ಯಕರ್ತರ ಪ್ರತಿಭಟನೆ

ಮೆರವಣಿಗೆಯಲ್ಲಿ ತೆರಳಿ ರಾಜ್ಯಪಾಲರ ವಿರುದ್ಧ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗಳಿಗೆ ದೂರು ಸಲ್ಲಿಕೆ; ಉದ್ದಕ್ಕೂ ಮೊಳಗಿದ 'ರಾಜ್ಯಪಾಲರ ಹಠಾವೋ–ಕರ್ನಾಟಕ ಬಚಾವೋ' ಘೋಷಣೆ





ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರ ಕ್ರಮವನ್ನು ಖಂಡಿಸಿ ಕಾಂಗ್ರೆಸ್ ಕಾರ್ಯಕರ್ತರು ಸೋಮವಾರ ಮೈಸೂರಿನಲ್ಲಿ ಭಾರಿ ಪ್ರತಿಭಟನೆ ನಡೆಸಿದರು. ನಂತರ ಅಪರ ಜಿಲ್ಲಾಧಿಕಾರಿ ಶಿವರಾಜು ಅವರಿಗೆ ರಾಜ್ಯಪಾಲರ ವಿರುದ್ಧ ರಾಷ್ಟ್ರಪತಿಗಳಿಗೆ (ಆಂಗ್ಲ ಪ್ರತಿ) ಬರೆದಿರುವ ದೂರು ಪ್ರತಿಯನ್ನು ಸಲ್ಲಿಸಿದರು.

ಮೈಸೂರು, ಆ. 19(ಆರ್‌ಕೆ)–ಮುಡಾ ನಿವೇಶನ ಹಂಚಿಕೆ ಹಗರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಅನುಮತಿ ನೀಡಿರುವ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರ ಕ್ರಮವನ್ನು ಖಂಡಿಸಿ ಕಾಂಗ್ರೆಸ್ ಕಾರ್ಯಕರ್ತರು ಮೈಸೂರಿನಲ್ಲಿ ಭಾರಿ ಪ್ರತಿಭಟನೆ ನಡೆಸಿದರು.

ಮೈಸೂರು ನಗರ ಮತ್ತು ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಮೈಸೂರಿನ ಗಾಂಧಿ ಸ್ಕ್ವೇರ್‌ನಲ್ಲಿ ಆಯೋಜಿಸಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ನಂತರ ದೊಡ್ಡ ಗಡಿಯಾರ, ಚಂದ್ರಗುಪ್ತ ರಸ್ತೆ, ಬಿಎನ್ ರಸ್ತೆ, ಛತ್ರಿ ಮರ, ನಜರ್‌ಬಾದ್ ಮುಖ್ಯ ರಸ್ತೆ, ಮಲೈ ಮಹದೇಶ್ವರ ರಸ್ತೆ ಮೂಲಕ ಮೆರವಣಿಗೆಯಲ್ಲಿ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಅಪರ ಜಿಲ್ಲಾಧಿಕಾರಿ ಶಿವರಾಜು ಅವರಿಗೆ ರಾಜ್ಯಪಾಲರ ವಿರುದ್ಧ ರಾಷ್ಟ್ರಪತಿಗಳಿಗೆ (ಆಂಗ್ಲ ಪ್ರತಿ) ಬರೆದಿರುವ ದೂರು ಪ್ರತಿಯನ್ನು ಸಲ್ಲಿಸಿದರು. 'ರಾಜ್ಯಪಾಲರ ಹಠಾವೋ–ಕರ್ನಾಟಕ ಬಚಾವೋ' ಫಲಕ ಪ್ರದರ್ಶಿಸಿದ ಪ್ರತಿಭಟನಾಕಾರರು, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಅನುಮತಿ ನೀಡಿರುವ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ವಾಪಸ್ ಹೋಗಿ ಎಂದು ಘೋಷಣೆ ಕೂಗಿ, ಸಿದ್ದರಾಮಯ್ಯ ಪರ ನಾವಿದ್ದೇವೆ ಎಂದು ಮೆರವಣಿಗೆಯುದ್ದಕ್ಕೂ ಘೋಷಣೆ ಕೂಗಿದರು.

ಬಿಜೆಪಿ, ಜೆಡಿಎಸ್ ಷಡ್ಯಂತರ: ಗಾಂಧಿ ಸ್ಕ್ವೇರ್‌ನಲ್ಲಿ ನೆರೆದಿದ್ದ ಸಾವಿರಾರು ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ, ಜನರಿಂದ ಸಂವಿಧಾನಬದ್ಧವಾಗಿ ಆಯ್ಕೆಯಾಗಿ ಬಂದಿರುವ ಕಾಂಗ್ರೆಸ್ ಸರ್ಕಾರ, ಪ್ರಜಾಪ್ರಭುತ್ವದ ಆಶಯಗಳನ್ನು ಅನುಷ್ಠಾನಕ್ಕೆ ತರಲು ಮುಂದಾಗಿರುವುದನ್ನು ಸಹಿಸದೆ ಬಿಜೆಪಿ ಮತ್ತು ಜೆಡಿಎಸ್, ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ರಾಜ್ಯಪಾಲರ ಮೂಲಕ ಷಡ್ಯಂತ್ರ ಮಾಡುತ್ತಿದೆ ಎಂದು ಆರೋಪಿಸಿದರು. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನಗಳ ಹಂಚಿಕೆಯಲ್ಲಿ ಸಿದ್ದರಾಮಯ್ಯ ಅವರ ಹಸ್ತಕ್ಷೇಪ ವಿಲ್ಲದಿದ್ದರೂ, ಪಿತೂರಿ ನಡೆಸಿ ಸಂವಿಧಾನಬಾಹಿರವಾಗಿ ಬಿಜೆಪಿ–ಜೆಡಿಎಸ್ ನಾಯಕರು ರಾಜ್ಯ ಸರ್ಕಾರವನ್ನು ಅಭದ್ರಗೊಳಿಸಲು ಯತ್ನಿಸುತ್ತಿರುವುದಕ್ಕೆ ಧಿಕ್ಕಾರವಿರಲಿ ಎಂದು ಸಚಿವರು ಆಕ್ರೋಶ ವ್ಯಕ್ತಪಡಿಸಿದರು.

ಖಾಸಗಿ ದೂರು ಬಂದ ತಕ್ಷಣವೇ ಪರಿಶೀಲಿಸದೇ ರಾಜ್ಯಪಾಲರು ಮುಖ್ಯಮಂತ್ರಿಗಳಿಗೆ ತರಾತುರಿಯಲ್ಲಿ ನೋಟಿಸ್ ನೀಡಿದ್ದಾರೆ. ಆರೋಪಕ್ಕೆ ಪೂರಕ ದಾಖಲಾತಿಗಳಿಲ್ಲದಿದ್ದರೂ, ಕೇಂದ್ರ ಸರ್ಕಾರದ ಆಣತಿಯಂತೆ ತನಿಖೆಗೆ ಅನುಮತಿ ನೀಡಿರುವುದು ಕಾನೂನಿಗೆ ವಿರುದ್ಧ ಹಾಗೂ ಪ್ರಜಾಸತ್ತಾತ್ಮಕತೆಯ ಕಗ್ಗೊಲೆ ಎಂದು ಗುಡುಗಿದರು.

ಈ ಹಿಂದೆಯೇ ಹೆಚ್.ಡಿ.ಕುಮಾರಸ್ವಾಮಿ, ಮುರುಗೇಶ್ ನಿರಾಣಿ, ಜನಾರ್ಧನ ರೆಡ್ಡಿ, ಶಶಿಕಲಾ ಜೊಲ್ಲೆ ಮೇಲೆ ದೂರುಗಳು ದಾಖಲಾಗಿವೆ. ಅವರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದ ರಾಜ್ಯಪಾಲರು, ಸಿದ್ದರಾಮಯ್ಯ ವಿಷಯದಲ್ಲಿ ಹಠಾತ್ತನೇ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದೇಕೆ ಎಂದು ಪ್ರಶ್ನಿಸಿದ ಸಚಿವರು, ಸಂವಿಧಾನ ಬದ್ಧವಾಗಿ ಕೆಲಸ ಮಾಡಿ ಪ್ರಜಾಪ್ರಭುತ್ವದ ಕನ್ನಡಿಯಾಗಿರಬೇಕಾದ ಜವಾಬ್ದಾರಿಯುತ ರಾಜ್ಯಪಾಲರು ಅಧಿಕಾರವನ್ನು ದುರ್ಬಳಕೆ ಮಾಡಿಕೊಂಡು ಬಿಜೆಪಿ–ಜೆಡಿಎಸ್ ಕೈಗೊಂಬೆಯಾಗಿ ವರ್ತಿಸುತ್ತಿರುವುದನ್ನು ರಾಜ್ಯದ ಜನ, ಕಾಂಗ್ರೆಸ್ ಕಾರ್ಯಕರ್ತರು ಸಹಿಸುವುದಿಲ್ಲ ಎಂದು ಕಿಡಿಕಾರಿದರು.

ಪ್ರಹ್ಲಾದ್ ಜೋಷಿ ಮತ್ತು ಹೆಚ್.ಡಿ.ಕುಮಾರಸ್ವಾಮಿ ಅವರು ಈ ಹಿಂದೆಯೇ ಕರ್ನಾಟಕ ರಾಜ್ಯದ ಕಾಂಗ್ರೆಸ್ ಸರ್ಕಾರವನ್ನು ಕಿತ್ತೊಗೆದು ನಾವು ಅಧಿಕಾರಕ್ಕೆ ಬರುತ್ತೇವೆ ಎಂದಿದ್ದರು. ಅದೇ ರೀತಿ ರಾಜಭವನವೂ ಬಿಜೆಪಿ ಪರ ಕೆಲಸ ಮಾಡುತ್ತಿದೆ ಎಂಬುದನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಈ ಮೂಲಕ ಸಾಬೀತುಪಡಿಸಿದ್ದಾರೆ ಎಂದು ಡಾ.ಮಹದೇವಪ್ಪ ಇದೇ ಸಂದರ್ಭ ಅಸಮಾಧಾನ ವ್ಯಕ್ತಪಡಿಸಿದರು. ವಾಮಮಾರ್ಗದಿಂದ ರಾಜಭವನದ ಮೂಲಕ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ಕಾಂಗ್ರೆಸ್ ಕಾರ್ಯಕರ್ತರು ಬಿಡುವುದಿಲ್ಲ ಎಂದು ಸಚಿವರು ತಿಳಿಸಿದರು.

ಶಾಸಕರಾದ ತನ್ವೀರ್‌ಸೇಠ್, ದರ್ಶನ್ ಧ್ರುವನಾರಾಯಣ, ಅನಿಲ್ ಚಿಕ್ಕಮಾದು, ಡಿ.ರವಿಶಂಕರ್, ಮಾಜಿ ಶಾಸಕರಾದ ಎಂ.ಕೆ. ಸೋಮಶೇಖರ್, ಹೆಚ್.ಪಿ.ಮಂಜುನಾಥ, ವಿಧಾನಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ, ಮುಡಾ ಅಧ್ಯಕ್ಷ ಕೆ.ಮರೀಗೌಡ, ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ. ವಿಜಯಕುಮಾರ್, ಡಾ.ಪುಷ್ಪಾ ಅಮರ್‌ನಾಥ, ಮಾಜಿ ಮೇಯರ್‌ಗಳಾದ ನಾರಾಯಣ, ಮೋದಾಮಣಿ, ಆರೀಫ್ ಹುಸೇನ್, ಪುಷ್ಪಲತಾ ಜಗನ್ನಾಥ್, ಮಾಜಿ ಕಾರ್ಪೊರೇಟರ್‌ಗಳು, ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಸಾವಿರಾರು ಸಂಖ್ಯೆಯಲ್ಲಿ ಪಾಲ್ಗೊಂಡು ಪ್ರತಿಭಟನೆ ನಡೆಸಿದರು.

ದೇವರಾಜ ಉಪವಿಭಾಗದ ಎಸಿಪಿ ಶಾಂತಮಲ್ಲಪ್ಪ ನೇತೃತ್ವದಲ್ಲಿ ಕಾಂಗ್ರೆಸ್ ಪ್ರತಿಭಟನೆ, ಮೆರವಣಿಗೆ ಮತ್ತು ಎಡಿಸಿ ಅವರಿಗೆ ಮನವಿ ಪತ್ರ ನೀಡುವ ವೇಳೆ ಹೆಚ್ಚುವರಿ ಪೊಲೀಸರನ್ನು ನಿಯೋಜಿಸಿ, ಭಾರಿ ಭದ್ರತೆ ಒದಗಿಸಲಾಗಿತ್ತು.

ನಾಳೆ ಗಜಪಯಣ; ಮೊದಲ ತಂಡದಲ್ಲಿ ಅಂಬಾರಿಯ ಅಭಿಮನ್ಯು ಸೇರಿ 9 ಆನೆಗಳು ಕಾಡಿನಿಂದ ನಾಡಿಗೆ

ಎರಡನೇ ತಂಡದಲ್ಲಿ 5 ಆನೆಗಳ ಆಗಮನ; ಮೈಸೂರು ವನ್ಯಜೀವಿ ವಿಭಾಗದ ಡಿಸಿಎಫ್ ಡಾ.ಐ.ಬಿ.ಪ್ರಭುಗೌಡ ಮಾಹಿತಿ

(ಸಂಗ್ರಹ ಚಿತ್ರ)





ಮೈಸೂರಿನ ಅರಣ್ಯ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮೈಸೂರು ವನ್ಯಜೀವಿ ವಿಭಾಗದ ಡಿಸಿಎಫ್ ಡಾ.ಐ.ಬಿ.ಪ್ರಭುಗೌಡ ಮಾತನಾಡಿದರು.

ಮೈಸೂರು,ಆ.19(ಪಿಎಂ)– ನಾಡಹಬ್ಬ ದಸರಾ ಮಹೋತ್ಸವದ ಮುನ್ನುಡಿಯಾದ ಗಜಪಯಣ ಆ.21ರಂದು ನಡೆಯಲಿದ್ದು, ಅಂದು ಅಂಬಾರಿ ಆನೆ ಅಭಿಮನ್ಯು ಸೇರಿದಂತೆ ಮೊದಲ ತಂಡದ 9 ಆನೆಗಳು ಕಾಡಿನಿಂದ ಅರಮನೆ ನಗರಿ ಮೈಸೂರಿಗೆ ಆಗಮಿಸಲಿವೆ. ಹುಣಸೂರು ತಾಲೂಕಿನ ವೀರನಹೊಸಳ್ಳಿ ಬಳಿ ಅಂದು ಬೆಳಗ್ಗೆ 10.20ರಿಂದ 10.45 ರೊಳಗೆ ಸಲ್ಲುವ ಶುಭ ತುಲಾ ಲಗ್ನದಲ್ಲಿ ಮೊದಲ ತಂಡದ ಗಜಪಡೆಗೆ ಪೂಜಾ ವಿಧಿವಿಧಾನ ನಡೆಯಲಿದೆ.

ಮೈಸೂರಿನ ಅರಣ್ಯ ಭವನದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಮೈಸೂರು ಉಪ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ ವಿಭಾಗ) ಡಾ.ಐ.ಬಿ.ಪ್ರಭುಗೌಡ, ಗಜಪಡೆಗೆ ಪೂಜೆ ಸಲ್ಲಿಸಿದ ಬಳಿಕ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಅವುಗಳಿಗೆ ಪುಷ್ಪಾರ್ಚನೆ ನೆರವೇರಿಸಿ ವಿಧ್ಯುಕ್ತ ಚಾಲನೆ ನೀಡಲಿದ್ದಾರೆ. ಬಳಿಕ ಸಭಾ ಕಾರ್ಯಕ್ರಮ ನಡೆಯಲಿದ್ದು, ಇದೇ ವೇಳೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ದಸರಾ 2024ರಲ್ಲಿ ಪಾಲ್ಗೊಳ್ಳುವ ಗಜಪಡೆಯ ವಿವರ ಒಳಗೊಂಡ ಕಿರುಪುಸ್ತಕ ಬಿಡುಗಡೆ ಮಾಡಲಿದ್ದಾರೆ ಎಂದು ತಿಳಿಸಿದರು.

ಸ್ಥಳೀಯ ಶಾಸಕ ಜಿ.ಡಿ.ಹರೀಶ್ ಗೌಡ ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದು, ಸಚಿವರಾದ ಕೆ.ವೆಂಕಟೇಶ್, ಶಿವರಾಜ್ ಸಂಗಪ್ಪ ತಂಗಡಗಿ ವಿಶೇಷ ಆಹ್ವಾನಿತರಾಗಿ ಆಗಮಿಸಲಿದ್ದಾರೆ. ಅರಣ್ಯ ವಸತಿ ಮತ್ತು ವಿಹಾರಧಾಮಗಳ ನಿಗಮದ ಅಧ್ಯಕ್ಷರೂ ಆದ ಶಾಸಕ ಸಿ.ಅನಿಲ್ ಕುಮಾರ್, ಚಾಮುಂಡೇಶ್ವರಿ ವಿದ್ಯುತ್ ನಿಗಮದ ಅಧ್ಯಕ್ಷ ಎ.ಬಿ. ರಮೇಶ್ ಬಂಡಿಸಿದ್ದೇಗೌಡ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್ ಉಪಸ್ಥಿತರಿರಲಿದ್ದು, ಸಂಸದರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಸುನೀಲ್ ಬೋಸ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ನಿಗಮ ಮಂಡಳಿಗಳ ಅಧ್ಯಕ್ಷರು ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ವಿವರಿಸಿದರು.

ವೀರನಹೊಸಹಳ್ಳಿಯಲ್ಲಿ ವೇದಿಕೆ ಸಜ್ಜುಗೊಳಿಸಲಾಗುತ್ತಿದ್ದು, ಮೂರೂವರೆ ಸಾವಿರಕ್ಕೂ ಅಧಿಕ ಜನ ಅಂದಿನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ನಿರೀಕ್ಷೆ ಇದೆ. ಭಾಗವಹಿಸುವ ಎಲ್ಲಾ ಜನಕ್ಕೂ ಊಟ ತಿಂಡಿ ವ್ಯವಸ್ಥೆ ಮಾಡಲಾಗುವುದು. 8ರಿಂದ 10 ಕಲಾ ತಂಡಗಳು ಪಾಲ್ಗೊಳ್ಳಲಿವೆ. ಅಲ್ಲದೆ, ಹಾಡಿ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಸಹ ನಡೆಯಲಿದೆ ಎಂದರು.

ಲಾರಿಯಲ್ಲಿ ಪಯಣ: ಆ.21 ರಂದೇ ಲಾರಿಗಳಲ್ಲಿ ಮೈಸೂರಿನ ಅರಣ್ಯ ಭವನಕ್ಕೆ ಮೊದಲ ತಂಡದ ಗಜಪಡೆಯನ್ನು ಕರೆತರಲಾಗುವುದು. ಬಳಿಕ ಅರಣ್ಯ ಭವನದಲ್ಲೇ ವಾಸ್ತವ್ಯ ಇರುವ ಗಜಪಡೆಯನ್ನು ಆ.23 ರಂದು ಸಾಂಪ್ರದಾಯಿಕ ಪೂಜೆ ಸಲ್ಲಿಸಿ ವಿಜೃಂಭಣೆಯಿಂದ ಅರಮನೆಗೆ ಕಳುಹಿಸಿಕೊಡಲಾಗುವುದು. ನಂತರ ಜಿಲ್ಲಾಡಳಿತದಿಂದ ಅರಮನೆ ಜಯಮಾರ್ತಾಂಡ ದ್ವಾರದಲ್ಲಿ ಗಜಪಡೆಗೆ ಸ್ವಾಗತ ಕಾರ್ಯಕ್ರಮ ನಡೆಯಲಿದೆ. ಇದಾದ 10 ದಿನಗಳ ಒಳಗೆ ಎರಡನೇ ತಂಡದಲ್ಲಿ 5 ಆನೆಗಳು ಆಗಮಿಸಲಿವೆ. ಅಲ್ಲದೆ, ನಾಲ್ಕು ಹೆಚ್ಚುವರಿ ಆನೆಗಳನ್ನು ಸಿದ್ಧಪಡಿಸಿಕೊಳ್ಳಲಾಗಿದೆ. ಆದರೆ ಅವುಗಳನ್ನು ಇಲ್ಲಿಗೆ ಕರೆತರುವುದಿಲ್ಲ. ಎರಡು ತಂಡಗಳಲ್ಲಿರುವ ಆನೆಗಳ ಆರೋಗ್ಯದಲ್ಲಿ ವ್ಯತ್ಯಾಸ ಉಂಟಾದರೆ ಅವುಗಳನ್ನು ಬಳಸಿಕೊಳ್ಳಲಾಗುವುದು ಎಂದು ತಿಳಿಸಿದರು.

ಒಟ್ಟು 14 ಆನೆಗಳು ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳಲಿವೆ. ಎಲ್ಲಾ ಆನೆಗಳಿಗೂ ವೈದ್ಯಕೀಯ ತಪಾಸಣೆ ನಡೆಸಲಾಗಿದೆ. ಹೆಣ್ಣಾನೆಗಳಿಗೆ ಸಂಬಂಧಿಸಿದಂತೆ ಗರ್ಭಧಾರಣೆ ಪರೀಕ್ಷೆಯ ವರದಿ ಪಡೆದಿದ್ದು, ಎಲ್ಲಾ ಆನೆಗಳ ವರದಿಯೂ ನೆಗೆಟಿವ್ ಇದೆ. ಮಹೇಂದ್ರ ಗಂಡಾನೆಯನ್ನು ಎರಡನೇ ತಂಡದಲ್ಲಿ ಕರೆತರಲು ಕಾರಣ ಇದು ಈಗಾಗಲೇ ಪರಿಣತಿ ಹೊಂದಿದೆ. ಪಳಗಿದ ಆನೆಯಾದ ಕಾರಣ ಅದಕ್ಕೆ ಹೆಚ್ಚಿನ ತಾಲೀಮು ಅಗತ್ಯವಿಲ್ಲವೆಂದು ನಿರ್ಧರಿಸಲಾಗಿದೆ. ಎರಡನೇ ತಂಡದಲ್ಲಿ ಬರುವ ಆನೆಗಳಿಗೆ ಹೆಚ್ಚು ತಾಲೀಮು ಅಗತ್ಯವಿರುವುದಿಲ್ಲ. ಕಾರಣ ಅವು ಹೆಚ್ಚು ಪಳಗಿದ ಆನೆಗಳಾಗಿವೆ. ಎರಡನೇ ತಂಡದಲ್ಲಿ ಆಗಮಿಸುವ ಪ್ರಶಾಂತ, ಮಹೇಂದ್ರ, ಸುಗ್ರೀವ, ಲಕ್ಷ್ಮೀ ಮತ್ತು ಹಿರಣ್ಯ ಆನೆಗಳು ದಸರಾದಲ್ಲಿ ಪಳಗಿವೆ. ಅಲ್ಲದೆ, ಇವು ಸೌಮ್ಯ ಸ್ವಭಾವ ಹೊಂದಿವೆ ಎಂದು ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದರು.

ಆ.24ರಿಂದ ತಾಲೀಮು: ಲಾರಿಗಳಲ್ಲಿ ಆನೆಗಳನ್ನು ಮೈಸೂರಿಗೆ ಕರೆತರುವ ಸಂಬಂಧ ಮೊದಲ ಬಾರಿಯ ಟೆಂಡರ್‌ನಲ್ಲಿ ಕೆಲ ತಾಂತ್ರಿಕ ಸಮಸ್ಯೆ ಉಂಟಾಗಿತ್ತು. ಹೀಗಾಗಿ ಎರಡನೇ ಬಾರಿ ಟೆಂಡರ್ ಕರೆದು, ಕಾರ್ಯಾದೇಶ ನೀಡಲಾಗಿದೆ. ಎಲ್ಲಾ 18 ಆನೆಗಳಿಗೂ ವಿಮೆ ಮಾಡಿಸಲಾಗುತ್ತಿದೆ. ಅರಮನೆ ಆವರಣದಲ್ಲಿ 9 ಆನೆಗಳು ಹಾಗೂ ಕಾವಾಡಿ ಮತ್ತು ಮಾವುತರಿಗಾಗಿ 18 ಶೆಡ್‌ಗಳ ನಿರ್ಮಾಣ ಮಾಡಲಾಗಿದೆ.

ಎರಡನೇ ತಂಡಕ್ಕೂ ಶೆಡ್‌ಗಳ ನಿರ್ಮಾಣ ಪ್ರಾರಂಭವಾಗಿದೆ. ಆನೆಗಳು ಅರಮನೆ ಪ್ರವೇಶಿಸಿದ ಮಾರನೇ ದಿನವೇ ಅವುಗಳ ತೂಕ ಪರೀಕ್ಷೆ ನಡೆಸಲಾಗುವುದು. ಆ.24 ರಿಂದ ತಾಲೀಮು ಪ್ರಾರಂಭಗೊಳ್ಳಲಿದೆ ಎಂದು ಪ್ರಶ್ನೆಗಳಿಗೆ ಉತ್ತರಿಸಿದರು.



ಅಭಿಮನ್ಯು

ದಸರಾ ಗಜಪಡೆ ಪಟ್ಟಿ

ಗಂಡಾನೆಗಳಾದ ಅಭಿಮನ್ಯು, ಧನಂಜಯ, ಗೋಪಿ, ಭೀಮ, ಕಂಜನ್, ರೋಹಿತ್, ಏಕಲವ್ಯ, ಹೆಣ್ಣಾನೆಗಳಾದ ವರಲಕ್ಷ್ಮೀ, ಲಕ್ಷ್ಮೀ ಮೊದಲ ತಂಡದಲ್ಲಿ ಆಗಮಿಸಲಿವೆ. ಅಂತೆಯೇ ಎರಡನೇ ತಂಡದಲ್ಲಿ ಗಂಡಾನೆಗಳಾದ ಪ್ರಶಾಂತ, ಮಹೇಂದ್ರ, ಸುಗ್ರೀವ, ಹೆಣ್ಣಾನೆಗಳಾದ ಲಕ್ಷ್ಮೀ, ಹಿರಣ್ಯ ಆಗಮಿಸಲಿವೆ. ಇದಲ್ಲದೆ, ಹರ್ಷ (ಗಂಡು), ಅಯ್ಯಪ್ಪ (ಗಂಡು), ಪಾರ್ಥಸಾರಥಿ (ಗಂಡು), ಮಾಲಾದೇವಿ (ಹೆಣ್ಣು) ಆನೆಗಳನ್ನು ಮೀಸಲು ಆನೆಗಳಾಗಿ ಆಯ್ಕೆ ಮಾಡಲಾಗಿದೆ.

ಅರ್ಜುನನ ಸ್ಥಾನ ತುಂಬಲಿದೆ ಏಕಲವ್ಯ...



ಬರೋಬ್ಬರಿ 8 ಬಾರಿ ಅಂಬಾರಿ ಹೊತ್ತಿದ್ದ ಅರ್ಜುನ ಆನೆಯು ಕಳೆದ ವರ್ಷ ಡಿಸೆಂಬರ್‌ನಲ್ಲಿ ಕಾಡಾನೆ ಸೆರೆ ಕಾರ್ಯಾಚರಣೆ ವೇಳೆ ದುರಂತ ಸಾವಿಗೀಡಾಯಿತು. ಇದೀಗ ಅರ್ಜುನ ಆನೆಯ ಸ್ಥಾನವನ್ನು ಏಕಲವ್ಯ ಎಂಬ ಗಂಡಾನೆ ತುಂಬಲಿದೆ ಎಂದು ಗುರುತಿಸಲಾಗಿದೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಡಿಸಿಎಫ್ ಡಾ.ಐ.ಬಿ.ಪ್ರಭುಗೌಡ, ದಸರಾದಲ್ಲಿ ಮೊದಲ ಬಾರಿಗೆ ಪಾಲ್ಗೊಳ್ಳುತ್ತಿರುವ ಏಕಲವ್ಯ ಎಂಬ ಗಂಡಾನೆಯು 39 ವರ್ಷ ವಯೋಮಾನದ್ದಾಗಿದ್ದು, ಇದು ಶಬ್ದಕ್ಕೆ ಬೆದರುವುದಿಲ್ಲ. ಅರ್ಜುನನ ಸ್ಥಾನ ತುಂಬಲಿದೆ ಎಂದು ಇದನ್ನು ಗುರುತಿಸಲಾಗಿದೆ ಎಂದರು. ಅರ್ಜುನ ಆನೆ ನೆನಪಿನಾರ್ಥ ದಸರಾದಲ್ಲಿ ಯಾವುದಾದರೂ ಕಾರ್ಯಕ್ರಮ ಆಯೋಜನೆ ಮಾಡಲಾಗುತ್ತದೆಯೇ? ಎಂಬುದಕ್ಕೆ ಪ್ರತಿಕ್ರಿಯಿಸಿ, ಇದರ ನೆನಪಿಗಾಗಿ ಕಾರ್ಯಕ್ರಮ ಮಾಡಬೇಕಿದ್ದು, ಅದು ಇನ್ನೂ ನಿರ್ಧಾರವಾಗಿಲ್ಲ ಎಂದು ತಿಳಿಸಿದರು.

ಶಾಲಾ ಮಕ್ಕಳೊಂದಿಗೆ 'ರಕ್ಷಾ ಬಂಧನ್' ಆಚರಿಸಿದ ಪ್ರಧಾನಿ ನರೇಂದ್ರ ಮೋದಿ



ನವದೆಹಲಿ: ಇಂದು ರಕ್ಷಾ ಬಂಧನ್. ಶ್ರಾವಣ ಮಾಸದ ಹಬ್ಬಗಳಲ್ಲಿ ರಕ್ಷಾ ಬಂಧನ್ ಒಂದಾಗಿದೆ. ಅಣ್ಣ– ತಂಗಿಯ ಬಾಂಧವ್ಯ ಬೆಸೆಯುವ ಈ ಹಬ್ಬವನ್ನು ದೇಶಾದ್ಯಂತ ಸಡಗರ– ಸಂಭ್ರಮದಿಂದ ಆಚರಿಸಲಾಗುತ್ತಿದೆ. ಸಹೋದರಿಯರು ತನ್ನ ಸಹೋದರರ ಮುಂಗೈಗೆ ರಾಖಿ ಕಟ್ಟುವ ಮೂಲಕ ಅವರ ದೀರ್ಘಾಯಸ್ಸಿಗಾಗಿ ಪ್ರಾರ್ಥಿಸುವುದು ಈ ಹಬ್ಬದ ವಿಶೇಷವಾಗಿದೆ. ಪ್ರಧಾನಿ ನರೇಂದ್ರ ಮೋದಿ ಸೋಮವಾರ ದೆಹಲಿಯ ವಿವಿಧ ಶಾಲೆಯ ಮಕ್ಕಳೊಂದಿಗೆ ರಕ್ಷಾ ಬಂಧನ್ ಆಚರಿಸಿದರು. ತನ್ನ ಮುಂಗೈಗೆ ರಾಖಿ ಕಟ್ಟುವ ಮಕ್ಕಳೊಂದಿಗೆ ಪ್ರಧಾನಿ ಸಂವಾದ ನಡೆಸುತ್ತಿರುವ ವಿಡಿಯೋಗಳನ್ನು ಎಎನ್‌ಐ ಸುದ್ದಿಸಂಸ್ಥೆ ಹಂಚಿಕೊಂಡಿದೆ.

ವೀಡಿಯೋದಲ್ಲಿ, ಪ್ರಧಾನಿ ಮೋದಿ ತರಗತಿಗೆ ಪ್ರವೇಶಿಸಿದಾಗ ಶಾಲಾ ಮಕ್ಕಳು ನಗುಮೊಗದಿಂದ ಸ್ವಾಗತಿಸುತ್ತಿರುವುದು ಕಂಡುಬಂದಿದೆ. ಅಲ್ಲದೇ ಅವರಿಗೆ ರಾಖಿಯನ್ನು ಕಟ್ಟಲಾಗಿದೆ. ವಿದ್ಯಾರ್ಥಿಗಳು ರಾಖಿ ಕಟ್ಟಲು ಮುಂದಾದಾಗ, ಪ್ರಧಾನಿ ಮೋದಿ ಅವರನ್ನು ಪ್ರೀತಿಯ ನಗುವಿನೊಂದಿಗೆ ಸ್ವಾಗತಿಸಿದ್ದು, ಅವರ ಹೆಸರು ಮತ್ತು ತರಗತಿಗಳನ್ನು ಕೇಳಿದ್ದಾರೆ. ಕಾರ್ಯಕ್ರಮದ ಕೊನೆಯಲ್ಲಿ ಪ್ರಧಾನಿ, ಶಾಲಾ ವಿದ್ಯಾರ್ಥಿನಿಯರು ಮತ್ತು ಶಿಕ್ಷಕರೊಂದಿಗೆ ಫೋಟೋಗೆ ಪೋಸ್ ನೀಡಿದ್ದಾರೆ. ಮಧ್ಯೆ ವಾಘಾ ಗಡಿಯಲ್ಲಿ ದೇಶ ಕಾಯುವ ಗಡಿ ಭದ್ರತಾ ಪಡೆಯ ಯೋಧರು, ಮಹಿಳೆಯರು ಮತ್ತು ಮಕ್ಕಳೊಂದಿಗೆ ರಕ್ಷಾ ಬಂಧನ್ ಆಚರಿಸಿದರು. ಮಹಿಳೆಯರು ಯೋಧರ ಕೈಗೆ ರಾಖಿ ಕಟ್ಟಿ, ಸಿಹಿ ವಿನಿಮಯದ ಮೂಲಕ ಸಂಭ್ರಮಿಸಿದರು.

ಇಂದಿರಾ ಗಾಂಧಿಯಂತೆ ಮಮತಾ ಬ್ಯಾನರ್ಜಿ ಕೊಲ್ಲಿ: ವಿದ್ಯಾರ್ಥಿನಿ ಬಂಧನ

ಕೋಲ್ಕತ್ತಾ: ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದ ವಿದ್ಯಾರ್ಥಿನಿಯನ್ನು ಕೋಲ್ಕತ್ತಾ ಪೊಲೀಸರು ಬಂಧಿಸಿದ್ದಾರೆ. ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ 31 ವರ್ಷದ ಟ್ರೈನಿ ವೈದ್ಯೆಯ ಮೇಲೆ ಅತ್ಯಾಚಾರ ಮತ್ತು ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣಗಳಲ್ಲಿ ಹಿಂಸಾಚಾರಕ್ಕೆ ಪ್ರಚೋದನೆ ನೀಡುವ ಪೋಸ್ಟ್ ಹಾಕಿರುವ ಆರೋಪ ವಿದ್ಯಾರ್ಥಿನಿಯ ಮೇಲಿದೆ. 'ಕೀರ್ತಿ ಸೋಶಿಯಲ್' ಇನ್‌ಸ್ಟಾಗ್ರಾಮ್ ಪುಟದಲ್ಲಿ ವಿದ್ಯಾರ್ಥಿನಿ ಪೋಸ್ಟ್ ಹಾಕಿದ್ದರು.

ಮುಡಾ ಹಗರಣ ಸುದ್ದಿಗೋಷ್ಠಿ ವೇಳೆ ಕಾಂಗ್ರೆಸ್ ಕಾರ್ಯಕರ್ತ ಹೃದಯಾಘಾತದಿಂದ ಸಾವು



ಸುದ್ದಿಗೋಷ್ಠಿಯಲ್ಲೇ ಕುಸಿದು ಬಿದ್ದ ರವಿಚಂದ್ರನ್

ಬೆಂಗಳೂರು: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ) ಅಕ್ರಮ ಆರೋಪದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ವಿಚಾರಣೆಗೆ ರಾಜ್ಯಪಾಲರು ಅನುಮತಿ ನೀಡಿದ್ದನ್ನು ವಿರೋಧಿಸಿ ಸುದ್ದಿಗೋಷ್ಠಿ ನಡೆಸುವ ವೇಳೆ ಹೃದಯಾಘಾತದಿಂದ ಕಾಂಗ್ರೆಸ್ ಕಾರ್ಯಕರ್ತ ಓರ್ವ ಸಾವನ್ನಪ್ಪಿರುವ ಘಟನೆ ಸೋಮವಾರ ನಡೆದಿದೆ. ಬೆಂಗಳೂರು ಪ್ರೆಸ್ ಕ್ಲಬ್‌ನಲ್ಲಿ ಸುದ್ದಿಗೋಷ್ಠಿ ವೇಳೆ ಕಾಂಗ್ರೆಸ್ ಕಾರ್ಯಕರ್ತ ಹಾಗೂ ಕೋಲಾರ ಜಿಲ್ಲೆ ಕುರುಬರ ಸಂಘದ ಅಧ್ಯಕ್ಷ ಸಿ.ಕೆ.ರವಿಚಂದ್ರನ್ ಕುಸಿದು ಬಿದ್ದು ಸಾವನ್ನಪ್ಪಿದ್ದಾರೆ. ಪ್ರೆಸ್‌ಕ್ಲಬ್‌ನಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡುವ ವೇಳೆ ಕುರ್ಚಿಯಿಂದ ಕುಸಿದು ಬಿದ್ದ ರವಿಚಂದ್ರನ್ ಅವರನ್ನು ಆಂಬುಲೆನ್ಸ್‌ನಲ್ಲಿ ಸಮೀಪದ ಖಾಸಗಿ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆಸ್ಪತ್ರೆ ತಲುಪುವ ಮುನ್ನವೇ ಮೃತಪಟ್ಟಿದ್ದಾರೆ ಎಂದು ವೈದ್ಯರು ಮಾಹಿತಿ ನೀಡಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಗುಂಡ : ಐ ಲವ್ ಯೂ (ಹುಡುಗಿ ಜೋರಾಗಿ ಬೀಸಿ ಕೆನ್ನೆಗೆ ಬಿಟ್ಲು)

ಹುಡುಗಿ : ಎಲ್ಲಿ ಇನ್ನೊಮ್ಮೆ ಹೇಳು ನೋಡೋಣ? (ಗುಂಡ ತಿರುಗಿ ಎರಡು ಬಿಟ್ಟ)

ಗುಂಡ : ಕೇಳಿಸಲಿಲ್ಲಾ ಅಂದ್ರೆ ಮತ್ಯಾಕ್ ಹೊಡದಿ...

ಮೈಸೂರು ಮಿತ್ರ

ಮಂಗಳವಾರ, 20 ಆಗಸ್ಟ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಬಾಳಿನ ಮೊದಲರ್ಥವೂ ಇನ್ನೊಂದರ್ಥಕ್ಕಾಗಿ ಕಾಯುತ್ತದೆ.
ಇನ್ನೊಂದರ್ಥವು ಕಳೆದ ಅರ್ಥಕ್ಕಾಗಿ ಗೋಳಾಡುತ್ತದೆ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಕೃತಿ ಇಲ್ಲದ ಮಾತು ಕಸ ಬೆಳೆದ ತೋಟವಿದ್ದಂತೆ.

ನಿಮ್ಮ ಪತ್ರಗಳು

ರಂಗಾಯಣ ನಿರ್ದೇಶಕ: ವಿರೋಧ ಸಲ್ಲ

ಮಾನ್ಯರೆ,

ಅಚ್ಚರಿ ಎಂಬಂತೆ ಪ್ರತಿಷ್ಠಿತ ಮೈಸೂರು ರಂಗಾಯಣದ ನಿರ್ದೇಶಕರಾಗಿ ಸತೀಶ್ ತಿಪಟೂರು ಅವರನ್ನು ಸರ್ಕಾರ ನೇಮಿಸಿದೆ. ನನಗೆ ದೊಡ್ಡ ಸಾಮಾಜಿಕ ಜವಾಬ್ದಾರಿ ನೀಡಿದ್ದು, ಇವತ್ತಿನ ರಂಗ ಭೂಮಿ ಎದುರಿಸುತ್ತಿರುವ ಸವಾಲುಗಳನ್ನು ಗಮನದಲ್ಲಿಟ್ಟುಕೊಂಡು ಪಾರದರ್ಶಕ, ಹಾಗೂ ಕಲಾವಿದರನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸುವುದಾಗಿ ಅವರು (ಮೈಸೂರು ಮಿತ್ರ,13.8.24.) ಹೇಳಿದ್ದಾರೆ.

ರಂಗಾಯಣ ನಿರ್ದೇಶಕ ಸ್ಥಾನಕ್ಕೆ ಸ್ಥಳೀಯವಾಗಿ ನೆಲೆಗೊಂಡಿರುವ ಅನೇಕರು ಪ್ರಯತ್ನಪಟ್ಟರೂ ಫಲ ನೀಡಿಲ್ಲ. ಇದರಿಂದ ಹತಾಶರಾದ ಕೆಲವರು ಅವರ ವಿರುದ್ಧ ಪ್ರಗತಿಪರರ ಹೆಸರಿನಲ್ಲಿ ಗೋ ಬ್ಯಾಕ್ ಚಳುವಳಿ ಮಾಡುವುದಾಗಿಯೂ, ತಿಳಿಸಿರುವುದು ಕೂಡ ವರದಿಯಾಗಿದೆ. ಇದು ನಿಜಕ್ಕೂ ಪ್ರಗತಿಪರ ನಡೆಗೆ ತದ್ವಿರುದ್ದವಾಗಿದೆ. ಸತೀಶ್ ತಿಪಟೂರು ಅವರು ಎಂಜಿನಿಯರ್ ಪದವೀಧರರಾದರೂ, ತಿಪಟೂರಿನ ತಮ್ಮದೇ 'ಭೂಮಿ ಥಿಯೇಟರ್' ರಂಗಭೂಮಿಯಲ್ಲಿ ಕಳೆದ 30 ವರ್ಷಗಳಿಂದ ತೊಡಗಿಸಿಕೊಂಡಿದ್ದಾರೆ.

ಮೈಸೂರು ರಂಗಾಯಣದಲ್ಲಿ ಇತ್ತೀಚಿನ ವರ್ಷಗಳಲ್ಲಿ ರಂಗ ಚಟುವಟಿಕೆಗಳಿಗಿಂತ ಯಾವಾಗಲೂ ಗುಂಪುಗಾರಿಕೆ, ಪಕ್ಷಪಾತದ ಅಪಸ್ವರಗಳು ಗಟ್ಟಿಯಾಗಿ ಕೇಳಿ ಬರುತ್ತಿದ್ದವು. ಅದರಲ್ಲೂ ಅಡ್ಡಂಡ ಸಿ.ಕಾರ್ಯಪ್ಪನವರು ರಂಗಾಯಣದ ನಿರ್ದೇಶಕರಾದ ಮೇಲೆ ಅನೇಕ ಸವಾಲುಗಳನ್ನು ಎದುರಿಸಿದರು. ಯಾವಾಗಲೂ ಜಾತ್ಯತೀತತೆಯ ಸೋಗಿನಲ್ಲಿ ನಡೆಯುತ್ತಿದ್ದ ರಂಗಾಯಣದ ಚಟುವಟಿಕೆಗಳನ್ನು, ಹಿಂದೂ ದೃಷ್ಟಿಕೋನದಿಂದಲೂ ಕಾರ್ಯಪ್ಪನವರು ನೋಡಲು ಆರಂಭಿಸಿದ ಮೇಲೆ, ಪ್ರಗತಿಪರರು ಎಂದು ಕರೆಸಿಕೊಳ್ಳುವವರೆಲ್ಲಾ ಅವರ ಮೇಲೆ ಮುಗಿಬಿದ್ದರು. ಅವರ ನಿರ್ದೇಶನದ ಕೆಲ ನಾಟಕಗಳನ್ನು ಪೊಲೀಸ್ ಕಾವಲಿನಲ್ಲಿ ಆಡಬೇಕಾಯಿತು. ನಾಟಕದ ವಸ್ತು ಸರಿಯಿಲ್ಲದಿದ್ದರೆ ಅದನ್ನು ಜನರಿಗೆ ಮನವರಿಕೆ ಮಾಡಿಕೊಡಬೇಕಾಗಿದ್ದುದು ಈ ಪ್ರಗತಿಪರರ ಕರ್ತವ್ಯವಾಗಿತ್ತು. ಆದರೆ ಅದನ್ನು ಬಿಟ್ಟು ಗುಂಪು ಕಟ್ಟಿಕೊಂಡು ಹೋರಾಟ ಮಾಡಿದ್ದು ಸಕಾರಣವಲ್ಲ. ಪ್ರಗತಿಪರರೆಂದು ಎಲ್ಲವನ್ನೂ ಒಕ್ಕಣ್ಣ ದೃಷ್ಟಿಯಿಂದ ನೋಡುವ ರೀತಿ ಈಗಲಾದರೂ ಬದಲಾಗಬೇಕು. ಪ್ರಗತಿಪರ ಹೆಸರಿನಲ್ಲಿ ಬಹುಸಂಖ್ಯಾತ ಹಿಂದೂ ಧರ್ಮವನ್ನು ಕಡೆಗಣಿಸುವುದು ಸರಿಯಲ್ಲ. ಈಗ ಕಾಲ ಬದಲಾಗಿದೆ. ಅವರು ಬದಲಾಗದಿದ್ದರೆ ಕಾಲವೇ ಅವರನ್ನು ಬದಲಾಯಿಸುತ್ತದೆ.

ಹಿನ್ನಲೆ ಏನೇ ಇರಲಿ ಈ ಕಾರಣದಿಂದ ಹೊರಗಿನವರನ್ನು ರಂಗಾಯಣದ ನಿರ್ದೇಶಕರಾಗಿ ಆಯ್ಕೆ ಮಾಡಿದ ಸರ್ಕಾರದ ನಡೆ ಸರಿಯಾಗಿದೆ. ಈಗಿನ ನಿರ್ದೇಶಕರು ಅವರೇ ಹೇಳಿರುವಂತೆ 'ಎಲ್ಲರನ್ನೂ ಜೊತೆಗೆ ಕರೆದುಕೊಂಡು ಹೋಗುವ ಕೆಲಸ ಮಾಡಲಿ. ಬಹುತ್ವದ ನಡೆಯಲ್ಲಿ ಮನೆ ಮನೆಗೆ ರಂಗಾಯಣ ಕೊಂಡೊಯ್ಯುವ ಕೆಲಸವಾಗಲಿ'.

–ಮುಳ್ಳೂರು ಪ್ರಕಾಶ್,ಕನಕದಾಸನಗರ, ಮೈಸೂರು.

ಹೆಣ್ಣುಮಕ್ಕಳ ಸುರಕ್ಷತೆ ಬಗ್ಗೆ ಇರಲಿ ಆದ್ಯತೆ

ಮಾನ್ಯರೆ,

ಕೊಲ್ಕತ್ತಾದಲ್ಲಿ ನಡೆದ ವೈದ್ಯಕೀಯ ವಿದ್ಯಾರ್ಥಿನಿ ಮೇಲಿನ ಅತ್ಯಾಚಾರ ಹಾಗೂ ಹತ್ಯೆ ಪ್ರಕರಣ ತಲ್ಲಣ ಮೂಡಿಸಿದ್ದು, ಈ ಹಿನ್ನೆಲೆಯಲ್ಲಿ ದೇಶದ ಹಲವೆಡೆ ವೈದ್ಯರ ಮುಷ್ಕರ ಮುಂದುವರಿದಿದೆ. ವಿದ್ಯಾರ್ಥಿನಿಯ ಸಾವಿನ ಪ್ರಕರಣದ ತನಿಖೆಯನ್ನು ಕೊಲ್ಕತ್ತಾ ಹೈಕೋರ್ಟ್ ಈಗಾಗಲೇ ಸಿಬಿಐಗೆ ವಹಿಸಿದ್ದು, ತಪ್ಪಿತಸ್ಥರಿಗೆ ಕಠಿಣಾತಿ ಕಠಿಣ ಶಿಕ್ಷೆಯಾಗಬೇಕು ಎಂಬುದರಲ್ಲಿ ಎರಡು ಮಾತಿಲ್ಲ.

ಸ್ತ್ರೀಯರ ಮೇಲಿನ ಈ ರೀತಿಯ ದೌರ್ಜನ್ಯಗಳು ಹೆಚ್ಚಾಗಿದ್ದು, ಮಹಿಳಾ ಸುರಕ್ಷತೆಯನ್ನು ಖಾತ್ರಿ ಪಡಿಸುವ ವಾತಾವರಣ ಸೃಷ್ಟಿಯಾಗಬೇಕಿದೆ. ಅಲ್ಲದೇ ಮಹಿಳೆಯರ ವಿರುದ್ಧದ ಕೌಟುಂಬಿಕ ದೌರ್ಜನ್ಯಗಳು ಕೂಡ ಇತ್ತೀಚೆಗೆ ಹೆಚ್ಚುತ್ತಲೇ ಇರುವುದು ಕಳವಳಕಾರಿ ಸಂಗತಿಯಾಗಿದೆ. ಇದಕ್ಕೆ ಪುಷ್ಟಿ ನೀಡುವಂತೆ ಇತ್ತೀಚೆಗೆ ರಾಜಸ್ಥಾನದಲ್ಲಿ ಪತಿಯೇ ಪತ್ನಿಯನ್ನು ಗಾಡಿಗೆ ಕಟ್ಟಿ ಗ್ರಾಮದಲ್ಲಿ ಎಳೆದಾಡಿ, ಹಿಂಸಿಸಿರುವ ಅಮಾನವೀಯ ಘಟನೆ ಬೆಚ್ಚಿ ಬೀಳಿಸುವಂತಿದೆ. ಕೌಟುಂಬಿಕ ದೌರ್ಜನ್ಯ, ಲೈಂಗಿಕ ದೌರ್ಜನ್ಯ, ಅತ್ಯಾಚಾರ, ಕೊಲೆಯತ್ನ, ವರದಕ್ಷಿಣೆ ಕಿರುಕುಳ, ಕೊಲೆ, ಅಪಹರಣದಂತಹ ಗಂಭೀರ ಅಪರಾಧಗಳ ಪ್ರಮಾಣ ಹೆಚ್ಚುತ್ತಿರುವುದನ್ನು ನೋಡಿದರೆ ನಮ್ಮ ನಾಗರಿಕ ಸಮಾಜ ಯಾವ ದಿಕ್ಕಿನಲ್ಲಿ ಸಾಗುತ್ತಿದೆ ಎಂದು ಆತಂಕವಾಗುತ್ತದೆ. ಹೆಣ್ಣುಮಕ್ಕಳ ಮೇಲೆ ನಡೆದ ದೌರ್ಜನ್ಯ ಪ್ರಕರಣಗಳ ಸಂಖ್ಯೆ ಒಂದೆಡೆ ಹೆಚ್ಚಾದರೆ, ಬೆಳಕಿಗೆ ಬಾರದ ಪ್ರಕರಣಗಳು ಹಾಗೂ ದಾಖಲೆಯೇ ಆಗದಿರುವ ಘಟನೆಗಳ ಸಂಖ್ಯೆ ಇನ್ನೂ ಹೆಚ್ಚು ಎಂಬುದು ಅಚ್ಚರಿಯೇ ಆದರೂ ಸತ್ಯವೇ ಆಗಿದೆ. ಈ ಎಲ್ಲಾ ತೊಡಕುಗಳನ್ನು ನಿವಾರಿಸಿ ಹೆಣ್ಣು ಮಕ್ಕಳಿಗೆ ಸುಭದ್ರತೆಯ ವಾತಾವರಣ ಕಲ್ಪಿಸುವ ಕೆಲಸ ತುರ್ತಾಗಿ ಆಗಬೇಕಾಗಿದೆ.

–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.

ನಕಾರಾತ್ಮಕ ಟೀಕೆಗಳನ್ನು ಅಲಕ್ಷಿಸಿರಿ

ಮಾನ್ಯರೆ,

ನಮ್ಮ ಸುತ್ತಮುತ್ತ ಅನೇಕರನ್ನು ದಿನನಿತ್ಯ ನೋಡುತ್ತಾ ಇರುತ್ತೇವೆ. ಅವರಿಗೆ ತಮ್ಮ ಮನೆಯ ವಿಚಾರಗಳಿಗಿಂತ ಇನ್ನೊಬ್ಬರ ಮನೆಯ ವಿಚಾರಗಳಲ್ಲೇ ಹೆಚ್ಚು ಆಸಕ್ತಿ. ಮದುವೆ ನಿಶ್ಚಯ ಆಯಿತಾ ಅಂತ ಕೇಳುತ್ತಿರುವುದು, ಮದುವೆ ವಯಸ್ಸು ಮೀರುತ್ತಿದೆ ಇನ್ನೂ ಹೆಣ್ಣು/ಗಂಡು ಸಿಕ್ಕಿಲ್ವಾ ಅಂತ ಚುಚ್ಚಿ ಮಾತನಾಡುವುದು, ಇನ್ನೂ ಮಕ್ಕಳಾಗಿಲ್ವಾ ಅಂತ ಕೇಳೋದು, ಕೆಲಸ ಸಿಕ್ಕಿಲ್ವಾ ಅಂತ ಕೇಳೋದು, ಕೆಲಸ ಸಿಕ್ಕಿದರೆ ಸಂಬಳ ಎಷ್ಟು ಅಂತ ಕೇಳೋದು, ಹೇಳಿದರೆ ಅಷ್ಟೇನಾ ಅನ್ನೋದು, ಪರೀಕ್ಷೆಯಲ್ಲಿ ಅಷ್ಟೇ ಮಾರ್ಕ್ಸ್ ಬಂದಿದ್ದಾ ಅಂತ ಮೂಗು ಮುರಿಯುವುದು, ಸ್ವಂತ ಮನೆ ಯಾವಾಗ ಕಟ್ಟುವುದು, ಮನೆ ಸ್ವಲ್ಪ ಹಾಗಾಗಬೇಕಿತ್ತು, ಹೀಗಾಗಬೇಕಿತ್ತು ಅನ್ನುವುದು, ಕಾರು ತೆಗೆದುಕೊಳ್ಳುವುದಿಲ್ಲವಾ, ನಿಮ್ಮನೆಯಲ್ಲಿ ಅದಿಲ್ವಾ...ಇದಿಲ್ವಾ... ಅಂತ ಕೇಳಿ ಇರಿಸು ಮುರಿಸು ಮಾಡುವುದು ಇತ್ಯಾದಿ.... ಹೀಗೆ ಎಲ್ಲರ ಬಗ್ಗೆನೂ ಕುಹಕ ಆಡುತ್ತಾ ಆಚೆಯಿಂದ ಈಚೆ, ಈಚೆಯಿಂದ ಆಚೆ ಮಾಡುತ್ತಾ ಕಾಲ ಕಳೆಯುವುದೇ ಇವರ ಕೆಲಸ ಅಥವಾ ಹವ್ಯಾಸ. ಅದರಲ್ಲೇ ಇವರಿಗೆ ಏನೋ ಸಂತೋಷ.

ಇದಕ್ಕೆಲ್ಲಾ ಕಾರಣ ಅವರ ಹುಟ್ಟು ಗುಣ ಇರಬಹುದು. ಹತಾಶ ಮನೋಭಾವ ಇರಬಹುದು. ಅಸೂಯೆ ಇರಬಹುದು. ತಮಗೆ ಎಲ್ಲಾ ಇದೆ ಅಂತ ದುರಹಂಕಾರ ಇರಬಹುದು ಅಥವಾ ಅವರ ಮಾನಸಿಕ ಅಸಮತೋಲನದಿಂದ ಮನಸ್ಸಿನಲ್ಲಿ ಮೂಡುವ ನಕಾರಾತ್ಮಕ ಅಂಶಗಳಾಗಿರಬಹುದು. ಕಾರಣ ಯಾವುದಾದರೂ ಆಗಿರಲಿ ಅವರ ಚುಚ್ಚು ಮಾತುಗಳನ್ನು ಕೇಳಿಸಿಕೊಂಡವರಿಗೆ ಮನಸ್ಸಿಗೆ ನೋವಾಗುವುದಂತೂ ಸತ್ಯ. ಇನ್ನೊಬ್ಬರನ್ನು ವಿನಾಕಾರಣ ನೋಯಿಸುವ ಹಕ್ಕು ಯಾರಿಗೂ ಇಲ್ಲ. ಸಾಧ್ಯವಾದರೆ ಇನ್ನೊಬ್ಬರ ನೋವಿಗೆ ಸ್ಪಂದಿಸಿ ತಮ್ಮ ಕೈಲಾದ ಸಹಾಯ ಮಾಡಬೇಕು. ಇಲ್ಲ ಅಂದರೂ ಇನ್ನೊಬ್ಬರ ಮನಸ್ಸಿಗೆ ನೋವಾಗುವ ಹಾಗೆ ಮಾತನಾಡದೆ ತಮ್ಮಷ್ಟಕ್ಕೆ ತಾವು ಸುಮ್ಮನಿದ್ದರೆ ಅದೇ ಒಂದು ದೊಡ್ಡ ಉಪಕಾರ ಮಾಡಿದ ಹಾಗೇ ಆಗುತ್ತೆ. ಹಾಗೇನೇ ನಕಾರಾತ್ಮಕ ಟೀಕೆಗಳನ್ನು, ಚುಚ್ಚು ಮಾತುಗಳನ್ನು ಕೇಳಿಸಿಕೊಂಡವರೂ ಕೂಡ ಮನಸ್ಸಿಗೆ ಆ ಕ್ಷಣಕ್ಕೆ ನೋವಾದರೂ, ಅಂತವರ ಮಾತುಗಳಿಗೆ ಹೆಚ್ಚು ಬೆಲೆ ಕೊಡದೇ ಅವರನ್ನು ಸಾಧ್ಯವಾದಷ್ಟು ನಿರ್ಲಕ್ಷ ಮಾಡಿದರೆ ಕ್ರಮೇಣ ಅವರು ಸರಿ ಆಗುವ ಸಾಧ್ಯತೆ ಇರುತ್ತದೆ.

–ರಾಘವೇಂದ್ರ ಜೋಯಿಸ್, ಮೈಸೂರು



ಗುಬ್ಬಿಗೂಡು ರಮೇಶ್
ಮೊ: 97429–34512

ದೀಪ ಸಾಲು

ಮಳೆ ನಿಂತರು ಅದರಿಂದ ಹಾನಿ ತಪ್ಪುತ್ತಿಲ್ಲ...!



> ಜಾಗತಿಕ ಹವಾಮಾನದ ವೈಪರೀತ್ಯಕ್ಕೆ ಕಾರಣವಾಗುತ್ತಿರುವ ಮನುಷ್ಯನ ಜೀವನ ವಿಧಾನ ಬದಲಾಗದೇ ಹೋದರೆ ಮುಂದೆಯೂ ಇಂಥ ಅನಾಹುತಗಳು ಕಟ್ಟಿಟ್ಟ ಬುತ್ತಿ ಎಂದು ವಿಜ್ಞಾನ ಹೇಳುತ್ತಿದೆ. ನಾವು ನಮ್ಮ ನಮ್ಮ ಅಣೆಕಟ್ಟೆಗಳು, ಕೆರೆಗಳು, ಹೂಳೆತ್ತಿಕೊಂಡು ನಮ್ಮ ಜಲಸಂಗ್ರಹಾರಗಳ ಆಳಗಳನ್ನು ಹೆಚ್ಚಿಸಿಕೊಳ್ಳದೇ ಹೋದರೆ ತಗ್ಗು ಪ್ರದೇಶಗಳ ಕೊರಕಲುಗಳಿಗೆ ಕಾಯಕಲ್ಪ ಮಾಡಿಕೊಳ್ಳದೇ ಇದ್ದರೆ, ನ್ಯಾಯಾಲಯದಲ್ಲಿ ನೀರಿನ ತಂಟೆ ತಗಾದೆಗಳನ್ನು ನಿವಾರಿಸಿಕೊಂಡು ಅಲ್ಲಲ್ಲಿ ಚೆಕ್‌ಡ್ಯಾಂಗಳನ್ನು ನಿರ್ಮಿಸಿಕೊಂಡು ಅಣಿಯಾಗದೇ ಹೋದರೆ ಮುಂದಿನ ದಿನಗಳಲ್ಲಿ ಇಡೀ ಮಾನವ ಲೋಕ ಜಲಪ್ರಳಯಕ್ಕೆ ತುತ್ತಾಗುವುದರಲ್ಲಿ ಅನುಮಾನವಿಲ್ಲ.

ಹುಲ್ಲು ಹಾಸಿನ ಮೇಲೆ ಮಳೆ ಹನಿಯ ಸೇಸೆಯಿದು ಯಾರ ಪರಿಣಯಕ್ಕಾಗಿ ಹೇಳು ಕವಿಯೇ! ಎಂಬ ಕವಿ ಸಾಲೊಂದನ್ನು ಓದಿದ ನೆನಪು ಈ ಮಳೆಗಾಲದಲ್ಲಿ ಎಲ್ಲರಿಗೂ ಮರುಕಳಿಸುವಂತಾಗಿದೆ. ಕಾರಣ ಮಳೆಯೆಂದರೆ ಅದು ರೈತನ ಒಡಲು. ಭೂಮಿಯ ಮೇಲಿನ ಸಕಲ ಜೀವರಾಶಿ ಸತ್ಯಲೋಕದ ದಣಿವು ಪರಿಹರಿಸುವ ಜಲರಾಶಿಯ ಕುಯಿಲು. ಇಂಥಾ ಮಳೆ ಇಂದು ವಿಪತ್ತಿನ ಮಹಾಕಾಳಿಯಂತೆ ದೇಶದಾದ್ಯಂತ ಅಬ್ಬರಿಸಿದರೆ ಮನುಷ್ಯ ಎಲ್ಲಿಗೆ ಓಡಬೇಕು? ಏನು ಮಾಡಬೇಕು?

ಇವತ್ತು ಕರ್ನಾಟಕ, ಕೇರಳ ಮಳೆಯ ಅಬ್ಬರಕ್ಕೆ ತತ್ತರಿಸಿ ಹೋಗಿವೆ. ನ್ಯೂಸ್ ಚಾನೆಲ್‌ಗಳು, ಪ್ರಿಂಟ್ ಮೀಡಿಯಾಗಳಲ್ಲಿ ಬೇರೆ ವಿಷಯಗಳಿಗಿಂತ ಮಳೆಯ ವಿಷಯಗಳನ್ನೇ ತೋರಿಸಲು ಮತ್ತು ಬರೆಯಲು ಜಾಗವಿಲ್ಲದಷ್ಟು ಮಳೆಯ ಅನಾಹುತಗಳು ತುಂಬಿಕೊಂಡಿವೆ. ಎಲ್ಲೆಲ್ಲೂ ನೀರು ನೀರೆ. ಈ ಎರಡೂ ರಾಜ್ಯಗಳಲ್ಲಿ ಆಕಾಶವೇ ತೂತು ಬಿದ್ದಂತೆ ಮಳೆಯ ನೀರು ಸುರಿಯುತ್ತಿದೆ. ಸುರಿಯುವ ನೀರಿಗೆ ಬಕೆಟು, ಬಟ್ಟಲುಗಳನ್ನಿಟ್ಟು ತುಂಬಿಕೊಳ್ಳುವ, ಸ್ಥಿತಿ ಮನುಷ್ಯನಿಗಿಲ್ಲ. ಕಾರಣ ಸುರಿಯುತ್ತಿರುವ 'ಮಳೆ' ರಮಣೀಯವಾಗಿಲ್ಲ. ರುದ್ರ ನರ್ತನದಂತಿದೆ.

ಈ ಹಿಂದೆ ಕುಂಭದ್ರೋಣ ಮಳೆಗೆ ತಮಿಳುನಾಡಿನ ಚೆನ್ನೈ ತತ್ತರಿಸಿಹೋಗಿತ್ತು. ಈಗ ಕೇರಳ ಮತ್ತು ನಮ್ಮ ಕರ್ನಾಟಕದ ಕೊಡಗು ಮತ್ತು ಉತ್ತರ ಕರ್ನಾಟಕದ ಇನ್ನಿತರೆ ಜಿಲ್ಲೆಗಳು, ಅದರಲ್ಲೂ ಕಾರವಾರ ಸಂಪೂರ್ಣ ನಾಶವಾಗುವ ಹಂತಕ್ಕೆ ಬಂದು ತಲುಪಿವೆ. ರಸ್ತೆಗಳು ಕೊಚ್ಚಿ ಹೋಗಿವೆ. ಇಲ್ಲ ಗುಡ್ಡ ಕುಸಿದು ನಿರ್ನಾಮವಾಗಿ ಹೋಗಿವೆ. ವಸತಿ ಸಮುಚ್ಚಯಗಳು, ಬಡಾವಣೆಗಳು, ಬಸ್ ನಿಲ್ದಾಣಗಳು, ರೈಲ್ವೆ ಕಂಬಿಗಳು, ಹೀಗೆ ಮನುಷ್ಯ ತನ್ನ ಸಂಪರ್ಕಕ್ಕಾಗಿ ಏನೆಲ್ಲಾ ಮಾಡಿಕೊಂಡಿದ್ದನೋ! ಅವೆಲ್ಲವೂ ಮಳೆರಾಯನ ಅಬ್ಬರದ ಮುಂದೆ ನಿಲ್ಲಲಾಗದೆ ಕೈಸೋತು ಕೂತಿವೆ. ಕೇರಳ ಮತ್ತು ಕೊಡಗಿನಲ್ಲಿ ನಿತ್ಯಜೀವನ ನರಕಸದೃಶವಾಗಿದೆ.

ಕಳೆದ ನೂರು ವರ್ಷಗಳಲ್ಲಿ ಕಂಡು ಕೇಳರಿಯದಂಥ ಮಾಯದಂಥ ಮಳೆ ಬಂದು ಕರ್ನಾಟದಕ ಕಾಶ್ಮೀರವೆಂದೇ ಕರೆಯುತ್ತಿದ್ದ ನಮ್ಮ ಪುಟ್ಟ ಜಿಲ್ಲೆ ಕೊಡಗು ಮೈತುಂಬಿದ ಹರಿದ ಕಾವೇರಿಯ ಒಡಲಿನಲ್ಲಿ ದಿಕ್ಕು ತೋಚದೆ ಕಂಗಾಲಾಗಿದೆ. ಕೇರಳದ ವಯನಾಡಿನಲ್ಲಿ ಜನರಿಗೆ ಊಟ ಸಿಗುತ್ತಿಲ್ಲ; ಕಾಳಜಿ ಕೇಂದ್ರಗಳನ್ನು ಸ್ಥಾಪಿಸಿದ್ದಾರೆ. ನಿರಾಶ್ರಿತರ ಆಶ್ರಯ ತಾಣಗಳು ತಲೆಯೆತ್ತಿವೆ. ತಲೆತಪ್ಪಿಸಿಕೊಂಡು ಬೆಂಗಳೂರಿಗೋ, ಮೈಸೂರಿಗೋ ಓಡಿಹೋಗಲು ರಸ್ತೆ ಸಂಪರ್ಕಗಳು ಕಡಿತಗೊಂಡಿವೆ. ಕೇರಳದಲ್ಲಿ ಕರ್ನಾಟಕದ ಪ್ರವಾಸಿಗರು ಪ್ರವಾಸಕ್ಕಾಗಿ ತೆರಳಿದವರು ವಾಪಸ್ಸು ಬರಲಾಗದೆ ಪರದಾಡಿದ ಅಸಂಖ್ಯಾತ ಪ್ರಕರಣಗಳು ದಾಖಲಾಗಿವೆ.

'ಮಕ್ಕಳಾದರೆ ಕೇಡೆ ಮಳೆಯಾದರೆ ಕೊಡೆ' ಗಾದೆ ಮಾತೊಂದಿತ್ತು. ಈಗ ಕೊಡೆಗೂ ಜಾಗವಿಲ್ಲದಂತೆ ಊರಿಗೆ ಊರೇ ನೀರಿನಲ್ಲಿ ಮುಳುಗುವಂತೆ ಮಳೆಯಾಗುತ್ತಿದೆ. ನಮ್ಮ ಕಾಲದಲ್ಲೇ ಮದ್ರಾಸ್‌ನಲ್ಲಿ ಮೋಡವೆದ್ದರೆ ಕರ್ನಾಟಕದಲ್ಲಿ 'ಸೈಕ್ಲೋನ್ ಎಫೆಕ್ಟ್' ಅಂತ ಮಾತಾಡಿಕೊಳ್ಳುವಂತೆ ಮೂರ್‍ನಾಲ್ಕು ದಿನ ಸೋನೆ ಮಳೆ ಸುರಿದದ್ದನ್ನು ಕಂಡ ನಮಗೆ ಈ ಭಾರಿ ಮಳೆ, ಜಡಿಮಳೆಗೆ ಹೊಂದಿಕೊಂಡಿದ್ದ ನಮ್ಮ ಮನಃಸ್ಥಿತಿ ಬದಲಾಗುವಷ್ಟರ ಮಟ್ಟಿಗೆ ಮಳೆ ತಲ್ಲಣಿಸಿ, ಅವಾಂತರ ಸೃಷ್ಟಿಸಿದೆ. ಬಿಹಾರ, ಉತ್ತರಾಂಚಲಗಳು ಇಂಥದೇ ಭೀಕರ ಜಲಪ್ರಳಯಕ್ಕೆ ಸಿಕ್ಕಿ ತತ್ತರಿಸಿಹೋದ ಭೀಕರ ಜಲದುರಂತಗಳಿಗೆ ಸಾಕ್ಷಿಯಾದವರು ನಾವು ಮತ್ತು ತಲೆಮಾರು.

ಆದರೆ ದೂರದ ಊರುಗಳಲ್ಲಿ, ನಡೆಯುತ್ತಿದ್ದ ಈ ಜಲಪ್ರಳಯದ ರುದ್ರನರ್ತನ ನಮ್ಮ ಮನೆಯ ಪಕ್ಕದ ಕೇರಳ, ಕೊಡಗುಗಳನ್ನು ವ್ಯಾಪಿಸಿಕೊಂಡಾಗ ನಿಜಕ್ಕೂ ಗಂಟಲು ಕಟ್ಟಿಕೊಳ್ಳುವಷ್ಟು ಗದ್ಗದಿತರಾಗುತ್ತೇವೆ ಸುರಿವ ಮಳೆ, ನಿಂತ ನೀರು, ಜಲಾವೃತಗೊಂಡು ಜನ ಪಡಿಪಾಟಲು ಪಡುತ್ತಿದ್ದರೆ, ಅಲ್ಲಿ ನಡೆಯುತ್ತಿರುವ ಪ್ರವಾಹದ ಚಿತ್ರಗಳು ಎದೆ ನಡುಗಿಸುತ್ತಿವೆ. ಕೊಚ್ಚಿ ಹೋಗುತ್ತಿದ್ದ ಹತ್ತು ತಿಂಗಳ ಕೂಸೊಂದನ್ನು ಯೋಧರು ಕಾಪಾಡಿದ ಚಿತ್ರ ನೋಡುತ್ತಿದ್ದರೆ! ಮನಸ್ಸು ಕರಗಿ ನೀರೇ ಆಗುತ್ತದೆ. ಪರಿಹಾರ ಕಾರ್ಯದಲ್ಲಿ ತೊಡಗಿದ ದೋಣಿಗಳಿಗೆ ಹೆಂಗಸರು ಮಕ್ಕಳು ಹತ್ತಲಾರದಷ್ಟು ನೀರು ತುಂಬಿಕೊಂಡಿದೆ. ಒಂದು ಕಾಲು ಕೃತಕ ದೋಣಿಯ ಮೇಲಿಡಲು ಕಾಲೆತ್ತಿದ್ದರೆ ಮತ್ತೊಂದು ಕಾಲು ನೀರಿನಲ್ಲಿರುತ್ತದೆ. ಇಂಥ ಆವಾಂತರದ ಅಪಾಯದಲ್ಲಿ ಯೋಧನೊಬ್ಬ ಬಗ್ಗಿನಿಂತು ಬೆನ್ನು ಕೊಟ್ಟಿದ್ದಾನೆ. ಅವನ ಬೆನ್ನ ಮೇಲೆ ಕಾಲಿಟ್ಟು ದೋಣಿ ಹತ್ತಿದ ಹೆಣ್ಣು ಮಕ್ಕಳಿಗೆ ಆತ ಯಾವ ಜನ್ಮದ ಅಣ್ಣನೋ ಆಪತ್ಬಾಂಧವನೋ ಕಾಣೆ. ಇಂಥವರ ಸ್ಮರಣೆಗಾಗಿಯೇ ರಕ್ಷಾಬಂಧನ ಅರ್ಥಪೂರ್ಣವಾಗಿ ಹುಟ್ಟಿರಬೇಕು ಎನ್ನಿಸುತ್ತದೆ.

ಮನುಷ್ಯ ತನ್ನ ಸ್ವಾರ್ಥಕ್ಕಾಗಿ ಕೆರೆಕಟ್ಟೆಗಳನ್ನು ನಿರ್ಮಿಸಿಕೊಂಡ, ರಿಯಲ್ ಎಸ್ಟೇಟ್ ದಂಧೆಯಲ್ಲಿ ಪೈರುಪಚ್ಚೆ ಬೆಳೆವ ಜಾಗಗಳಲ್ಲೆಲ್ಲಾ ಇಂದು ಬಡಾವಣೆ ನಿರ್ಮಿಸಿ ಬೇಲಿ ಹಾಕಿಕೊಂಡ. ಕಾಲುವೆಗಳ ಮೇಲೆ ಮನೆಕಟ್ಟಿಕೊಂಡ, ಕೆರೆಗಳನ್ನು ಒತ್ತುವರಿ ಮಾಡಿಕೊಂಡ, ಮರಗಳನ್ನು ಕಡಿದ, ಗಿಡ ನೆಡುವ ಪರಿಸರವಾದಿಗಳನ್ನು ಬೆಂಬಲಿಸಲಿಲ್ಲ. ಇಂಗು ಬಚ್ಚಲು ನಿರ್ಮಾಣ ಮಾಡಿ ಮನೆ ಕಟ್ಟಲಿಲ್ಲ. ಅತಿಯಾಗಿ ಎಸಿ ಮತ್ತು ಐಷಾರಾಮಿಗಳನ್ನು ಬಳಸಿದ. ಕ್ಲೋರೋಫ್ಲೋರೋ ಕಾರ್ಬನ್ (CFC) ನ್ನು ವಾಯುಮಂಡಲಕ್ಕೆ ಬೇಕಾಬಿಟ್ಟಿ ತುಂಬಿಸಿದ. ನಿಸರ್ಗದ ಮೇಲೆ ನಿರಂತರ ಆಘಾತಗಳು ನಡೆದವು. ಇವತ್ತು ಪ್ರಕೃತಿ ಮುನಿಸಿಕೊಂಡಿದೆ. ಪರಿಣಾಮವಾಗಿ 'ಗ್ಲೋಬಲ್ ವಾರ್ಮಿಂಗ್' ಶುರುವಾಗಿದೆ. ಪ್ರಕೃತಿ ತನ್ನ ಅಭಯ ಹಸ್ತವನ್ನು ಚಾಚಿ ಮನುಷ್ಯ ಲೋಕವನ್ನು ಉಳಿಸುವ ಬದಲು, ತನ್ನ ಕಬಂಧಬಾಹುಗಳಿಂದ ಕೊಲ್ಲಲು ನಿಂತಿದೆ. ಎಲ್ಲೆಲ್ಲೋ ಹರಿದುಬರುವ ಜಲರಾಶಿ ರಕ್ತ ಬರಿಸದೇ ಜೀವ ತೆಗೆಯುತ್ತಿದೆ. ತನ್ನ ಜಲಶಕ್ತಿಯ ತಾರಕಾಸುರನನ್ನು ಭೂ ಬಿಟ್ಟು ಹೆಜ್ಜೆ ಹೆಜ್ಜೆಗೂ ಮನುಷ್ಯನನ್ನು ಯುದ್ಧಕ್ಕೆ ಕರೆಯುತ್ತಿದೆ.

ಆದರೆ ಪ್ರಕೃತಿ ಸುಮ್ಮನಿದ್ದಾಗ ಅದನ್ನು ಕೆಣಕಿದ ಮನುಷ್ಯ ಅದು ಮೇಲೆದ್ದಾಗ ಬಾಲ ತುಳಿಸಿಕೊಂಡ ಬೆಕ್ಕಿನಂತೆ ಓಡಲು ಶುರು ಮಾಡಿದರೆ ಎಲ್ಲಿಗೆ ಓಡಿ ಹೋಗುತ್ತೀರಿ. ಬಸವಣ್ಣ ತನ್ನ ವಚನದಲ್ಲಿ ಬರೆದಂತೆ 'ಒಲೆ ಹತ್ತಿ ಉರಿದರೆ ನಿಲಬಹುದಲ್ಲದೆ ಧರೆ ಹತ್ತಿ ಉರಿದಡೆ ನಿಲಬಹುದೆ'– ಹಾಗೆ ವಿಪತ್ತು ಎಂಬುದೇನು ಬೆಂಕಿಯೇ ಆಗಿರಬೇಕೇನು? ಅದು ಮಳೆಯಾಗಬಹುದು! ಗಾಳಿಯಾಗಬಹುದು, ಯುದ್ಧಗಳಾಗಬಹುದು. ಮನುಷ್ಯ ಲೋಕಕ್ಕೆ ಆಪತ್ತು ತರುವ ಅದು ಯಾವುದೇ ಸಂಭವಿಸಿದರೂ ಧರೆ ಹತ್ತಿ ಉರಿದಂತೆಯೇ ಸರಿ. ಈಗ ನಡೆದಿರುವುದೂ ಅದೇ ಆಗಿದೆ. ಧರೆ ಜಲಾವೃತಗೊಂಡಿದೆ. ಮನುಷ್ಯ ಕಟ್ಟಿಕೊಂಡ ಬದುಕು ಜರ್ಝರಿತವಾಗಿದೆ. ಊರ ತುಂಬ ನೀರೇ ನಿಂತಿದ್ದರೂ ಕುಡಿಯಲು ಮಾತ್ರ ನೀರಿಲ್ಲ. 'ಸಮುದ್ರದ ನಂಟು ಉಪ್ಪಿಗೆ ಬರ' ಮನೆ ಮುಂದೆ ಕಾರು, ಸ್ಕೂಟರ್‌ಗಳು ಓಡಾಡುತ್ತಿದ್ದ ಜಾಗದಲ್ಲಿ ಉತ್ತರ ಭಾರತದಲ್ಲಿ ಈಗ ದೋಣಿಗಳು ಓಡಾಡುತ್ತಿವೆ. ರಸ್ತೆಗಳು ಕೊರಕಲು ಬಿದ್ದು ಮುಚ್ಚೇ ಹೋಗಿವೆ. ಪ್ರವಾಸೋದ್ಯಮ ಮೇರೆ ಮೀರಿದ ಕೇರಳಕ್ಕೆ ಯಾರು ಬರಬೇಡಿರೆಂದು ಸುದ್ದಿ ಪ್ರಕಟವಾಗುತ್ತಿದೆ.

ಕಬಿನಿ, ಕಾವೇರಿಯರು ಉಕ್ಕಿ ಹರಿದಿದ್ದಾರೆ. ನಿಸರ್ಗದ ನಿಯಮ ಹೇಗಿದೆ ನೋಡಿ! ಅವ್ಯಾಹತವಾಗಿ ಹರಿವ ಪ್ರವಾಹದ ನೀರು ಚುಂಚನಕಟ್ಟೆಯಲ್ಲಿ ಜಲಪಾತೋತ್ಸವದಂತೆ ಕಾಣುತ್ತದೆ. ಶಿವನಸಮುದ್ರದಲ್ಲಿ ನಯನ ಮನೋಹರದಂತೆ ಮುದ ಕೊಡುತ್ತದೆ. ಬಲಮುರಿಯಲ್ಲಿ ಬಾಗಿದ ಬಾಳೆಯಂತೆ ಗಾಂಭೀರ್ಯ ತೋರುತ್ತದೆ. ಶ್ರೀರಂಗಪಟ್ಟಣದ ವೆಸ್ಲಿ ಸೇತುವೆಯ ಕೆಳಗೆ ರೈಲು ನುಗ್ಗಿದಂತೆ ನುಗ್ಗಿ ನೋಡುಗರನ್ನು ಫೋಟೋ ಕ್ಲಿಕ್ಕಿಸುವಂತೆ ಕೈಬೀಸಿ ಕರೆಯುತ್ತದೆ. ಅದೇ ನೀರು ಹರಿವ ಜಾಗಗಳಲ್ಲೆಲ್ಲಾ ನಯನ ಮನೋಹರ! ಆದರೆ ಅದು ಸುರಿದ ಜಾಗದಲ್ಲೆಲ್ಲಾ ಪ್ರಾಣಕ್ಕೆ ಸಂಚಕಾರ, ನೀರು ಇಲ್ಲಿ ಮನಮೋಹಕ, ಅದೇ ನೀರು ಇಲ್ಲಿ ಹೃದಯ ವಿದ್ರಾವಕ, ಹರಿವ ನೀರು ಇಲ್ಲಿ ಜಲಲ ಜಲಲ ಜಲಧಾರೆ ? ಅಲ್ಲಿ ಕಣ್ಣೀರಿನ ನೀರೆ – ಹೀಗೆ ಒಂದೇ ಜಲ ಇಲ್ಲಿ ಜೀವಜಲವಾಗಿ ಹರಿದರೆ ಅಲ್ಲಿ ಜೀವ ತೆಗೆವ ಜಾಲದಂತೆ ಹರಡಿಕೊಂಡಿದೆ. ಇದನ್ನೇ ವಿಪರ್ಯಾಸ ಅನ್ನೋದು!

ಇಂಥ ಸಂಕ್ರಮಣ ಕಾಲದ ಈ ಮಳೆಯ ಆಘಾತ ನಮ್ಮ ಪಕ್ಕದ ಕೇರಳ ಮತ್ತು ಕಾರವಾರ, ಕೊಡಗುಗಳನ್ನು ಹಣಿದು ಹೈರಾಣ ಮಾಡುತ್ತಿದ್ದರೆ ಮಾನವೀಯತೆಯ ಸ್ಪರ್ಷವುಳ್ಳ ಜನ ಅಗತ್ಯ ವಸ್ತುಗಳನ್ನು ಪೂರೈಸಲು ಹೆಣಗುತ್ತಿದ್ದಾರೆ. ಮನುಷ್ಯಪ್ರೀತಿ ಎಂದರೆ ಇದೇನೆ. ಆದರೆ ಸಂಗ್ರಹಿಸಿದ ವಸ್ತುಗಳನ್ನು ತಲುಪಿಸಲು ಆಗದೆ ಒದ್ದಾಡುತ್ತಿರುವ ಜನ ರಸ್ತೆ ಸಂಪರ್ಕ ಕಡಿದುಕೊಂಡು ಅನಾಹುತಕ್ಕೆ ಒಳಗಾಗಿರುವವನ್ನು ತಲುಪಲು ಆಗುತ್ತಿಲ್ಲ. ಈ ಹಿಂದೆ ಒಮ್ಮೆ ಕೇರಳದಲ್ಲಿ ಅಂದಾಜು 2 ಲಕ್ಷ 23 ಸಾವಿರ ಜನ ನಿರಾಶ್ರಿತರಾಗಿದ್ದರು. ಕೊಡಗಿನಲ್ಲಿ 2500 ಜನ ಗಂಜಿ ಕೇಂದ್ರದಲ್ಲಿದ್ದರು. 8,000 ಕೋಟಿ ಕೇರಳದಲ್ಲಿ 20 ಸಾವಿರ ಕೋಟಿ ಆಸ್ತಿಪಾಸ್ತಿ ನಾಶವಾಗಿತ್ತು. ಈ ಭೂ ಪ್ರದೇಶಗಳಲ್ಲಿ ಇದಕ್ಕೆಲ್ಲಾ ಕಾರಣ ಹುಡುಕಿದರೆ ಅತೀ ಕಡಿಮೆ ಅವಧಿಯಲ್ಲಿ ಹೆಚ್ಚು ಮಳೆಯಾಗುತ್ತಿರುವುದು.

ಇಂಥ ಸಂಕಷ್ಟ ಕಾಲದಲ್ಲಿ, ಕೊಡಗು ಸಸ್ಯರಾಶಿಯಿಂದ ತುಂಬಿರುವುದರಿಂದ, ಹಗ್ಗ, ಮರ, ರ್‍ಯಾಪ್ಟಿಂಗ್ ಮೂಲಕ ರಕ್ಷಣಾ ಕಾರ್ಯ ನಡೆಯುತ್ತಿದೆ. ಮನೆ, ಮಠ ಕಳೆದುಕೊಂಡು ಜೀವಹಾನಿಗೆ ತುತ್ತಾಗಿ ಜನ ರಕ್ಷಣೆಗೊಳಗಾಗಿದ್ದಾರೆ ಅದೇ ಸಮಾಧಾನದ ವಿಷಯ. ಮಳೆ ಕೇವಲ ತನ್ನ ಜಲಪಾದಗಳಿಂದ ಜನರನ್ನು ತುಳಿಯುತ್ತಿಲ್ಲ.

ಕಾರವಾರದಲ್ಲಿ ಭೂಕುಸಿತ ಉಂಟಾಗಿದೆ. ಹತ್ತಾರು ಮನೆಗಳು ನಿರ್ನಾಮವಾಗಿದೆ. ಆದರೂ ಇನ್ನೂ ಮಳೆ ನಿಂತಿಲ್ಲ. ಸುರಿವ ಮಳೆಯನ್ನೂ ಲೆಕ್ಕಿಸದೆ ಜನ ಪರಿಹಾರ ಕಾರ್ಯಕ್ಕೆ ನಿಂತಿದ್ದಾರೆ. ಯೋಧರು ಜೀವ ಪಣಕ್ಕಿಟ್ಟು ಹೋರಾಡಿದ್ದಾರೆ. ಇಂಥಾ ಭಾವನಾತ್ಮಕ ಕ್ಷಣಗಳಲ್ಲಿ ಇಡೀ ನಾಡಿನ ಜನತೆ ನೆರೆಸಂತ್ರಸ್ತರ ಜತೆಗಿದೆ ಎಂದು ಧೈರ್ಯ ತುಂಬಿದೆ. ಸರ್ಕಾರಗಳು, ಜನರು, ಎಲ್ಲರೂ ಒಟ್ಟಾಗಿದ್ದಾರೆ.

ಉತ್ತರ ಕರ್ನಾಟಕದಲ್ಲಿ ಬರ ಬಂದಾಗ, ಐದು ವರ್ಷಗಳ ಹಿಂದೆ ಇಂಥದೇ ನೆರೆ ಬಂದಾಗ ರಾಜ್ಯವೇ ಭಾವನಾತ್ಮಕವಾಗಿ ಒಂದಾಗಿತ್ತು. ಕೊಡಗು, ಕಾರವಾರ ಹಾಗೂ ಕೇರಳದ ವಯನಾಡಿನ ವಿಷಯದಲ್ಲಿ ಈಗಲೂ ಅದೇ ಆಗುತ್ತಿದೆ. ಮನುಷ್ಯತ್ವ ಇದ್ದ ಕಡೆ ಒಗ್ಗಟ್ಟು ಇರುತ್ತದೆ. ಕಷ್ಟಕಾಲದಲ್ಲಿ ಕನ್ನಡಿಗರು ಎಂದೂ ಕೂಡ ಒಂದೇ ಎಂಬ ಭಾವನೆ ಬರುವಂತೆ ಜನ ನಡೆದು ಕೊಂಡಿದ್ದಾರೆ. ನಮ್ಮ ಪಶ್ಚಿಮ ಘಟ್ಟಗಳು, ಕರಾವಳಿ, ಕೊಡಗು ಕೇರಳಗಳಿಗೆ ಮಳೆ ಏನೂ ಹೊಸದಲ್ಲ! ಆದರೆ ಮಾರಣಾಂತಿಕವಾದ ಇಷ್ಟೊಂದು ಪ್ರವಾಹಗಳು, ಭೂಕುಸಿತಗಳು ಒಮ್ಮೆಲೆ ನಾಗರಿಕ ಸಮಾಜದ ಮೈಮೇಲೆ ಎರಗಿ ಅನಾಹುತ ಸೃಷ್ಟಿಸಿದರೆ ಅದನ್ನು ತಡೆಯುವಷ್ಟು ಸಿದ್ಧತೆಗಳಿಲ್ಲದ ವ್ಯವಸ್ಥೆ ಮತ್ತು ಜನ–ಜಾನುವಾರುಗಳು ನೀರುಪಾಲಾಗದೆ ಗತಿಯಿಲ್ಲ. ಮಳೆಯಿಲ್ಲದ ಕಾಲದಲ್ಲಿ ನಮ್ಮ ಸರ್ಕಾರಗಳು, ನಮ್ಮ ನಾಗರಿಕ ಸಮಾಜ ಇದಕ್ಕೊಂದು ಪೂರ್ವ ಸಿದ್ಧತೆಯ ವ್ಯವಸ್ಥೆ ಮಾಡಿಕೊಳ್ಳದಿದ್ದರೆ, ಹೆಸರಿಗಷ್ಟೇ ನಾಗರಿಕ ಸಮಾಜವಾಗಿ ಮನುಷ್ಯ ಲೋಕ ಉಳಿಯುತ್ತದೆ. 1987ರಿಂದ 2014ರವರೆಗೆ ಬಿಹಾರದಲ್ಲಿ, ಅಸ್ಸಾಮಿನಲ್ಲಿ, ಮಹಾರಾಷ್ಟ್ರದಲ್ಲಿ, ಗುಜರಾತ್‌ನಲ್ಲಿ, ಉತ್ತರಾಖಂಡದಲ್ಲಿ, ಜಮ್ಮು–ಕಾಶ್ಮೀರದಲ್ಲಿ ಇಂಥದೇ ಭೀಕರ ಪ್ರವಾಹಗಳು ಎದುರಾಗಿದ್ದವು. ಈಗಲೂ ಅಲ್ಲಿ ಅದರ ಪುನರಾವರ್ತನೆಯಾಗಿದೆ. ದುರಾದೃಷ್ಟವೆಂದರೆ ಭೌಗೋಳಿಕವಾಗಿ ಭಾರತದ ಭೂಪಟದಲ್ಲಿ ಕರ್ನಾಟಕ ತುಂಬಾ ಸೇಫ್ ಎನಿಸಿಕೊಳ್ಳುತ್ತಿದ್ದ ಜಾಗಕ್ಕೆ ಈಗ ನೆರೆ ಬಂದಿದೆ. ಊರ ತುಂಬ ನೀರು ತುಂಬಿದೆ. ಎದೆ ಮಟ್ಟದ ನೀರಿನಲ್ಲಿ ಮಕ್ಕಳನ್ನೆತ್ತಿಕೊಂಡು ತಾಯಂದಿರು ತಮ್ಮ ಕುಟುಂಬಗಳನ್ನು ಹುಡುಕುತ್ತಿದ್ದಾರೆ. ಜನಪದಗೀತೆಯಲ್ಲಿ ಮಾಯದಂಥ ಮಳೆಬಂತಣ್ಣ ಎಂಬ ಪದ ಅಕ್ಷರಶಃ ನಿಜವಾಗಿದೆ.

ಜಾಗತಿಕ ಹವಾಮಾನದ ವೈಪರೀತ್ಯಕ್ಕೆ ಕಾರಣವಾಗುತ್ತಿರುವ ಮನುಷ್ಯನ ಜೀವನ ವಿಧಾನ ಬದಲಾಗದೇ ಹೋದರೆ ಮುಂದೆಯೂ ಇಂಥ ಅನಾಹುತಗಳು ಕಟ್ಟಿಟ್ಟ ಬುತ್ತಿ ಎಂದು ವಿಜ್ಞಾನ ಹೇಳುತ್ತಿದೆ. ನಾವು ನಮ್ಮ ನಮ್ಮ ಅಣೆಕಟ್ಟೆಗಳು, ಕೆರೆಗಳು, ಹೂಳೆತ್ತಿಕೊಂಡು ನಮ್ಮ ಜಲಸಂಗ್ರಹಾರಗಳ ಆಳಗಳನ್ನು ಹೆಚ್ಚಿಸಿಕೊಳ್ಳದೇ ಹೋದರೆ ತಗ್ಗುಪ್ರದೇಶಗಳ ಕೊರಕಲುಗಳಿಗೆ ಕಾಯಕಲ್ಪ ಮಾಡಿಕೊಳ್ಳದೇ ಇದ್ದರೆ, ನ್ಯಾಯಾಲಯದಲ್ಲಿ ನೀರಿನ ತಂಟೆ ತಗಾದೆಗಳನ್ನು ನಿವಾರಿಸಿಕೊಂಡು ಅಲ್ಲಲ್ಲಿ ಚೆಕ್‌ಡ್ಯಾಂಗಳನ್ನು ನಿರ್ಮಿಸಿಕೊಂಡು ಅಣಿಯಾಗದೇ ಹೋದರೆ ಮುಂದಿನ ದಿನಗಳಲ್ಲಿ ಇಡೀ ಮಾನವ ಲೋಕ ಜಲಪ್ರಳಯಕ್ಕೆ ತುತ್ತಾಗುವುದರಲ್ಲಿ ಅನುಮಾನವಿಲ್ಲ.


ಅದಕ್ಕಾಗಿ ಮಳೆ ನಿಂತ ಮೇಲೂ ಈ ಜಲಪ್ರಳಯ ಚರ್ಚೆಯಾಗಬೇಕು. ಅಗತ್ಯವಾದ ಮುಂಜಾಗ್ರತ ಕ್ರಮಕ್ಕಾಗಿ ಸನ್ನದ್ಧವಾಗುವ ವ್ಯವಸ್ಥೆಯೊಂದನ್ನು ನಾವು ರೂಪಿಸಿಕೊಳ್ಳಬೇಕು ಎಂಬ ಮುನ್ನೆಚ್ಚರಿಕೆಯನ್ನು ನಿಸರ್ಗ ಪದೇ ಪದೇ ಕೊಡುತ್ತಿದೆ. ಕರ್ನಾಟಕದ ಕಾಶ್ಮೀರವೆಂದೇ ಬಿಂಬಿತವಾದ ಯೋಧರ ನಾಡು ಕೊಡಗು ಪ್ರತೀ ಮಳೆಗಾಲದಲ್ಲೂ ಆತಂಕದ ಅಂಕುಶವಿಟ್ಟುಕೊಂಡೇ ದಿನ ದೂಡುತ್ತದೆ. ಪ್ರತೀ ಮಳೆಗಾಲದ ಸಂಕಷ್ಟದ ಕಾಲದಲ್ಲಿ ಎಲ್ಲರ ಎದೆಯಲ್ಲೂ ಅನುಕಂಪವಷ್ಟೇ ಅಲ್ಲ ನೆರವಿನ ಸ್ನೇಹ ಹಸ್ತ ಕೂಡ ವಿಸ್ತಾರಗೊಂಡಿದೆ. ಧ್ವಂಸಗೊಂಡ ಬದುಕನ್ನು ಕಟ್ಟಲು ನಿಂತ ಕೈಗಳಿಗೆ ಮನುಷ್ಯ ಸದಾ ಜೊತೆಯಾಗಿದ್ದಾನೆ. ಬವಣೆಯಲ್ಲಿ ಸಿಲುಕಿದ ಜನರಿಗೆ ಕೈಲಾದಷ್ಟು ನೆರವಾಗಿದ್ದಾನೆ. ನೆರೆಸಂತ್ರಸ್ತರ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಜಾಗೃತಿ ಮೂಡಿಸುತ್ತಿರುವ ಜನರಿಂದ ಮಾಹಿತಿಗಳು ಲಭ್ಯವಾಗುತ್ತವೆ. ಮಾಧ್ಯಮಗಳು ಹಗಲು ಇರುಳೆನ್ನದೆ ವರದಿ ಮಾಡುತ್ತವೆ. ನೆರೆ ಹಾವಳಿಗೆ ಸಿಲುಕಿದವರಿಗೆ ನೆರವು ನೀಡಿ ಅಪಾಯದಿಂದ ಆತ್ಮೀಯತೆಯೆಡೆಗೆ, ಅಭದ್ರತೆಯಿಂದ ಅಸ್ತಿತ್ವದೆಡೆಗೆ ಕರೆತರಲು ಏನೆಲ್ಲಾ ಮಾಡಬಹುದೋ ಎಲ್ಲವನ್ನೂ ಮಾಡಿಕೊಳ್ಳಲು ಸಂಘಸಂಸ್ಥೆಗಳು ಸರ್ಕಾರದ ಗಮನ ಸೆಳೆದು, ಮಳೆಯಿಲ್ಲದ ಕಾಲದಲ್ಲಿ ಏನೆಲ್ಲಾ ಪರಿಹಾರ ಕಾಮಗಾರಿಗಳು ನಡೆಯಬೇಕೋ ಅವುಗಳ ಪೂರ್ಣತೆಗೆ ಅವಕಾಶ ಕಲ್ಪಿಸಿಕೊಡಲು, ನೆರೆ ಸಂತ್ರಸ್ತ ಪ್ರದೇಶಗಳ ಸರ್ವಸ್ವವನ್ನೂ ಮುಖ್ಯವಾಹಿನಿಗೆ ತರಲು ನಮ್ಮದೂ ಒಂದು ಕೈಯ್ಯಿರಲಿ ಎನ್ನುವಷ್ಟರಮಟ್ಟಿಗೆ ಕ್ರಿಯಾಯೋಜನೆ ರೂಪಿಸಿಕೊಳ್ಳಬೇಕು. ಕನ್ನಡದಲ್ಲೊಂದು ಗಾದೆ ಮಾತಿದೆ, 'ಮಳೆ ನಿಂತರು ಮರದ ಹನಿ ನಿಲ್ಲೋದಿಲ್ಲ ಅಂತ'– ಹಾಗೆ ಮಳೆ ನಿಂತರೂ ಮುಂದಿನ ಮಳೆಗಾಲಕ್ಕೆ ಬೇಕಾದ ಅನಿವಾರ್ಯ ಅಗತ್ಯತೆಗಳ ಛತ್ರಿ–ಚಾಮರಗಳನ್ನು ಹೊಲಿಸಿಟ್ಟುಕೊಳ್ಳುವ ಮರದ ಹನಿಯಂತೆ ನಮ್ಮ ಪೂರ್ವಸಿದ್ಧತೆಗಳು ಚರ್ಚೆಯಾಗಬೇಕು. ಇಷ್ಟಾದರೆ ಸಾಕು! ಮಳೆಗಾಲದಲ್ಲಿ ಒದ್ದೆಯಾದ ಮನುಷ್ಯನ ಬದುಕನ್ನು ಬೆಚ್ಚಗಿಡಲು ಮನುಷ್ಯತ್ವಕ್ಕೆ ಮತ್ತಿನ್ನೇನು ಬೇಕು ಹೇಳಿ ಏನಂತೀರಿ?.

ಮಗನ ಮುಂದೆಯೇ ತಾಯಿ ಮೇಲೆ ಸಾಮೂಹಿಕ ಅತ್ಯಾಚಾರ!

ಬೆಂಗಳೂರಿನಲ್ಲಿ ಮತ್ತೊಂದು ಪೈಶಾಚಿಕ ಕೃತ್ಯ

ಬೆಂಗಳೂರು, ಆ.19–ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಮಗನ ಮುಂದೆಯೇ ತಾಯಿಯ ಮೇಲೆ ಸಾಮೂಹಿಕ ಅತ್ಯಾಚಾರವೆಸಗಿರುವ ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ. ರೌಡಿಶೀಟರ್ ಗ್ಯಾಂಗ್‌ನಿಂದ ಈ ಪೈಶಾಚಿಕ ಕೃತ್ಯ ನಡೆದಿದ್ದು, ಒಬ್ಬರಾದ ಮೇಲೆ ಒಬ್ಬರಂತೆ ಮಹಿಳೆ ಮೇಲೆ ಎರಗಿ ಚಿತ್ರಹಿಂಸೆ ನೀಡಿ ಅಟ್ಟಹಾಸ ಮೆರೆದಿದ್ದಾರೆ.

40 ವರ್ಷದ ತಾಯಿ ಮೇಲೆ ತನ್ನ ಕಣ್ಣ ಮುಂದೆಯೇ ಅತ್ಯಾಚಾರವಾದರೂ 20 ವರ್ಷದ ಮಗ ನಿಸ್ಸಹಾಯಕನಾಗಿದ್ದಾನೆ. ಅಲ್ಲದೇ ಈ ಅತ್ಯಾಚಾರಕ್ಕೆ ಇಬ್ಬರು ಮಹಿಳೆಯರ ಸಾಥ್ ಕೊಟ್ಟಿದ್ದಾರೆ. ತೀವ್ರ ಅಸ್ವಸ್ಥಗೊಂಡಿರುವ ಸಂತ್ರಸ್ತೆಗೆ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಪ್ರಕರಣ ಸಂಬಂಧ ರೌಡಿ ಶೀಟರ್‌ಗಳಾದ ಜೋಸೆಫ್, ಶ್ರೀನಿವಾಸ್ ಅಲಿಯಾಸ್ ಪಾಗಲ್ ಸೀನಾ ಎಂಬುವವರ ಜೊತೆ ಸೌಮ್ಯಾ, ಪ್ರತಾಪ್, ಜತಿನ್, ವಿಘ್ನೇಶ್, ಸೈಯದ್ ಶಹಬುದ್ದೀನ್, ಸ್ವಾತಿ, ಮಾದೇಶ ಎಂಬುವವರನ್ನು ಪೊಲೀಸರು ಬಂಧಿಸಿದ್ದಾರೆ. ಘಟನೆ ಸಂಬಂಧ ಚಂದ್ರಲೇಔಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ವಿವರ: ಸಂತ್ರಸ್ತೆ ಆಕೆಯ ಮಗ ಹಾಗೂ ಮತ್ತಿಬ್ಬರು ಸ್ನೇಹಿತರು ಚಂದ್ರಲೇಔಟ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಾಸವಿದ್ದರು. ಇದೇ ಏರಿಯಾದ ರೌಡಿಶೀಟರ್‌ಗಳಾದ ಜೋಸೆಫ್ ಹಾಗೂ ಶ್ರೀನಿವಾಸ್ ಅಲಿಯಾಸ್ ಪಾಗಲ್ ಸೀನಾಗೆ ಸಂತ್ರಸ್ತೆ ಹಾಗೂ ಆಕೆಯ ಮಗ ಪರಿಚಯವಿತ್ತು.

ಮೊಬೈಲ್ ಮತ್ತು ಚಿನ್ನದ ಸರ ಕಳ್ಳತನ ಪ್ರಕರಣದಲ್ಲಿ ಸಂತ್ರಸ್ತೆ ಹಾಗೂ ಆಕೆಯ ಮಗ ಭಾಗಿಯಾಗಿದ್ದಾಗಿ ಆರೋಪಿಗಳಿಗೆ ಗೊತ್ತಾಗಿತ್ತು. ಇದನ್ನು ಗಮನಿಸಿದ್ದ ಜೋಸೆಫ್ ಹಾಗೂ ಸೀನಾ ಇವರನ್ನು ಅಪಹರಿಸಿ ಬೆದರಿಸಿದರೆ ಹಣ ಬಂಗಾರ ಸಿಗಬಹುದು ಎಂದು ಭಾವಿಸಿದ್ದರು. ಹೀಗಾಗಿ ಇದೇ 13ರಂದು ಸಂಚು ರೂಪಿಸಿ ನಾಲ್ವರನ್ನು ಕಿಡ್ನಾಪ್ ಮಾಡಿದ್ದು, ಜೋಸೆಫ್ ಹಾಗೂ ಸೀನಾಗೆ ಇನ್ನೂ 7 ಆರೋಪಿಗಳು ಸಾಥ್ ಕೊಟ್ಟಿದ್ದಾರೆ.

ನಾಲ್ವರನ್ನು ಬೆದರಿಸಲು ಪಕ್ಕಾ ಪ್ಲಾನ್ ರೆಡಿ ಮಾಡಿದ್ದರು. ಸೌಮ್ಯ ಎಂಬಾಕೆ ತಾನು ಪಿಎಸ್‌ಐ, ಹಣ ಕೊಡದಿದ್ದರೆ ನಿಮ್ಮ ಮೇಲೆ ಕೇಸ್ ಹಾಕುತ್ತೇನೆ ಎಂದು ತಾಯಿ ಮತ್ತು ಮಗನನ್ನು ಬೆದರಿಸಿದ್ದಳು. ಪರಿಚಯಸ್ಥ ಪ್ರತಾಪ್ ಎಂಬಾತನ ಮನೆಯಲ್ಲಿ ಅಕ್ರಮವಾಗಿ ಇರಿಸಿ ಹಿಂಸಿಸಿದ್ದರು. ಯಾವಾಗ ಹಣ, ಬಂಗಾರ ಕೊಡಲಿಲ್ಲವೋ ಆಗ ಮಹಿಳೆ ಮೇಲೆ ಮೃಗದಂತೆ ಎರಗಿ ಆಕೆಯ ಮಗನ ಮುಂದೆಯೇ ಅತ್ಯಾಚಾರವೆಸಗಿ ಚಿತ್ರಹಿಂಸೆ ಕೊಟ್ಟಿದ್ದಾರೆ. ಇತ್ತ ತಾಯಿ, ಮಗ ನಾಪತ್ತೆಯಾದ ಸಂಬಂಧ ಚಂದ್ರ ಲೇಔಟ್ ಠಾಣೆಯಲ್ಲಿ ಮಿಸ್ಸಿಂಗ್ ಕಂಪ್ಲೇಂಟ್ ದಾಖಲಾಗಿತ್ತು. ತನಿಖೆ ಕೈಗೊಂಡಿದ್ದ ಪೊಲೀಸರ ಕೈಗೆ ಆರೋಪಿಗಳು ಸಿಕ್ಕಿ ಬಿದ್ದು, ವಿಚಾರಣೆ ನಡೆಸಿದಾಗ ಕೃತ್ಯ ಬೆಳಕಿಗೆ ಬಂದಿದೆ. ಆರೋಪಿಗಳನ್ನು ಬಂಧಿಸಿರುವ ಚಂದ್ರಲೇಔಟ್ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

ಅರ್ಜಿ ಆಹ್ವಾನ

ಮೈಸೂರು: ವೀರಶೈವ–ಲಿಂಗಾಯತ ಜಾತಿ ಹಾಗೂ ಉಪಜಾತಿಗೆ ಸೇರಿದ ಸಮುದಾಯದ ಜನರ (ಪ್ರವರ್ಗ–IIIಬಿ) ಅಭಿವೃದ್ಧಿಗಾಗಿ 2024–25ನೇ ಸಾಲಿಗೆ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಬಸವ ಬೆಳಗು, ವಿದೇಶ ವಿದ್ಯಾವಿಕಾಸ ಹಾಗೂ ಜೀವಜಲ, ಭೋಜನಾಲಯ ಕೇಂದ್ರ, ವಿಭೂತಿ ನಿರ್ಮಾಣ ಘಟಕ, ಸ್ವಾವಲಂಬಿ ಸಾರಥಿ, ಸ್ವಯಂ ಉದ್ಯೋಗ ಸಾಲ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದು. ಆಸಕ್ತರು https://www.kaushalkar.com ಮೂಲಕ ಆ.31 ರೊಳಗೆ ಅರ್ಜಿ ಸಲ್ಲಿಸಬೇಕು. ಮಾಹಿತಿಗೆ ನಿಗಮದ ದೂ.ಸಂ: 080–22865522, 9900012351, ಹಾಗೂ ಮೈಸೂರು ಜಿಲ್ಲಾ ಕಚೇರಿ ದೂ.ಸಂ: 0821–2341194 ಅನ್ನು ಸಂಪರ್ಕಿಸಬಹುದು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visweswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ

ಡಾ.ಸಿ.ಎನ್.ಮಂಜುನಾಥ್‌ರಿಗೆ ಅಭಿನಂದನೆ...



ನಿಖಿಲ್ ಕುಮಾರಸ್ವಾಮಿ ಅಭಿಮಾನಿ ಬಳಗದ ವತಿಯಿಂದ ಸೋಮವಾರ ಮೈಸೂರಿಗೆ ಆಗಮಿಸಿದ ಬೆಂಗಳೂರು ಗ್ರಾಮಾಂತರ ಸಂಸದರೂ ಆದ ಖ್ಯಾತ ಹೃದ್ರೋಗ ತಜ್ಞರಾದ ಡಾ.ಸಿ.ಎನ್.ಮಂಜುನಾಥ್ ಅವರನ್ನು ಅಭಿನಂದಿಸಲಾಯಿತು. ಬಳಗದ ಅಧ್ಯಕ್ಷ ಪ್ರದೀಪ್ ಕೃಷ್ಣೇಗೌಡ, ಧರ್ಮಪಾಲ್‌ಗೌಡ, ಕೃಷ್ಣ ನಾಗರಾಜ್, ಚಂದ್ರಶೇಖರ್, ಶ್ರೀನಿವಾಸ್, ಚಲುವೇಶ ಮತ್ತಿತರರಿದ್ದರು.

ಭೂಮಿಕಾ ಅಸೋಸಿಯೇಟ್ಸ್‌ನಿಂದ ಚಿತ್ರಗೀತೆಗಳ ಗಾಯನದ ಸಿಂಚನ



ನಾದಬ್ರಹ್ಮ ಸಂಗೀತಾ ಸಭಾದಲ್ಲಿ ಜನಪ್ರಿಯ ಕನ್ನಡ-ಹಿಂದಿ ಚಲನಚಿತ್ರಗೀತೆಗಳ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಮೈಸೂರು, ಆ.19-ಮೈಸೂರಿನ ಚಾಮುಂಡಿಪುರಂನಲ್ಲಿರುವ ಭೂಮಿಕಾ ಅಸೋಸಿಯೇಟ್ಸ್ ಹಾಗೂ ದಿ.ಮೈಕ್ ಚಂದ್ರು ಗೆಳೆಯರ ಬಳಗದ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ ನಾದಬ್ರಹ್ಮ ಸಂಗೀತಾ ಸಭಾದಲ್ಲಿ 'ನೆನಪಿನ ದೋಣಿ' 60, 70, 80, 90ರ ದಶಕದಲ್ಲಿ ಮನಸೂರೆಗೊಂಡ ಜನಪ್ರಿಯ ಕನ್ನಡ-ಹಿಂದಿ ಚಲನಚಿತ್ರಗೀತೆಗಳ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕು.ಹಂಸಿನಿ ಎಸ್.ಕುಮಾರ್, ಶ್ರೀಮತಿ ದಿವ್ಯ ಸಚ್ಚಿದಾನಂದ, ಡಾ.ಶರ್ಮಿಲಿ ಎಸ್.ರೈ, ಸಿಂಚನ ಕಸ್ತೂರಿ, ನಿತಿನ್ ರಾಜಾರಾಮ ಶಾಸ್ತ್ರಿ, ಅಶ್ವಿನ್ ಪ್ರಭು, ಮೈಸೂರು ಆನಂದ್ ಇವರುಗಳು ತಮ್ಮ ಸಿರಿಕಂಠದಿಂದ 30ಕ್ಕೂ ಅಧಿಕ ಹಾಡುಗಳನ್ನು ಹಾಡಿ, ಸಭಿಕರ ಮನಸೂರೆಗೊಂಡರು. ಲೈವ್ ವಾದ್ಯವೃಂದದಲ್ಲಿ ರಿದಂ ಪ್ಯಾಡ್‌ನಲ್ಲಿ ವಿನಯ್ ರಂಗಧೋಳ್, ಕೀಬೋರ್ಡ್‌ನಲ್ಲಿ ಮೆಲ್ವಿನ್ ರಿಮಾ, ಸ್ಯಾಕ್ಸೋಫೋನ್‌ನಲ್ಲಿ ಹರೀಶ್ ಪಾಂಡವ್, ಗಿಟಾರ್‌ನಲ್ಲಿ ಪ್ರದೀಪ್ ಕಿಗ್ಗಾಲ್, ಕೊಳಲಿನಲ್ಲಿ ವರ್ಷ ಆಚಾರ್, ತಬಲಾದಲ್ಲಿ ಆತ್ಮಾರಾವ್, ಡೋಲಕ್‌ನಲ್ಲಿ ರೋಷನ್ ಸೂರ್ಯ, ಡ್ರಮ್ಸ್‌ನಲ್ಲಿ ಆದಿತ್ಯ ಭಾರದ್ವಾಜ್ ಸಹಕಾರ ನೀಡಿದರು. ನಿರೂಪಣೆಯನ್ನು ಆಕಾಶವಾಣಿ ನಿರೂಪಕ ಮಂಜುನಾಥ್ ನಿರ್ವಹಿಸಿದರು. ಮೈಸೂರು ಆನಂದ್, ಭೂಮಿಕಾ ಅಸೋಸಿಯೇಟ್ಸ್ ಮಾಲೀಕ ಸುರೇಶ್ ಮತ್ತಿತರರು ಉಪಸ್ಥಿತರಿದ್ದರು.

ಜೆಎಸ್‌ಎಸ್ ವೃದ್ಧಾಶ್ರಮದಲ್ಲಿ ಇನ್ಫೋಸಿಸ್ ಫೌಂಡೇಷನ್ ಅಧ್ಯಕ್ಷೆ ಡಾ.ಸುಧಾಮೂರ್ತಿ ಹುಟ್ಟುಹಬ್ಬ ಆಚರಣೆ



ಎಸ್.ಪ್ರಕಾಶ್ ಪ್ರಿಯದರ್ಶನ್ ಬಳಗದಿಂದ ಜೆಎಸ್‌ಎಸ್ ವೃದ್ಧಾಶ್ರಮದಲ್ಲಿ ಇನ್ಫೋಸಿಸ್ ಫೌಂಡೇಷನ್ ಅಧ್ಯಕ್ಷೆ ಡಾ.ಸುಧಾಮೂರ್ತಿ ಹುಟ್ಟುಹಬ್ಬ ಆಚರಿಸಲಾಯಿತು.

ಮೈಸೂರು, ಆ. 19- ಬಹಳಷ್ಟು ಕನ್ನಡಿಗರಿಗೆ ಅಕ್ಷರ, ಅನ್ನ, ಆರೋಗ್ಯ, ಉದ್ಯೋಗವನ್ನು ಕಲ್ಪಿಸಿ ಕನ್ನಡದ ಹಿರಿಮೆಯನ್ನು ವಿಶ್ವಮಟ್ಟದಲ್ಲಿ ಶ್ರೀಮಂತಗೊಳಿಸಿರುವ ಇನ್ಫೋಸಿಸ್ ಫೌಂಡೇಷನ್ ಅಧ್ಯಕ್ಷೆ ಡಾ.ಸುಧಾಮೂರ್ತಿ ಅವರ ಹುಟ್ಟುಹಬ್ಬವನ್ನು ಎಸ್.ಪ್ರಕಾಶ್ ಪ್ರಿಯದರ್ಶನ್ ಬಳಗದಿಂದ ಅರವಿಂದ್ ನಗರದಲ್ಲಿರುವ ಜೆಎಸ್‌ಎಸ್ ಸಂಸ್ಥೆಯವರ ವೃದ್ಧಾಶ್ರಮದಲ್ಲಿ ಹಿರಿಯ ನಾಗರಿಕರಿಗೆ ದಿನಸಿ ಸಾಮಗ್ರಿಗಳು ಹಾಗೂ ಹಣ್ಣು ಹಂಪಲು ವಿತರಿಸಿ ಅರ್ಥಪೂರ್ಣವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಜೆಎಸ್‌ಎಸ್ ವೃದ್ಧಾಶ್ರಮದ ಬಸವಣ್ಣ, ಮೈಸೂರು ನಗರ ಜೆಡಿಎಸ್ ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯಾದರ್ಶನ್, ಸುಬ್ರಮಣ್ಯ, ಛಾಯಾ, ಯಶವಂತ್ ಕುಮಾರ್, ವೀರಭದ್ರಸ್ವಾಮಿ, ಮಹೇಶ್, ಮಹದೇವ್, ಎಸ್.ಪಿ.ಅಕ್ಷಯ್ ಪ್ರಿಯಾದರ್ಶನ್, ಶೃಂಗಾರ, ಹರ್ಷಿತ್, ನಾಗೇಶ್ ಇದ್ದರು.

ಸಾಮೂಹಿಕ ಯಜುರುಪಾಕರ್ಮ



ಸಾಯಿ ಸರಸ್ವತಿ ವಿದ್ಯಾಕೇಂದ್ರದಲ್ಲಿ ಸಾಮೂಹಿಕ ಯಜುರುಪಾಕರ್ಮ ನಡೆಯಿತು.

ಮೈಸೂರು, ಆ.19- ಶ್ರೀರಾಮಚಂದ್ರಾಪುರ ಮಠದ ಹವ್ಯಕ ಮಹಾಮಂಡಲ, ಮೈಸೂರು ವಲಯದ ವತಿಯಿಂದ ನಗರದ ಬೋಗಾದಿಯ ಸಾಯಿ ಸರಸ್ವತಿ ವಿದ್ಯಾಕೇಂದ್ರದ ಆವರಣದಲ್ಲಿ ಸೋಮವಾರ ಸಾಮೂಹಿಕ ಯಜುರುಪಾಕರ್ಮವನ್ನು ಏರ್ಪಡಿಸಲಾಗಿತ್ತು.

ಉತ್ಸರ್ಜನ ಅಂಗವಾಗಿ ಬಲಿ, ಮಾತ-ಪಿತೃ, ಗುರುಗಳು, ಪಂಚಕಾಂಡ ಋಷಿಗಳ ಸ್ಮರಿಸಿ ಹೋಮ, ಮಹಾತರ್ಪಣ, ಉಪಾಕರ್ಮ ಅಂಗವಾಗಿ ನೂತನ ಯಜ್ಞೋಪವೀತ ಧಾರಣೆ, ವಿಸರ್ಜನೆ ನಡೆಯಿತು. ಕಾರ್ಯಕ್ರಮದಲ್ಲಿ ಮೈಸೂರು ವಲಯದ ಕಾರ್ಯದರ್ಶಿ ರಾಕೇಶ್ ಭಟ್, ಸಂಘಟನಾ ಕಾರ್ಯದರ್ಶಿ ಸಂಪ ಕೃಷ್ಣಮೂರ್ತಿ, ಕೋಶಾಧಿಕಾರಿ ಪಡಾರು ರಾಮಕೃಷ್ಣಭಟ್, ಮುಖಂಡರಾದ ಬೇತ ಕೃಷ್ಣಭಟ್, ರಾಮಕೃಷ್ಣ ಹೆಗಡೆ ನಿಸ್ರಾಣಿ, ಕೆ.ಎಸ್.ಸದಾಶಿವ, ಗಿರಿಜಾಶಂಕರ್, ಹೇರಂಬರಾವ್, ಕೃಷ್ಣ ಹೆಗಡೆ ಸೇರಿದಂತೆ ಹಲವಾರು ಭಾಗವಹಿಸಿದ್ದರು. ವಲಯದ ವೈದಿಕ ವಿಭಾಗದ ಮುಖ್ಯಸ್ಥ ಶಂಭು ಉಪಾಧ್ಯಾಯ ಧಾರ್ಮಿಕ ಕಾರ್ಯಕ್ರಮ ನಡೆಸಿಕೊಟ್ಟರು.

78ನೇ ಸ್ವಾತಂತ್ರ್ಯ ದಿನಾಚರಣೆ...



ಮೈಸೂರು ತಾಲೂಕಿನ ಸಿದ್ದರಾಮನಹುಂಡಿ ಹಾಲು ಉತ್ಪಾದಕರ ಸಂಘದಿಂದ 78ನೇ ಸ್ವಾತಂತ್ರ್ಯ ದಿನ ಆಚರಿಸಲಾಯಿತು. ಈ ವೇಳೆ ಸಂಘದ ಅಧ್ಯಕ್ಷ ಸಿದ್ದರಾಮು, ಉಪಾಧ್ಯಕ್ಷರಾದ ಮಹದೇವು, ನಿರ್ದೇಶಕರಾದ ಶಿವಣ್ಣ, ಉದಯರಾಜು, ಸಿದ್ದರಾಜು, ರಾಮು, ಮಹದೇವು, ಸವಿತಾ ಶಂಕರ, ಶ್ರೀನಿವಾಸ, ಜಯಮ್ಮ ದಿನೇಶ್, ಕಾರ್ಯದರ್ಶಿ ರಮೇಶ್, ಸಿಬ್ಬಂದಿ ಮತ್ತು ಗ್ರಾಮಸ್ಥರಿದ್ದರು.

ಯಂತ್ರೋಪಕರಣ ಸದ್ಬಳಕೆಯಿಂದ ಕೃಷಿಯಲ್ಲಿ ಪ್ರಗತಿ ಸಾಧಿಸಲು ರೈತರಿಗೆ ಶಾಸಕ ಜಿಟಿಡಿ ಕರೆ

ರೈತರಿಗೆ ಕೃಷಿ ಕ್ಷೇತ್ರದ ಸಲಕರಣೆ ವಿತರಣೆ



ಮೈಸೂರಿನ ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಸೋಮವಾರ ರೈತರಿಗೆ ಕೃಷಿ ಯಂತ್ರೋಪಕರಣಗಳನ್ನು ಶಾಸಕ ಜಿ.ಟಿ.ದೇವೇಗೌಡರು ವಿತರಣೆ ಮಾಡಿದರು.

ಮೈಸೂರು,ಆ.19(ಪಿಎಂ)- ರೈತರು ಸರ್ಕಾರದ ಸಹಾಯಧನದಡಿಯಲ್ಲಿ ದೊರೆಯುವ ಯಂತ್ರೋಪಕರಣಗಳನ್ನು ಸದ್ಬಳಕೆ ಮಾಡಿಕೊಂಡು ಉತ್ತಮ ಬೆಳೆ ಬೆಳೆದು, ಕೃಷಿಯಲ್ಲಿ ಪ್ರಗತಿ ಕಾಣಬೇಕು ಎಂದು ಶಾಸಕ ಜಿ.ಟಿ.ದೇವೇಗೌಡರು (ಜಿಟಿಡಿ) ರೈತರಿಗೆ ಕರೆ ನೀಡಿದರು.

ಮೈಸೂರಿನ ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ರೈತರಿಗೆ ಚಾಫ್‌ಕಟರ್, ಪವರ್‌ಟಿಲ್ಲರ್, ರೋಟವೇಟರ್‌ಗಳನ್ನು ವಿತರಿಸಿ ಅವರು ಮಾತನಾಡಿದರು. ಕರ್ನಾಟಕ ರೈತ ಸುರಕ್ಷ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ಬೆಳೆ ವಿಮೆಗೆ ನೋಂದಣಿ ಪ್ರಾರಂಭವಾಗಿದ್ದು, ರೈತರು ಬೆಳೆ ವಿಮೆಗೆ ನೋಂದಾಯಿಸಿಕೊಳ್ಳಬೇಕು. ಪ್ರಕೃತಿ ವಿಕೋಪ ಹಾಗೂ ಕೀಟರೋಗ ಬಾಧೆಯಿಂದ ಬೆಳೆ ನಷ್ಟ ಉಂಟಾದರೆ ಇದರಿಂದ ರೈತರಿಗೆ ಪ್ರಯೋಜನ ಸಿಗಲಿದೆ ಎಂದು ಸಲಹೆ ನೀಡಿದರು.

ಕೃಷಿ ಭಾಗ್ಯ ಯೋಜನೆಯಡಿ ಬದು ನಿರ್ಮಾಣ, ಕೃಷಿ ಹೊಂಡ ನಿರ್ಮಾಣ, ಕೃಷಿ ಹೊಂಡದ ಸುತ್ತಲು ತಂತಿಬೇಲಿ ನಿರ್ಮಾಣ ಮತ್ತು ಹಲವಾರು ಸೌಲಭ್ಯಗಳಿವೆ. ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಶಾಸಕ ಜಿ.ಟಿ. ದೇವೇಗೌಡರು ಮನವಿ ಮಾಡಿದರು.

ಕೃಷಿ ಇಲಾಖೆಯಿಂದ ರೈತರ ಅನುಕೂಲಕ್ಕಾಗಿ ಇರುವ ಕಾರ್ಯಕ್ರಮಗಳ ಕುರಿತು ಸಹಾಯಕ ಕೃಷಿ ನಿರ್ದೇಶಕ ಬಿ.ಡಿ.ಜಯರಾಂ ರೈತರಿಗೆ ಮಾಹಿತಿ ನೀಡಿದರು. ಗೋಪಾಲಪುರ ಗ್ರಾಮ ಪಂಚಾಯಿತಿ ಅಧ್ಯಕ್ಷ ಜಿ.ಕೆ.ಬಸವೇಗೌಡ, ಮುಖಂಡರಾದ ಸ್ವಾಮಿಗೌಡ, ಮಹೇಶ್, ದೇವೇಗೌಡ, ರಾಮಲಿಂಗ, ಸಣ್ಣ ಹೈದೇಗೌಡ, ತುಳಸಮ್ಮ, ಚಿಕ್ಕಣ್ಣನಾಯಕ ಸೇರಿದಂತೆ ಹಲವು ಮುಖಂಡರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ನಾಳೆ ವಿದ್ಯುತ್ ವ್ಯತ್ಯಯ

ಮೈಸೂರು,ಆ.19- ವಿ.ವಿ ಮೊಹಲ್ಲಾ ವಿಭಾಗ ವ್ಯಾಪ್ತಿಯ ತುರ್ತು ನಿರ್ವಹಣಾ ಕಾಮಗಾರಿ ನಿಮಿತ್ತ ಆ.21ರಂದು ಬೆಳಗ್ಗೆ 10ರಿಂದ ಸಂಜೆ 5ರವರೆಗೆ ಜಯನಗರ 1ನೇ ಕ್ರಾಸ್‌ನಿಂದ 20 ನೇ ಕ್ರಾಸ್‌ವರೆಗೆ, ಜಯನಗರ ಕೆ ಬ್ಲಾಕ್, ಚಿಕ್ಕಹರದನಹಳ್ಳಿ, ಅಪೋಲೊ ಆಸ್ಪತ್ರೆ ಸುತ್ತಮುತ್ತ, ಶ್ರೀರಾಂಪುರ 2ನೇ ಹಂತ, ಆದಿಚುಂಚನಗಿರಿ ರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

ಮಹಾಲಿಂಗೇಶ್ವರ ವಿದ್ಯುತ್ ಮಾರ್ಗದ ವ್ಯಾಪ್ತಿ ಪ್ರದೇಶಗಳು: ನಿಮಿಷಾಂಬ ಬಡಾವಣೆ, ಕಂದಾಯ ಬಡಾವಣೆ, ಟೆಂಪಲ್ ಬೆಲ್ ಬಡಾವಣೆ, ಮಹಾಲಿಂಗೇಶ್ವರ ದೇವಸ್ಥಾನದ ಸುತ್ತಮುತ್ತ, ಪ್ರೀತಿ ಬಡಾವಣೆ, ಹಂಸ ಬಡಾವಣೆ, ಕಂದಾಯನಗರ, ಗಿರಿಗೌಡ ಬಡಾವಣೆ, ಶ್ರೀರಾಂಪುರ ಹಾಗೂ ಸುತ್ತಮುತ್ತ ವಿದ್ಯುತ್ ವ್ಯತ್ಯಯವಾಗಲಿದೆ.

ಇಂದು ವಿದ್ಯುತ್ ವ್ಯತ್ಯಯ

ಆಯರಹಳ್ಳಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಕಾಮಗಾರಿ ನಿಮಿತ್ತ ಆ.20ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ಚಿಕ್ಕೇಗೌಡನಹುಂಡಿ, ದೇವಲಾಪುರ, ರಾಯನಹುಂಡಿ, ಆಯರಹಳ್ಳಿ, ಮರಿಗೌಡನಹುಂಡಿ, ಕುಂಬ್ರಹಳ್ಳಿ, ಕುಂಬ್ರಹಳ್ಳಿ ಮಠ, ಸೋಮೇಶ್ವರಪುರ, ಬಸಹಳ್ಳಿಹುಂಡಿ, ಕಿರಾಳು, ಹದಿನಾರು, ಹದಿನಾರು ಮೋಳೆ, ಮೂಡಳ್ಳಿ, ಮಲ್ಲರಾಜಹುಂಡಿ, ಭರಣಿ ಕುಡಿಯುವ ನೀರಿನ ಸ್ಥಾವರ ಹಾಗೂ ಸುತ್ತ-ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ಮೇಘಾಲಯ ರಾಜ್ಯಪಾಲ ಸಿ.ಎಚ್.ವಿಜಯಶಂಕರ್ ಐದು ದಿನ ಮೈಸೂರು ಜಿಲ್ಲಾ ಪ್ರವಾಸ



ಸಿ.ಎಚ್.ವಿಜಯಶಂಕರ್

ಮೈಸೂರು,ಆ.19- ಮೇಘಾಲಯದ ರಾಜ್ಯಪಾಲ ಸಿ.ಎಚ್. ವಿಜಯಶಂಕರ್ ಐದು ದಿನಗಳ ಕಾಲ ಮೈಸೂರು ಪ್ರವಾಸ ಕೈಗೊಳ್ಳಲಿದ್ದಾರೆ. ಪ್ರವಾಸದ ಅವಧಿಯಲ್ಲಿ ರಾಜ್ಯಪಾಲ ಸಿ.ಎಚ್.ವಿಜಯಶಂಕರ್ ಬೆಂಗಳೂರು ಮತ್ತು ಮೈಸೂರಿಗೆ ಭೇಟಿ ನೀಡಲಿದ್ದು, ಹಲವಾರು ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದಾರೆ.

ಆಗಸ್ಟ್ 20ರಂದು ಬೆಳಗ್ಗೆ ಕುಂಬಳಗೋಡು ಮಠಕ್ಕೆ ಭೇಟಿ ನೀಡಿ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದು, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ನಿವಾಸಕ್ಕೆ ಭೇಟಿ ನೀಡಿ ಮಾತುಕತೆ ನಡೆಸಲಿದ್ದಾರೆ. ನಂತರ ರಾಜ್ಯಪಾಲರು ಕೇಶವಕೃಪಾಗೆ ಭೇಟಿ ನೀಡಿ, ನಂತರ ಮೈಸೂರಿಗೆ ತೆರಳಲಿದ್ದಾರೆ.

ಆಗಸ್ಟ್ 21 ರಂದು ಬೆಳಗ್ಗೆ 9 ಗಂಟೆಗೆ ಚಾಮುಂಡಿಬೆಟ್ಟಕ್ಕೆ ಭೇಟಿ ನೀಡಿ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಲಿದ್ದಾರೆ. ನಂತರ ಮೈಸೂರಿನ ವಿಜಯನಗರದಲ್ಲಿ ಅರ್ಕಧಾಮ ಆಶ್ರಮಕ್ಕೆ ಭೇಟಿ ನೀಡಲಿದ್ದು, ಮಧ್ಯಾಹ್ನ 2.30 ಗಂಟೆಗೆ ಮೈಸೂರಿನ ಮುಡಾ ಕಚೇರಿ ಎದುರಿನ, ಜೆ ಎಲ್ ಬೋರ್ಡ್ ರೋಟರಿ ಶಾಲೆಯಲ್ಲಿ ನಡೆಯಲಿರುವ 'ನಾಗರಿಕ ಸನ್ಮಾನ' ಸಮಾರಂಭದಲ್ಲಿ ಭಾಗಿಯಾಗಲಿದ್ದಾರೆ. ಆ.22ರಂದು ಬೆಳಗ್ಗೆ ಬಿಳಿಕೆರೆ ಹೋಬಳಿಯಲ್ಲಿರುವ ಗದ್ದಿಗೆ ಕೆಂಡಗಣ್ಣೇಶ್ವರ ಸ್ವಾಮಿ ದೇಗುಲಕ್ಕೆ ಭೇಟಿ ನೀಡಿ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದು, ನಂತರ ಹುಣಸೂರಿನಲ್ಲಿರುವ ಸಾಯಿಬಾಬಾ ದೇಗುಲಕ್ಕೆ ಭೇಟಿ ನೀಡಿ ದರ್ಶನ ಪಡೆಯಲಿದ್ದಾರೆ. ನಂತರ ಹುಣಸೂರಿನ ಕಲ್ಕುಣಿಕೆ ಗ್ರಾಮದಲ್ಲಿರುವ ರಾಘವೇಂದ್ರಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿ ವಿಶೇಷ ಪ್ರಾರ್ಥನೆ ಸಲ್ಲಿಸಲಿದ್ದಾರೆ. ಆ.23ರಂದು ಬೆಳಗ್ಗೆ ಟಿ.ನರಸೀಪುರದ ತ್ರಿಪುರಸುಂದರಿ ಅಮ್ಮನ ದೇವಾಲಯಕ್ಕೆ ಭೇಟಿ ನೀಡಿ ವಿಶೇಷ ಪೂಜೆಯಲ್ಲಿ ಪಾಲ್ಗೊಳ್ಳುವರು.

ಆ.24ರಂದು ಬೆಳಗ್ಗೆ ಮೈಸೂರಿನ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ರಾಜ್ಯಪಾಲರಿಗೆ ನಾಗರಿಕ ಸನ್ಮಾನ ಆಯೋಜಿಸಲಾಗಿದೆ. ಆ.25ರಂದು ಬೆಳಗ್ಗೆ ಸುತ್ತೂರು ಮಠಕ್ಕೆ ಭೇಟಿ ನೀಡಿ, ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮೀಜಿಗಳ 109ನೇ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದು, ಸಂಜೆ 6 ಗಂಟೆಗೆ ಮೈಸೂರಿನಲ್ಲಿರುವ ನಿವೃತ್ತ ಉಪ ಕುಲಪತಿ ಶಶಿಧರ್ ಪ್ರಸಾದ್ ನಿವಾಸಕ್ಕೆ ಭೇಟಿ ನೀಡಿ ಮಾತುಕತೆ ನಡೆಸಲಿದ್ದಾರೆ.

ಆ.26ರಂದು ಬೆಳಗ್ಗೆ ಮಂಡ್ಯದ ಕೆ.ಆರ್. ಪೇಟೆ ತಾಲೂಕಿನ ಭೂವರಾಹ ಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಲಿದ್ದು, ಆ.27ರಂದು ಬೆಳಗ್ಗೆ ಮೈಸೂರಿನಿಂದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ತೆರಳುವರು ಎಂದು ಕೇಂದ್ರ ಸಂವಹನ ಇಲಾಖೆ ವಾರ್ತಾ ಮತ್ತು ಪ್ರಸಾರ ಸಚಿವಾಲಯವು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಲಯನ್ಸ್ ಕ್ಲಬ್‌ನಲ್ಲಿ ಸ್ವಾತಂತ್ರ್ಯೋತ್ಸವ...



ಮೈಸೂರು ಜೆ.ಪಿ.ನಗರದ ಲಯನ್ಸ್ ಕ್ಲಬ್‌ನಲ್ಲಿ ಸ್ವಾತಂತ್ರ್ಯೋತ್ಸವ ಆಚರಿಸಲಾಯಿತು. ನಿವೃತ್ತ ಪ್ರೊ.ಕೆ.ಎಸ್.ಮಲ್ಲಿಕಾರ್ಜುನಯ್ಯ ಧ್ವಜಾರೋಹಣ ನೆರವೇರಿಸಿದರು. ಜೆ.ಪಿ.ನಗರ ರೋಟರಿ ಕ್ಲಬ್, ಅರಿವಿನಮನೆ ಅಭ್ಯುದಯ ಮಹಿಳಾ ಸಂಘ, ಜೈಗುರುದೇವ್ ಹಿರಿಯ ನಾಗರಿಕರ ಸಂಘ, ವಿಶ್ವಮಾನವ ಒಕ್ಕಲಿಗರ ಸಂಘ, ಪುಟ್ಟರಾಜ ಗವಾಯಿಗಳ ಯೋಗ ಮತ್ತು ಧ್ಯಾನ ಪ್ರತಿಷ್ಠಾನದ ಪದಾಧಿಕಾರಿಗಳು, ಸದಸ್ಯರು, ಪಾಲಿಕೆ ಮಾಜಿ ಸದಸ್ಯೆ ಶ್ರೀಮತಿ ಶಾರದಮ್ಮ ಈಶ್ವರ್, ಲಯನ್ಸ್ ಕ್ಲಬ್ಬಿನ ಅಧ್ಯಕ್ಷ ಲಯನ್ ಕೆ.ಎ.ಸಿದ್ದಲಿಂಗಪ್ಪ, ಕಾರ್ಯದರ್ಶಿ ಲಯನ್ ಸತ್ಯನಾರಾಯಣ, ಲಯನ್ ಕೆ.ವಿ.ಪಾರ್ಥರಾಜು, ಲಯನ್ ಡಾ.ಪಿ.ರಂಗಸ್ವಾಮಿ, ಕೋಶಾಧಿಕಾರಿ ಲಯನ್ ಕೆ.ಸುರೇಶ್ ಮತ್ತಿತರರು ಉಪಸ್ಥಿತರಿದ್ದರು.

ನಮೋವನದಲ್ಲಿ 78ನೇ ಸ್ವಾತಂತ್ರ್ಯ ದಿನಾಚರಣೆ



ಬಿಜೆಪಿ ಚಾಮುಂಡೇಶ್ವರಿ ನಗರ ಮಂಡಲದಿಂದ ಶಾರದಾದೇವಿನಗರದ ನಮೋವನದಲ್ಲಿ 78ನೇ ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಧ್ವಜಾರೋಹಣ ನೆರವೇರಿಸಲಾಯಿತು. ಬಿಜೆಪಿ ನಗರ ಪ್ರಧಾನ ಕಾರ್ಯದರ್ಶಿ ಬಿ.ಎಂ.ರಘು, ಮಂಡಲ ಅಧ್ಯಕ್ಷ ರಾಕೇಶ್ ಭಟ್, ಪ್ರಧಾನ ಕಾರ್ಯದರ್ಶಿ ಸೋಮಶೇಖರ್, ಈರೇಗೌಡ, ಉಪಾಧ್ಯಕ್ಷ ರಾಜಮಣಿ, ಶಶಿಕಾಂತ್, ಶಿವಕುಮಾರ್, ಹಿರಿಯಣ್ಣ, ಕಾರ್ಯದರ್ಶಿ ವಿನುತ, ಕಲಾವತಿ, ತುಳಸಿ, ಪದಾಧಿಕಾರಿಗಳಾದ ವಿಜಯಾ, ಮಧು, ಲಕ್ಷ್ಮಿ, ಚಂದ್ರಶೇಖರ ಸ್ವಾಮಿ, ನಾಗರಾಜ್, ರಾಜನಾಯಕ್, ಶುಭಶ್ರೀ, ನವೀನ, ರಮಾಭಾಯಿ, ಸಾಗರ್, ಮಂಜುಳಾ, ಪುಟ್ಟಮಣಿ, ಅಜಯ್, ಕುಮಾರ್, ಮಹದೇವ್, ಶಿವು, ಕಮಲಾ, ಬಸವಣ್ಣ, ಭಾರ್ಗವ, ಸುಬ್ರಹ್ಮಣ್ಯ, ಶ್ರೀಧರ ಶರ್ಮ, ರಾಧಾ, ಶೋಭಾ, ಅನಿತಾ ಇನ್ನಿತರರು ಉಪಸ್ಥಿತರಿದ್ದರು.

ಜಿಲ್ಲಾ ದೈಹಿಕ ಶಿಕ್ಷಣ ಉಪನ್ಯಾಸಕರ ಪುನಶ್ಚೇತನ ಕಾರ್ಯಾಗಾರ



ಮೈಸೂರಿನ ಮಾತೃಮಂಡಳಿ ಪದವಿಪೂರ್ವ ಕಾಲೇಜಿನಲ್ಲಿ ನಡೆದ ಜಿಲ್ಲಾ ಪದವಿಪೂರ್ವ ಕಾಲೇಜುಗಳ ದೈಹಿಕ ಶಿಕ್ಷಣ ಉಪನ್ಯಾಸಕರ ಪುನಶ್ಚೇತನ ಕಾರ್ಯಾಗಾರದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲಾ ಪ್ರಾಂಶುಪಾಲರ ಸಂಘದ ಅಧ್ಯಕ್ಷೆ ರಾಜೇಶ್ವರಿ, ಕ್ರೀಡಾ ಸಂಚಾಲಕರಾದ ಪ್ರಾಂಶುಪಾಲ ಅಶೋಕ್, ವಿಜೇಂದ್ರಕುಮಾರ್, ತಾಲೂಕು ನೋಡಲ್ ಕೇಂದ್ರದ ಪ್ರಾಂಶುಪಾಲರಾದ ದಿನೇಶ್, ಶಿವಶಂಕರ್, ಡಾ.ಮಂಗಳಾಮೂರ್ತಿ, ಉಪನ್ಯಾಸಕರಾದ ಮಂಜೇಗೌಡ, ಶಿವಕುಮಾರ್, ಗಿರೀಶ್, ದೈಹಿಕ ಶಿಕ್ಷಣ ಉಪನ್ಯಾಸಕರಾದ ಮುರಳೀಧರ್, ಸುದರ್ಶನ್, ಚಂದ್ರಶೇಖರ್, ಕಾಲೇಜಿನ ಪ್ರಭಾರಿ ಪ್ರಾಂಶುಪಾಲ ವಿಶ್ವನಾಥಯ್ಯ ಶೆಟ್ಟಿ, ದೈಹಿಕ ಶಿಕ್ಷಣ ಉಪನ್ಯಾಸಕರು ಇನ್ನಿತರರಿದ್ದರು.

ಮಹಿಳೆಯರ ಮೇಲಿನ ದೌರ್ಜನ್ಯ ತಡೆಗಟ್ಟಲು ನೈತಿಕ ಶಿಕ್ಷಣದ ಬೋಧನೆ ಅಗತ್ಯ

ಶ್ರೀ ಮಾತಾ ಜನಪದ ಚಾರಿಟೆಬಲ್ ಟ್ರಸ್ಟ್ ಆರಂಭ



ಮೈಸೂರು ಪುರಭವನದಲ್ಲಿ ಪೌರಕಾರ್ಮಿಕ ಮಹಿಳೆಯರನ್ನು ಸನ್ಮಾನಿಸಲಾಯಿತು.

ಮೈಸೂರು, ಆ.19- ನೈತಿಕ ಮೌಲ್ಯಗಳ ಕೊರತೆಯಿಂದ ದೌರ್ಜನ್ಯದ ಮನಸ್ಥಿತಿ ಬೆಳೆಯುತ್ತಿರುವುದರಿಂದ, ಪ್ರಾಥಮಿಕ ಹಂತ ದಿಂದಲೇ ಶಾಲಾ ಪಠ್ಯದಲ್ಲಿ ನೈತಿಕ ಮೌಲ್ಯಗಳ ಸೇರ್ಪಡೆ ಮಾಡುವ ಅಗತ್ಯವಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಸಲಹೆ ನೀಡಿದರು.

ನಗರದ ಪುರಭವನದಲ್ಲಿ ನಡೆದ ಸಮಾರಂಭದಲ್ಲಿ 'ಶ್ರೀ ಮಾತಾ ಜನಪದ ಚಾರಿಟೆಬಲ್ ಟ್ರಸ್ಟ್' ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರ ಮೇಲಿನ ಪುರುಷರ ದೌರ್ಜನ್ಯ ತಡೆಗಟ್ಟಲು ನೈತಿಕ ಶಿಕ್ಷಣದ ಬೋಧನೆಯ ಅಗತ್ಯವಿದೆ ಎಂದರು.

ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ, ಪರಂಪರೆ ಅನನ್ಯ ಮತ್ತು ಅಮೂಲ್ಯ. ಇದರ ಬಗ್ಗೆ ತಾತ್ಸಾರ ಮನೋಭಾವ ಸಲ್ಲದು. ಆಡಳಿತ ಮಾಡುವವರು ಮತ್ತು ಜನರು ಕನ್ನಡ ಸಂಸ್ಕೃತಿಯ ಉಳಿಸುವ ಪ್ರೀತ್ಯಾಭಿಮಾನ ಮತ್ತು ಕಾಳಜಿ ತೋರಬೇಕು ಎಂದು ಹೇಳಿದರು.

ಸ್ಪಂದನಾ ಸಾಂಸ್ಕೃತಿಕ ಪರಿಷತ್ತಿನ ಅಧ್ಯಕ್ಷ ಟಿ.ಸತೀಶ್ ಜವರೇಗೌಡ ಮಾತನಾಡಿದರು.

ಸಮಾರಂಭವನ್ನು ಗದಗ ಜಿಲ್ಲೆಯ ಉಪನ್ಯಾಸಕ ವೀರನಗೌಡ ಮರಿಗೌಡರ ಉದ್ಘಾಟಿಸಿದರು. ಕವಯತ್ರಿ ಸುಮಾ ಪಂಚವಳ್ಳಿ ಟ್ರಸ್ಟಿನ ಧ್ಯೇಯೋದ್ದೇಶಗಳ ವಿವರಿಸಿದರು. ಸಾಹಿತಿ ಎಂ.ವಿ.ರಮೇಶ್, ಪತ್ರಕರ್ತೆ ಮ.ನ.ಲತಾ ಮೋಹನ್, ಗಾಯಕ ಆದಿಲ್ ಪಾಷ, ನಿವೃತ್ತ ಮುಖ್ಯ ಶಿಕ್ಷಕಿ ಲಕ್ಷ್ಮಮ್ಮ, ಟ್ರಸ್ಟ್ ಅಧ್ಯಕ್ಷೆ ಸವಿತಾ ಶಾಸ್ತ್ರಿ, ಸಂಸ್ಥಾಪಕ ಕಾರ್ಯದರ್ಶಿ ಜೆ.ಜಿ. ಹರ್ಷವರ್ಧನ್ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ನೌಕಾದಳದ ನಿವೃತ್ತ ಯೋಧ ಗಜಾನನ ಭಟ್, ಸಾವಯವ ಕೃಷಿಕ ಸಾಹಿತಿ ಟಿ.ಎಂ.ಪ್ರಸಾದ್ ತೆಂಕಹಳ್ಳಿ, ಪೌರಕಾರ್ಮಿಕರಾದ ಹನುಮಂತಮ್ಮ, ಮಂಜುಳಾ, ದೀಪು ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು.

ಊಟ ಮಾಡುವಾಗ ಇಲಿ ಪಾಷಾಣ ಸಿಂಪಡಣೆ; 19 ನರ್ಸಿಂಗ್ ವಿದ್ಯಾರ್ಥಿ ಅಸ್ವಸ್ಥ

ಬೆಂಗಳೂರು: ಊಟ ಮಾಡುವಾಗ ಇಲಿ ಪಾಷಾಣ ಸ್ಪ್ರೇ ಮಾಡಿದ್ದರ ಪರಿಣಾಮ ಬೆಂಗಳೂರಿನ ಆದರ್ಶ ನರ್ಸಿಂಗ್ ಕಾಲೇಜಿನ 19 ವಿದ್ಯಾರ್ಥಿಗಳು ಅಸ್ವಸ್ಥಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ. ಮೂವರ ಸ್ಥಿತಿ ಚಿಂತಾಜನಕವಾಗಿದ್ದು, ಐಸಿಯುಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಜ್ಞಾನಭಾರತಿಯ ಅಮ್ಮ ಆಶ್ರಮದ ಮುಂಭಾಗದ ಪಿಜಿಯಲ್ಲಿ ಘಟನೆ ನಡೆದಿದೆ. ರಾತ್ರಿ 8 ಗಂಟೆ ಸುಮಾರಿಗೆ ವಿದ್ಯಾರ್ಥಿಗಳು ಊಟ ಮಾಡುತ್ತಿದ್ದಾಗ ಊಟದ ಹಾಲ್‌ನಲ್ಲೇ ಇಲಿ ಪಾಯಿಸನ್ ಸ್ಪ್ರೇ ಮಾಡಲಾಗಿತ್ತು. ಇದರಿಂದ ವಿದ್ಯಾರ್ಥಿಗಳಲ್ಲಿ ವಾಂತಿ ಕಾಣಿಸಿಕೊಂಡಿತ್ತು. ಪಿಜಿಯಲ್ಲಿ ಕೆಲಸ ಮಾಡುತ್ತಿದ್ದ ಮಂಜುನಾಥ್ ಎಂಬಾತ ಸ್ಪ್ರೇ ಮಾಡಿದ್ದು, ಇದರಿಂದ ಫುಡ್ ಪಾಯಿಸನ್ ಆಗಿದೆ. ತಕ್ಷಣವೇ ಎಚ್ಚೆತ್ತ ಹಾಸ್ಟೆಲ್ ಸಿಬ್ಬಂದಿ ಹತ್ತಿರದ ಆಸ್ಪತ್ರೆಗಳಿಗೆ ವಿದ್ಯಾರ್ಥಿಗಳ ರವಾನೆ ಮಾಡಿ ಚಿಕಿತ್ಸೆ ಕೊಡಿಸಿದ್ದಾರೆ. ಈ ಪೈಕಿ ಮೂವರು ವಿದ್ಯಾರ್ಥಿಗಳು ತೀವ್ರ ಅಸ್ವಸ್ಥರಾಗಿದ್ದು ಐಸಿಯುನಲ್ಲಿ ಚಿಕಿತ್ಸೆ ಮುಂದುವರೆದಿದೆ. ಸ್ಥಳಕ್ಕೆ ಜ್ಞಾನಭಾರತಿ ಠಾಣಾ ಪೊಲೀಸರು ಭೇಟಿ ನೀಡಿ, ಮಾಹಿತಿ ಪಡೆದುಕೊಂಡಿದ್ದಾರೆ.

ಸರ್ಕಾರಿ ಶಾಲಾ ಮಕ್ಕಳಿಗೆ ನೀಡಬೇಕಾದ ಹಾಲಿನ ಪೌಡರ್‌ಗೂ ಕನ್ನ!

ಕದ್ದೊಯ್ಯುವಾಗ ಗ್ರಾಮಸ್ಥರಿಗೆ ರೆಡ್‌ಹ್ಯಾಂಡ್ ಆಗಿ ಸಿಕ್ಕಿ ಬಿದ್ದ ಮುಖ್ಯ ಶಿಕ್ಷಕ

ಹೆಚ್.ಡಿಕೋಟೆ, ಆ.19(ಬಿಎಲ್‌ಯು)- ಸರ್ಕಾರಿ ಶಾಲಾ ಮಕ್ಕಳಿಗೆ ವಿತರಿಸಬೇಕಿದ್ದ ಹಾಲಿನ ಪುಡಿ ಪ್ಯಾಕೆಟ್ ಕದ್ದೊಯ್ಯುತ್ತಿದ್ದ ಮುಖ್ಯ ಶಿಕ್ಷಕ ಗ್ರಾಮಸ್ಥರ ಕೈಗೆ ರೆಡ್‌ಹ್ಯಾಂಡ್ ಆಗಿ ಸಿಕ್ಕಿ ಬಿದ್ದಿರುವ ಘಟನೆ ಮೈಸೂರಿನ ಹೆಚ್.ಡಿ. ಕೋಟೆ ಪಟ್ಟಣದಲ್ಲಿ ಇಂದು ನಡೆದಿದೆ.

ಹೆಚ್.ಡಿ.ಕೋಟೆ ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಬಾಲಕಿಯರ ಶಾಲೆಯ ಮುಖ್ಯ ಶಿಕ್ಷಕ ಗಣೇಶ್ ಆರೋಪಿಯಾಗಿದ್ದಾರೆ. ಮಕ್ಕಳ ಅಪೌಷ್ಟಿಕತೆ ಹೋಗಲಾಡಿಸಲು ಸರ್ಕಾರ ಉಚಿತವಾಗಿ ಹಾಲಿನ ಪುಡಿ ನೀಡುತ್ತಿದೆ. ಆದರೆ ಮುಖ್ಯ ಶಿಕ್ಷಕ ಗಣೇಶ್ ದ್ವಿಚಕ್ರ ವಾಹನದ ಬ್ಯಾಗ್ ಹಾಗೂ ಟೂಲ್ ಬಾಕ್ಸ್‌ನಲ್ಲಿ ಹಾಲಿನ ಪುಡಿಯ ಪ್ಯಾಕೆಟ್ ಇಟ್ಟು ಕದ್ದೊಯ್ಯುತ್ತಿದ್ದರು.



ಸಾಂದರ್ಭಿಕ ಚಿತ್ರ

ಪಟ್ಟಣದ ವಾಸಿ ಸಿದ್ದರಾಜು ಎಂಬುವರು ದ್ವಿಚಕ್ರ ವಾಹನ ನಿಲ್ಲಿಸಿ ಶೋಧಿಸಿದಾಗ ಹಾಲಿನ ಪ್ಯಾಕೆಟ್ ಕದ್ದೊಯ್ಯುತ್ತಿರುವುದು ಕಂಡುಬಂದಿತು. ಸಿದ್ದರಾಜು ಕೂಡಲೇ ಬಿಇಓ ಮಾರಯ್ಯ ಅವರಿಗೆ ದೂರವಾಣಿ ಮೂಲಕ ವಿಚಾರ ತಿಳಿಸಿದರು. ಬಿಇಓ ಸೂಚನೆ ಮೇರೆಗೆ ಸ್ಥಳಕ್ಕೆ ಬಂದ ಬಿಆರ್‌ಸಿ ಕೃಷ್ಣಯ್ಯ ಪರಿಶೀಲನೆ ನಡೆಸಿದರು. ಹಾಲಿನ ಪುಡಿ ಅವಧಿ ಮೀರಿದ ಕಾರಣ ಕೊಂಡೊಯ್ಯುತ್ತಿರುವುದಾಗಿ ಗಣೇಶ್ ಸ್ಪಷ್ಟಪಡಿಸಿದರು. ಆದರೆ ಹಾಲಿನ ಪೌಡರ್ ಪ್ಯಾಕೆಟ್ ಅವಧಿ ಬಗ್ಗೆ ಪರಿಶೀಲನೆ ನಡೆಸಿದಾಗ 2024ರ ಡಿಸೆಂಬರ್ ತನಕ ಇರುವುದು ಖಾತ್ರಿಯಾಯಿತು. ಹಾಲಿನ ಪೌಡರ್ ಹಾಗೂ ದ್ವಿಚಕ್ರ ವಾಹನವನ್ನು ಬಿಆರ್‌ಸಿ ಕೃಷ್ಣಯ್ಯ ವಶಕ್ಕೆ ತೆಗೆದುಕೊಂಡಿದ್ದಾರೆ.

ಈ ಬಗ್ಗೆ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯೆ ನೀಡಿರುವ ಬಿಇಓ ಮಾರಯ್ಯ, ಈ ಪ್ರಕರಣ ಸಂಬಂಧ ಬಿಆರ್‌ಸಿ ಅವರಿಂದ ವರದಿ ಕೇಳಿದ್ದೇನೆ. ನಾಳೆ ಅವರಿಂದ ಬರುವ ವರದಿ ಆಧಾರದ ಮೇಲೆ ಕಾನೂನಾತ್ಮಕ ಕ್ರಮ ಕೈಗೊಳ್ಳುತ್ತೇನೆ ಎಂದರು.

ಕೊಪ್ಪಳ ಜಿಲ್ಲೆ ಕಾರಟಗಿ ತಾಲೂಕಿನ ಗುಂಡೂರಿನಲ್ಲಿ ಅಂಗನವಾಡಿ ಶಿಕ್ಷಕಿ ಮಕ್ಕಳಿಗೆ ಕೋಳಿ ಮೊಟ್ಟೆ ಕೊಟ್ಟು, ಫೋಟೋ ಕ್ಲಿಕ್ಕಿಸಿದ ನಂತರ ವಾಪಸು ಪಡೆದ ಪ್ರಕರಣದ ನಂತರ ಈಗ ಮುಖ್ಯ ಶಿಕ್ಷಕನೆ ಹಾಲಿನ ಪೌಡರ್ ಕಳುವು ಮಾಡಿರುವ ಮತ್ತೊಂದು ಪ್ರಕರಣ ನಡೆದಿದೆ. ಉತ್ತಮ ವೇತನ ಪಡೆಯುವ ಮುಖ್ಯ ಶಿಕ್ಷಕನೆ ಹಾಲಿನ ಪೌಡರ್ ಕಳ್ಳತನ ಮಾಡಿರುವುದು ನಾಚಿಕೆಗೇಡಿನ ಸಂಗತಿಯಾಗಿದೆ.

ಸಿಎಂ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಖಂಡಿಸಿ ಮಂಡ್ಯದಲ್ಲಿ ಕಾಂಗ್ರೆಸ್ ಬೃಹತ್ ಪ್ರತಿಭಟನೆ

ಮಂಡ್ಯ,ಆ.19– ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಅನುಮತಿ ನೀಡಿರುವ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಕ್ರಮ ಖಂಡಿಸಿ ಜಿಲ್ಲಾ ಕಾಂಗ್ರೆಸ್ ವತಿಯಿಂದ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ನೇತೃತ್ವದಲ್ಲಿ ಸೋಮವಾರ ನಗರದ ಸರ್‌ಎಂವಿ ಪ್ರತಿಮೆ ಎದುರು ನಡೆಸಿದ ಪ್ರತಿಭಟನಾ ಧರಣಿಯಲ್ಲಿ ಕಾರ್ಯಕರ್ತರು ರಾಜ್ಯಪಾಲರ ನಡೆ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಸರ್‌ಎಂವಿ ಪುತ್ಥಳಿ ಬಳಿ ಪ್ರತಿಭಟನಾಕಾರರನ್ನುದ್ದೇಶಿಸಿ ಮಾತನಾಡಿದ ಸಚಿವ ಎನ್.ಚಲುವರಾಯಸ್ವಾಮಿ, ಜನಪರ ಕೆಲಸ ಮಾಡುತ್ತಾ ಅಭಿವೃದ್ಧಿ ಪಥದಲ್ಲಿ ಸಾಗುತ್ತಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಸಂಚು ರೂಪಿಸಿ ಹಗರಣವಲ್ಲದ ವಿಚಾರವನ್ನು ಮುಂದೆ ಮಾಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಷಡ್ಯಂತ್ರ ಹೂಡಿರುವ ಬಿಜೆಪಿ–ಜೆಡಿಎಸ್ ನಾಯಕರ ಎಲ್ಲಾ ಹಗರಣವನ್ನು ಕಾನೂನುಬದ್ಧವಾಗಿ ಬಯಲು ಮಾಡಲಾಗುವುದು ಎಂದು ಹೇಳಿದರು.



ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ನೇತೃತ್ವದಲ್ಲಿ ಜಿಲ್ಲಾ ಕಾಂಗ್ರೆಸ್ ವತಿಯಿಂದ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಕೇಂದ್ರದಲ್ಲಿ ಅಧಿಕಾರದ ಚುಕ್ಕಾಣಿ ಹಿಡಿದಿರುವವರು ಇಲ್ಲಿನ ಸರ್ಕಾರದ ನಿದ್ದೆಗೆಡಿಸುವ ಪ್ರಯತ್ನ ಮಾಡುತ್ತಿದ್ದಾರೆ. ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದಾಗಿನಿಂದ ಅಭಿವೃದ್ಧಿ ಪರ ಮುನ್ನಡೆದು ಅಭಿವೃದ್ಧಿಯ ಜೊತೆಗೆ ಜನರನ್ನು ಆರ್ಥಿಕವಾಗಿ ಬಲಪಡಿಸುತ್ತಿರುವುದನ್ನು ಸಹಿಸುತ್ತಿಲ್ಲ. ಅಷ್ಟೇ ಅಲ್ಲದೆ ಕೇಂದ್ರ ಸರ್ಕಾರ ರಾಜ್ಯಗಳಿಗೆ ನ್ಯಾಯಯುತವಾಗಿ ಸಲ್ಲಬೇಕಾಗಿದ್ದ ಅನುದಾನವನ್ನು ನೀಡದೇ ಇದ್ದಾಗ ಮುಖ್ಯಮಂತ್ರಿಯಾದಿಯಾಗಿ ಸಚಿವರು ಮತ್ತು ಶಾಸಕರು ದೆಹಲಿಯಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿದ್ದೆವು. ಮುಂದಿನ ದಿನಗಳಲ್ಲಿ ಬೇರೆ ರಾಜ್ಯಗಳು ಕೇಂದ್ರ ಸರ್ಕಾರದ ಕುತ್ತಿಗೆಗೆ ಹಿಡಿಯಬಹುದು ಎಂಬ ಭಯದಿಂದ ಕರ್ನಾಟಕ ಸರ್ಕಾರವನ್ನು ಅಸ್ಥಿರಗೊಳಿಸಲು ಬಿಜೆಪಿ ಮುಂದಾಗಿದೆ ಎಂದು ಆರೋಪಿಸಿದರು.

ಜಂತಕಲ್ ಮೈನಿಂಗ್ ಹಗರಣದ ವಿಚಾರವಾಗಿ ಲೋಕಾಯುಕ್ತ ತನಿಖೆ ನಡೆಸಿ ವರದಿ ನೀಡಿದ್ದು, ಎಚ್.ಡಿ.ಕುಮಾರಸ್ವಾಮಿ ವಿರುದ್ಧ ದೋಷಾರೋಪಣಾ ಪಟ್ಟಿ ಸಲ್ಲಿಸಲು ರಾಜ್ಯಪಾಲರ ಅನುಮತಿ ಕೋರಿದೆ. ಆದರೆ ಇದರ ಬಗ್ಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಯಾವುದೇ ಕ್ರಮಕೈಗೊಂಡಿಲ್ಲ. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವರಾದ ಶಶಿಕಲಾ ಜೊಲ್ಲೆ, ಮುರುಗೇಶ್ ನಿರಾಣಿ ಹಾಗೂ ಜನಾರ್ದನ ರೆಡ್ಡಿ ವಿರುದ್ಧ ಪ್ರಕರಣ ಕುರಿತು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಲು ಮುಂದಾಗಬೇಕು. ಬಿಜೆಪಿ–ಜೆಡಿಎಸ್ ನಾಯಕರ ಒತ್ತಡಕ್ಕೆ ಸಂವಿಧಾನ ಪೀಠ ದುರ್ಬಳಕೆ ಮಾಡಿಕೊಳ್ಳಬಾರದು ಎಂದು ರಾಜ್ಯಪಾಲರನ್ನು ಎಚ್ಚರಿಸಿದರು.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಬದಲಿ ನಿವೇಶನ ಪಡೆದಿರುವುದು ಹಗರಣವಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಮ್ಮ ಕಾನೂನು ಪ್ರಕಾರ ಅರ್ಜಿ ಸಲ್ಲಿಸಿ ನಿವೇಶನ ಕೋರಿದ್ದಾರೆ, ಅದರಂತೆ ನಿವೇಶನ ಮಂಜೂರಾಗಿದೆ. ಆಗ ಅಧಿಕಾರದಲ್ಲಿದ್ದ ಬಿಜೆಪಿ ಸರ್ಕಾರ ಕಾನೂನುಬದ್ಧವಾಗಿ ಇರದಿದ್ದರೆ ತಿರಸ್ಕಾರ ಮಾಡಬಹುದಿತ್ತು. ಇದನ್ನು ನೋಡಿದರೆ ಆಗ ಮುಖ್ಯಮಂತ್ರಿ ಆಗಿದ್ದ ಬಸವರಾಜ್ ಬೊಮ್ಮಾಯಿ ಮತ್ತು ಮುಡಾ ಅಧ್ಯಕ್ಷರಾಗಿದ್ದವರ ವಿರುದ್ಧ ಕ್ರಮ ಕೈಗೊಳ್ಳಬೇಕಾಗಿದೆ ಎಂದರು.

ಜೆಡಿಎಸ್ ನಾಯಕರ ಭ್ರಷ್ಟಾಚಾರದ ಬಗ್ಗೆ ಗಮನಹರಿಸಲಿಲ್ಲ ಇದು ನಾವು ಮಾಡಿರುವ ತಪ್ಪಾಗಿರಬಹುದು, ಜನಪರ ಕೆಲಸ ಮಾಡದ ಭ್ರಷ್ಟಾಚಾರ ಮಾಡಿದವರನ್ನು ಜೈಲಿಗೆ ಕಳುಹಿಸದೆ ಇದ್ದದ್ದು ತಪ್ಪಾಗಿದೆ ಈ ಕೆಲಸವನ್ನು ಮುಂದೆ ಮಾಡೋಣ ಎಂದು ಹೇಳುವ ಮೂಲಕ ಟೀಕಾಕಾರರಿಗೆ ತಿರುಗೇಟು ನೀಡಿದರು.

ಯಾವುದೇ ಕಾರಣಕ್ಕೂ ಕಾಂಗ್ರೆಸ್ ಸರ್ಕಾರ ಅಸ್ಥಿರಗೊಳಿಸಲು ಸಾಧ್ಯವಿಲ್ಲ, ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಬಲಕ್ಕೆ ಎಐಸಿಸಿ ಮತ್ತು ಕೆಪಿಸಿಸಿ, 136 ಶಾಸಕರು ಜೊತೆಗೆ ನಾಡಿನ ಜನತೆ ಅವರ ಜೊತೆ ಗಟ್ಟಿಯಾಗಿ ನಿಂತಿದ್ದಾರೆ ಎಂದು ಹೇಳಿದರು.

ಶಾಸಕ ಪಿ.ಎಂ.ನರೇಂದ್ರಸ್ವಾಮಿ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಷಡ್ಯಂತ್ರ ರೂಪಿಸಿರುವ ಕೇಂದ್ರ ಸರ್ಕಾರದ ಕೈಗೊಂಬೆಯಾಗಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಸಂವಿಧಾನ ಬಾಹಿರವಾಗಿ ನಡೆದುಕೊಂಡಿದ್ದಾರೆ.

ಮುಡಾ ಬದಲಿ ನಿವೇಶನ ಹಂಚಿಕೆ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಯಾವುದೇ ಪ್ರಭಾವ ಬೀರಿಲ್ಲ ಎಲ್ಲಿಯಾದರೂ ಅವರ ಸಹಿ ಇರುವ ಪತ್ರ, ಅಧಿಕಾರಿಗಳ ಮೇಲೆ ಒತ್ತಡ ಹಾಗೂ ದೂರವಾಣಿ ಕರೆ ಮಾಡಿರುವ ಬಗ್ಗೆ ತಿಳಿಸಲಿ ಎಂದು ಸವಾಲು ಹಾಕಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಹಗರಣ ನಡೆದಿರುವುದು ಬಿಜೆಪಿ ಸರ್ಕಾರದ ಅವಧಿಯಲ್ಲಿ. ಪ್ರತಿ ಜಿಲ್ಲೆಯಲ್ಲಿ ಎನ್‌ಜಿಓ ಸ್ಥಾಪಿಸಿ ನಿಗಮದಿಂದ ಹಣ ಬಿಡುಗಡೆಯಾಗಿದೆ. ಆ ಹಣ ಟ್ರಸ್ಟ್‌ಗೆ ಹೋಗಿದೆ, ಬಿಜೆಪಿ ಶಾಸಕರ ಪುತ್ರನ ಟ್ರಸ್ಟ್ ಅದಾಗಿದ್ದು ಇದರಲ್ಲಿ ಆರ್‌ಎಸ್‌ಎಸ್‌ನವರು ಟ್ರಸ್ಟಿಗಳಾಗಿದ್ದಾರೆ, ಇವರಿಗೆ ನಾಚಿಕೆ ಇಲ್ಲದೆ ಗಾಂಧಿ ಪ್ರತಿಮೆ ಎದುರು ಧರಣಿ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಸರ್‌ಎಂವಿ ಪುತ್ಥಳಿಯಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪಾದಯಾತ್ರೆ ಮೂಲಕ ತೆರಳಿದ ಕಾರ್ಯಕರ್ತರು ರಾಜ್ಯಪಾಲರ ವಿರುದ್ಧ ಅಪರ ಜಿಲ್ಲಾಧಿಕಾರಿ ಡಾ.ನಾಗರಾಜುಗೆ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಶಾಸಕರಾದ ಎ.ಬಿ.ರಮೇಶ್‌ಬಾಬು ಬಂಡಿಸಿದ್ದೇಗೌಡ, ಕೆ.ಎಂ.ಉದಯ್‌ಗೌಡ, ರವಿಕುಮಾರ್ ಗಣಿಗ, ಮಾಜಿ ಶಾಸಕರಾದ ಎಂ.ಶ್ರೀನಿವಾಸ್, ಕೆ.ಬಿ.ಚಂದ್ರಶೇಖರ್, ಬಿ.ಸೋಮಶೇಖರ್, ಸಂಪಂಗಿ, ಕೆಪಿಸಿಸಿ ಕಾರ್ಯದರ್ಶಿ ಶಿವಣ್ಣ, ಚಿತ್ರನಟಿ ಭಾವನಾ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಕಾರ್ಯಾಧ್ಯಕ್ಷ ಎಂ.ಎಸ್.ಚಿದಂಬರ್ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಕೊಲೆ ಮಾಡಿ ಸಾಕ್ಷ್ಯನಾಶ ಮಾಡಿದವನಿಗೆ ಜೀವಾವಧಿ ಶಿಕ್ಷೆ

ಮಂಡ್ಯ,ಆ.19– ಕೂಲಿ ಹಣದ ವಿಚಾರದ ಜಗಳದಲ್ಲಿ ಕೊಲೆ ಮಾಡಿ ಸಾಕ್ಷ್ಯನಾಶ ಮಾಡಿದವನಿಗೆ ಮಂಡ್ಯದ 4 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಕಠಿಣ ಜೀವಾವಧಿ ಶಿಕ್ಷೆ ಮತ್ತು ರೂ 40,000 ದಂಡವನ್ನು ವಿಧಿಸಿದೆ.

ಮಳವಳ್ಳಿ ತಾಲೂಕಿನ ಕೋಟೆ ಬೀದಿಯಲ್ಲಿ ವಾಸವಾಗಿದ್ದ ಮಾದೇಶ (34) ಎಂಬುವವನಿಗೆ ಶಿಕ್ಷೆ ವಿಧಿಸಲಾಗಿದೆ. 2020 ಜೂನ್ 10 ರಂದು ಕೂಲಿ ಹಣದ ವಿಚಾರವಾಗಿ ಶಂಕರ್ ಹಾಗೂ ಮಾದೇಶನ ನಡುವೆ ಜಗಳ ನಡೆದಿದ್ದು, ಮಾದೇಶನು ಶಂಕರ್‌ಗೆ ಕಲ್ಲನ್ನು ಎಡ ಕಪಾಲದ ಮೇಲೆ ಎತ್ತಾಕಿ ಕೊಲೆ ಎಸಗಿದ್ದಾನೆ. ಅದನ್ನು ಮರೆ ಮಾಚುವ ಉದ್ದೇಶದಿಂದ ಶವವನ್ನು ಹುಣಸೆ ಮರದ ಹತ್ತಿರ ಇಟ್ಟು ಹೋಗಿದ್ದಾನೆ. ತನಿಖೆ ನಡೆಸಿದ್ದ ಅಂದಿನ ಸರ್ಕಲ್ ಇನ್ಸ್‌ಪೆಕ್ಟರ್ ಕೆ.ಆರ್.ಪ್ರಸಾದ್‌ರವರು ನ್ಯಾಯಾಲಯಕ್ಕೆ ದೋಷರೋಪಣಾ ಪಟ್ಟಿ ಸಲ್ಲಿಸಿದ್ದರು.

ವಿಚಾರಣೆ ನಡೆಸಿದ ನ್ಯಾಯಾಧೀಶರಾದ ನಿರ್ಮಲ.ಕೆ ಅವರು ಶಿಕ್ಷೆ ವಿಧಿಸಿ ಆದೇಶಿಸಿದ್ದಾರೆ. ಸರ್ಕಾರದ ಪರವಾಗಿ ಮಂಡ್ಯ 4ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಸರ್ಕಾರಿ ಅಭಿಯೋಜಕರಾದ ಜಯಶ್ರೀ ಎಸ್.ಶೆಣೈ ವಾದ ಮಂಡಿಸಿದ್ದರು.

ಇಂದು ಡಿ.ದೇವರಾಜ ಅರಸು ಜನ್ಮ ದಿನಾಚರಣೆ



ಮಂಡ್ಯ,ಆ.19– ಮಂಡ್ಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸುರವರ 109 ನೇ ಜನ್ಮ ದಿನಾಚರಣೆಯ ಅಂಗವಾಗಿ ಆಗಸ್ಟ್ 20 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಶ್ರೀ ದೇವರಾಜ ಅರಸುರವರ ಅಲಂಕೃತ ಭಾವಚಿತ್ರದ ಮೆರವಣಿಗೆ ಹೊರಟು ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಸಮಾವೇಶಗೊಳ್ಳುವುದು. ಬೆಳಿಗ್ಗೆ 11 ಗಂಟೆಗೆ ಮಂಡ್ಯದ ಡಾ.ಬಿ.ಆರ್ ಅಂಬೇಡ್ಕರ್ ಭವನದಲ್ಲಿ ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಪಾಲ ಅಗ್ರಹಾರ ಗ್ರಾಪಂ ಅಧ್ಯಕ್ಷರಾಗಿ ಪುಷ್ಪಾಂಜಲಿ ಗಿರೀಶ್



ನಾಗಮಂಗಲ: ತಾಲೂಕಿನ ಪಾಲ ಅಗ್ರಹಾರ ಗ್ರಾಪಂ ಅಧ್ಯಕ್ಷರಾಗಿ ಕಾಂಗ್ರೆಸ್ ಬೆಂಬಲಿತ ಪುಷ್ಪಾಂಜಲಿ ಗಿರೀಶ್ ಆಯ್ಕೆಯಾಗಿದ್ದಾರೆ.

ಈ ಹಿಂದೆ ಅಧ್ಯಕ್ಷರಾಗಿದ್ದ ರಾಧಾ ನಾಗರಾಜು ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಚುನಾವಣೆ ನಿಗದಿಯಾಗಿತ್ತು. ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್ ಬೆಂಬಲಿತ ಪುಷ್ಪಾಂಜಲಿ ಗಿರೀಶ್ ಹಾಗೂ ಜೆಡಿಎಸ್ ಬೆಂಬಲಿತ ವಿಜಯ ಕುಮಾರ್ ನಾಮಪತ್ರ ಸಲ್ಲಿಸಿದರು.

5 ಮತಗಳನ್ನು ಪಡೆದ ಪುಷ್ಪಾಂಜಲಿ ಗಿರೀಶ್ ಗೆಲುವು ಸಾಧಿಸಿದ್ದು, ಮೂರು ಮತ ಪಡೆದ ವಿಜಯ್ ಕುಮಾರ್ ಪರಾಭವಗೊಂಡರು.

ಪುಷ್ಪಾಂಜಲಿ ಗಿರೀಶ್ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಎನ್ ಚೆಲುವರಾಯಸ್ವಾಮಿ ಪರ ಜಯಘೋಷ ಮೊಳಗಿಸಿ, ವಿಜಯೋತ್ಸವ ಆಚರಿಸಿದರು.

ಪಂಚಾಯಿತಿ ಮಾಜಿ ಅಧ್ಯಕ್ಷರಾದ ರಾಧಾ ನಾಗರಾಜು, ಉಪಾಧ್ಯಕ್ಷೆ ಲತಾ ಚೆನ್ನಪ್ಪ, ಟಿಎಪಿಸಿಎಂಎಸ್ ಅಧ್ಯಕ್ಷ ಎನ್.ಎಚ್ ಗಿರೀಶ್, ಮುಖಂಡರಾದ ರಾಜೇಶ್, ನಾಗರಾಜು, ವನರಾಜು, ಪಿ ಡಿ ತಿಮ್ಮಯ್ಯ ಸೇರಿದಂತೆ ಕಾಂಗ್ರೆಸ್ ಬೆಂಬಲಿತ ಗ್ರಾಮ ಪಂಚಾಯತಿ ಸದಸ್ಯರು ಉಪಸ್ಥಿತರಿದ್ದರು.

ಅಂತರ ರಾಜ್ಯ ಕಳ್ಳನ ಬಂಧನ: 8 ಲಕ್ಷ ಮೌಲ್ಯದ ಚಿನ್ನಾಭರಣ ವಶ

ಮಂಡ್ಯ,ಆ.19– ವಾಟರ್ ಮೀಟರ್ ಪರಿಶೀಲನೆ ನೆಪ ಹೇಳಿ ವಂಚಿಸಿ ಕಳ್ಳತನ ಮಾಡುತ್ತಿದ್ದ ಅಂತರರಾಜ್ಯ ಕಳ್ಳನನ್ನು ಬಂಧಿಸಿರುವ ಮಂಡ್ಯ ಪೂರ್ವ ಪೊಲೀಸ್ ಠಾಣೆಯ ಸಿಬ್ಬಂದಿಗಳು, ರೂ 8 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ 1 ಯಮಹ ಆರ್ 15 ಮೋಟಾರ್ ಬೈಕ್ ವಶಪಡಿಸಿಕೊಳ್ಳಲಾಗಿದೆ.

ತಮಿಳುನಾಡು ಮೂಲದ ರವಿ(29) ಬಂಧಿತ ಆರೋಪಿ ಬೆಂಗಳೂರಿನ ಅತ್ತಿಬೆಲೆಯಲ್ಲಿ ವಾಸವಾಗಿದ್ದ. ಜೂನ್ 26 ರಂದು ಮಂಡ್ಯ ನಗರದ ಸ್ವರ್ಣಸಂದ್ರ ಬಡಾವಣೆಯಲ್ಲಿರುವ ಪುಷ್ಪವತಿ ಅವರ ಮನೆಗೆ ಧಾವಿಸಿದ ರವಿ ಸೇರಿ ಮೂವರು ಆರೋಪಿಗಳು ವಾಟರ್ ಮೀಟರ್ ಪರಿಶೀಲನೆಗೆ ಬಂದಿದ್ದು, ವಾಟರ್ ಟ್ಯಾಂಕ್ ಅನ್ನು ತೋರಿಸುವಂತೆ ಕೇಳಿದ್ದಾರೆ. ನಂತರ ಆರೋಪಿಗಳಿಬ್ಬರು ಮನೆಯ ಮೇಲೆ ತೆರಳಿ ಟ್ಯಾಂಕ್ ಪರಿಶೀಲನೆಗೆ ತೊಡಗಿದ್ದು, ಮತ್ತೊಬ್ಬ ಮನೆಯೊಳಗೆ ತೆರಳಿ ಕೊಠಡಿ ಯಲ್ಲಿದ್ದ ರೂ 50,000 ನಗದು ಹಾಗೂ 180 ಗ್ರಾಂ ತೂಕದ ಚಿನ್ನಾಭರಣಗಳನ್ನು ಕಳವು ಮಾಡಿ ಪರಾರಿಯಾಗಿದ್ದ.

ಪ್ರಕರಣ ದಾಖಲಿಸಿಕೊಂಡ ಮಂಡ್ಯ ಪೂರ್ವ ಠಾಣೆ ಪೊಲೀಸರು ತನಿಖೆ ನಡೆಸಿದ ವೇಳೆ ಕಳ್ಳತನ ಮಾಡಿರುವ ಬಗ್ಗೆ ಒಪ್ಪಿಕೊಂಡಿದ್ದಾನೆ. ಆರೋಪಿಗಳ ಪತ್ತೆ ಹಚ್ಚಲು ಮಂಡ್ಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿ.ಇ.ತಿಮ್ಮಯ್ಯ, ಗಂಗಾಧರಸ್ವಾಮಿ ಹಾಗೂ ಮಂಡ್ಯ ಉಪವಿಭಾಗದ ಡಿವೈಎಸ್‌ಪಿ ಎಲ್.ಕೆ.ರಮೇಶ ರವರ ಮಾರ್ಗದರ್ಶನದಲ್ಲಿ ಮಂಡ್ಯ ನಗರ ವೃತ್ತದ ಜಾಯ್ ಅಂತೋನಿ ನೇತೃತ್ವದಲ್ಲಿ, ಪೂರ್ವ ಪೊಲೀಸ್ ಠಾಣಾ ಪಿಎಸ್‌ಐ ಶೇಷಾದ್ರಿಕುಮಾರ್ ಹಾಗೂ ಸಿಬ್ಬಂದಿಗಳಾದ ಲಿಂಗರಾಜು.ಟಿ, ಮಹೇಶ್, ಅನಿಲ್ ಕುಮಾರ್, ಉಮರ್ ಅಹಮದ್ ಫಾರೂಖಿ, ಮಂಜುನಾಥ.ಬಿ.ಎನ್, ಶ್ರೀನಿವಾಸ.ಹೆಚ್.ಸಿ, ಆನಂದ.ಜಿ.ಆರ್, ಮಹೇಶ್ ಕುಮಾರ್, ದಕ್ಷಿಣಮೂರ್ತಿ ಹಾಗೂ ಸಿಡಿಆರ್ ವಿಭಾಗದ ಸಿಬ್ಬಂದಿಗಳಾದ ರವಿಕಿರಣ್, ಲೋಕೇಶ್ ಮತ್ತು ಚಾಲಕರಾದ ರಾಜೇಶ್, ಕೃಷ್ಣರವರನ್ನೊಳಗೊಂಡಂತೆ ತಂಡ ರಚಿಸಿ ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದು, ಉಳಿದ ಇಬ್ಬರು ಆರೋಪಿಗಳಿಗಾಗಿ ಶೋಧ ನಡೆಸಿದ್ದಾರೆ.

ಆರೋಪಿಯ ವಿರುದ್ಧ ರಾಜಸ್ಥಾನ, ಜೋಧ್‌ಪುರ್, ಬಾಂಬೆ ರಾಜ್ಯಗಳಲ್ಲಿ ಪ್ರಕರಣಗಳು ದಾಖಲಾಗಿರುತ್ತವೆ.

ಇಂದು ವಿದ್ಯುತ್ ವ್ಯತ್ಯಯ

ಹಲಗೂರು: ಸಮೀಪದ ಗುಂಡಾಪುರ ಗೇಟ್ ಬಳಿ ಇರುವ 66/11ಕೆ.ವಿ. ಸಾಮರ್ಥ್ಯದ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಮಂಗಳವಾರ ಮೂರನೇ ತ್ರೈಮಾಸಿಕ ನಿರ್ವಹಣಾ ಕಾರ್ಯ ನಡೆಯುವುದರಿಂದ ದಿನಾಂಕ 20.08.2024 ರಂದು ಬೆಳಿಗ್ಗೆ 9 ರಿಂದ ಸಂಜೆ 5 ರವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಸಹಕರಿಸಬೇಕೆಂದು ಕಿರಿಯ ಇಂಜಿನಿಯರ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇ ಪುಟದಿಂದ

ಈಗ ನನ್ನ ರಾಜೀನಾಮೆ ಕೇಳುತ್ತಿದ್ದಾರೆ...

ರಾಜೀನಾಮೆ ನೀಡಿರಲಿಲ್ಲ ಎಂದರು. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಪರ ಮಾತನಾಡುತ್ತಿರುವ ಆರ್.ಅಶೋಕ್ ಸೇರಿದಂತೆ ಬಿಜೆಪಿ ನಾಯಕರಿಗೆ 2011 ರಲ್ಲಿ ರಾಜ್ಯಪಾಲ ಹಂಸರಾಜ ಭಾರದ್ವಾಜ ಅವರ ಅವಹೇಳನ ಮಾಡಿದ್ದು ಮರೆತಂತಿದೆ, ಕಾಂಗ್ರೆಸ್ ಕಾರ್ಯಕರ್ತರು ಶಾಂತಿಯುತ ಪ್ರತಿಭಟನೆ ನಡೆಸುತ್ತಿರುವುದನ್ನು ಪ್ರಶ್ನಿಸುತ್ತಿದ್ದಾರೆ. ಅಂದು ರಾಜ್ಯಪಾಲರ ನಡೆ ವಿರೋಧಿಸಿ ಕರ್ನಾಟಕ ಬಂದ್‌ಗೆ ಕರೆ ನೀಡಿದ್ದು ಮರೆತು ಹೋಗಿದೆಯೇ ಎಂದಿದ್ದಾರೆ.

ಆರ್.ಅಶೋಕ್ ತಮ್ಮ ಅಜ್ಞಾನ ಪ್ರದರ್ಶಿಸಿದ್ದಾರೆ. ಬೇಕಾಬಿಟ್ಟಿ ಹೇಳಿಕೆ ನೀಡುವ ಮೊದಲು ವಾಸ್ತವಾಂಶ ಪರಿಶೀಲಿಸಿ ಮಾತನಾಡಬೇಕು. ಈಗ ಯಾವ ನಾಲಗೆಯಲ್ಲಿ ನನ್ನ ರಾಜೀನಾಮೆ ಕೇಳುತ್ತಿದ್ದೀರಿ. ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ನೇತೃತ್ವದ ಲೋಕಾಯುಕ್ತ, ಅಕ್ರಮ ಗಣಿಗಾರಿಕೆ ಪ್ರಕರಣ ಕುರಿತ ತನಿಖಾ ವರದಿಯನ್ನು ರಾಜ್ಯ ಸರ್ಕಾರ ಮತ್ತು ರಾಜ್ಯಪಾಲರಿಗೆ ಸಲ್ಲಿಸಿದ ನಂತರ ಆಗಸ್ಟ್ 4ರ 2011ರಲ್ಲಿ ಯಡಿಯೂರಪ್ಪ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು ಎಂಬುದನ್ನು ಮರೆತಿದ್ದೀರಾ.

ಅಶೋಕ್ ಅವರೇ, ಹಳೆಯದ್ದನ್ನೆಲ್ಲವನ್ನೂ ನೆನಪಿಸಿಕೊಳ್ಳಿ, ಆಗ ನೀವೆಲ್ಲರೂ ಸೇರಿ ಯಡಿಯೂರಪ್ಪ ವಿರುದ್ಧವೇ ಏನೆಲ್ಲ ಕುತಂತ್ರ ಮಾಡಿದ್ದೀರಿ ಎನ್ನುವುದೂ ನೆನಪಾಗಬಹುದು. ರಾಜ್ಯಪಾಲ ಹಂಸರಾಜ ಭಾರದ್ವಾಜ ಅವರ ಪ್ರಾಸಿಕ್ಯೂಷನ್ ನಿರ್ಧಾರ ನ್ಯಾಯಯುತವಾಗಿತ್ತು ಎಂಬುದಾಗಿ ಲೋಕಾಯುಕ್ತ ಸಂತೋಷ್ ಹೆಗ್ಡೆ ಅವರೇ ದೃಢೀಕರಿಸಿರಲಿಲ್ಲವೇ, ಆಗ ಒಂದಲ್ಲ, ಎರಡಲ್ಲ ಹದಿನೈದು ಡಿ–ನೋಟಿಫಿಕೇಷನ್ ಹಗರಣಗಳ ತನಿಖೆಗೆ ಅನುಮತಿ ನೀಡಿದ್ದರು, ಹೆಚ್ಚಿನ ಮಾಹಿತಿಗೆ ನ್ಯಾ.ಹೆಗ್ಡೆ ನೀಡಿದ್ದ ಅಕ್ರಮ ಗಣಿಗಾರಿಕೆಯ ತನಿಖಾ ವರದಿ ಓದಿಕೊಳ್ಳಿ ಎಂದು ಮುಖ್ಯಮಂತ್ರಿ ತಿರುಗೇಟು ನೀಡಿದ್ದಾರೆ.

ಕಾಂಗ್ರೆಸ್; ಬಿಜೆಪಿ–ಜೆಡಿಎಸ್ ಹೋರಾಟ

ವರ್ತಿಸುತ್ತಿರುವ ಈ ರಾಜ್ಯಪಾಲರು ನಮಗೆ ಬೇಕಿಲ್ಲ, ಏನೂ ತಪ್ಪು ಮಾಡದ ಮುಖ್ಯಮಂತ್ರಿ ವಿರುದ್ಧ ತನಿಖೆಗೆ ಆದೇಶಿಸಿರುವುದು ಎಷ್ಟರ ಮಟ್ಟಿಗೆ ಸರಿ.

ತಮ್ಮ ವಿರುದ್ಧ ದೂರು ಬಂದಾಕ್ಷಣ ನ್ಯಾಯಾಂಗ ತನಿಖೆಗೆ ಮುಖ್ಯಮಂತ್ರಿ ಅವರು ಆದೇಶ ಮಾಡಿದ್ದಾರೆ, ಇದರ ನಡುವೆ ಮೈಸೂರು ಲೋಕಾಯುಕ್ತದಲ್ಲೂ ತನಿಖೆ ನಡೆಯುತ್ತಿದೆ. ಇಷ್ಟೆಲ್ಲಾ ಇದ್ದರೂ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಬೇಕೆಂಬ ಏಕೈಕ ಉದ್ದೇಶದಿಂದ ಮುಖ್ಯಮಂತ್ರಿ ಅವರ ವಿರುದ್ಧ ತನಿಖೆಗೆ ಆದೇಶ ಮಾಡಿದ್ದಾರೆ.

ಇವರ ಷಡ್ಯಂತ್ರಕ್ಕೆ ನಾವು ಬಗ್ಗುವುದಿಲ್ಲ, ಕೇಂದ್ರ ಸರ್ಕಾರದ ಸವಾಲನ್ನು ಎದುರಿಸುತ್ತೇವೆ ಎಂದು ಹೇಳಿದ್ದಲ್ಲದೆ, ರಾಜ್ಯಪಾಲರು ಮತ್ತು ಎನ್‌ಡಿಎ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

ಮತ್ತೊಂದೆಡೆ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ್ ನೇತೃತ್ವದಲ್ಲಿ ಪ್ರತಿಭಟನೆ ನಡೆದು, ಪ್ರತಿಭಟನಾಕಾರರು ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ವಿಜಯೇಂದ್ರ ಮಾತನಾಡಿ, ಬಿಜೆಪಿ–ಜೆಡಿಎಸ್ ಒಂದಾಗಿ ರಾಜ್ಯದಲ್ಲಿನ ಭ್ರಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ ನಡೆಸುತ್ತಿವೆ. ಹೋರಾಟ ತಾರ್ಕಿಕ ಅಂತ್ಯಕ್ಕೆ ಬಂದಿದೆ. ಮುಖ್ಯಮಂತ್ರಿ ವಿರುದ್ಧ ಅನೇಕ ಭ್ರಷ್ಟಾಚಾರ ಹಗರಣದ ಆರೋಪಗಳು ಕೇಳಿ ಬಂದಿವೆ ಎಂದರು.

ಮುಖ್ಯಮಂತ್ರಿ ವಿರುದ್ಧ ಸಾಕಷ್ಟು ದಾಖಲೆಗಳನ್ನು ಸಲ್ಲಿಸಿದ ನಂತರವೇ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದಾರೆ. ಸಿದ್ದರಾಮಯ್ಯ ರಾಜೀನಾಮೆ ಕೊಡದೆ, ಬೆಂಬಲಿಗರು ಹಾಗೂ ಹೈಕಮಾಂಡ್ ಜೊತೆ ಸೇರಿ ಗೂಂಡಾಗಿರಿ ಮಾಡುತ್ತಿದ್ದಾರೆ. ರಾಜ್ಯಪಾಲರ ಮೇಲೆ ದಬ್ಬಾಳಿಕೆ ಮಾಡುವುದನ್ನು ಬಿಟ್ಟು, ಮುಖ್ಯಮಂತ್ರಿ ಸ್ಥಾನಕ್ಕೆ ಕೂಡಲೇ ರಾಜೀನಾಮೆ ನೀಡಬೇಕು. ತಮ್ಮ ಬೆಂಬಲಕ್ಕೆ ಸಚಿವರು, ಶಾಸಕರು ನಿಲ್ಲುತ್ತಾರೆ ಎಂಬ ಭಂಡತನ ಬಿಟ್ಟು ರಾಜೀನಾಮೆ ಕೊಡಿ ಎಂದು ಒತ್ತಾಯಿಸಿದರು. ಸಿದ್ದರಾಮಯ್ಯ ನ್ಯಾಯಾಲಯದಲ್ಲಿ ಹೋರಾಟ ಮಾಡಲಿ, ಬೇಡ ಎನ್ನುವುದಿಲ್ಲ. ಕಾನೂನಾತ್ಮಕವಾಗಿ ಏನೇ ಹೋರಾಟ ಮಾಡಿ, ಆದರೆ, ಮೊದಲು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಡಿ. ನಿಮ್ಮ ಸಾಮಾಜಿಕ ನ್ಯಾಯದ ಮುಖವಾಡ ಕಳಚಿರುವುದನ್ನು ರಾಜ್ಯದ ಜನ ನೋಡುತ್ತಿದ್ದಾರೆ ಎಂದರು.

ಚುನಾವಣೆಗೆ ಎನ್‌ಸಿ ಪ್ರಣಾಳಿಕೆ ಬಿಡುಗಡೆ

ಜೂನ್ 2000ರಲ್ಲಿ, ಫಾರೂಕ್ ಅಬ್ದುಲ್ಲಾ ನೇತೃತ್ವದ ನ್ಯಾಷನಲ್ ಕಾನ್ಫರೆನ್ಸ್ ಸರ್ಕಾರವು ರಾಜ್ಯದಲ್ಲಿ 1953ರ ಹಿಂದಿನ ಸಾಂವಿಧಾನಿಕ ಸ್ಥಾನಮಾನವನ್ನು ಪುನಃಸ್ಥಾಪಿಸಲು ವಿಧಾನಸಭೆಯಲ್ಲಿ ನಿರ್ಣಯ ಅಂಗೀಕರಿಸಿತು. ಆದರೆ, ಆಗಿನ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ನೇತೃತ್ವದ ಕೇಂದ್ರ ಸಚಿವ ಸಂಪುಟ ಇದನ್ನು ತಿರಸ್ಕರಿಸಿತ್ತು. ಮೋದಿ ಸರ್ಕಾರವು 2019 ರಲ್ಲಿ ಜಮ್ಮು ಮತ್ತು ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ಕಲ್ಪಿಸುವ 370ನೇ ವಿಧಿಯನ್ನು ರದ್ದುಗೊಳಿಸಿತು ಮತ್ತು ಕಣಿವೆ ರಾಜ್ಯವನ್ನು ಜಮ್ಮು ಮತ್ತು ಕಾಶ್ಮೀರ ಹಾಗೂ ಲಡಾಖ್ ಎಂದು ಎರಡು ಕೇಂದ್ರಾಡಳಿತ ಪ್ರದೇಶಗಳಾಗಿ ವಿಭಜಿಸಿತು. ಈಗ ಕೇಂದ್ರಾಡಳಿತ ಪ್ರದೇಶದ ವಿಧಾನಸಭೆ ಚುನಾವಣೆ ಘೋಷಣೆಯಾಗಿದ್ದು, ಎನ್‌ಸಿ ಇಂದು ತನ್ನ ಚುನಾವಣಾ ಪ್ರಣಾಳಿಕೆ ಬಿಡುಗಡೆ ಮಾಡಿದೆ.

ಬಾಂಗ್ಲಾ ಪ್ರಧಾನಿಗೆ ಆದ ಗತಿಯೇ ನಿಮಗೂ

ರಾಜ್ಯಪಾಲ ಗೆಹ್ಲೋಟ್‌'ಗೆ ಕಾಂಗ್ರೆಸ್ MLC ಐವನ್ ಡಿಸೋಜಾ ಎಚ್ಚರಿಕೆ!



ಡಿಸೋಜಾ

ಮಂಗಳೂರು: ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲ ತಾವರ್ ಚಂದ್ ಗೆಹ್ಲೋಟ್ ವಿರುದ್ಧ ಸೋಮವಾರ ಮಂಗಳೂರಿನಲ್ಲಿ ಕಾಂಗ್ರೆಸ್ MLC ಐವನ್ ಡಿಸೋಜಾ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿತು.

ಈ ವೇಳೆ ಐವನ್ ಡಿಸೋಜಾ, ಬಾಂಗ್ಲಾ ದೇಶದ ಹಿಂದಿನ ಪ್ರಧಾನಿಗೆ ಆದ ಗತಿಯೇ ನಿಮಗೂ ಆಗುತ್ತದೆ. ನೀವು ರಾಜ್ಯ ಬಿಟ್ಟು ಪಲಾಯನ ಮಾಡಬೇಕಾಗುತ್ತದೆ ಎಂದು ರಾಜ್ಯಪಾಲ ತಾವರ್‌ಚಂದ್ ಗೆಹ್ಲೋಟ್ ಅವರನ್ನು ಎಚ್ಚರಿಸುವ ಮೂಲಕ ವಿವಾದವನ್ನು ಹುಟ್ಟುಹಾಕಿದ್ದಾರೆ.



ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಕಾನೂನು ಕ್ರಮ ಜರುಗಿಸಲು ತಾವರ್‌ಚಂದ್ ಗೆಹ್ಲೋಟ್ ಒಪ್ಪಿಗೆ ಸೂಚಿಸಿದ್ದನ್ನು ವಿರೋಧಿಸಿ ದಕ್ಷಿಣ ಕನ್ನಡ ಜಿಲ್ಲಾ ಕಾಂಗ್ರೆಸ್ ಕರೆ ನೀಡಿರುವ ಪ್ರತಿಭಟನೆಯಲ್ಲಿ ಐವಾನ್, ರಾಜ್ಯಪಾಲ ತಾವರ್ ಚಂದ್ ಗೆಹ್ಲೋಟ್ ಅವರನ್ನು ರಾಷ್ಟ್ರಪತಿಗಳು ವಾಪಸ್ ಕರೆಸಬೇಕು ಇಲ್ಲವಾದಲ್ಲಿ ಬಾಂಗ್ಲಾ ಪ್ರಧಾನಿಗೆ ಆದಂತೆ ರಾಜ್ಯಪಾಲರಿಗೂ ಆಗುತ್ತದೆ ಎಂದು ಹೇಳಿದ್ದಾರೆ. ರಾಜಭವನ ಚಲೋ ಆಂದೋಲನ ನಡೆಸುವುದು ನಮ್ಮ ಮುಂದಿನ ಹೆಜ್ಜೆ. ರಾಜ್ಯಪಾಲರು ಬಿಜೆಪಿಯ ಕೈಗೊಂಬೆಯಾಗಿದ್ದಾರೆ. ರಾಜ್ಯಪಾಲರು ಕೂಡಲೇ ಸಿಎಂ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಹಿಂಪಡೆಯಬೇಕು. ಇಲ್ಲದಿದ್ದರೆ ರಾಜ್ಯಪಾಲರ ಕಚೇರಿಯನ್ನು ವಶಪಡಿಸಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು. ಇನ್ನು ವಿವಾದಾತ್ಮಕ ಹೇಳಿಕೆ ಹಿನ್ನೆಲೆಯಲ್ಲಿ ಐವನ್ ಡಿಸೋಜಾ ವಿರುದ್ಧ ಸ್ವಯಂ ಪ್ರೇರಿತ ಪ್ರಕರಣ ದಾಖಲಿಸುವಂತೆ ದಕ್ಷಿಣ ಕನ್ನಡ ಜಿಲ್ಲಾ ಬಿಜೆಪಿ ಪೊಲೀಸರಿಗೆ ಒತ್ತಾಯಿಸಿದೆ. ಪ್ರತಿಭಟನೆ ಹಿಂಸಾಚಾರಕ್ಕೆ ತಿರುಗಿದ್ದು, ಸೋಮವಾರ ಪ್ರತಿಭಟನಾಕಾರರು ವಾಹನಗಳ ಮೇಲೆ ಕಲ್ಲು ತೂರಾಟ ನಡೆಸಿದ್ದಾರೆ. ರಸ್ತೆ ಮಧ್ಯೆ ಟೈರ್ ಸುಟ್ಟು ರಸ್ತೆ ತಡೆ ನಡೆಸಿದರು. ಪ್ರತಿಭಟನೆ ಹಿನ್ನೆಲೆಯಲ್ಲಿ ಮಂಗಳೂರು ನಗರ ಪೊಲೀಸರು ಹಲವು ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಮುಖಂಡರನ್ನು ಬಂಧಿಸಿದ್ದಾರೆ. ಖಾಸಗಿ ಬಸ್‌ಗೆ ಕಲ್ಲು ತೂರಾಟ ನಡೆಸಿ ಗಾಜು ಪುಡಿ ಮಾಡಿದ್ದ ಕಾಂಗ್ರೆಸ್ ಕಾರ್ಯಕರ್ತರನ್ನೂ ಬಂಧಿಸಲಾಗಿದೆ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸಿ, 'ಮಿಸ್ಟರ್ ಕ್ಲೀನ್ ಸಿಎಂ' ಖ್ಯಾತಿಗೆ ಮಸಿ ಬಳಿಯುವ ಬಿಜೆಪಿಯ ಕುತಂತ್ರ ಇದಾಗಿದ್ದು, ಮತ್ತೆ ಅಧಿಕಾರಕ್ಕೆ ಬರುವ ಹಗಲುಗನಸು ಕಾಣುತ್ತಿದೆ ಎಂದು ಕಾಂಗ್ರೆಸ್ ಮುಖಂಡರು ಆರೋಪಿಸಿದ್ದಾರೆ.

ನವರಂಗಿ ನಕಲಿ ಸ್ವಾಮಿ ವಿರುದ್ಧ ರಾಜ್ಯಪಾಲರ ಕ್ರಮ ಏಕಿಲ್ಲ

ಕೇಂದ್ರ ಸಚಿವ ಕುಮಾರಸ್ವಾಮಿ ವಿರುದ್ಧ ಡಿಸಿಎಂ ಡಿ.ಕೆ.ಶಿವಕುಮಾರ್ ವಾಗ್ದಾಳಿ

ಬೆಂಗಳೂರು: ಜೆಡಿಎಸ್‌ನ ಅಗ್ರಗಣ್ಯ ನಾಯಕ, ನವರಂಗಿ ನಕಲಿ ಸ್ವಾಮಿ, ಬರೀ ಬುರುಡೆ ಬಿಡುವ ಕುಮಾರಸ್ವಾಮಿ ವಿರುದ್ಧ ಇಲ್ಲದ ಕ್ರಮ ನಮ್ಮ ವಿರುದ್ಧವೇಕೆ ರಾಜ್ಯಪಾಲರೇ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಗುಡುಗಿದರು.


ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಮುಂದಿನ 10 ವರ್ಷಗಳ ಕಾಲ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿರುತ್ತದೆ. ನಿಮ್ಮ ಯಾವ ಹುನ್ನಾರಗಳಿಗೂ ನಮ್ಮ ಸರ್ಕಾರ ಜಗ್ಗುವುದಿಲ್ಲ, ಬಗ್ಗುವುದಿಲ್ಲ, ಹೆದರುವುದಿಲ್ಲ ಎಂದರು.



ಕುಮಾರಸ್ವಾಮಿ ಅವರು ಮುಖ್ಯಮಂತ್ರಿಗಳಾಗಿದ್ದಾಗ ಅಧಿಕಾರ ದುರುಪಯೋಗ ಮಾಡಿಕೊಂಡಿದ್ದಾರೆ. ಶಶಿಕಲಾ ಜೊಲ್ಲೆ, ಮುರುಗೇಶ್ ನಿರಾಣಿ, ಜನಾರ್ಧನ ರೆಡ್ಡಿ ಅವರ ಮೇಲೂ ಲೋಕಾಯುಕ್ತ ಸಂಸ್ಥೆ ತನಿಖೆ ನಡೆಸಿ ಕಳಂಕಿತರ ವಿರುದ್ಧ ವಿಚಾರಣೆಗೆ ಅನುಮತಿ ನೀಡಬೇಕು ಎಂದು ಮನವಿ ಮಾಡಿದರೂ ಏಕೆ ಪುರಸ್ಕರಿಸಿಲ್ಲ ರಾಜ್ಯಪಾಲರೇ ಎಂದು ಪ್ರಶ್ನಿಸಿದರು.

ವಿರೋಧ ಪಕ್ಷದವರು ಹತ್ತು ಜನ್ಮ ಎತ್ತಿದರೂ ಕಾಂಗ್ರೆಸ್ ಸರ್ಕಾರ ಬೀಳಿಸಲು ಸಾಧ್ಯವಿಲ್ಲ. ಮುಖ್ಯಮಂತ್ರಿ ರಾಜೀನಾಮೆ ಕೊಡುವ ಪ್ರಶ್ನೆಯೇ ಉದ್ಭವಿಸುವುದಿಲ್ಲ. ಮಂತ್ರದಿಂದ ಮಾವಿನಕಾಯಿ ಉದುರಿಸಲು ಸಾಧ್ಯವಿಲ್ಲ. ಸಿದ್ದರಾಮಯ್ಯ ಅವರ ಪರವಾಗಿ ಡಿ.ಕೆ.ಶಿವಕುಮಾರ್ ಒಬ್ಬನೇ ಅಲ್ಲ ಇಂಡಿಯಾ ಒಕ್ಕೂಟ ಹಾಗೂ ರಾಜ್ಯದ ಎಲ್ಲಾ ಕಾಂಗ್ರೆಸ್ ಕಾರ್ಯಕರ್ತರು, ಕಟ್ಟ ಕಡೆಯ ಮತದಾರರು ಆಶೀರ್ವಾದ ಮಾಡಿ ಬೆನ್ನಲುಬಾಗಿ ನಿಂತಿದ್ದಾರೆ ಎಂದರು.

ರಾಜ್ಯದಲ್ಲಿ ಏನಾದರೂ ಗಲಾಟೆಯಾದರೆ ಅದಕ್ಕೆ ರಾಜ್ಯಪಾಲರೇ ಹೊಣೆ



ಜಮೀರ್

ಬೆಂಗಳೂರು: ರಾಜ್ಯದಲ್ಲಿ ಏನಾದರೂ ಗಲಾಟೆಯಾದರೆ ಅದಕ್ಕೆ ರಾಜ್ಯಪಾಲರೇ ಹೊಣೆಯಾಗುತ್ತಾರೆ ಎಂದು ವಸತಿ ಸಚಿವ ಜಮೀರ್ ಅಹ್ಮದ್ ಎಚ್ಚರಿಕೆ ನೀಡಿದ್ದಾರೆ. ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ವಿರೋಧಿಸಿ ಕಾಂಗ್ರೆಸ್ ರಾಜ್ಯದಾದ್ಯಂತ ಪ್ರತಿಭಟನೆ ಮಾಡುತ್ತಿದೆ. ಇಂದು ಫ್ರೀಡಂ ಪಾರ್ಕ್‌ನಲ್ಲಿ ನಡೆದ ಪ್ರತಿಭಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಜ್ಯಪಾಲರು ಸಂವಿಧಾನದ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟಿದ್ದಾರೆ. ಪ್ರಕರಣದಲ್ಲಿ ಮುಖ್ಯಮಂತ್ರಿಗಳ ಯಾವುದೇ ಪಾತ್ರವಿಲ್ಲ. ರಾಜ್ಯಪಾಲರ ಕಚೇರಿ ಬಿಜೆಪಿ ಕಚೇರಿಯಾಗಿ ಮಾಡಿಕೊಂಡಿದ್ದಾರೆ ಎಂದು ದೂರಿದ್ದಾರೆ. ಬಿಜೆಪಿ ಕಾಲದಲ್ಲಿಯೇ 14 ಸೈಟ್ ನೀಡಲಾಗಿದೆ. ಸಿಎಂ ಪ್ರಸಿದ್ಧಿಯನ್ನು ಸಹಿಸಲು ಆಗದೇ, ಸರ್ಕಾರ ಉರುಳಿಸುವ ಯತ್ನ ಮಾಡುತ್ತಿದ್ದಾರೆ. ಬಿಜೆಪಿಯವರಿಗೆ ಜನ ಯಾವತ್ತೂ ಬಹುಮತ ಕೊಟ್ಟಿಲ್ಲ ಎಂದು ವಾಗ್ದಾಳಿ ನಡೆಸಿದರು.

ಸಿಎಂ ಸಿದ್ದರಾಮಯ್ಯಗೆ ಪ್ರಾಸಿಕ್ಯೂಷನ್ ಸಂಕಷ್ಟ ತಂದಿಟ್ಟ ಪ್ರದೀಪ್‌ಕುಮಾರ್‌ಗೆ ಬೆದರಿಕೆ!

ಬೆಂಗಳೂರು, ಆ.19– ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡ) ಹಗರಣದ ಕುರಿತು ಕೆಲವು ದಾಖಲೆಗಳ ಸಮೇತ ರಾಜ್ಯಪಾಲರಿಗೆ ದೂರು ಕೊಟ್ಟು ಪ್ರಾಸಿಕ್ಯೂಷನ್‌ಗೆ ಆದೇಶ ಹೊರಡಿಸಲು ಕಾರಣವಾದ ಪ್ರದೀಪ್‌ಕುಮಾರ್ ಅವರಿಗೆ ಪೊಲೀಸರು ಹಾಗೂ ಪತ್ರಕರ್ತರು ಎಂದೆಲ್ಲಾ ಹೇಳಿಕೊಂಡು ಅನಾಮಧೇಯ ಬೆದರಿಕೆ ಕರೆಗಳು ಬರುತ್ತಿವೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಿದ್ದ ವಕೀಲ ಪ್ರದೀಪ್ ಕುಮಾರ್ ಅವರಿಗೆ ಸಾಕಷ್ಟು ಬೆದರಿಕೆ ಕರೆಗಳು ಬರುತ್ತಿವೆ. ಪ್ರದೀಪ್ ಕುಮಾರ್ ದೂರು ಸೇರಿದಂತೆ ಮೂವರ ದೂರನ್ನು ಆಧರಿಸಿ ರಾಜ್ಯಪಾಲರು ಸಿಎಂ ಮೇಲೆ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದರು. ಆದರೆ, ಈಗ ಸಿದ್ದರಾಮಯ್ಯ ವಿರುದ್ದ ದೂರು ನೀಡಿದ್ದ ಪ್ರದೀಪ್ ಕುಮಾರ್‌ಗೆ ಬೆದರಿಕೆ ಕರೆಗಳ ಕಾಟ ಶುರುವಾಗಿದೆ. ನಾವು ಪೋಲೀಸರು, ನಾವು ಪತ್ರಕರ್ತರು, ನಾವು ಅಧಿಕಾರಿಗಳು ಎಂದೆಲ್ಲಾ ಹೇಳಿಕೊಂಡು ನಾನಾ ಹೆಸರಿನಲ್ಲಿ ಅನಾಮಧೇಯ ಮೊಬೈಲ್ ಕರೆಗಳು ಬರುತ್ತಿವೆ. ಪ್ರದೀಪ್ ಕುಮಾರ್ ದೂರಿನಲ್ಲಿ ಉಲ್ಲೇಖ ಮಾಡಿದ್ದ ಮನೆಯ ವಿಳಾಸಕ್ಕೂ ಕೆಲವು ಪೊಲೀಸರು ಹೋಗಿದ್ದರಂತೆ. ಅನ್ನಪೂರ್ಣೇಶ್ವರಿ ಪೊಲೀಸ್ ಠಾಣೆಯ ಅಧಿಕಾರಿಗಳು ಎಂದು ಹೇಳಿಕೊಂಡು ಕೆಲವರು ಪ್ರದೀಪ್ ಕುಮಾರ್ ಅವರ ನಿವಾಸಕ್ಕೆ ಭೇಟಿ ಕೊಟ್ಟಿದ್ದಾರೆ. ಇನ್ನು ಅವರ ಮನೆಗೆ ಭೇಟಿ ನೀಡಿದ ಪೊಲೀಸರು ಮನೆಯ ವಿಳಾಸ ಕನ್ಫರ್ಮ್ ಮಾಡಿಕೊಳ್ಳಲು ಬಂದಿದ್ದೇವೆ ಎಂದು ಸಬೂಬು ಹೇಳಿ ಹೋಗಿದ್ದಾರಂತೆ. ಪತ್ರಕರ್ತ ಎಂಬ ಹೆಸರಿನಲ್ಲಿ ಮತ್ತೊಬ್ಬನಿಂದ ಕರೆ ಮಾಡಿದ್ದಾರೆ. ಜೊತೆಗೆ, ನಿಮ್ಮ ಮನೆಯ ವಿಳಾಸ ಕನ್ಫರ್ಮ್ ಆಗುತ್ತಿಲ್ಲ ಎಂದು ವಿಚಾರಣೆ ಮಾಡಿದ್ದಾರಂತೆ. ಹೀಗೆ, ಸಿಎಂ ವಿರುದ್ಧ ದೂರು ಕೊಟ್ಟ ಪ್ರದೀಪ್‌ಗೆ ಅನಾಮಿಕ ಬೆದರಿಕೆ ಕರೆಗಳು ಬರುತ್ತಿದ್ದು, ತಾನು ರೋಸಿ ಹೋಗಿದ್ದೇನೆ ಎಂದು ಮಾಧ್ಯಮಗಳ ಮುಂದೆ ತಮಗಾಗುತ್ತಿರುವ ತೊಂದರೆಯ ಬಗ್ಗೆ ಹೇಳಿಕೊಂಡಿದ್ದಾರೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆಯಲ್ಲಿ ಸಿಎಂ ಸಿದ್ದರಾಮಯ್ಯ ಕೂಡ ಹಗರಣ ಮಾಡಿದ್ದಾರೆಂದು ಆರೋಪ ಕೇಳಿಬಂದಿತ್ತು. ಇದನ್ನು ಸಿಎಂ ಸಿದ್ದರಾಮಯ್ಯ ಎಷ್ಟೇ ವಿರೋಧ ಮಾಡಿದರೂ, ಸಂಕಷ್ಟ ಕೊರಳಿಗೆ ಸುತ್ತಿಕೊಂಡೇ ಬಿಟ್ಟಿತು. ನಂತರ, ಮುಡಾ ಹಗರಣದ ಬಗ್ಗೆ ಸರ್ಕಾರದಿಂದ ನ್ಯಾಯಾಂಗ ತನಿಖೆಗೆ ಆದೇಶ ಹೊರಡಿಸಲಾಗಿದೆ. ಇದರಲ್ಲಿ ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಗಿಯಾಗಿದ್ದಾರೆ ಎಂಬ ಆರೋಪ ಇರುವ ಹಿನ್ನೆಲೆಯಲ್ಲಿ ಅವರ ವಿರುದ್ಧ ಕ್ರಮಕ್ಕೆ ಆಗ್ರಹಿಸಿ, ಅಬ್ರಾಹಂ, ಪ್ರದೀಪ್ ಕುಮಾರ್ ಹಾಗೂ ಸ್ನೇಹಮಯಿ ಕೃಷ್ಣ ದೂರು ನೀಡಿದ್ದಾರೆ. ಈ ಮೂವರೂ ರಾಜ್ಯಪಾಲರಾದ ಥಾವರ ಚಂದ್ ಗೆಹ್ಲೋಟ್ ಅವರಿಗೆ ಕೆಲವು ದಾಖಲೆಗಳ ಸಮೇತ ದೂರನ್ನು ನೀಡಿದ್ದ ಹಿನ್ನೆಲೆಯಲ್ಲಿ ಪ್ರಾಸಿಕ್ಯೂಷನ್ ನೀಡಲು ರಾಜ್ಯಪಾಲರು ಶೋಕಾಸ್ ನೋಟೀಸ್ ಜಾರಿ ಮಾಡಿದ್ದರು.

ಜಿಲ್ಲಾ ಮಟ್ಟದ ಅಂತರ ಪ್ರೌಢಶಾಲಾ ಕನ್ನಡ ಚರ್ಚಾ ಸ್ಪರ್ಧೆ

ಮೈಸೂರು, ಆ.19(ಎಂಕೆ)– ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಐಡಿಯಲ್ ಜಾವಾ ರೋಟರಿ ಕೇಂದ್ರದಲ್ಲಿ ಆ.25ರ ಬೆಳಗ್ಗೆ 10 ಗಂಟೆಗೆ ದಿನೇಶ್ ಕೋಚಿಂಗ್ ಸೆಂಟರ್ ವತಿಯಿಂದ ಜಿಲ್ಲಾ ಮಟ್ಟದ ಅಂತರ ಪ್ರೌಢಶಾಲಾ ಕನ್ನಡ ಚರ್ಚಾಸ್ಪರ್ಧೆಯನ್ನು ಏರ್ಪಡಿಸಲಾಗಿದೆ.

ಸಾಮಾಜಿಕ ಜಾಲತಾಣಗಳು ವಾಸ್ತವದಲ್ಲಿ ಜನರನ್ನು ಸಮಾಜದಿಂದ ದೂರು ಮಾಡುತ್ತಿವೆ ಎಂಬ ವಿಷಯದ ಕುರಿತು ನಡೆಯುವ ಚರ್ಚಾಸ್ಪರ್ಧೆಯನ್ನು ಹಿರಿಯ ಪತ್ರಿಕಾ ಛಾಯಾಗ್ರಾಹಕ ಪ್ರಗತಿ ಗೋಪಾಲಕೃಷ್ಣ ಉದ್ಘಾಟಿಸಲಿದ್ದಾರೆ. ಚಾರ್ಟರ್ಡ್ ಅಕೌಟೆಂಟ್ ಎ.ವಿಶ್ವನಾಥ್ ವಿಷಯ ಸೂಚಿಸಲಿದ್ದು, ದಿನೇಶ್ ಕೋಚಿಂಗ್ ಸೆಂಟರ್‌ನ ಎನ್.ವಿ.ದಿನೇಶ್ ಉಪಸ್ಥಿತರಿರಲಿದ್ದಾರೆ. ಸ್ಪರ್ಧಾ ವಿಜೇತರಿಗೆ ಪ್ರಥಮ ಬಹುಮಾನ 5,000 ರೂ., ದ್ವಿತೀಯ ಬಹುಮಾನ 4,000 ರೂ., ತೃತೀಯ ಬಹುಮಾನ 3,000 ರೂ. ಹಾಗೂ ಎರಡು ತಂಡಕ್ಕೆ 1,000 ರೂ. ಸಮಾಧಾನಕರ (ಎರಡು) ಬಹುಮಾನ ನೀಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಪ್ರೊ ಮಹೇಶ್ ಚಂದ್ರ ಗುರು ನಿಧನಕ್ಕೆ ದಲಿತ ಮಹಾಸಭಾ ಸಂತಾಪ

ಮೈಸೂರು, ಆ. 19– ಪ್ರಗತಿ ಪರ ಚಿಂತಕ ಪ್ರೊ. ಮಹೇಶ್ ಚಂದ್ರ ಗುರು ಅವರ ನಿಧನಕ್ಕೆ ದಲಿತ ಮಹಾಸಭಾ ರಾಜ್ಯ ಸಮಿತಿ ಸೂಚಿಸಿದೆ.

ಈ ಸಂಬಂಧ ಪತ್ರಿಕಾ ಪ್ರಕಟಣೆ ನೀಡಿರುವ ದಲಿತ ಮಹಾಸಭಾ ರಾಜ್ಯ ಸಂಚಾಲಕ ಸುಂದರ್ ಹಣಕೊಳ ಅವರು, ಬಹು ಜನರ ಏಳಿಗೆಯನ್ನು ಸಹಿಸದ ವ್ಯವಸ್ಥೆ ವಿರುದ್ಧ ಸೆಡ್ಡು ಹೊಡೆದು ನಿಂತು, ತಮ್ಮ ವೈಚಾರಿಕ ಪ್ರಜ್ಞೆಯ ಮೂಲಕ ದಮನಿತರನ್ನು ಧರ್ಮಾಂಧರ ಕಪಿ ಮುಷ್ಠಿಯಿಂದ ಬಿಡಿಸಿ, ಬುದ್ಧನ ಸಚ್ಚಾರಿತ್ರ್ಯದ ಧರ್ಮದೆಡೆಗೆ ಕೊಂಡೊಯ್ಯುವ ಕೆಲಸವನ್ನು ಪ್ರೊ. ಮಹೇಶ್ ಚಂದ್ರ ಗುರು ನಿರಂತರವಾಗಿ ಮಾಡುತ್ತಲೇ ಬಂದಿದ್ದರು. ಅವರ ನಿಧನವು ನಮ್ಮಂತಹವರ ಎದೆಗಳಲ್ಲಿ ವಿಷಾದ ಆವರಿಸುವಂತೆ ಮಾಡಿದೆ ಎಂದಿದ್ದಾರೆ.



ಸ್ವಾತಂತ್ರ್ಯೋತ್ಸವ...

ಮೈಸೂರಿನ ವಿಜಯನಗರ 3ನೇ ಹಂತದಲ್ಲಿರುವ ವಿ.ಕೆ.ಪಬ್ಲಿಕ್ ಶಾಲೆಯಲ್ಲಿ ಬಹಳ ವಿಜೃಂಭಣೆಯಿಂದ ಸ್ವಾತಂತ್ರ್ಯ ದಿನ ಆಚರಿಸಲಾಯಿತು. ಶಾಸಕ ಜಿ.ಟಿ.ದೇವೇಗೌಡರು ಧ್ವಜಾರೋಹಣ ನೆರವೇರಿಸಿದರು. ಲಯನ್ಸ್ ಕ್ಲಬ್ ಆಫ್ ಮೈಸೂರು ಅಂಬಾಸಡರ್ ಹಾಗೂ ಅಧ್ಯಕ್ಷ ಶ್ರೀಧರ್, ಸಂಸ್ಥೆಯ ಅಧ್ಯಕ್ಷ ಎಮ್.ಟಿ. ಮಂಜುನಾಥ್, ಕಾರ್ಯದರ್ಶಿ ರವಿ ಕುಮಾರ್, ಆಡಳಿತಾಧಿಕಾರಿಗಳಾದ ರೂಪ ಪ್ರಭಾಕರ್, ಟ್ರಸ್ಟ್‌ನ ಸದಸ್ಯರು, ವಿಜಯಾಂಜಲಿ ಮಹಿಳಾ ಸಂಘದ ಸದಸ್ಯರು, ವಿಜಯನಗರ 3ನೇ ಹಂತದ ನಿವಾಸಿಗಳು, ಪೋಷಕರು, ಸಂಸ್ಥೆಯ ಬೋಧಕ-ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ನೆರೆದಿದ್ದರು.

ಸದ್ವಿವೇಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಸ್ವಾತಂತ್ರ್ಯ ದಿನಾಚರಣೆ



ಬಸವನಗುಡಿಯ ಸದ್ವಿವೇಕ ಸಾಮಾಜಿಕ, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ಅವರ ಸದ್ವಿವೇಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ 78ನೇ ಸ್ವಾತಂತ್ರ್ಯ ದಿನ ಆಚರಿಸಲಾಯಿತು. ಸದ್ವಿವೇಕ ಶಾಲೆಯ ಮುಖ್ಯಸ್ಥ ಮಂಜುನಾಥ್, ಶಾಲೆಯ ಟ್ರಸ್ಟಿಗಳಾದ ಸುಗುಣ, ಶಾಲೆಯ ಮುಖ್ಯೋಪಾಧ್ಯಾಯರಾದ ವಾಣಿ, ಯುವ ಉದ್ಯಮಿ ಎಂ.ಮೋನಿಕಾ, ಶಾಲಾ ಸಿಬ್ಬಂದಿ ವರ್ಗ ಹಾಜರಿದ್ದರು.



ಸ್ವಾತಂತ್ರ್ಯೋತ್ಸವ

ಮೈಸೂರಿನ ರಾಮಕೃಷ್ಣ ನಗರದಲ್ಲಿರುವ ಮಾಧವ ಉದ್ಯಾನವನದಲ್ಲಿ 78ನೇ ಸ್ವಾತಂತ್ರ್ಯ ದಿನ ಆಚರಿಸಲಾಯಿತು. ಈ ಸಂದರ್ಭದಲ್ಲಿ ಬಡಾವಣೆಯ ನಿವಾಸಿಗಳು ಉಪಸ್ಥಿತರಿದ್ದರು.

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ...



ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಆಶ್ರಯದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ರಾಜ್ಯದಲ್ಲಿ ಅತಿ ಹೆಚ್ಚಿನ ಅಂಕ ಗಳಿಸಿದ ಮೈಸೂರಿನ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಬೆಂಗಳೂರಿನಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಪುರಸ್ಕರಿಸಲಾಯಿತು. ಕಾರ್ಯಕ್ರಮವನ್ನು ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದ ಸ್ವಾಮಿ ನಿರ್ಭಯಾನಂದ ಸರಸ್ವತೀ ಉದ್ಘಾಟಿಸಿ, ಆಶೀರ್ವದಿಸಿದರು. ಮಹಾಸಭಾ ಅಧ್ಯಕ್ಷ ಅಶೋಕ ಹಾರನಹಳ್ಳಿ, ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಆಸುಗೋಡು ಜಯಸಿಂಹ, ಮಹಾಸಭಾ ಉಪಾಧ್ಯಕ್ಷರಾದ ಅರುಣ್ ಹಿರಿಯಣ್ಣ, ನಂ.ಶ್ರೀಕಂಠ ಕುಮಾರ್, ಸದಸ್ಯ ಶಂಕರನಾರಾಯಣ, ಸುನಿಲ್‌ಕುಮಾರ್, ಹರೀಶ್ ಉಪಸ್ಥಿತರಿದ್ದರು.

ದೇಶದ ವೈದ್ಯಕೀಯ ಸಂಸ್ಥೆಗಳ ಬಗ್ಗೆ ಮೆಡಿಕಲ್ ಆಡಿಟ್ ಮಾಡಿಸಬೇಕು

ಸರ್ಕಾರಕ್ಕೆ ಲೋಕಸಭಾ ಸದಸ್ಯ ಡಾ.ಸಿ.ಎನ್.ಮಂಜುನಾಥ್ ಆಗ್ರಹ

●ಕೊಲ್ಕತ್ತಾದಲ್ಲಿ ವೈದ್ಯೆ ಮೇಲಿನ ಅತ್ಯಾಚಾರ ಖಂಡನೀಯ ●ಇತ್ತೀಚಿನ ದಿನಗಳಲ್ಲಿ ಆಸ್ಪತ್ರೆಗಳಲ್ಲಿ ವೈದ್ಯರಿಗೆ ರಕ್ಷಣೆ ಇಲ್ಲ ●ಸರ್ಕಾರ ಆಸ್ಪತ್ರೆ ಕಟ್ಟುತ್ತದೆ, ಮಾನವ ಸಂಪನ್ಮೂಲ ನೀಡಲ್ಲ ●ನೀವು ಮತ್ತು ನಿಮ್ಮ ಮಕ್ಕಳು ಮೊಬೈಲ್ ಬಿಡಿ, ಪುಸ್ತಕ ಓದಿ



ಮೈಸೂರಿನ ಮಾನಸ ಗಂಗೋತ್ರಿಯ ವಿಜ್ಞಾನ ಭವನದಲ್ಲಿ ಸೋಮವಾರ ಮೈಸೂರು ವಿಶ್ವವಿದ್ಯಾನಿಲಯದ ಜೆನೆಟಿಕ್ಸ್ ಮತ್ತು ಜಿನೋಮಿಕ್ಸ್ ಅಧ್ಯಯನ ವಿಭಾಗದ ಅಧ್ಯಕ್ಷೆ ಡಾ.ಸುತ್ತೂರು ಎಸ್.ಮಾಲಿನಿ ಬರೆದಿರುವ ಪುರುಷರ ಲೈಂಗಿಕ ಆರೋಗ್ಯ ಮತ್ತು ಮಹಿಳೆಯರ ಲೈಂಗಿಕ ಆರೋಗ್ಯ ಪುಸ್ತಕವನ್ನು ಲೋಕಸಭಾ ಸದಸ್ಯ ಡಾ.ಸಿ.ಎನ್.ಮಂಜುನಾಥ್ ಬಿಡುಗಡೆ ಮಾಡಿದರು.

ಮೈಸೂರು, ಆ.19(ಬಿಎಲ್‌ಯು)- ಸರ್ಕಾರ, ದೇಶದಲ್ಲಿರುವ ಎಲ್ಲಾ ವೈದ್ಯಕೀಯ ಸಂಸ್ಥೆಗಳ ಮೆಡಿಕಲ್ ಆಡಿಟ್ ಮಾಡಲು ತುರ್ತು ಕ್ರಮ ಕೈಗೊಳ್ಳಬೇಕು ಎಂದು ಲೋಕಸಭಾ ಸದಸ್ಯರೂ ಆದ ಹೆಸರಾಂತ ಹೃದ್ರೋಗ ತಜ್ಞ ಡಾ.ಸಿ.ಎನ್. ಮಂಜುನಾಥ್ ಆಗ್ರಹಿಸಿದರು.

ಮೈಸೂರಿನ ಮಾನಸ ಗಂಗೋತ್ರಿಯ ವಿಜ್ಞಾನ ಭವನದಲ್ಲಿ ಇಂದು ಮೈಸೂರು ವಿಶ್ವವಿದ್ಯಾನಿಲಯದ ಜಿನೆಟಿಕ್ಸ್ ಮತ್ತು ಜಿನೋಮಿಕ್ಸ್ ಅಧ್ಯಯನ ವಿಭಾಗದ ಅಧ್ಯಕ್ಷೆ ಡಾ.ಸುತ್ತೂರು ಎಸ್.ಮಾಲಿನಿ ಬರೆದಿರುವ ಪುರುಷರ ಲೈಂಗಿಕ ಆರೋಗ್ಯ ಮತ್ತು ಮಹಿಳೆಯರ ಲೈಂಗಿಕ ಆರೋಗ್ಯ ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದ ಅವರು, ಕೊಲ್ಕತ್ತಾದಲ್ಲಿ ವೈದ್ಯೆ ಮೇಲೆ ಅತ್ಯಾಚಾರ ಎಸಗಿ, ಹತ್ಯೆ ಮಾಡಿರುವ ಪ್ರಕರಣವನ್ನು ತೀವ್ರವಾಗಿ ಖಂಡಿಸಿದ ಡಾ.ಮಂಜುನಾಥ್, ಮೃತ ವೈದ್ಯೆಯ ಶರೀರದ ತುಂಬೆಲ್ಲಾ ಗಾಯವಾಗಿದ್ದು, ಇದೊಂದು ಅಮಾನವೀಯ ಕೃತ್ಯ ಎಂದು ನೋವಿನಿಂದ ನುಡಿದರು.

ಆಸ್ಪತ್ರೆಗಳಲ್ಲಿ ವೈದ್ಯರಿಗೆ ಸೂಕ್ತ ರಕ್ಷಣೆ ಇಲ್ಲ ಎಂಬುದು ಇದರಿಂದ ಸ್ಪಷ್ಟವಾಗುತ್ತದೆ. ರೋಗಿ ಸಾವಿಗೆ ವೈದ್ಯರನ್ನೇ ಹೊಣೆಗಾರರನ್ನಾಗಿ ಮಾಡುವ ಸಂಬಂಧಿಕರು, ವೈದ್ಯರ ಮೇಲೆ ಹಲ್ಲೆ ನಡೆಸಿ, ಪೀಠೋಪಕರಣ ಧ್ವಂಸ ಮಾಡುವ ಕೃತ್ಯಗಳು ನಿರಂತರವಾಗಿ ನಡೆಯುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು.

ದೇಶದಲ್ಲಿ ಒಟ್ಟು 706 ವೈದ್ಯಕೀಯ ಸಂಸ್ಥೆಗಳಿವೆ. ಇದರಲ್ಲಿ 320 ಸರ್ಕಾರಿ ವೈದ್ಯಕೀಯ ಸಂಸ್ಥೆಗಳಾಗಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಶೇಕಡ 55 ಮಹಿಳಾ ವೈದ್ಯರು ಕಾರ್ಯನಿರ್ವಹಿಸುತ್ತಿದ್ದು, ಇವರಲ್ಲಿ ಶೇಕಡ 30 ರಷ್ಟು ಕಿರಿಯ ವೈದ್ಯರು. ಈ ಹಿನ್ನಲೆ ಕರ್ತವ್ಯನಿರತ ವೈದ್ಯರಿಗೆ ಪ್ರತ್ಯೇಕ ವಿಶ್ರಾಂತಿ ಕೊಠಡಿ, ಶೌಚಾಲಯ ಸೇರಿದಂತೆ ಇತರೆ ಸೌಲಭ್ಯ ಕಲ್ಪಿಸಬೇಕು. ಈ ಎಲ್ಲಾ ಸೌಲಭ್ಯಗಳನ್ನು ನಾನು ಜಯದೇವ ಆಸ್ಪತ್ರೆಯಲ್ಲಿ ಕಳೆದ ಹತ್ತು ವರ್ಷಗಳ ಹಿಂದೆಯೇ ಕಲ್ಪಿಸಿದ್ದೆ ಎಂದು ತಿಳಿಸಿದರು.

ಆಸ್ಪತ್ರೆಗಳಲ್ಲಿ ವೈದ್ಯರಿಗೆ ಸೂಕ್ತ ರಕ್ಷಣೆ ಸೇರಿದಂತೆ ಇತರೆ ಕ್ರಮ ಕೈಗೊಳ್ಳಲು ದೇಶದಲ್ಲಿರುವ ಎಲ್ಲಾ ವೈದ್ಯಕೀಯ ಸಂಸ್ಥೆಗಳ ಮೆಡಿಕಲ್ ಆಡಿಟ್ ಮಾಡುವ ತುರ್ತು ಅವಶ್ಯವಿದೆ ಎಂದು ಹೇಳಿದರು.

ಇಂದು ಒಬ್ಬ ವೈದ್ಯ 200 ರೋಗಿಗಳಿಗೆ ಚಿಕಿತ್ಸೆ ನೀಡಬೇಕಾದ ಪರಿಸ್ಥಿತಿ ಇದೆ. ಇದರಿಂದ ವೈದ್ಯರೇ ರೋಗಿಗಳಾಗುತ್ತಿದ್ದಾರೆ. ಈ ಕಾರಣಗಳಿಂದ 27 ವರ್ಷ ವಯಸ್ಸಿನ ಬಹಳಷ್ಟು ವೈದ್ಯರು ಹೃದಯಾಘಾತಕ್ಕೊಳಗಾಗುತ್ತಿದ್ದರೆ, ಇನ್ನು ಕೆಲವು ವೈದ್ಯರು ಮಾನಸಿಕ ಖಿನ್ನತೆಗೆ ಒಳಗಾಗುತ್ತಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

ಸರ್ಕಾರ ಸಾವಿರ ಕೋಟಿ ವೆಚ್ಚ ಮಾಡಿ ಆಸ್ಪತ್ರೆ ಕಟ್ಟಡ ನಿರ್ಮಾಣ ಮಾಡುತ್ತದೆ. ಆದರೆ 200 ಕೋಟಿ ವೆಚ್ಚ ಮಾಡಿ ಮಾನವ ಸಂಪನ್ಮೂಲ ಒದಗಿಸುವುದಿಲ್ಲ. ಕಟ್ಟಡ ನಿರ್ಮಾಣ ಮಾಡಲು ಇರುವ ಆಸಕ್ತಿ ವೈದ್ಯರು, ಶುಶ್ರೂಷಕರು ಸೇರಿದಂತೆ ಇತರೆ ನೌಕರರನ್ನು ನೇಮಕ ಮಾಡಿಕೊಳ್ಳಲು ಇರುವುದಿಲ್ಲ. ನೇಮಕಾತಿ ಸಂಬಂಧ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದರೆ ಇಷ್ಟು ಸಿಬ್ಬಂದಿಗಳ ಅವಶ್ಯವಿದೆಯೇ ಎಂದು ಅಧಿಕಾರಿಗಳು ಚೌಕಾಸಿ ಮಾಡುತ್ತಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಜಯದೇವ ಆಸ್ಪತ್ರೆ ನಿರ್ಮಾಣಕ್ಕೆ ಒಟ್ಟು 170 ಕೋಟಿ ವೆಚ್ಚವಾಯಿತು. 100 ಕೋಟಿ ಸರ್ಕಾರ ನೀಡಿದರೆ, ಉಳಿದ 70 ಕೋಟಿಯನ್ನು ಆಸ್ಪತ್ರೆಯ ಆಂತರಿಕ ಸಂಪನ್ಮೂಲದಿಂದ ಸಂಗ್ರಹಿಸಲಾಯಿತು. ಈಗ ಜಯದೇವ ಆಸ್ಪತ್ರೆಯಲ್ಲಿ 115 ನುರಿತ ಹೃದಯ ತಜ್ಞರಿದ್ದು, ಇಷ್ಟು ದೊಡ್ಡ ಪ್ರಮಾಣದ ನುರಿತ ತಜ್ಞರಿರುವ ದೇಶದ ಏಕೈಕ ಆಸ್ಪತ್ರೆಯಾಗಿದೆ ಎಂದು ಡಾ.ಮಂಜುನಾಥ್ ಹೇಳಿದರು.

ಕಟ್ಟಡ ನಿರ್ಮಾಣ, ಉಪಕರಣ ನೀಡುವುದು ದೊಡ್ಡದಲ್ಲ. ಇದರಿಂದ ಉತ್ತಮ ಚಿಕಿತ್ಸೆ ನೀಡುತ್ತಿದ್ದೇವೆ ಎಂಬ ಸರ್ಕಾರದ ಮನೋಭಾವ ಬದಲಾಗಬೇಕು. ಕಟ್ಟಡದಲ್ಲಿ ಕರ್ತವ್ಯ ನಿರ್ವಹಿಸುವ ಅವಶ್ಯ ಮಾನವ ಸಂಪನ್ಮೂಲ ಒದಗಿಸುವುದು ಸರ್ಕಾರದ ಆದ್ಯ ಕರ್ತವ್ಯವಾಗಿದೆ. ಅದೇನೆ ಇರಲಿ ಸರ್ಕಾರಿ ಆಸ್ಪತ್ರೆಯನ್ನು ಪಂಚತಾರ ಆಸ್ಪತ್ರೆಯನ್ನು ಮೀರಿಸುವ ಆಸ್ಪತ್ರೆಯಾಗಿ ಮಾಡುವಲ್ಲಿ ನಾನು ಮಾಡಿದ ಕಾರ್ಯಕ್ಕೆ ನನಗೆ ತೃಪ್ತಿ ಇದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಮೊಬೈಲ್ ಪ್ರಭಾವದಿಂದ ಇತ್ತೀಚೆಗೆ ಪುಸ್ತಕ ಓದುವವರ ಸಂಖ್ಯೆ ಕಡಿಮೆಯಾಗುತ್ತಿದೆ. ಇನ್ನಾದರೂ ಮೊಬೈಲ್ ಬಿಟ್ಟು ಪುಸ್ತಕ ಓದಿ ಜ್ಞಾನ ವೃದ್ಧಿಸಿಕೊಳ್ಳಬೇಕು, ಕೌಶಲ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಈ ವೇಳೆ ಡಾ.ಸುಕನ್ಯಾ ಸೂನಗಹಳ್ಳಿ ಸಂಪಾದಕತ್ವದ ಆಧುನಿಕ ಧನ್ವಂತರಿ ಎಂಬ ಪುಸ್ತಕವನ್ನು ಕೂಡ ಡಾ.ಮಂಜುನಾಥ್ ಬಿಡುಗಡೆ ಮಾಡಿದರು. ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್. ರಂಗಪ್ಪ, ಪ್ರಸರಾಂಗದ ನಿವೃತ್ತ ನಿರ್ದೇಶಕ ಪ್ರೊ.ಸಿ.ನಾಗಣ್ಣ, ಮೆಡಿವೇವ್ ಐವಿಎಫ್ ಮತ್ತು ಫಲವತ್ತತೆ ಸಂಶೋಧನಾ ಆಸ್ಪತ್ರೆ ನಿರ್ದೇಶಕ ಡಾ.ಸಿ.ಶರತ್‌ಕುಮಾರ್, ಲೇಖಕಿ ಡಾ.ಸುತ್ತೂರು ಎಸ್.ಮಾಲಿನಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಮಂತ್ರಿ ಕಾರು ಚಾಲಕ, ಮಸಾಜ್ ಮಾಡುವವನು ಅಧಿಕಾರಿ ಬದಲಾಯಿಸುತ್ತಾನೆ

ದೊಡ್ಡ ಮಂತ್ರಿಯೊಬ್ಬನ ಬಳಿ ಇರುವ ಕಾರು ಚಾಲಕ, ಅಡುಗೆ ಮಾಡುವ ವ್ಯಕ್ತಿ, ಮಸಾಜ್ ಮಾಡುವವನು ಸರ್ಕಾರದ ಒಬ್ಬ ಅಧಿಕಾರಿಯನ್ನು ವರ್ಗಾವಣೆ ಮಾಡಿಸುವಷ್ಟು ಪ್ರಭಾವಿಯಾಗಿರುತ್ತಾನೆ ಎಂದು ಲೋಕಸಭಾ ಸದಸ್ಯ ಡಾ.ಮಂಜುನಾಥ್ ಅಚ್ಚರಿ ವ್ಯಕ್ತಪಡಿಸಿದರು.

ಮಂತ್ರಿ ಜೊತೆಗಿರುವ ಇವರು ಆತನೊಂದಿಗೆ ಹೆಚ್ಚು ಒಡನಾಟ ಹೊಂದಿರುತ್ತಾರೆ. ಆ ವೇಳೆ ಅವರೇನೆ ಹೇಳಿದರೂ ದಾಕ್ಷಿಣ್ಯಕ್ಕೆ ಮಂತ್ರಿ ಕೇಳುತ್ತಾನೆ. ಈ ಪ್ರಭಾವದಿಂದ ಇವರು ಸರ್ಕಾರದ ಅಧಿಕಾರಿಯನ್ನು ಬದಲಾವಣೆ ಮಾಡುವಷ್ಟು ಪ್ರಭಾವ ಗಳಿಸಿಕೊಂಡಿರುತ್ತಾರೆ ಎಂದರು. ಇನ್ನು ವಿಧಾನ ಸೌಧ, ವಿಕಾಸಸೌಧ, ಎಂ.ಎಸ್.ಬಿಲ್ಡಿಂಗ್‌ನಲ್ಲಿರುವ ಅಧಿಕಾರಿಗಳು ತಾವೇ ದೊಡ್ಡವರು ಎಂದು ತಿಳಿದಿರುತ್ತಾರೆ. ಇವರಿಂದ ಸಮಸ್ಯೆ ಆಗುತ್ತದೆಯೇ ಹೊರತು, ಉಪಯೋಗವಾಗುವುದಿಲ್ಲ ಎಂದು ಹೇಳಿದರು.

ಸಚಿವ ಸಂಪುಟ ತೆಗೆದುಕೊಂಡ ನಿರ್ಧಾರವನ್ನೆ ಇವರು ಒಪ್ಪುವುದಿಲ್ಲ. ಈ ತೀರ್ಮಾನ ಅನುಷ್ಠಾನ ಕಷ್ಟ ಎಂದು ಕಡತದಲ್ಲಿ ಬರೆದು ಬಿಡುತ್ತಾರೆ. ಕೆಲವರಿಗೆ ಇಚ್ಛಾಶಕ್ತಿ ಕೊರತೆ ಇದೆ. ನಿವೃತ್ತಿಗೆ ಒಂದು ವರ್ಷ ಇರುವಾಗಲೇ ನಿವೃತ್ತಿ ವೇತನದ ಬಗ್ಗೆ ಯೋಚನೆ ಮಾಡುತ್ತಿರುತ್ತಾರೆ ಎಂದು ತಿಳಿಸಿದರು.

ಸಮಾಜಕ್ಕೆ ಒಳ್ಳೆಯದನ್ನು ಮಾಡುವ ಸಕಾರಾತ್ಮಕ ಮನೋಭಾವ ಇರುವ ಜನರು ಹೆಚ್ಚಾಗಿರಬೇಕು. ಆದರೆ ನಕಾರಾತ್ಮಕ ಮನೋಭಾವ ಇರುವವರೆ ಹೆಚ್ಚಾಗಿದ್ದಾರೆ. ಇಂತಹ ಮನೋಭಾವ ಇರುವವರು ಬಹಳ ಅಪಾಯಕಾರಿಯಾಗಿದ್ದಾರೆ. ಒಬ್ಬ ಭಯೋತ್ಪಾದಕ ನೂರು ಜನರನ್ನು ಕೊಂದರೆ, ನಕಾರಾತ್ಮಕ ಮನೋಭಾವ ಇರುವವರು ಇಡೀ ಸಮುದಾಯವನ್ನೆ ಸಾಯಿಸುತ್ತಾರೆ ಎಂದು ಡಾ.ಮಂಜುನಾಥ್ ಎಚ್ಚರಿಸಿದರು.

ನಾವು ಏನು ಓದಿದ್ದೇವೆ, ಸಂಶೋಧನೆ ಮಾಡಿದ್ದೇವೆ ಎನ್ನುವುದಕ್ಕಿಂತ ಅದರಿಂದ ಸಮಾಜಕ್ಕೆ ಏನು ಉಪಯೋಗವಾಗಿದೆ ಎಂಬುದು ಮುಖ್ಯ. ನಾವು ನಾನಾ ವ್ಯಕ್ತಿಗಳ ಜೊತೆ ಸಮಾಲೋಚನೆ ನಡೆಸಿದರೆ ಒಂದೊಂದು ರೀತಿಯ ಅನುಭವವಾಗುತ್ತದೆ. ಒಬ್ಬ ಅಧಿಕಾರಿ ಜೊತೆ ಒಡನಾಟ ಇಟ್ಟುಕೊಂಡರೆ ಪ್ರಪಂಚ ನಿಧಾನ ಅನ್ನಿಸುತ್ತದೆ, ಯೋಧನ ಜೊತೆ ಸಂಬಂಧ ಇಟ್ಟುಕೊಂಡರೆ ನಮ್ಮ ಸಾಧನೆ ಕಡಿಮೆ ಅನ್ನಿಸುತ್ತದೆ, ಒಬ್ಬ ಕುಡುಕನ ಜೊತೆ ಮಾತನಾಡುವಾಗ ಬದುಕು ಸುಂದರ ಅನ್ನಿಸುತ್ತದೆ, ಏಕೆಂದರೆ ಕುಡುಕ ಇಡೀ ಪ್ರಪಂಚದ ವಿಚಾರಗಳ ಬಗ್ಗೆ ಸ್ವಾರಸ್ಯಕರವಾಗಿ ಮಾತನಾಡುತ್ತಾನೆ ಎಂದು ಹೇಳಿದರು.

ಸೋಷಿಯಲ್ ಮೀಡಿಯಾದಿಂದ ಸಂಸಾರದ ಸಾಮರಸ್ಯ ಹಾಳು

ಸೋಷಿಯಲ್ ಮೀಡಿಯಾ ಇಂದು ಸಂಸಾರದ ಸಾಮರಸ್ಯವನ್ನೆ ಹಾಳು ಮಾಡುತ್ತಿದೆ ಎಂದು ಲೋಕಸಭಾ ಸದಸ್ಯ ಡಾ.ಸಿ.ಎನ್. ಮಂಜುನಾಥ್ ಆತಂಕ ವ್ಯಕ್ತಪಡಿಸಿದರು.

ವಾಸ್ತವವಾಗಿರುವ ವಿಶ್ವವಿದ್ಯಾನಿಲಯಗಳಂತೆ ಸೋಷಿಯಲ್ ಮೀಡಿಯಾ ಕೂಡ ಒಂದು ವಿಶ್ವ ವಿದ್ಯಾನಿಲಯವಾಗಿ ಮಾರ್ಪಟ್ಟಿದೆ. ತಮಗೆ ಸಂಬಂಧಪಡದ ಬೇರೆ ಯಾವುದೋ ವ್ಯಕ್ತಿಯ ಬಗ್ಗೆ ಬಹಳಷ್ಟು ಜನರು ಅಭಿಪ್ರಾಯ ವ್ಯಕ್ತಪಡಿಸುತ್ತಿರುತ್ತಾರೆ. ಅನವಶ್ಯಕ ಪೋಸ್ಟ್‌ಗಳನ್ನು ಹಾಕುತ್ತಿರುತ್ತಾರೆ. ಅದು ಅವರ ಮನಸ್ಥಿತಿಯನ್ನು ಬಿಂಬಿಸುತ್ತದೆ ಎಂದರು.

ಸಾಮಾಜಿಕ ಜಾಲತಾಣ ಸಮಾಜವನ್ನು ಜಾಲಾಡುತ್ತಿದೆ. ಸಮಾಜದ ಸ್ವಾಸ್ಥ್ಯ ಹದಗೆಡಲು ಕಾರಣವಾಗುತ್ತಿದೆ. ಮೊಬೈಲ್ ಫೋನ್, ಲ್ಯಾಪ್‌ಟಾಪ್ ಅತೀ ಹೆಚ್ಚಾಗಿ ಬಳಸಲಾಗುತ್ತಿದೆ. ಮೊದಲು ಈ ಗೀಳಿನಿಂದ ಜನರು ಹೊರಗೆ ಬರಬೇಕು ಎಂದರು.

ಉಪಾಯದಿಂದ ಅಪಾಯ ದೂರ....

ಜಯದೇವ ಆಸ್ಪತ್ರೆಯಲ್ಲಿ ನಾನು ಗನ್ ಮ್ಯಾನ್ ನೇಮಕ ಮಾಡಿದ್ದೆ. ಆದರೆ ಇದಕ್ಕೆ ಕೆಲವರು ಆಕ್ಷೇಪ ವ್ಯಕ್ತಪಡಿಸಿದ್ದರು. ಇದನ್ನು ಪ್ರಶ್ನಿಸಿದವರಿಗೆ ವಾಸ್ತವತೆಯನ್ನು ಮನದಟ್ಟು ಮಾಡಿ, ಗನ್ ಮ್ಯಾನ್ ರಕ್ಷಣೆ ಮುಂದುವರೆಸಿದೆ ಎಂದರು.

ತುರ್ತು ಚಿಕಿತ್ಸಾ ಘಟಕದಲ್ಲಿ ಕೆಲವರು ಫೋನ್‌ನಲ್ಲಿ ಮಾತನಾಡುತ್ತಾ ಕೂಗಾಡುತ್ತಿದ್ದ ಕಾರಣದಿಂದ ರೋಗಿಗಳಿಗೆ ತೊಂದರೆ ಆಗುತ್ತಿತ್ತು. ಇದಕ್ಕೆ ಕಡಿವಾಣ ಹಾಕಲು ಆಸ್ಪತ್ರೆಯಲ್ಲಿ ಜಾಮರ್ ಅಳವಡಿಸಿದ್ದೆ. ಇದಕ್ಕೂ ಆಕ್ಷೇಪವೆತ್ತಿದ ಕೆಲವರು ಕೇಂದ್ರ ಟೆಲಿಕಾಂ ಇಲಾಖೆಗೆ ಪತ್ರ ಬರೆದಿದ್ದರು. ಇಲಾಖೆಯವರು 1948ರ ಟೆಲಿಕಾಂ ಕಾಯ್ದೆ ನಮೂದಿಸಿ ಜಾಮರ್ ತೆರವು ಮಾಡುವಂತೆ ಸೂಚಿಸಿದ್ದರು. 1948ರಲ್ಲಿ ಮೊಬೈಲ್ ಎಲ್ಲಿತ್ತು ಎಂದು ಅವರ ತಪ್ಪನ್ನು ಮನವರಿಕೆ ಮಾಡಿ ಜಾಮರ್ ಅಳವಡಿಸಿರುವುದನ್ನು ಮುಂದುವರೆಸಿದೆ.

-ಡಾ.ಸಿ.ಎನ್.ಮಂಜುನಾಥ್

ರಾಜ್ಯಪಾಲರ ವಿರುದ್ಧ ಕಡಕೊಳದಲ್ಲಿ ಪ್ರತಿಭಟನೆ



ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ವಿರೋಧಿಸಿ ಮೈಸೂರಿನ ಕಡಕೊಳ ಗ್ರಾಮದಲ್ಲಿ ಸಿದ್ದರಾಮಯ್ಯ ಅಭಿಮಾನಿಗಳು ಸೋಮವಾರ ಪ್ರತಿಭಟನೆ ನಡೆಸಿದರು.

ಮೈಸೂರು, ಆ.19(ಬಿಎಲ್‌ಯು)- ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ತೀರ್ಮಾನ ವಿರೋಧಿಸಿ ಮೈಸೂರಿನ ಕಡಕೊಳದಲ್ಲಿ ಸಿದ್ದರಾಮಯ್ಯ ಅಭಿಮಾನಿಗಳು ಸೋಮವಾರ ಪ್ರತಿಭಟನೆ ನಡೆಸಿದರು.

ಅಹಿಂದ ನಾಯಕರ ವಿರುದ್ಧ ಬಿಜೆಪಿ ಷಡ್ಯಂತ್ರ ಮಾಡುತ್ತಿದೆ. ಯಾವುದೇ ಅಕ್ರಮ ಎಸಗದಿದ್ದರೂ ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಇಳಿಸಲು ಕುತಂತ್ರ ರೂಪಿಸಲಾಗುತ್ತಿದೆ ಎಂದು ಆರೋಪಿಸಿದರು. ರಾಜ್ಯಪಾಲ ಹಠಾವೋ -ಕರ್ನಾಟಕ ಬಚಾವೋ ಎಂಬ ಘೋಷಣೆ ಕೂಗಿದ ಪ್ರತಿಭಟನಾಕಾರರು, ಎಂತಹ ಸಂಕಷ್ಟ ಬಂದರೂ ನಾವು ನಿಮ್ಮೊಂದಿಗಿದ್ದೇವೆ ಎಂದು ಸಿದ್ದರಾಮಯ್ಯಗೆ ಬೆಂಬಲ ವ್ಯಕ್ತಪಡಿಸಿದರು. ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಪಟೇಲ್ ಜವರೇಗೌಡ, ಕೆ.ಆರ್.ನಾರಾಯಣ್, ಬಿಕೆಟಿ ಟ್ರಸ್ಟ್ ಅಧ್ಯಕ್ಷ ನಾಗರಾಜು, 33 ಹಳ್ಳಿ ಯಜಮಾನ್ರು ಸಿದ್ದರಾಮಯ್ಯಗೌಡ, ತಾಲೂಕು ಪಂಚಾಯಿತಿ ಸದಸ್ಯ ಶ್ರೀಕಂಠ, ಮಾಜಿ ಗ್ರಾಮ ಪಂಚಾಯಿತಿ ಸದಸ್ಯರಾದ ಸಿದ್ದರಾಮೇಗೌಡ, ಶಿವಲಿಂಗೇಗೌಡ, ಕೆ.ಪಿ. ಮಹದೇವ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಇಂದು ಡಿ.ದೇವರಾಜ ಅರಸು ಜನ್ಮ ದಿನಾಚರಣೆ



ಮೈಸೂರು, ಆ.19-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮೈಸೂರು ಮಹಾನಗರ ಪಾಲಿಕೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮೈಸೂರು ಇವರ ವತಿಯಿಂದ ಆಗಸ್ಟ್ 20ರಂದು ಬೆಳಗ್ಗೆ 11.30 ಗಂಟೆಗೆ ಕಲಾಮಂದಿರದಲ್ಲಿ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ 109ನೇ ಜನ್ಮ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಕ್ಕು ಮತ್ತು ಬೃಹತ್ ಕೈಗಾರಿಕಾ ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಘನ ಉಪಸ್ಥಿತಿಯಲ್ಲಿ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ ಮಹದೇವಪ್ಪ ಉದ್ಘಾಟನೆ ಮಾಡಲಿದ್ದು, ಶಾಸಕ ಕೆ.ಹರೀಶ್‌ಗೌಡ ಅಧ್ಯಕ್ಷತೆ ವಹಿಸಲಿದ್ದಾರೆ. ರೇಷ್ಮೆ ಸಚಿವ ಕೆ.ವೆಂಕಟೇಶ್, ಅರಣ್ಯ ವಸತಿ ಮತ್ತು ವಿಹಾರಧಾಮಗಳ ನಿಗಮದ ಅಧ್ಯಕ್ಷ, ಶಾಸಕ ಅನಿಲ್‌ಕುಮಾರ್, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷ ಎ.ಬಿ.ರಮೇಶ್ ಬಂಡಿಸಿದ್ದೇಗೌಡ ಹಾಗೂ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ.ಪುಷ್ಪಾ ಗೌರವ ಉಪಸ್ಥಿತರಿರಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸಂಸದರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಹಾಗೂ ಸುನಿಲ್ ಬೋಸ್ ಆಗಮಿಸಲಿದ್ದಾರೆ. ಶಾಸಕರಾದ ತನ್ವೀರ್ ಸೇಠ್, ಜಿ.ಟಿ.ದೇವೇಗೌಡ, ರವಿಶಂಕರ್, ಟಿ.ಎಸ್.ಶ್ರೀವತ್ಸ, ಜಿ.ಡಿ. ಹರೀಶ್‌ಗೌಡ, ದರ್ಶನ್ ಧ್ರುವನಾರಾಯಣ, ವಿಧಾನಪರಿಷತ್‌ನ ಸದಸ್ಯರಾದ ಹೆಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ.ಮಾದೇಗೌಡ, ಡಾ.ಯತೀಂದ್ರ ಎಸ್ ಮತ್ತು ವಿವೇಕಾನಂದ ಕೆ. ಸಮಾರಂಭದ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಮುಡಾ ಅಧ್ಯಕ್ಷ ಕೆ.ಮರೀಗೌಡ, ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್‌ಖಾನ್ ಹಾಗೂ ಕಾವೇರಿ ಜಲಾನಯನ ಯೋಜನೆಯ ಅಚ್ಚುಕಟ್ಟು ಪ್ರಾಧಿಕಾರದ ಅಧ್ಯಕ್ಷ ಮರಿಸ್ವಾಮಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮುಖ್ಯ ಭಾಷಣಕಾರರಾಗಿ ಹಿ.ಶಿ. ರಾಮಚಂದ್ರೇಗೌಡ ಭಾಗವಹಿಸಲಿದ್ದಾರೆ.

ಉತ್ತರಪ್ರದೇಶ ಆಸ್ಪತ್ರೆಯಲ್ಲಿ ನರ್ಸ್ ಮೇಲೆ ವೈದ್ಯನಿಂದ ಅತ್ಯಾಚಾರ; ಮೂವರ ಬಂಧನ



ಮೊರಾದಾಬಾದ್: ಉತ್ತರ ಪ್ರದೇಶದ ಮೊರಾದಾಬಾದ್‌ನ ಖಾಸಗಿ ಆಸ್ಪತ್ರೆಯೊಂದರಲ್ಲಿ ನರ್ಸ್ ಮೇಲೆ ವೈದ್ಯನೋರ್ವ ಅತ್ಯಾಚಾರವೆಸಗಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಸಂತ್ರಸ್ತೆಯ ತಂದೆ ನೀಡಿರುವ ದೂರಿನ ಪ್ರಕಾರ ಭಾನುವಾರ ಮಧ್ಯರಾತ್ರಿ ಈ ಘಟನೆ ನಡೆದಿದೆ. ಪ್ರಕರಣದಲ್ಲಿ ಮೂವರನ್ನು ಬಂಧಿಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಸಂದೀಪ್‌ಕುಮಾರ್ ಮೀನಾ ತಿಳಿಸಿದ್ದಾರೆ. 20 ವರ್ಷದ ಸಂತ್ರಸ್ತೆ ಶನಿವಾರ ರಾತ್ರಿ 7 ಗಂಟೆಗೆ ಕರ್ತವ್ಯಕ್ಕಾಗಿ ಆಸ್ಪತ್ರೆಗೆ ಹೋಗಿದ್ದರು. ಕಳೆದ 7 ತಿಂಗಳಿಂದ ಅಲ್ಲಿ ಆಕೆ ಕೆಲಸ ಮಾಡುತ್ತಿದ್ದರು ಎನ್ನಲಾಗಿದೆ. ತಡ ರಾತ್ರಿ ಕೊಠಡಿಯಲ್ಲಿ ಡಾ.ಶಹನವಾಜ್ ಭೇಟಿಯಾಗುವಂತೆ ಮತ್ತೊಬ್ಬ ನರ್ಸ್ ಮೆಹನಾಜ್ ಸಂತ್ರಸ್ತೆಗೆ ಹೇಳಿದ್ದಾರೆ. ಆಕೆ ನಿರಾಕರಿಸಿದಾಗ, ಮೆಹನಾಜ್ ಮತ್ತು ವಾರ್ಡ್ ಬಾಯ್ ಜುನೈದ್ ಆಕೆಯನ್ನು ಬಲವಂತವಾಗಿ ಆಸ್ಪತ್ರೆಯ ಮೇಲಿನ ಮಹಡಿಯಲ್ಲಿರುವ ಕೋಣೆಗೆ ಕರೆದೊಯ್ದು ಹೊರಗಿನಿಂದ ಬೀಗ ಹಾಕಿದ್ದರು ಎಂದು ಎಸ್ಪಿ ತಿಳಿಸಿದ್ದಾರೆ. ಡಾ.ಶಹನವಾಜ್ ಕೊಠಡಿ ಪ್ರವೇಶಿಸಿದ ನಂತರ ಆಕೆಯನ್ನು ಒತ್ತೆಯಾಳಾಗಿ ಇಟ್ಟುಕೊಂಡು ಅತ್ಯಾಚಾರವೆಸಗಿದ್ದಾನೆ.

ದೇಶ - ವಿದೇಶ

ಫೇಸ್‌ಬುಕ್, ಇನ್‌ಸ್ಟಾಗ್ರಾಂನಲ್ಲಿ ಡ್ರಗ್ಸ್ ಜಾಹೀರಾತಿಗೆ ಮೆಟಾ ವಿರುದ್ಧ ಕೆಂಗಣ್ಣು



ವಾಷಿಂಗ್ಟನ್: ಫೇಸ್‌ಬುಕ್, ಇನ್‌ಸ್ಟಾಗ್ರಾಂ ಇತರೆ ಸಾಮಾಜಿಕ ಜಾಲತಾಣಗಳಲ್ಲಿ ಮಾದಕ ವಸ್ತುಗಳ ಬಳಕೆಯನ್ನು ಪ್ರೋತ್ಸಾಹಿಸುವ ಜಾಹೀರಾತುಗಳು ಪ್ರಕಟವಾಗುತ್ತಿವೆ ಎಂಬ ಗಂಭೀರ ಆರೋಪ ಕೇಳಿ ಬಂದಿದೆ. ಅಮೆರಿಕದ 19 ಜನಪ್ರತಿನಿಧಿಗಳ ಗುಂಪು ಈ ಸಂಬಂಧ ಫೇಸ್‌ಬುಕ್‌ನ ಮಾತೃ ಸಂಸ್ಥೆ ಮೆಟಾಗೆ ಬಹಿರಂಗ ಪತ್ರ ಬರೆದಿದೆ. ಮಕ್ಕಳು ಹಾಗೂ ಹದಿಹರೆಯದವರನ್ನೇ ಗುರಿಯಾಗಿಸಿ ತನ್ನ ಎರಡೂ ಸಾಮಾಜಿಕ ಜಾಲತಾಣಗಳಲ್ಲಿ ಮೆಟಾ ಜಾಹೀರಾತು ಪ್ರಕಟ ಮಾಡುತ್ತಿದೆ ಎಂದು ತಮ್ಮ ಬಹಿರಂಗ ಪತ್ರದಲ್ಲಿ ಜನಪ್ರತಿನಿಧಿಗಳು ಆರೋಪ ಮಾಡಿದ್ದಾರೆ. ಮೆಟಾ ಸಂಸ್ಥೆ ಯಾವುದೇ ಕಾರಣಕ್ಕೂ ತಮ್ಮ ಸಾಮಾಜಿಕ ಜಾಲತಾಣ ವೇದಿಕೆಗಳಲ್ಲಿ ಮಾದಕ ವಸ್ತುಗಳ ಬಳಕೆಗೆ ಪ್ರಚೋದನೆ ನೀಡುವುದಿಲ್ಲ ಎನ್ನುತ್ತದೆ. ಆದರೆ, ಫೇಸ್‌ಬುಕ್ ಹಾಗೂ ಇನ್‌ಸ್ಟಾಗ್ರಾಂಗಳಲ್ಲಿ ಮಕ್ಕಳ ಸುರಕ್ಷತೆ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡುತ್ತಿಲ್ಲ ಎಂದು ಜನಪ್ರತಿನಿಧಿಗಳು ಆಪಾದಿಸಿದ್ದಾರೆ.

ಕೃಷ್ಣಗಿರಿಯಲ್ಲಿ ನಕಲಿ ಎನ್‌ಸಿಸಿ ಕ್ಯಾಂಪ್: 13 ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ



ಚೆನ್ನೈ: ಎನ್‌ಸಿಸಿ ಕ್ಯಾಂಪ್ ಹೆಸರಲ್ಲಿ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಪ್ರಕರಣ ತಮಿಳುನಾಡಿನ ಕೃಷ್ಣಗಿರಿ ಜಿಲ್ಲೆಯಲ್ಲಿ ನಡೆದಿದೆ. ನಕಲಿ ಎನ್‌ಸಿಸಿ ಶಿಬಿರ ಆಯೋಜನೆ ಮಾಡಿದ್ದ ದುಷ್ಕರ್ಮಿಗಳು, ಓರ್ವ ಬಾಲಕಿ ಮೇಲೆ ಅತ್ಯಾಚಾರ ಎಸಗಿದ್ದು, ಇನ್ನುಳಿದ 10ಕ್ಕೂ ಹೆಚ್ಚು ಬಾಲಕಿಯರಿಗೆ ಲೈಂಗಿಕ ಕಿರುಕುಳ ನೀಡಿದ್ದಾರೆ. ಈ ಪ್ರಕರಣ ಸಂಬಂಧ ಒಟ್ಟು 11 ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ. ನಕಲಿ ಎನ್‌ಸಿಸಿ ಕ್ಯಾಂಪ್ ಆಯೋಜಕರು, ಶಾಲೆಯ ಪ್ರಾಂಶುಪಾಲರು, ಇಬ್ಬರು ಶಿಕ್ಷಕರೂ ಬಂಧಿತರಾಗಿದ್ದಾರೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಪೊಲೀಸರ ತನಿಖೆ ವೇಳೆ ಈ ಕಿರಾತಕರ ಸಂಚು ಒಂದೊಂದಾಗಿ ಬಯಲಾಗುತ್ತಿದೆ. ಪ್ರಕರಣ ನಡೆದಿರುವ ಖಾಸಗಿ ಶಾಲೆಗೆ ಎನ್‌ಸಿಸಿ ಘಟಕ ಹೊಂದುವ ಅನುಮತಿ ಸಿಕ್ಕಿರಲಿಲ್ಲ. ಹೀಗಾಗಿ, ಎನ್‌ಸಿಸಿ ಶಿಬಿರ ನಡೆಸಿದರೆ ಶಾಲೆಯ ಆಡಳಿತ ಮಂಡಳಿಗೆ ಎನ್‌ಸಿಸಿ ಘಟಕ ಹೊಂದುವ ಅವಕಾಶ ಸಿಗಬಹುದು ಎಂದು ಯಾವುದೇ ಅನುಮಾನ ಬಾರದಂತೆ ದುಷ್ಕರ್ಮಿಗಳು ಶಾಲೆಯ ಶಿಕ್ಷಕರನ್ನು ನಂಬಿಸಿದ್ದರು.

ಮಂಕಿಪಾಕ್ಸ್ ಲಸಿಕೆ ಉತ್ಪಾದನೆ ಹೆಚ್ಚಳಕ್ಕೆ ಡಬ್ಲ್ಯುಎಚ್‌ಒ ಸಲಹೆ



ಜಿನೆವಾ: ಮಂಕಿಪಾಕ್ಸ್‌ನ ಹರಡುವಿಕೆಯನ್ನು ನಿಯಂತ್ರಿಸಲು ಲಸಿಕೆಗಳ ಉತ್ಪಾದನೆಯನ್ನು ಹೆಚ್ಚಿಸುವಂತೆ ವಿಶ್ವ ಆರೋಗ್ಯ ಸಂಸ್ಥೆ ಲಸಿಕೆ ತಯಾರಿಕಾ ಕಂಪನಿಗಳಿಗೆ ಸೂಚಿಸಿದೆ.

ಆಫ್ರಿಕಾದ ಕಾಂಗೋದಲ್ಲಿ ಕ್ಲೇಡ್ 1ಬಿ ಮಂಕಿಪಾಕ್ಸ್ ಪ್ರಕರಣಗಳು ಏರಿಕೆಯಾಗುತ್ತಿರುವ ಬೆನ್ನಲ್ಲೇ ವಿಶ್ವ ಆರೋಗ್ಯ ಸಂಸ್ಥೆ ಈ ಸಲಹೆ ನೀಡಿದೆ.

ಇದರ ಜೊತೆಗೆ ಈಗಾಗಲೇ ಮಂಕಿಪಾಕ್ಸ್ ಪ್ರಕರಣಗಳು ಉಲ್ಬಣಗೊಳ್ಳುತ್ತಿರುವ ದೇಶಗಳಿಗೆ, ಲಸಿಕೆ ಸಂಗ್ರಹಗಳಿರುವ ದೇಶಗಳು ದಾನ ಮಾಡುವಂತೆ ಕೇಳಿದೆ. ಸಾಮಾನ್ಯವಾಗಿ ಮಂಕಿಪಾಕ್ಸ್ ನಿಯಂತ್ರಣಕ್ಕೆ ಇತ್ತೀಚಿನ ವರ್ಷಗಳಲ್ಲಿ ಎಂವಿಎ-ಬಿಎನ್ ಮತ್ತು ಎಲ್‌ಸಿ16 ಎನ್ನುವ ಎರಡು ಲಸಿಕೆಗಳನ್ನು ಬಳಸಲಾಗುತ್ತಿದೆ. ಇದರಲ್ಲಿ ಎಂವಿಎ- ಬಿಎನ್ ಲಸಿಕೆಯನ್ನು 28 ದಿನಗಳ ಅಂತರದಲ್ಲಿ ಎರಡು ಬಾರಿ ನೀಡಲಾಗುತ್ತದೆ. ಇನ್ನು ಎಲ್‌ಸಿ 16 ಲಸಿಕೆ ಜಪಾನ್ ಮೂಲದ್ದು. ಈ ಲಸಿಕೆ ವಿಚಾರಕ್ಕೆ ಸಂಬಂಧಿಸಿದಂತೆ ವಿಶ್ವ ಆರೋಗ್ಯ ಸಂಸ್ಥೆ ವಕ್ತಾರೆ ಮಾರ್ಗರೇಟ್ ಹ್ಯಾರಿಸ್ ನೀಡಿರುವ ಮಾಹಿತಿ ಪ್ರಕಾರ ಈಗಾಗಲೇ 5 ಲಕ್ಷ ಎಂವಿಎ- ಬಿನ್ ಲಸಿಕೆ ಸಂಗ್ರಹವಿದೆ.

ರಕ್ಷಾಬಂಧನ್‌ಗೆ ತವರಿಗೆ ಹೋಗಬೇಕೆಂದ ಪತ್ನಿಯ ಮೂಗನ್ನೇ ಕಚ್ಚಿದ ಪತಿ!



ಲಕ್ನೋ: ರಕ್ಷಾ ಬಂಧನದಂದು ತವರಿಗೆ ಹೋಗಬೇಕೆಂದು ಒತ್ತಾಯಿಸಿದ ಮಹಿಳೆ ಪತಿಯೊಂದಿಗೆ ಜಗಳವಾಡಿದ್ದಾಳೆ. ಕೋಪಗೊಂಡ ಪತಿ, ಪತ್ನಿಯ ಮೂಗನ್ನೇ ಕಚ್ಚಿದ್ದಾನೆ.

ದೇಹತ್ ಕೊತ್ವಾಲಿ ಪ್ರದೇಶದ ಬನಿಯಾನಿಪುರ್ವಾ ನಿವಾಸಿ ಅನಿತಾ (27), ಭಾನುವಾರ ಪತಿ ರಾಹುಲ್ ಜೊತೆ ಪೋಷಕರ ಮನೆಗೆ ಹೋಗಬೇಕೆಂದು ಒತ್ತಾಯಿಸುತ್ತಿದ್ದಳು. ಸದ್ಯ ನಿನ್ನನ್ನು ಮನೆಗೆ ಕಳುಹಿಸುವ ಪರಿಸ್ಥಿತಿ ಇಲ್ಲ ಎಂದು ಗಂಡ ಹೇಳುತ್ತಿದ್ದ. ಆದರೆ ಪತ್ನಿ ರಕ್ಷಾಬಂಧನ ನೆಪದಲ್ಲಿ ಪತಿಯೊಂದಿಗೆ ಜಗಳವಾಡಿದ್ದಾಳೆ. ಪತ್ನಿಯ ವಾದದಿಂದ ಕೋಪಗೊಂಡ ರಾಹುಲ್, ಅನಿತಾ ಅವರ ಮೂಗನ್ನೇ ಕಚ್ಚಿಬಿಟ್ಟಿದ್ದಾನೆ. ಆ ಬಳಿಕ ಅನಿತಾ ಸ್ಥಿತಿ ಹದಗೆಟ್ಟಿತ್ತು. ಚಿಂತಾಜನಕ ಸ್ಥಿತಿಯಲ್ಲಿದ್ದ ಆಕೆಯನ್ನು ಮನೆಯಲ್ಲಿದ್ದ ಇತರರು ಜಿಲ್ಲಾಸ್ಪತ್ರೆಗೆ ದಾಖಲಿಸಿದ್ದಾರೆ.

ಡಿಎನ್‌ಎ ಆಧಾರದಲ್ಲಿ 50 ವರ್ಷ ಹಿಂದಿನ ಕೊಲೆ ಪ್ರಕರಣ ಭೇದಿಸಿದ ಅಮೆರಿಕ ಪೊಲೀಸರು



ವಾಷಿಂಗ್ಟನ್: ಅಮೆರಿಕದಲ್ಲಿ ಹೀಗೆ 50 ವರ್ಷದ ಹಿಂದಿನ ಕೊಲೆ ಪ್ರಕರಣವೊಂದನ್ನು ಪೊಲೀಸರು ಈಗ ಭೇದಿಸಿದ್ದಾರೆ 1973ರಲ್ಲಿ ಕ್ಯಾಲಿಫೋರ್ನಿಯಾದಲ್ಲಿ ಮಹಿಳೆಯೊಬ್ಬರನ್ನು ಗುಂಡಿಕ್ಕಿ ಕೊಲೆ ಮಾಡಲಾಗಿತ್ತು ಘಟನೆ ನಡೆದ ಸಂದರ್ಭದಲ್ಲಿ ತನಿಖೆ ನಡೆಸಿದ ಅಧಿಕಾರಿಗಳೂ ಈಗ ಜೀವಂತ ಇದ್ದಂತಿಲ್ಲ. ಆದರೂ ಈ ಪ್ರಕರಣದ ಶಂಕಿತ ಹಂತಕನನ್ನು ಪೊಲೀಸರು ಈಗ ಬಂಧಿಸಿದ್ದಾರೆ. ಇದಾಹೋ ರಾಜ್ಯದ 75 ವರ್ಷದ ಮೈಕೆಲ್ ಯುಜೀನ್ ಮುಲ್ಲೆನ್ ಎಂಬಾತನನ್ನು ಡಿಎನ್‌ಎ ಪುರಾವೆಗಳ ಆಧಾರದಲ್ಲಿ ಬಂಧಿಸಲಾಗಿದೆ. 1973ರಲ್ಲಿ ನಡೆದ ನೀನಾ ನಾಡಿನ್ ಫಿಶೆರ್ ಎಂಬಾಕೆಯ ಹತ್ಯೆ ಪ್ರಕರಣದಲ್ಲಿ ಮುಲ್ಲೆನ್‌ನನ್ನು ಶಂಕಿತ ಎಂಬುದಾಗಿ ತನಿಖಾಧಿಕಾರಿಗಳು ಡಿಎನ್‌ಎ ಆಧಾರದಲ್ಲಿ ಗುರುತಿಸಿದ್ದಾರೆ ಎಂದು ಮರೈನ್ ಕೌಂಟಿ ಶೆರಿಫ್ ಕಚೇರಿ ತಿಳಿಸಿದೆ. 1973ರ ನವೆಂಬರ್‌ನಲ್ಲಿ 31 ವರ್ಷದ ಫಿಶೆರ್ ಹತ್ಯೆ ನಡೆದಿತ್ತು. ಆಗ ಅವರು ಕ್ಯಾಲಿಫೋರ್ನಿಯಾದ ಸ್ಯಾನ್ ರಾಫೆಲ್‌ನಲ್ಲಿ ತಮ್ಮ ಪತಿ ಹಾಗೂ ಮಗಳ ಜತೆ ವಾಸವಿದ್ದರು ಎಂದು ಮರೈನ್ ಕೌಂಟಿ ಪೊಲೀಸ್ ಕಚೇರಿ ಹೇಳಿಕೆ ಬಿಡುಗಡೆ ಮಾಡಿದೆ. ನೀನಾ ಫಿಶೆರ್ ಮತ್ತು ಅವರ ಪತಿ ಇಬ್ಬರೂ ಸ್ವೀಡಿಶ್ ಪ್ರಜೆಗಳಾಗಿದ್ದು, ಆ ಸಮಯದಲ್ಲಿ ಅವರು ಸ್ವೀಡನ್‌ಗೆ ಮರಳಲು ತಯಾರಿ ನಡೆಸುತ್ತಿದ್ದರು.

ಹೈಕೋರ್ಟ್ ಮಧ್ಯಂತರ ತಡೆಯಾಜ್ಞೆ ಹಿನ್ನೆಲೆ

ಪಪಂ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ ಮುಂದೂಡಿಕೆ




ಕುಶಾಲನಗರ: ಪಟ್ಟಣ ಪಂಚಾಯಿತಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಸ್ಥಾನಕ್ಕೆ ನಿಗದಿಯಾಗಿದ್ದ ಚುನಾವಣೆಗೆ ಸೋಮವಾರ ಹೈಕೋರ್ಟ್ ಮಧ್ಯಂತರ ತಡೆಯಾಜ್ಞೆ ನೀಡಿದ್ದು, ಈ ಹಿನ್ನೆಲೆ ಚುನಾವಣೆಯನ್ನು ಮುಂದೂಡಲಾಯಿತು.

ಚುನಾವಣಾಧಿಕಾರಿಯಾದ ತಹಸೀಲ್ದಾರ್ ಕಿರಣ್ ಗೌರಯ್ಯ ಚುನಾವಣೆಗೆ ಸಿದ್ಧತೆ ಕೈಗೊಂಡಿದ್ದರು. ಕಾಂಗ್ರೆಸ್‌ನಿಂದ ಅಧ್ಯಕ್ಷ ಸ್ಥಾನಕ್ಕೆ ಜಯಲಕ್ಷ್ಮಿ ಚಂದು, ಉಪಾಧ್ಯಕ್ಷ ಸ್ಥಾನಕ್ಕೆ ಪುಟ್ಟಲಕ್ಷ್ಮಿ ಹಾಗೂ ಬಿಜೆಪಿಯಿಂದ ಅಧ್ಯಕ್ಷ ಸ್ಥಾನಕ್ಕೆ ರೂಪಾ ಉಮಾಶಂಕರ್, ಉಪಾಧ್ಯಕ್ಷ ಸ್ಥಾನಕ್ಕೆ ಜೈವರ್ಧನ್ ನಾಮಪತ್ರ ಸಲ್ಲಿಸಿದರು. ಸರ್ಕಾರ ಪಟ್ಟಣ ಪಂಚಾಯಿತಿಯಿಂದ ಪುರಸಭೆ ಮೇಲ್ದರ್ಜೆಗೇರಿಸಿ ಆದೇಶಿಸಿದೆ. ಆದರೆ, ಪಪಂ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಸ್ಥಾನಕ್ಕೆ ಚುನಾವಣೆ ನಡೆಸಲಾಗುತ್ತಿತ್ತು. ಇದರ ಬೆನ್ನಲ್ಲೇ ಆಕ್ಷೇಪ ವ್ಯಕ್ತಪಡಿಸಿ ಮುಳ್ಳುಸೋಗೆ ಗ್ರಾಪಂ ಮಾಜಿ ಸದಸ್ಯ ಶಿವಾನಂದ್ ಸಲ್ಲಿಸಿದ್ದ ಅರ್ಜಿ ಅನ್ವಯ ಹೈಕೋರ್ಟ್ ತಡೆಯಾಜ್ಞೆ ನೀಡಿದೆ. ಇದರಿಂದ ಚುನಾವಣಾಧಿಕಾರಿ ಚುನಾವಣೆ ಮುಂದೂಡಿದರ ಉಭಯ ಪಕ್ಷಗಳ ಮುಖಂಡರು ಅಧಿಕಾರ ಹಿಡಿಯುವ ಹುಮ್ಮಸ್ಸಿನಲ್ಲಿದ್ದರು. ತಡೆಯಾಜ್ಞೆ ಹಿನ್ನೆಲೆಯಿಂದ ನಿರಾಸೆ ಉಂಟಾಗಿದೆ. ಒಟ್ಟು 16 ಸದಸ್ಯರ ಪೈಕಿ ಬಿಜೆಪಿ 6, ಕಾಂಗ್ರೆಸ್ 6, ಜೆಡಿಎಸ್‌ನ 4 ಸದಸ್ಯರು ಸೇರಿ ಶಾಸಕ, ಸಂಸದರಿಗೆ ಮತದಾನಕ್ಕೆ ಅವಕಾಶವಿದೆ. ಆದರೆ, ಜೆಡಿಎಸ್ ಸದಸ್ಯರು ಕಾಂಗ್ರೆಸ್‌ಗೆ ಬೆಂಬಲ ವ್ಯಕ್ತಪಡಿಸಿ ಆ ಪಕ್ಷದ ಸದಸ್ಯರೊಂದಿಗೆ ಕಾಣಿಸಿಕೊಂಡು ಅಚ್ಚರಿ ಮೂಡಿಸಿದರು.

ಜೆಡಿಎಸ್ ಸದಸ್ಯರ ಸಹಕಾರದಿಂದ ಮುಂದೆಯೂ ಅಧಿಕಾರ ಪಡೆಯುವ ಬಗ್ಗೆ ಶಾಸಕ ಡಾ.ಮಂತರ್‌ಗೌಡ, ಕುಶಾಲನಗರ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ವಿ.ಪಿ.ಶಶಿಧರ್, ಕುಶಾಲನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಪ್ರಮೋದ್ ಮುತ್ತಪ್ಪ ವಿಶ್ವಾಸ ವ್ಯಕ್ತಪಡಿಸಿದರು.

ಎಮ್ಮೆಗುಂಡಿ ವ್ಯಾಪ್ತಿ ಸಲಗ ಪ್ರತ್ಯಕ್ಷ



ಮಡಿಕೇರಿ: ಸುಂಟಿಕೊಪ್ಪ ಹೋಬಳಿಯ ವಿವಿಧ ಗ್ರಾಮಗಳ ವ್ಯಾಪ್ತಿಯಲ್ಲಿ ಕೆಲ ತಿಂಗಳುಗಳಿಂದ ಆತಂಕ ಸೃಷ್ಟಿಸಿರುವ ಕಾಡಾನೆಯೊಂದು ಭಾನುವಾರ ರಾತ್ರಿ ಎಮ್ಮೆಗುಂಡಿ ವ್ಯಾಪ್ತಿಯಲ್ಲಿ ಕಾಣಿಸಿಕೊಂಡಿದೆ.

ಮುಖ್ಯ ಬೀದಿಯಲ್ಲೇ ರಾಜಾರೋಷವಾಗಿ ಸಂಚರಿಸಿದ ಒಂಟಿ ಸಲಗ ಗ್ರಾಮಸ್ಥರಲ್ಲಿ ಮತ್ತಷ್ಟು ಆತಂಕ ಮೂಡಿಸಿದೆ. ಈ ಆನೆ ಸುತ್ತಮುತ್ತಲ ತೋಟಗಳಿಗೆ ನುಗ್ಗಿ ಕೃಷಿ ಫಸಲನ್ನು ತಿಂದು ನಾಶಪಡಿಸುತ್ತಿದೆ. ಅರಣ್ಯದಲ್ಲಿ ಆಹಾರದ ಕೊರತೆ ಉಂಟಾಗಿ ಈ ಒಂಟಿ ಸಲಗ ತೋಟಗಳನ್ನೇ ಅವಲಂಬಿಸಿದೆ ಎಂದು ಗ್ರಾಮಸ್ಥರು ಆರೋಪಿಸಿದರು.

ಈ ಕಾಡಾನೆ ಹಲವು ಬಾರಿ ಕಾರ್ಮಿಕರು ಹಾಗೂ ಸಾರ್ವಜನಿಕರ ಮೇಲೆ ದಾಳಿಗೆ ಮುಂದಾಗಿದ್ದು, ಅನಾಹುತ ಸಂಭವಿಸುವ ಮೊದಲು ಸೆರೆ ಹಿಡಿದು ಸ್ಥಳಾಂತರಿಸಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರ ಪ್ರಾಸಿಕ್ಯೂಷನ್ ಖಂಡಿಸಿ

ಜಿಲ್ಲಾ ಕಾಂಗ್ರೆಸ್‌ನಿಂದ ಬೃಹತ್ ಪ್ರತಿಭಟನೆ



ಮಡಿಕೇರಿಯಲ್ಲಿ ಸಿಎಂ ಸಿದ್ದರಾಮಯ್ಯ ಪರ ಜಿಲ್ಲಾ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನಾ ಮೆರವಣಿಗೆ ನಡೆಸಿದರು.

ಮಡಿಕೇರಿ, ಆ.19–ಜನರಿಂದ ಆಯ್ಕೆಯಾದ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸುವ ಪ್ರಯತ್ನದ ಭಾಗವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅವಕಾಶ ನೀಡಿರುವುದು ಖಂಡನೀಯ ಎಂದು ಕೊಡಗು ಜಿಲ್ಲಾ ಕಾಂಗ್ರೆಸ್‌ನಿಂದ ನಗರದಲ್ಲಿ ಸೋಮವಾರ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಧರ್ಮಜ ಉತ್ತಪ್ಪ ನೇತೃತ್ವದಲ್ಲಿ ಕಾರ್ಯಕರ್ತರು ಪಕ್ಷದ ಕಚೇರಿಯಿಂದ ಜಿಲ್ಲಾಧಿಕಾರಿ ಕಚೇರಿ ವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ, ರಾಜ್ಯಪಾಲರ ನಡೆಯನ್ನು ಖಂಡಿಸಿದರು. ನಂತರ ರಾಷ್ಟ್ರಪತಿ ತಕ್ಷಣವೇ ಮಧ್ಯಪ್ರವೇಶಿಸುವ ಮೂಲಕ ಮುಖ್ಯಮಂತ್ರಿ ವಿರುದ್ಧ ರಾಜ್ಯಪಾಲರು ನೀಡಿರುವ ಪ್ರಾಸಿಕ್ಯೂಷನ್‌ಗೆ ನೀಡಿರುವ ಆದೇಶವನ್ನು ಹಿಂಪಡೆಯಬೇಕೆಂದು ಒತ್ತಾಯಿಸಿ, ಜಿಲ್ಲಾಧಿಕಾರಿ ಕಚೇರಿ ಎದುರು ಕೆಲಕಾಲ ಧರಣಿ ನಡೆಸಿದರು.

ಕೆಪಿಸಿಸಿ ಸದಸ್ಯ ಟಿ.ಪಿ.ರಮೇಶ್ ಮಾತನಾಡಿ, ಸಾಮಾಜಿಕ ನ್ಯಾಯದ ಹರಿಕಾರ, ದೀನ ದಲಿತರು, ದುರ್ಬಲ ವರ್ಗದ ಆಶಾಕಿರಣವಾದ ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಕ್ಕಿಳಿಸುವ ಷಡ್ಯಂತ್ರ ನಡೆಯುತ್ತಿದೆ. ಸಿದ್ದರಾಮಯ್ಯ ಕೇಂದ್ರ ಸರ್ಕಾರದ ಬಹಳಷ್ಟು ಹಗರಣಗಳನ್ನು ತೆರೆದಿಟ್ಟಿದ್ದಾರೆ. ಈ ಹಿನ್ನೆಲೆಯಲ್ಲಿ ಇವರನ್ನು ಸಿಎಂ ಸ್ಥಾನದಿಂದ ಕೆಳಕ್ಕಿಳಿಸಲು ಬಿಜೆಪಿ ರಾಜ್ಯಪಾಲರ ಕಚೇರಿಯನ್ನು ದುರುಪಯೋಗ ಪಡಿಸಿಕೊಂಡಿದೆ ಎಂದು ಆರೋಪಿಸಿದರು.

ರಾಜೀನಾಮೆ ನೀಡದಿರಿ: ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಪಿ.ಚಂದ್ರಕಲಾ ಮಾತನಾಡಿ, ರಾಜಕೀಯ ದುರುದ್ದೇಶದಿಂದ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅವಕಾಶ ನೀಡಲಾಗಿದೆ. ಯಾವುದೇ ಕಾರಣಕ್ಕೂ ಸಿದ್ದರಾಮಯ್ಯ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡ ಬಾರದೆಂದು ಒತ್ತಾಯಿಸಿದರು.

ಮನವಿ ಸಲ್ಲಿಕೆ: ಕೊಡಗು ಜಿಲ್ಲಾ ಕಾಂಗ್ರೆಸ್‌ನಿಂದ ಪ್ರಮುಖ 7 ಬೇಡಿಕೆಗಳ ಮನವಿಯನ್ನು ಅಪರ ಜಿಲ್ಲಾಧಿಕಾರಿ ಐಶ್ವರ್ಯ ಅವರಿಗೆ ಸಲ್ಲಿಸಲಾಯಿತು.

ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ನೀಡಿರುವ ಆದೇಶ ಹಿಂಪಡೆಯಬೇಕು. ರಾಜ್ಯಪಾಲರ ಭವನ ಪಕ್ಷಾತೀತವಾಗಿ ಇರಬೇಕು. ಸಂವಿಧಾನದ ಆಶಯಗಳ ರಕ್ಷಣೆ ಹಾಗೂ ಪ್ರಜಾತಂತ್ರ ವ್ಯವಸ್ಥೆಯಡಿ ಅಧಿಕಾರಕ್ಕೆ ಬಂದ ಸರ್ಕಾರವನ್ನು ಅಸ್ಥಿರಗೊಳಿಸಬಾರದು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಪ್ರತಿಭಟನೆಯಲ್ಲಿ ಮಾಜಿ ಎಂಎಲ್‌ಸಿ ಶಾಂತೆಯಂಡ ವೀಣಾ ಅಚ್ಚಯ್ಯ, ಕಾಂಗ್ರೆಸ್ ಪ್ರಮುಖರಾದ ಕೊಲ್ಯದ ಗಿರೀಶ್, ಬಿ.ಎಸ್.ತಮ್ಮಯ್ಯ, ಟಾಟು ಮೊಣ್ಣಪ್ಪ, ಪ್ರಮೋದ್ ಗಣಪತಿ, ಮುನೀರ್ ಅಹಮ್ಮದ್, ನೆರವಂಡ ಉಮೇಶ್, ತೆನ್ನಿರ ಮೈನಾ, ಪಿ.ಈ.ಸುರೇಶ್, ಕಾನೆಹಿತ್ಲು ಮೊಣ್ಣಪ್ಪ, ಹನೀಫ್, ಜಾನ್ಸನ್ ಪಿಂಟೋ, ರಾಜೇಶ್ ಯಲ್ಲಪ್ಪ, ಮೋಹನ್ ದಾಸ್, ಸೂರಜ್ ಹೊಸೂರು ಮತ್ತಿತರರು ಪಾಲ್ಗೊಂಡಿದ್ದರು.

ಹಕ್ಕುಪತ್ರಕ್ಕಾಗಿ ಆಗ್ರಹಿಸಿ ರೈತರ ಮೆರವಣಿಗೆ



ಸೋಮವಾರಪೇಟೆಯಲ್ಲಿ ಸಿ ಆ್ಯಂಡ್ ಡಿ ಭೂಮಿಗೆ ಹಕ್ಕುಪತ್ರ ನೀಡುವಂತೆ ಆಗ್ರಹಿಸಿ ರೈತ ಹೋರಾಟ ಸಮಿತಿ ಮೆರವಣಿಗೆ ನಡೆಯಿತು.

ಮಡಿಕೇರಿ, ಆ.19–ಕಸ್ತೂರಿ ರಂಗನ್ ವರದಿ ಅನುಷ್ಠಾನ ವಿರೋಧಿಸಿ ಹಾಗೂ ಸಿ ಆ್ಯಂಡ್ ಡಿ ಭೂಮಿಗೆ ಹಕ್ಕುಪತ್ರ ನೀಡುವಂತೆ ಆಗ್ರಹಿಸಿ ಸೋಮವಾರಪೇಟೆ ರೈತ ಹೋರಾಟ ಸಮಿತಿ ನೇತೃತ್ವದಲ್ಲಿ ಸೋಮವಾರಪೇಟೆಯಲ್ಲಿ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಯಿತು.

ನೂರಾರು ಸಂಖ್ಯೆಯಲ್ಲಿ ತಾಲೂಕು ಒಕ್ಕಲಿಗರ ಸಮುದಾಯ ಭವನದಿಂದ ಮೆರವಣಿಗೆಯಲ್ಲಿ ತೆರಳಿದ ರೈತರು, ವಿವೇಕಾನಂದ ಸರ್ಕಲ್ ಮೂಲಕ ಪ್ರಮುಖ ಬೀದಿಯಲ್ಲಿ ಸಾಗಿ ಜೇಸಿ ವೇದಿಕೆಯಲ್ಲಿ ಸಮಾವೇಶಗೊಂಡರು. ರೈತರ ಪ್ರತಿಭಟನೆಗೆ ಪಟ್ಟಣದ ವರ್ತಕರು ತಮ್ಮ ಅಂಗಡಿ ಮುಂಗಟ್ಟುಗಳನ್ನು ಬಂದ್ ಮಾಡಿ ಬೆಂಬಲ ನೀಡಿದರು.

ರೈತ ಹೋರಾಟ ಸಮಿತಿ ಸಂಚಾಲಕ ಬಿ.ಜೆ.ದೀಪಕ್ ಮಾತನಾಡಿ, ಭೂಮಿ ಕಸ್ತೂರಿ ರಂಗನ್ ವರದಿ ಅನುಷ್ಠಾನ ಹಾಗೂ ಸಿ ಆ್ಯಂಡ್ ಡಿ ಭೂಮಿಯನ್ನು ಸಾಮಾಜಿಕ ಅರಣ್ಯ ಎಂದು ಘೋಷಿಸಲು ಸಿದ್ಧತೆ ನಡೆಯುತ್ತಿರುವುದರಿಂದ ಸಾವಿರಾರು ರೈತ ಕುಟುಂಬಗಳು ಆಸ್ತಿ ಕಳೆದುಕೊಳ್ಳುವ ಭೀತಿ ಎದುರಾಗಿದೆ. ವ್ಯವಸಾಯಕ್ಕೆ ಯೋಗ್ಯವಲ್ಲದ ಭೂಮಿಯನ್ನು ಸರ್ವೆ ನಡೆಸಿ, ಸಾಮಾಜಿಕ ಅರಣ್ಯ ಮಾಡಲಿ. ಕೃಷಿ ಮಾಡುತ್ತಿರುವ ಭೂಮಿಗೆ ಹಕ್ಕುಪತ್ರ ನೀಡಲಿ. ಈ ಬಗ್ಗೆ ಕಾನೂನು ಹೋರಾಟ ಮುಂದುವರಿಸಬೇಕು ಎಂದು ಒತ್ತಾಯಿಸಿದರು.

ಶಾಸಕ ಡಾ.ಮಂತರ್‌ಗೌಡ ಮಾತನಾಡಿ, ಸಿ ಆ್ಯಂಡ್ ಡಿ ಜಾಗದ ಸಮಸ್ಯೆಯ ಬಗ್ಗೆ ಮುಖ್ಯಮಂತ್ರಿ, ಅರಣ್ಯ ಸಚಿವರು ಹಾಗೂ ಹಿರಿಯ ಅಧಿಕಾರಿಗಳಿಗೆ ಮನವರಿಕೆ ಮಾಡಿಕೊಟ್ಟು, ಸರ್ಕಾರದಿಂದ ರೈತರ ಪರವಾಗಿ ಸುಪ್ರೀಂಕೋರ್ಟ್‌ಗೆ ಅಫಿಡವಿಟ್ ಸಲ್ಲಿಸಬೇಕಾಗಿದೆ. ಜಿಲ್ಲೆಯ ನಿಯೋಗ ಮುಖ್ಯಮಂತ್ರಿಗಳನ್ನು ಭೇಟಿ ಮಾಡಲು ವ್ಯವಸ್ಥೆ ಕಲ್ಪಿಸಲಾಗುವುದು ಎಂದರು.

ಮಾಜಿ ಸಚಿವ ಎಂ.ಪಿ.ಅಪ್ಪಚ್ಚು ರಂಜನ್ ಮಾತನಾಡಿ, ರೈತರ ಸಿ ಆ್ಯಂಡ್ ಡಿ ಭೂಮಿಯನ್ನು ತೆರವುಗೊಳಿಸಲು ಬಿಡುವುದಿಲ್ಲ. ಕಸ್ತೂರಿ ರಂಗನ್, ಮಾಧವ ಗಾಡ್ಗಿಳ್ ವರದಿಯನ್ನು ತಡೆ ಹಿಡಿದಿದ್ದೇವೆ. ಪೈಸಾರಿ ಮತ್ತು ಸಿ ಆ್ಯಂಡ್ ಡಿ ಭೂಮಿಯನ್ನು ಅರಣ್ಯವೆಂದು ಘೋಷಣೆಗೆ ಅರಣ್ಯ ಇಲಾಖೆ ಹೊರಡಿಸಿರುವ ಉದ್ಘೋಷಣೆಯನ್ನು ವಾಪಸ್ ಪಡೆಯುವ ಅಧಿಕಾರ ಅರಣ್ಯ ಸಚಿವರಿಗೆ ಇದೆ ಎಂದು ಹೇಳಿದರು.

ಪ್ರತಿಭಟನೆಯಲ್ಲಿ ರೈತ ಸಂಘದ ಜಿಲ್ಲಾಧ್ಯಕ್ಷ ಕಾಡ್ಯಮಾಡ ಮನುಸೋಮಯ್ಯ, ಸಾಮಾಜಿಕ ಹೋರಾಟಗಾರ ಬಿ.ಪಿ.ಅನಿಲ್ ಕುಮಾರ್, ವಿಧಾನ ಪರಿಷತ್ ಮಾಜಿ ಸದಸ್ಯ ಎಸ್.ಜಿ.ಮೇದಪ್ಪ, ಶಾಂತಳ್ಳಿ ಶ್ರೀ ಕುಮಾರಲಿಂಗೇಶ್ವ ದೇವಾಲಯ ಸಮಿತಿ ಅಧ್ಯಕ್ಷ ಕೆ.ಎಂ.ಲೋಕೇಶ್, ಒಕ್ಕಲಿಗರ ಯುವ ವೇದಿಕೆ ಅಧ್ಯಕ್ಷ ಕೆ.ಬಿ.ಸುರೇಶ್, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಹರಪಳ್ಳಿ ರವೀಂದ್ರ, ರೈತ ಸಂಘದ ತಾಲೂಕು ಅಧ್ಯಕ್ಷ ಕೆ.ಎಂ.ದಿನೇಶ್, ರೈತ ಮುಖಂಡ ಎಸ್.ಬಿ.ಭರತ್ ಕುಮಾರ್ ಪಾಲ್ಗೊಂಡಿದ್ದರು.

ಕಳತ್ಮಾಡುವಿನಲ್ಲಿ ಗಂಡಾನೆ ಸಾವು



ಕಳತ್ಮಾಡು ಗ್ರಾಮದ ಕಾಫಿ ತೋಟವೊಂದರಲ್ಲಿ ಗಂಡಾನೆ ಮೃತಪಟ್ಟಿರುವುದು.

ಗೋಣಿಕೊಪ್ಪ, ಆ.19–ಪೊನ್ನಂಪೇಟೆ ತಾಲೂಕಿನ ಕಳತ್ಮಾಡು ಗ್ರಾಮದ ಕಾಫಿ ತೋಟವೊಂದರಲ್ಲಿ ಗಂಡಾನೆ ಮೃತಪಟ್ಟಿದ್ದು, ಭಾನುವಾರ ಸಂಜೆ ಮೃತದೇಹ ಪತ್ತೆಯಾಗಿದೆ.

ಸುಮಾರು 60 ವರ್ಷದ ಕಾಡಾನೆ ಮೃತಪಟ್ಟಿದ್ದು, ಸಾವಿಗೆ ನಿಖರವಾದ ಕಾರಣ ತಿಳಿದು ಬಂದಿಲ್ಲ. ಸೋಮವಾರ ಅರಣ್ಯ ಇಲಾಖೆಯ ವೈದ್ಯಾಧಿಕಾರಿ ಡಾ.ರಮೇಶ್ ಕಾಡಾನೆ ಮರಣೋತ್ತರ ಪರೀಕ್ಷೆ ನಡೆಸಿದರು. ಬಳಿಕ ಹೊಸಕೋಟೆ ಮುದ್ದನ ದೇವರ ಕಾಡಿನಲ್ಲಿ ಅಂತ್ಯಸಂಸ್ಕಾರ ನೆರವೇರಿಸಲಾಯಿತು.

ಈ ಸಂದರ್ಭ ಉಪ ಅರಣ್ಯ ಸಂರಕ್ಷಣಾಧಿಕಾರಿ ಜಗನಾಥ್, ಪೊನ್ನಂಪೇಟೆ ವಲಯ ಅರಣ್ಯಾಧಿಕಾರಿ ಬಿ.ಎಂ.ಶಂಕರ್, ಎಸಿಎಫ್ ಗೋಪಾಲ್, ಆರ್‌ಎಫ್‌ಓ ಗಂಗಾಧರ್, ಡಿಆರ್‌ಎಫ್‌ಓ ಸಂದೇಶ್, ಸಚಿನ್, ಗಣೇಶ್, ಎನ್‌ಜಿಓ ಅಧಿಕಾರಿ ತಮ್ಮಯ್ಯ, ಗಸ್ತು ಅರಣ್ಯ ಪಾಲಕ ಅಂಥೋನಿ ಪ್ರಕಾಶ್, ಪೊನ್ನಪ್ಪ, ಪೊನ್ನಂಪೇಟೆ ಹಾಗೂ ತಿತಿಮತಿ ಆರ್‌ಆರ್‌ಟಿ ಸಿಬ್ಬಂದಿ ಹಾಜರಿದ್ದರು.

ರಾಜ್ಯಪಾಲರ ನಡೆ ಖಂಡಿಸಿ ಕಾಂಗ್ರೆಸ್ ಪ್ರತಿಭಟನೆ

● ಚಾಮರಾಜನಗರದಲ್ಲಿ ಕಾರ್ಯಕರ್ತರ ಮೆರವಣಿಗೆ ● ಬಿಜೆಪಿ, ಜೆಡಿಎಸ್ ವಿರುದ್ಧ ಆಕ್ರೋಶ



ಸಚಿವ ಕೆ.ವೆಂಕಟೇಶ್ ನೇತೃತ್ವದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ ಅವರಿಗೆ ಮನವಿ ಸಲ್ಲಿಸಿದರು.

ಚಾಮರಾಜನಗರ, ಆ.19–ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ಖಂಡನೀಯ ಎಂದು ಜಿಲ್ಲಾ ಕಾಂಗ್ರೆಸ್ ಕಾರ್ಯಕರ್ತರು ನಗರದಲ್ಲಿ ಸೋಮವಾರ ಬೃಹತ್ ಪ್ರತಿಭಟನೆ ನಡೆಸಿದರು.

ಚಾಮರಾಜೇಶ್ವರ ದೇವಸ್ಥಾನ ಎದುರು ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ.ಮರಿಸ್ವಾಮಿ, ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಎ.ಆರ್.ಕೃಷ್ಣಮೂರ್ತಿ, ಗಣೇಶ ಪ್ರಸಾದ್ ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು, ಅಲ್ಲಿಂದ ಭುವನೇಶ್ವರಿ ವೃತ್ತದವರೆಗೆ ಮೆರವಣಿಗೆ ನಡೆಸಿ, ಕೆಲಕಾಲ ರಸ್ತೆ ಸಂಚಾರ ತಡೆ ನಡೆಸಿದರು. ಈ ವೇಳೆ ರಾಜ್ಯಪಾಲರು, ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ನಂತರ ಜೋಡಿರಸ್ತೆ ಮಾರ್ಗವಾಗಿ ಜಿಲ್ಲಾಡಳಿತ ಭವನಕ್ಕೆ ತೆರಳಿ ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ ಅವರಿಗೆ ಮನವಿ ಸಲ್ಲಿಸಿದರು.

ಸಚಿವ ಕೆ.ವೆಂಕಟೇಶ್ ಮಾತನಾಡಿ, ರಾಜ್ಯಪಾಲರು ಕೇಂದ್ರ ಸರ್ಕಾರದ ಆದೇಶದಂತೆ ನಡೆಯುತ್ತಿದ್ದಾರೆ. ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಸಲು ಬಿಜೆಪಿ ಹಾಗೂ ಜೆಡಿಎಸ್ ಷಡ್ಯಂತ್ರ ನಡೆಸುತ್ತಿದೆ ಎಂದು ದೂರಿದರು.

ಹಿಂದೆ ಹೆಚ್.ಡಿ. ಕುಮಾರಸ್ವಾಮಿ ವಿರುದ್ಧ ಲೋಕಾಯುಕ್ತ ತನಿಖೆ ನಡೆಸುವಂತೆ ರಾಜ್ಯಪಾಲರಿಗೆ ಮನವಿ ಮಾಡಲಾಗಿದೆ. ಆದರೆ, ಇಲ್ಲಿಯ ತನಕ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿಲ್ಲ. ಯಾವುದೇ ತನಿಖೆಯಾಗದೆ ಮುಖ್ಯಮಂತ್ರಿ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ಖಂಡನೀಯ. ಯಾವುದೇ ಕಪ್ಪುಚುಕ್ಕೆ ಇಲ್ಲದ ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಸುವ ಪಿತೂರಿ ನಡೆಸುತ್ತಿರುವ ಕೇಂದ್ರ ಸರ್ಕಾರ, ರಾಜ್ಯ ಬಿಜೆಪಿ ಹಾಗೂ ಜೆಡಿಎಸ್ ನಾಯಕರ ವಿರುದ್ಧ ಹೋರಾಟ ಅನಿವಾರ್ಯ ಎಂದರು.

ಪ್ರತಿಭಟನೆಯಲ್ಲಿ ಸಂಸದ ಸುನೀಲ್ ಬೋಸ್, ಮಾಜಿ ಸಂಸದ ಕಾಗಲವಾಡಿ ಎಂ.ಶಿವಣ್ಣ, ಮಾಜಿ ಶಾಸಕ ಎಸ್.ಜಯಣ್ಣ, ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಹೆಚ್.ವಿ.ಚಂದ್ರು, ಜಿಲ್ಲಾ ಕಾಂಗ್ರೆಸ್ ವಕ್ತಾರ ಕೆರೆಹಳ್ಳಿ ನವೀನ್, ಪ್ರಧಾನ ಕಾರ್ಯದರ್ಶಿ ಆರ್.ಮಹದೇವು, ಚಿಕ್ಕಮಹದೇವು, ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಸಿದ್ದರಾಮಯ್ಯ ಅಭಿಮಾನಿ ಬಳಗದ ಅಧ್ಯಕ್ಷ ಬೆಳ್ಳೀಗೌಡ, ತಾಲೂಕು ಕುರುಬರ ಸಂಘದ ಅಧ್ಯಕ್ಷ ಉಮೇಶ್ ಎಸ್‌ಪಿಕೆ, ಶ್ರಮಿಕ ವರ್ಗಗಳ ಒಕ್ಕೂಟ ಜಿಲ್ಲಾಧ್ಯಕ್ಷ ಪು.ಶ್ರೀನಿವಾಸ ನಾಯಕ, ಬಸವನಪುರ ರಾಜಶೇಖರ, ಜಿಪಂ ಮಾಜಿ ಅಧ್ಯಕ್ಷ ಸಿ.ಎ.ಮಹದೇವಶೆಟ್ಟಿ, ಮಾಜಿ ಸದಸ್ಯರಾದ ಕಾವೇರಿ ಶಿವಕುಮಾರ್, ರಮೇಶ್, ಕಾರ್ಮಿಕ ವಿಭಾಗದ ಅಧ್ಯಕ್ಷ ಮಹೇಶ್, ಯುವ ಕಾಂಗ್ರೆಸ್ ಜಿಲ್ಲಾ ಕಾರ್ಯಾಧ್ಯಕ್ಷ ಹೊಸಹಳ್ಳಿ ಮಧುಸೂದನ್, ಉಪಾಧ್ಯಕ್ಷ ನಾಗೇಂದ್ರ, ಜಿಲ್ಲಾ ಕಾಂಗ್ರೆಸ್ ಮಹಿಳಾ ಅಧ್ಯಕ್ಷೆ ಲತಾ ರಾಜಶೇಖರ್, ಸೊತ್ತನಹುಂಡಿ ಸೋಮಣ್ಣ, ಸದಾಶಿವಮೂರ್ತಿ, ಬಿ.ಎಂ.ಮುನಿರಾಜು ಆಲೂರು ಪ್ರದೀಪ್, ಕಾಗಲವಾಡಿ ಚಂದ್ರು, ಮಹೇಶ್ ಭಾಗವಹಿಸಿದ್ದರು.

ವೈದ್ಯೆ ಕೊಲೆ ಖಂಡಿಸಿ ಎಬಿವಿಪಿ ಪ್ರತಿಭಟನೆ



ಚಾಮರಾಜನಗರದಲ್ಲಿ ವೈದ್ಯೆ ಕೊಲೆ ಖಂಡಿಸಿ ಎಬಿವಿಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಚಾಮರಾಜನಗರ, ಆ.19–ಕೋಲ್ಕತ್ತಾದ ಖಾಸಗಿ ವೈದ್ಯಕೀಯ ಕಾಲೇಜಿನಲ್ಲಿ ವೈದ್ಯೆ ಮೇಲಿನ ಅತ್ಯಾಚಾರ ಹಾಗೂ ಕೊಲೆ ಖಂಡಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್(ಎಬಿವಿಪಿ) ವತಿಯಿಂದ ನಗರದಲ್ಲಿ ಸೋಮವಾರ ಪ್ರತಿಭಟನೆ ನಡೆಸಲಾಯಿತು.

ನಗರದ ಜಿಲ್ಲಾಡಳಿತ ಭವನದ ಮುಖ್ಯ ದ್ವಾರದ ಬಳಿ ಜಮಾಯಿಸಿದ ಪ್ರತಿಭಟನಾಕಾರರು, ಅಲ್ಲಿಂದ ಜಿಲ್ಲಾಡಳಿತ ಭವನದ ವರೆಗೆ ಮೆರವಣಿಗೆ ನಡೆಸಿದರು. ಪಶ್ಚಿಮ ಬಂಗಾಳ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪಶ್ಚಿಮಬಂಗಾಳದಲ್ಲಿ ಮಹಿಳೆಯರ ಮೇಲೆ ನಿರಂತರವಾಗಿ ದೌರ್ಜನ್ಯ ನಡೆಯುತ್ತಿದ್ದು, ಮಹಿಳೆಯರಿಗೆ ರಕ್ಷಣೆ ಇಲ್ಲ ದಂತಾಗಿದೆ. ಆದರೆ, ಈ ಸಂಬಂಧ ಮಮತಾ ಬ್ಯಾನರ್ಜಿ ನೇತೃತ್ವದ ಅಲ್ಲಿನ ಸರ್ಕಾರ ಯಾವುದೇ ಕ್ರಮ ವಹಿಸದೇ ನಿರ್ಲಕ್ಷ್ಯ ವಹಿಸಿದೆ. ಪಶ್ಚಿಮಬಂಗಾಳದಲ್ಲಿ ನಡೆಯುತ್ತಿರುವ ಇಂಥ ಘಟನೆಗಳು ನಾಚಿಕೆಗೇಡಿನ ಸಂಗತಿಯಾಗಿದೆ. ಆದ್ದರಿಂದ ಕೂಡಲೇ ಸರ್ಕಾರವನ್ನು ವಜಾಗೊಳಿಸಿ ರಾಷ್ಟ್ರಪತಿ ಆಡಳಿತ ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

ನಂತರ ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ ಅವರಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಎಬಿವಿಪಿ ಸಂಚಾಲಕ ಎಂ.ಎನ್.ವಿಶ್ವಾಸ್‌ಗೌಡ, ನಗರ ಕಾರ್ಯದರ್ಶಿ ರಂಜಿತಾ, ಸಿ.ಪಿ.ಗಗನ್, ಅಂಕಿತ್, ಚಂದನ್, ಪುನೀತ್, ಬಸವ ರಾಜೇಂದ್ರ ಇತರರು ಭಾಗವಹಿಸಿದ್ದರು.

ಮದ್ಯ ಸಾಗಿಸುತ್ತಿದ್ದ ಆರು ಆರೋಪಿಗಳ ಬಂಧನ

ಜಿಲ್ಲೆಯ ವಿವಿಧೆಡೆ ಪೊಲೀಸರ ದಾಳಿ, ಮದ್ಯದ ಪೌಚ್‌ಗಳ ವಶ

ಚಾಮರಾಜನಗರ, ಆ.19–ಜಿಲ್ಲೆಯ ವಿವಿಧೆಡೆ ಅಕ್ರಮ ಮದ್ಯ ಮಾರಾಟ ಹಾಗೂ ಸಾಗಿಸುತ್ತಿದ್ದ ಆರು ಆರೋಪಿಗಳನ್ನು ಪೊಲೀಸರು ಬಂಧಿಸಿ, ಮದ್ಯದ ಪೌಚ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಬೇಗೂರು ಪೊಲೀಸ್ ಠಾಣೆ ಆರಕ್ಷಕ ಉಪನಿರೀಕ್ಷಕ ಚರಣ್‌ಗೌಡ, ಸಿಬ್ಬಂದಿ ಆ.17ರಂದು ಮಧ್ಯಾಹ್ನ ಬೇಗೂರು ಕಮರಹಳ್ಳಿ ಮುಖ್ಯರಸ್ತೆಯ ಬಂಡಿಗೆರೆ ಮಹದೇಶ್ವರಸ್ವಾಮಿ ದೇವಸ್ಥಾನ ಬಳಿ ಅಕ್ರಮವಾಗಿ ಮದ್ಯ ಸಾಗಿಸುತ್ತಿದ್ದ ಗುಂಡ್ಲುಪೇಟೆ ತಾಲೂಕಿನ ರಂಗನಾಥಪುರ ಗ್ರಾಮದ ಸೋಮಣ್ಣನನ್ನು ಬಂಧಿಸಿ, 3837 ರೂ. ಮೌಲ್ಯದ 90 ಎಂಎಲ್‌ನ 96 ಮದ್ಯದ ಪೌಚ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಹನೂರು ಪೊಲೀಸ್ ಠಾಣೆ ಪಿಎಸ್‌ಐ ಸಿ.ಮಂಜುನಾಥ ಪ್ರಸಾದ್ ಸಿಬ್ಬಂದಿಯೊಂದಿಗೆ ಆ.17ರಂದು ಸಂಜೆ ಮಂಗಲ ಗ್ರಾಮದಲ್ಲಿ ಮದ್ಯ ಮಾರುತ್ತಿದ್ದ ಸಂಪತ್ ಕುಮಾರ್‌ನನ್ನು ಬಂಧಿಸಿ, 90 ಎಂಎಲ್‌ನ 10 ಮದ್ಯದ ಪೌಚ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಹನೂರು ಪೊಲೀಸ್ ಠಾಣೆಯ ಪಿಸಿಗಳಾದ ಚಂದ್ರು ಹೆಚ್.ಸಿ. ಮತ್ತು ರಾಮಕೃಷ್ಣ ಅವರು ಆ.17ರಂದು ಸಂಜೆ ದಾಳಿ ನಡೆಸಿ ಮಂಗಲ ಗ್ರಾಮದಲ್ಲಿ ಮದ್ಯ ಮಾರುತ್ತಿದ್ದ ಮಾದೇಶನನ್ನು ಬಂಧಿಸಿ, 1040 ರೂ. ಮೌಲ್ಯದ 21 ಪೌಚ್‌ಗಳನ್ನು ವಶಪಡಿಸಿಕೊಂಡಿದ್ದಾರೆ. ಯಳಂದೂರು ಠಾಣೆ ಆರಕ್ಷಕ ಉಪನಿರೀಕ್ಷಕ ಹನಮಂತ ಉಪ್ಪಾರ್ ಹಾಗೂ ಸಿಬ್ಬಂದಿ ಯಳಂದೂರಿನ ನಾಡಮೇಗಲಮ್ಮನ ದೇವಸ್ಥಾನ ಬಳಿ ಮದ್ಯ ಸಾಗಿಸುತ್ತಿದ್ದ ಕೆ.ಎಂ.ಮಹೇಶನನ್ನು ಬಂಧಿಸಿ, 21 ಪೌಚ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಚಾಮರಾಜನಗರ ಗ್ರಾಮಾಂತರ ಠಾಣೆ ಆರಕ್ಷಕ ಉಪನಿರೀಕ್ಷಕ ರಿಹಾನಾ ಬೇಗಂ ಸಿಬ್ಬಂದಿಯೊಂದಿಗೆ ಮರಿಯಾಲದ ಹುಂಡಿ ಗ್ರಾಮದ ಬಳಿ ಅಕ್ರಮವಾಗಿ ಮದ್ಯ ಸಾಗಿಸುತ್ತಿದ್ದ ಕಿರಣ್ ಕುಮಾರ್‌ನನ್ನು ಬಂಧಿಸಿ, 1279 ರೂ. ಮೌಲ್ಯದ 32 ಟೆಟ್ರಾ ಪ್ಯಾಕ್‌ಗಳನ್ನು ವಶಪಡಿಸಿಕೊಂಡಿದ್ದಾರೆ. ಅಗರ ಮಾಂಬಳ್ಳಿ ಠಾಣೆ ಆರಕ್ಷಕ ಉಪನಿರೀಕ್ಷಕ ಎನ್.ಕರಿಬಸಪ್ಪ ಆಲಹಳ್ಳಿ ಗ್ರಾಮದಲ್ಲಿ ಮದ್ಯದ ಸಾಗಿಸುತ್ತಿದ್ದ ರಂಗದಾಸಯ್ಯನನ್ನು ಬಂಧಿಸಿ, 12 ಪೌಚ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಪತ್ನಿ ಕೊಲೆಗೈದ ಪತಿಗೆ ಜೀವಾವಧಿ ಶಿಕ್ಷೆ



ಆನಂದ್ ಶ್ಯಾಮ್

ಕೊಳ್ಳೇಗಾಲ, ಆ.19–ವರದಕ್ಷಿಣೆಗಾಗಿ ಪತ್ನಿಗೆ ಕಿರುಕುಳ ನೀಡಿ ಕೊಲೆ ಮಾಡಿದ್ದ ಪತಿ ಪಿಡಿಓಗೆ ಕೊಳ್ಳೇಗಾಲ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿದೆ.

ಮೂಲತಃ ಬೆಳಗಾವಿ ಜಿಲ್ಲೆ ಅಥಣಿ ತಾಲೂಕಿನ ತೀರ್ಥ ಗ್ರಾಮ ಹಾಗೂ ಹನೂರು ತಾಲೂಕಿನ ಪಿಡಿಓ ಆನಂದ್ ಶ್ಯಾಮ್ ಕಾಂಬಳೆ ಶಿಕ್ಷೆಗೊಳಗಾಗಿದ್ದು, ಈತ ಜಮಖಂಡಿ ತಾಲೂಕಿನ ಆಲಬಾಳು ಗ್ರಾಮದ ವಿದ್ಯಾಶ್ರೀಯನ್ನು 2019ರಲ್ಲಿ ವಿವಾಹವಾಗಿದ್ದ. ಮದುವೆ ವೇಳೆ 26 ಗ್ರಾಂ ಚಿನ್ನದ ಚೈನ್ ಅನ್ನು ವರದಕ್ಷಿಣೆಯಾಗಿ ನೀಡಲಾಗಿತ್ತು.

ನಂತರ ಕೊಳ್ಳೇಗಾಲದ ಬಸ್ತಿಪುರ ಬಡಾವಣೆಯಲ್ಲಿ ಬಾಡಿಗೆ ಮನೆಯಲ್ಲಿ ಪತ್ನಿ ವಿದ್ಯಾಶ್ರೀ ಮತ್ತು 7 ತಿಂಗಳ ಮಗುವಿನೊಂದಿಗೆ ವಾಸವಿದ್ದ. ಆದರೆ, ತವರು ಮನೆಯಿಂದ 2 ಲಕ್ಷ ರೂ. ವರದಕ್ಷಿಣೆ ತರುವಂತೆ ಪತ್ನಿಗೆ ದೈಹಿಕ ಮತ್ತು ಮಾನಸಿಕ ಕಿರುಕುಳ ನೀಡುತ್ತಿದ್ದ. 2022ರ ಮಾರ್ಚ್ 14ರಂದು ರಾತ್ರಿ ಪತ್ನಿಯ ಕತ್ತು ಹಿಸುಕಿ ಕೊಲೆ ಮಾಡಿ, ತನ್ನ ತಂದೆ ಸಹಕಾರದಿಂದ ನೇತು ಹಾಕಿದ್ದ.

ಈ ಸಂಬಂಧ ಆಕೆಯ ಪೋಷಕರು ಕೊಳ್ಳೇಗಾಲ ಟೌನ್ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ನಂತರ ತನಿಖೆ ನಡೆಸಿದ ಪೊಲೀಸರು, ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ವೇಳೆ ಕೊಲೆ ಆರೋಪ ಸಾಬೀತಾದ ಹಿನ್ನೆಲೆ ಪತಿ ಆನಂದ್ ಶ್ಯಾಮ್ ಕಾಂಬಳೆಗೆ ಜೀವಾವಧಿ ಶಿಕ್ಷೆ ಮತ್ತು 10 ಸಾವಿರ ರೂ. ದಂಡ ವಿಧಿಸಿ ನ್ಯಾಯಾಧೀಶ ಟಿ.ಸಿ.ಶ್ರೀಕಾಂತ್ ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ಅಭಿಯೋಜಕ ಮಂಜುನಾಥ್ ವಾದ ಮಂಡಿಸಿದರು.

ಪ್ರತ್ಯೇಕ 2 ಅಪಘಾತ: 9 ಪ್ರಯಾಣಿಕರಿಗೆ ಗಾಯ



ಬೇಡರಪುರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಬಳಿ ಬಸ್ ಹಾಗೂ ಲಾರಿ ನಡುವೆ ಡಿಕ್ಕಿ ಸಂಭವಿಸಿರುವುದು.

ಚಾಮರಾಜನಗರ, ಆ.19– ತಾಲೂಕಿನ ಬೇಡರಪುರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಗೂ ಮುತ್ತಿಗೆ ಗ್ರಾಮದ ಬಳಿ ನಡೆದ ಪ್ರತ್ಯೇಕ ಅಪಘಾತದಲ್ಲಿ 9 ಪ್ರಯಾಣಿಕರು ಗಾಯಗೊಂಡಿರುವ ಘಟನೆ ಸೋಮವಾರ ಸಂಜೆ ನಡೆದಿದೆ.

ಲಾರಿ–ಬಸ್ ನಡುವೆ ಡಿಕ್ಕಿ: ನಗರದ ಹೊರವಲಯದ ಬೇಡರಪುರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಬಳಿ ಸಾರಿಗೆ ಬಸ್ ಹಾಗೂ ಲಾರಿ ನಡುವೆ ಡಿಕ್ಕಿ ಸಂಭವಿಸಿ ಬಸ್ ನಿರ್ವಾಹಕ ಸೇರಿದಂತೆ 8 ಪ್ರಯಾಣಿಕರು ಗಾಯಗೊಂಡಿದ್ದಾರೆ.

ಮೈಸೂರಿನಿಂದ ಚಾಮರಾಜನಗರಕ್ಕೆ ಬರುತ್ತಿದ್ದ ಬಸ್ ಸ್ಟೇರಿಂಗ್ ಲಾಕ್ ಆಗಿದ್ದು, ಇದೇ ವೇಳೆ ನಗರದಿಂದ ನಂಜನಗೂಡಿನತ್ತ ತೆರಳುತ್ತಿದ್ದ ಲಾರಿಗೆ ಡಿಕ್ಕಿ ಹೊಡೆದಿದೆ. ಘಟನೆಯಿಂದ ಮೈಸೂರು–ಚಾಮರಾಜನಗರ ಹೆದ್ದಾರಿಯಲ್ಲಿ ಅರ್ಧ ಗಂಟೆಗೂ ಹೆಚ್ಚು ಕಾಲ ವಾಹನಗಳ ಸಂಚಾರದಲ್ಲಿ ವ್ಯತ್ಯಯ ಉಂಟಾಯಿತು. ನಂತರ ಸಂಚಾರಿ ಪೊಲೀಸರು ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

ಕಾರಿಗೆ ಗೂಡ್ಸ್ ವಾಹನ ಡಿಕ್ಕಿ: ತಾಲೂಕಿನ ಮುತ್ತಿಗೆ ಗ್ರಾಮದ ಬಳಿ ಕಾರಿಗೆ ಗೂಡ್ಸ್ ವಾಹನ ಡಿಕ್ಕಿ ಹೊಡೆದ ಪರಿಣಾಮ ಕಾರಿನ ಚಾಲಕ ಗಾಯಗೊಂಡಿದ್ದಾನೆ.

ಗಾಯಗೊಂಡ ಚಾಲಕನನ್ನು ಮೈಸೂರಿನ ಆಸ್ಪತ್ರೆಗೆ ದಾಖಲಿಸಲಾಗಿದೆ. ಯಾವುದೇ ಪ್ರಾಣಾಪಾಯವಾಗಿಲ್ಲ. ಈ ಸಂಬಂಧ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕಂದಹಳ್ಳಿಯಲ್ಲಿ ಮಳೆಗೆ ಗೋಡೆ ಕುಸಿತ



ಕಂದಹಳ್ಳಿ ನಾಯಕರ ಬಡಾವಣೆಯಲ್ಲಿ ಮನೆ ಗೋಡೆ ಕುಸಿದಿರುವುದು.

ಯಳಂದೂರು, ಆ.19–ತಾಲೂಕಿನ ಕಂದಹಳ್ಳಿ ಗ್ರಾಮದ ನಾಯಕ ಬಡಾವಣೆಯಲ್ಲಿ ಮಳೆಗೆ ಮನೆ ಗೋಡೆ ಕುಸಿದು ಹಾನಿಯಾಗಿರುವ ಘಟನೆ ಜರುಗಿದೆ.

ಬಡಾವಣೆಯ ಸಿದ್ದನಾಯಕ ಅವರ ಮನೆ ಗೋಡೆ ಕುಸಿದಿದೆ. ಈ ಮನೆಯಲ್ಲಿ ಸಿದ್ದನಾಯಕ ಅಣ್ಣನ ಮಗಳು ಶಿಲ್ಪಾ ಸೇರಿದಂತೆ ಐವರು ವಾಸವಾಗಿದ್ದರು. ಆದರೆ, ಸತತವಾಗಿ ಸುರಿದ ಮಳೆಯಿಂದ ಗೋಡೆ ಕುಸಿದಿದೆ. ಅದೃಷ್ಟವಶಾತ್ ಯಾವುದೇ ಅಪಾಯ ಸಂಭವಿಸಿಲ್ಲ. ಕಂದಾಯ ಅಧಿಕಾರಿಗಳು ಸ್ಥಳ ಪರಿಶೀಲಿಸಿ, ಸೂಕ್ತ ಪರಿಹಾರ ಕೊಡಿಸುವ ಭರವಸೆ ನೀಡಿದ್ದಾರೆ.

ಒಂದನೇ ಪುಟದಿಂದ

ವಿಚಾರಣೆ ಆ.29ಕ್ಕೆ ಮುಂದೂಡಿದ ಹೈಕೋರ್ಟ್

ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವುದೇ ತನಿಖಾಧಿಕಾರಿ ವರದಿ ನೀಡಿಲ್ಲ, ಅಷ್ಟೇ ಅಲ್ಲ, ಯಾವ ಆರೋಪವಿದೆ ಎಂದೂ ಹೇಳಿಲ್ಲ ಎಂದು ಬೇರೆ ಬೇರೆ ನ್ಯಾಯಾಲಯಗಳಲ್ಲಿ ಬಂದ ಪ್ರಕರಣಗಳ ತೀರ್ಪುಗಳನ್ನು ಉಲ್ಲೇಖಿಸಿದರು.

ಸಂವಿಧಾನ ವಿಧಿ 163ರಡಿ ಉತ್ತರ ಕೊಡುವ ಅಧಿಕಾರ ರಾಜ್ಯಪಾಲರಿಗೆ ಇದೆ. ಆದರೆ, ಸಂಪುಟದ ನಿರ್ಧಾರವನ್ನು ಒಂದು ಸಾಲಿನಲ್ಲಿ ತಿರಸ್ಕರಿಸಲು ಸಾಧ್ಯವಿಲ್ಲ. ಮುಖ್ಯಮಂತ್ರಿ ವಿರುದ್ಧ ದೂರು ನೀಡಿರುವ ಟಿ.ಜೆ.ಅಬ್ರಹಾಂ ಬಗ್ಗೆಯೇ ಬಹಳಷ್ಟು ಆರೋಪಗಳಿವೆ. ಆತನಿಗೆ ಸುಪ್ರೀಂಕೋರ್ಟ್ ದಂಡ ವಿಧಿಸಿದೆ. ಆತ ದೂರು ನೀಡಿದ ಒಂದೇ ದಿನದಲ್ಲಿ ಸಿಎಂಗೆ ನೋಟಿಸ್ ಜಾರಿ ಮಾಡಿದ್ದಾರೆ.

ಈ ಪ್ರಕರಣದಲ್ಲಿ 2004ರಿಂದ 2010ರ ತನಕ ಸಿದ್ದರಾಮಯ್ಯ ಅವರ ಪಾತ್ರವೇ ಇಲ್ಲ. 1992ರಲ್ಲಿ ಮುಡಾ ಸ್ವಾಧೀನಪಡಿಸಿಕೊಂಡ ಭೂಮಿಗೆ 1998ರಲ್ಲಿ ಡಿ-ನೋಟಿಫಿಕೇಷನ್ ಮಾಡಿದೆ, ಈ ಭೂಮಿಯನ್ನು 2004ರಲ್ಲಿ ಮುಖ್ಯಮಂತ್ರಿ ಅವರ ಬಾವಮೈದುನ ಖರೀದಿ ಮಾಡಿದ್ದಾರೆ.

2005ರಲ್ಲಿ ಕೃಷಿ ಜಮೀನಾಗಿ ಪರಿವರ್ತಿಸಲಾಗಿದೆ. 2010ರಲ್ಲಿ ಅದನ್ನು ಮುಖ್ಯಮಂತ್ರಿ ಅವರ ಪತ್ನಿಗೆ ದಾನದ ರೂಪದಲ್ಲಿ ನೀಡಲಾಗಿದೆ.

ಈ ಪ್ರಕ್ರಿಯೆಗಳ ಬಹುತೇಕ ಸಮಯದಲ್ಲಿ ಸಿದ್ದರಾಮಯ್ಯ ಅಧಿಕಾರದಲ್ಲಿ ಇರಲಿಲ್ಲ ಮತ್ತು ತರಾತುರಿಯನ್ನೂ ಮಾಡಿಲ್ಲ. ಸಕ್ಷಮ ಪ್ರಾಧಿಕಾರ 2020ರಲ್ಲಿ ಭೂಮಿಗೆ ಪರಿಹಾರವಾಗಿ ನಿವೇಶನಗಳನ್ನು ಹಂಚಿದೆ. 2022ರಲ್ಲಿ ನಿವೇಶನಗಳನ್ನು ನೀಡಿದೆ ಎಂದು ದಾಖಲೆಗಳ ಸಮೇತ ಪೀಠದ ಮುಂದೆ ವಾದ ಮಂಡಿಸಿದರು.

ಬಿಜೆಪಿ ಆಡಳಿತದ ಸಂದರ್ಭದಲ್ಲಿ ಅಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸೇರಿದಂತೆ ಕೆಲವು ಸಚಿವರ ವಿರುದ್ಧ ರಾಜಭವನಕ್ಕೆ ದೂರುಗಳು ಹೋಗಿದ್ದರೂ ಅದರ ಬಗ್ಗೆ ರಾಜಭವನ ಯಾವುದೇ ಕ್ರಮ ಕೈಗೊಂಡಿಲ್ಲ. ಖಾಸಗಿ ವ್ಯಕ್ತಿಯೊಬ್ಬರು ನೀಡಿದ ದೂರಿನ ಆಧಾರದಲ್ಲಿ ನೋಟಿಸ್ ನೀಡಲಾಗಿದೆ, ಸರ್ಕಾರ ನೀಡಿರುವ ಸ್ಪಷ್ಟನೆಗಳನ್ನು ತಿರಸ್ಕರಿಸಿ, ಬಿಎನ್‌ಎಸ್‌ಎಸ್ ಕಾಯಿದೆ ಅಡಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಲಾಗಿದೆ.

17ಎ ಅಡಿ ಯಾವುದೇ ಪೋಲಿಸ್ ಅಧಿಕಾರಿ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿಲ್ಲ. ಮುಖ್ಯಮಂತ್ರಿ ಅವರು ತಮ್ಮ ಅಧಿಕಾರ ದುರುಪಯೋಗಪಡಿಸಿಕೊಂಡು ನಿವೇಶನ ಹಂಚಿಕೆ ಮಾಡಿಲ್ಲ ಹಾಗೂ ಯಾವುದೇ ತೀರ್ಮಾನ ಕೈಗೊಂಡಿಲ್ಲ. ವಿವೇಚನಾರಹಿತವಾಗಿ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದಾರೆ. ಆ ಮೂಲಕ ಸಂವಿಧಾನದ 163ನೇ ವಿಧಿಯನ್ನು ಉಲ್ಲಂಘನೆ ಮಾಡಿದ್ದಾರೆ.

ಸಿಂಘ್ವಿ ನಂತರ ಪ್ರತಿವಾದಿಗಳ ಪರ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ವಾದ ಮಂಡಿಸಿ, ರಾಜ್ಯ ಸಚಿವ ಸಂಪುಟ ತೆಗೆದುಕೊಂಡಿರುವ ನಿರ್ಣಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ರಕ್ಷಿಸುವ ಉದ್ದೇಶ ಇರಬಹುದು. ಹೀಗಾಗಿ ಈ ವಿಚಾರದಲ್ಲಿ ಮುಖ್ಯಮಂತ್ರಿ ವಿರುದ್ಧ ತನಿಖೆಗೆ ವಹಿಸುವ ಅಧಿಕಾರ ರಾಜ್ಯಪಾಲರಿಗೆ ಇದೆ ಎಂದು ದಾಖಲೆಗಳು ಮತ್ತು ರಾಷ್ಟ್ರದ ವಿವಿಧ ನ್ಯಾಯಾಲಯಗಳ ತೀರ್ಪುಗಳನ್ನು ಪೀಠದ ಗಮನಕ್ಕೆ ತಂದರು. ಈ ಹಿಂದೆ ಸುಪ್ರೀಂಕೋರ್ಟ್‌ನ ಐವರು ನ್ಯಾಯಮೂರ್ತಿಗಳ ಪೀಠ ಇಂತಹ ಪ್ರಕರಣಕ್ಕೆ ಸಂಬಂಧಿಸಿದಂತೆ ತೀರ್ಪು ನೀಡಿದೆ. ಅದನ್ನು ಗಮನದಲ್ಲಿ ಇಟ್ಟುಕೊಂಡು ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ತೀರ್ಮಾನಿಸಿದ್ದಾರೆ. ಹೀಗಾಗಿ ಯಾವುದೇ ಮಧ್ಯಂತರ ತಡೆಯಾಜ್ಞೆ ನೀಡಬಾರದು, ಪ್ರಕರಣದ ಮುಂದಿನ ವಾದಕ್ಕೆ ಗುರುವಾರಕ್ಕೆ ಅವಕಾಶ ನೀಡಿ ಎಂದು ಮನವಿ ಮಾಡಿದರು.

ಈ ಹಂತದಲ್ಲಿ ಮಧ್ಯಪ್ರವೇಶಿಸಿದ ನ್ಯಾಯಮೂರ್ತಿಗಳು, ಎಲ್ಲಾ ಪ್ರತಿವಾದಿಗಳಿಗೂ ಅರ್ಜಿಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಿದರು.

23ಕ್ಕೂ ಅಧಿಕ ನಿವೇಶನ ಮಂಜೂರು

ವಿರುದ್ಧ ಕಾನೂನು ಕ್ರಮಕ್ಕೆ ಒತ್ತಾಯಿಸಿದ್ದಾರೆ. ನಾನೂ ಸೇರಿದಂತೆ ಸಾವಿರಾರು ಜನ ಎರಡು-ಮೂರು ದಶಕಗಳಿಂದ ಮುಡಾಗೆ ಅರ್ಜಿ ಹಾಕಿ, ಶುಲ್ಕ ಪಾವತಿಸಿ ಜೇಷ್ಠತೆ ಆಧಾರದಲ್ಲಿ ನಿವೇಶನ ಮಂಜೂರಾತಿ ನಿರೀಕ್ಷೆಯಲ್ಲಿದ್ದೇವೆ. ಈ ಮಧ್ಯೆ ಮುಡಾದಲ್ಲಿ ಭ್ರಷ್ಟಾಚಾರ ಹೆಚ್ಚಿದ್ದು, ಬೇಲಿಯೇ ಎದ್ದು ಹೊಲ ಮೇಯ್ದಂತೆ ಪ್ರಾಧಿಕಾರದ ಅಧಿಕಾರಿಗಳು ರಿಯಲ್ ಎಸ್ಟೇಟ್ ಉದ್ಯಮಿಗಳೊಂದಿಗೆ ಶಾಮೀಲಾಗಿ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಕಾಯ್ದೆ ಮತ್ತು ನಿಯಮಗಳನ್ನು ಉಲ್ಲಂಘಿಸಿ ಅಕ್ರಮ ಲಾಭ ಮಾಡಿಕೊಳ್ಳುತ್ತಿದ್ದಾರೆ.

ಧಾರಾಳ ದಿನೇಶ್‌ಕುಮಾರ್: ಹಾಗೆಯೇ ರಿಯಲ್ ಎಸ್ಟೇಟ್ ಉದ್ಯಮಿ ಎನ್.ಮಂಜುನಾಥ್‌ಗೆ ಮುಡಾ ಆಯುಕ್ತ (ದೂರು ನೀಡಿದಾಗ) ಜಿ.ಡಿ.ದಿನೇಶ್ ಕುಮಾರ್ ನೂರಾರು ನಿವೇಶನಗಳನ್ನು ಮಂಜೂರು ಮಾಡಿದ್ದಾರೆ. ವಿಶೇಷ ತಹಶೀಲ್ದಾರ್ ಶಿವಕುಮಾರ್ ಹಾಗೂ ಹೆಚ್ಚುವರಿ ಜಿಲ್ಲಾ ನೋಂದಣಾಧಿಕಾರಿ ಕಾವ್ಯ ಅವರು 2023ರ ಏಪ್ರಿಲ್ 5, 6, 18 ಹಾಗೂ 19ರಂದು 25ಕ್ಕೂ ಹೆಚ್ಚು ಕ್ರಯ ಪತ್ರಗಳನ್ನು ಮಂಜುನಾಥ್ ಹೆಸರಿಗೆ ಕಾನೂನು ಬಾಹಿರವಾಗಿ ನೋಂದಾಯಿಸಿಕೊಟ್ಟಿದ್ದಾರೆ. ಎಲ್ಲಾ ಕ್ರಯಪತ್ರಗಳಲ್ಲಿ ಘನ ಉಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ನಂ.25130/2022 ದಿ.15-12-2022ರ ಆದೇಶದನ್ವಯ ಮಂಜೂರು ಮಾಡಲಾಗಿದೆ ಎಂದು ಸುಳ್ಳು ಮಾಹಿತಿ ದಾಖಲಿಸಿ ನಿವೇಶನಗಳನ್ನು ಮಂಜೂರು ಮಾಡಿರುವುದು ಕಂಡು ಬಂದಿದೆ.

ಅಷ್ಟಕ್ಕೂ ಪಿಟಿಷನ್ ಅರ್ಜಿದಾರರು ಶಿವಮ್ಮ, ಎಂ.ಎನ್.ಶೋಭಾ, ರಾಜಶೇಖರ್ ಹಾಗೂ ಪ್ರದೀಪ್‌ಕುಮಾರ್. ಇವರ ಜಿಪಿಎ ಪ್ರತಿನಿಧಿಯಾಗಿ ರಿಯಲ್ ಎಸ್ಟೇಟ್ ಉದ್ಯಮಿ ಎನ್.ಮಂಜುನಾಥ್ ರಿಟ್ ಅರ್ಜಿ ಸಲ್ಲಿಸಿ, ಅರ್ಜಿದಾರರು ಈ ಹಿಂದೆ ಪ್ರಾಧಿಕಾರಕ್ಕೆ ಸಲ್ಲಿಸಿದ್ದ ಮನವಿಯನ್ನು ಪುರಸ್ಕರಿಸಲು ಕೋರಿದ್ದರು. ಇದಕ್ಕೆ ಪ್ರತಿಯಾಗಿ ನ್ಯಾಯಾಲಯ ಅರ್ಜಿದಾರರ ಮನವಿಯನ್ನು 3 ವಾರಗಳ ಅವಧಿಯೊಳಗೆ ಕಾನೂನು ರೀತ್ಯಾ ನಿಯಮಾನುಸಾರ ಸೂಕ್ತ ನಿರ್ಧಾರ ತೆಗೆದುಕೊಳ್ಳುವಂತೆ ಪ್ರಾಧಿಕಾರಕ್ಕೆ ಆದೇಶ ಮಾಡಿದೆಯೇ ಹೊರತು ಜಿಪಿಎ ಪ್ರತಿನಿಧಿಯ ಹೆಸರಿಗೆ ನಿವೇಶನಗಳನ್ನು ಮಂಜೂರು ಮಾಡುವಂತೆ ಆದೇಶಿಸಿಲ್ಲ. ಆದರೆ ನ್ಯಾಯಾಲಯದ ಆದೇಶವನ್ನು ಮುಂದಿಟ್ಟುಕೊಂಡು ನಿಯಮಬಾಹಿರವಾಗಿ ನೇರವಾಗಿ ಜಿಪಿಎ ಪ್ರತಿನಿಧಿ ಮಂಜುನಾಥ್‌ಗೆ ನಿವೇಶನ ಮಂಜೂರು ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.

ಜಿಪಿಎ ಪ್ರತಿನಿಧಿಯದ್ದೇ ಕಾರುಬಾರು: ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ(ಭೂಸ್ವಾಧೀನಕ್ಕಾಗಿ ಪರಿಹಾರವಾಗಿ ನಿವೇಶನಗಳ ಹಂಚಿಕೆ) ನಿಯಮ 2009ರ ನಿಯಮ 2(ಸಿ)ದ ಪ್ರಕಾರ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪ್ರಾಧಿಕಾರದೊಂದಿಗೆ ಒಪ್ಪಂದಕ್ಕೆ ಬರುವ ದಿನದಂದು ಭೂಮಿಯ ಮೇಲೆ ಹಕ್ಕು ಹೊಂದಿರುವವರು 'ಭೂ ಮಾಲೀಕ' ಆಗುತ್ತಾರೆ. ಆದರೆ ಪ್ರಾಧಿಕಾರದ ಬಡಾವಣೆ ನಿರ್ಮಾಣದ ಉದ್ದೇಶಕ್ಕಾಗಿ ಜಿಪಿಎ ಪ್ರತಿನಿಧಿ ಎಂದು ಹೇಳಿಕೊಳ್ಳುವ ಎನ್.ಮಂಜುನಾಥ್ ಸ್ವತಃ ಯಾವುದೇ ಜಮೀನು ಕಳೆದುಕೊಳ್ಳದಿದ್ದರೂ ಅವರ ಹೆಸರಿಗೆ ಪ್ರಾಧಿಕಾರದ ಅಧಿಕಾರಿಗಳು ನೂರಾರು ನಿವೇಶನಗಳನ್ನು ಕಾನೂನು ಬಾಹಿರವಾಗಿ ಮಂಜೂರು ಮಾಡಲಾಗಿದೆ. ಅಲ್ಲದೆ ಮಂಜೂರಾತಿ ಪತ್ರ ಹಾಗೂ ಕ್ರಯಪತ್ರ ನೋಂದಾಯಿಸುವಾಗ ಎನ್.ಮಂಜುನಾಥನ ಜಿಪಿಎ ಮಾಹಿತಿಯನ್ನು ಉದ್ದೇಶಪೂರ್ವಕವಾಗಿ ಮರೆಮಾಚಲಾಗಿದೆ.

ಪ್ರತಿಷ್ಠಿತ ಬಡಾವಣೆಗಳ ನಿವೇಶನ: ಮೂರು ದಶಕಗಳ ಹಿಂದೆಯೇ ಪ್ರಾಧಿಕಾರದಿಂದ ಅಭಿವೃದ್ಧಿಪಡಿಸಿರುವ ಮೈಸೂರಿನ ಪ್ರತಿಷ್ಠಿತ ಬಡಾವಣೆಗಳಾದ ದಟ್ಟಗಳ್ಳಿ, ವಿಜಯನಗರ ಪ್ರದೇಶಗಳಲ್ಲಿ 30X40, 40X60 ಹಾಗೂ 50X80 ಅಳತೆಯ ನಿವೇಶನಗಳನ್ನು ಮಂಜುನಾಥ್‌ಗೆ ಮಂಜೂರು ಮಾಡಲಾಗಿದೆ. ಪ್ರತಿ ನಿವೇಶನಕ್ಕೂ 1 ಕೋಟಿಗಿಂತಲೂ ಹೆಚ್ಚಿನ ಮಾರುಕಟ್ಟೆ ಮೌಲ್ಯವಿದೆ. ಆದರೆ ಮುಡಾ ಅಧಿಕಾರಿಗಳು ನಿವೇಶನವೊಂದಕ್ಕೆ ಕೇವಲ 3 ಸಾವಿರ ರೂ. ನಿಗದಿಪಡಿಸಿ ಎನ್.ಮಂಜುನಾಥ್ ಅವರಿಂದ ಪ್ರತಿಫಲ ಪಡೆದಿದ್ದಾರೆ ಎಂದು ಆಪಾದಿಸಿದ್ದಾರೆ.

ಮರೆಮಾಚಿ ಮೋಸ: ಪ್ರಾಧಿಕಾರದ ಅಧಿಕಾರಿಗಳಷ್ಟೇ ಅಲ್ಲದೆ ಹೆಚ್ಚುವರಿ ಜಿಲ್ಲಾ ಉಪ ನೋಂದಣಾಧಿಕಾರಿ ಕಾವ್ಯ ಅವರೂ ಅಕ್ರಮದಲ್ಲಿ ಶಾಮೀಲಾಗಿ, ಎನ್.ಮಂಜುನಾಥ್ ಜಿಪಿಎ ಪ್ರತಿನಿಧಿ ಎಂಬುದನ್ನೇ ಮರೆಮಾಚಿ, ನಿವೇಶನಗಳ ಮೌಲ್ಯವನ್ನು ಅಪಮೌಲ್ಯಗೊಳಿಸಿದ್ದಾರೆ. ಅಲ್ಲದೆ ಅವರ ಹೆಸರಿಗೇ ನೇರವಾಗಿ ಕ್ರಮಯಪತ್ರಗಳನ್ನು ನೋಂದಾಯಿಸಿದ್ದಾರೆ. ಇದೇ ನಿವೇಶನಗಳನ್ನು ಕಾನೂನುಬದ್ಧವಾಗಿ ಮಂಜೂರುದಾರರಿಂದ ಖರೀದಿಸಿದ್ದರೆ ಮಂಜುನಾಥ್, ಸರ್ಕಾರಕ್ಕೆ 4-5 ಕೋಟಿ ಮುದ್ರಾಂಕ ಶುಲ್ಕ ಪಾವತಿಸಬೇಕಾಗಿತ್ತು. ಆದರೆ ಹೆಚ್ಚುವರಿ ಜಿಲ್ಲಾ ಉಪ ನೋಂದಣಾಧಿಕಾರಿ ವೈಯಕ್ತಿಕ ಲಾಭಕ್ಕಾಗಿ ಸರ್ಕಾರಕ್ಕೆ ಭಾರೀ ನಷ್ಟವನ್ನುಂಟು ಮಾಡಿದ್ದಾರೆ. ನಿವೇಶನಗಳ ಕ್ರಯಪತ್ರಗಳಲ್ಲಿ ಎಲ್ಲಿಯೂ ಭೂಮಾಲೀಕರ ಹೆಸರು, ಭೂಸ್ವಾಧೀನಪಡಿಸಿಕೊಂಡಿರುವ ಜಮೀನಿನ ವಿವರವನ್ನು ನಮೂದಿಸಿಲ್ಲ. ಇದು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ಭೂಸ್ವಾಧೀನಕ್ಕಾಗಿ ಪರಿಹಾರವಾಗಿ ನಿವೇಶನಗಳ ಹಂಚಿಕೆ) ನಿಯಮ 2009ರ ನಿಯಮ 3 ಹಾಗೂ ಫಾರಂ-2ರ ಸ್ಪಷ್ಟ ಉಲ್ಲಂಘನೆಯಾಗಿದೆ.

ನಿವೇಶನ ವಾಪಸ್ ಪಡೆಯಬೇಕು: ಈ ಕೃತ್ಯ ಗಂಭೀರ ಸ್ವರೂಪದ ಕ್ರಿಮಿನಲ್ ಪ್ರಕರಣವಾಗಿದ್ದು, ಈ ಅಕ್ರಮಗಳನ್ನು ತಡೆಗಟ್ಟುವುದರ ಜೊತೆಗೆ ಕಾನೂನು ಬಾಹಿರವಾಗಿ ಹಂಚಿಕೆ ಮಾಡಿರುವ ನಿವೇಶನಗಳನ್ನು ಈ ಕೂಡಲೇ ಸರ್ಕಾರಕ್ಕೆ ಹಿಂಪಡೆಯಬೇಕು. ಆ ನಿವೇಶನಗಳನ್ನು ಅರ್ಹ ನಿವೇಶನಾಕಾಂಕ್ಷಿಗಳಿಗೆ ಹಂಚಿಕೆ ಮಾಡುವಂತೆ ಪ್ರಾಧಿಕಾರಕ್ಕೆ ಸೂಕ್ತ ನಿರ್ದೇಶನ ನೀಡಬೇಕು. ಮುಡಾ ರಿಯಲ್ ಎಸ್ಟೇಟ್ ಉದ್ಯಮಿ ಎಂ.ಎನ್.ಮಂಜುನಾಥ್‌ಗೆ ಕಾನೂನು ಬಾಹಿರವಾಗಿ ನಿವೇಶನಗಳನ್ನು ಹಂಚಿಕೆ ಮಾಡಿ, ಕೋಟ್ಯಾಂತರ ರೂ. ಅಕ್ರಮ ಲಾಭ ಮಾಡಿಕೊಂಡಿರುವ ಅಧಿಕಾರಿಗಳ ವಿರುದ್ಧ ಎಫ್‌ಐಆರ್ ದಾಖಲಿಸಬೇಕು ಎಂದು ಕೆ.ಕೃಷ್ಣ ಲೋಕಾಯುಕ್ತಕ್ಕೆ ನೀಡಿರುವ ದೂರಿನಲ್ಲಿ ಮನವಿ ಮಾಡಿದ್ದಾರೆ.

ಪಾದಯಾತ್ರೆ ಮೂಲಕ ಸಾರ್ವಜನಿಕರ ಕುಂದುಕೊರತೆ ಆಲಿಸಿದ ಶಾಸಕ ಕೆ.ಹರೀಶ್‌ಗೌಡ

ಮೈಸೂರು, ಆ.19(ಪಿಎಂ)- ಮೈಸೂರು ಮಹಾನಗರ ಪಾಲಿಕೆ ವಾರ್ಡ್ 5ರ ವ್ಯಾಪ್ತಿಯ ಕುಂಬಾರಕೊಪ್ಪಲು ವ್ಯಾಪ್ತಿಯಲ್ಲಿ ಜನರ ಮನೆ ಬಾಗಿಲಿಗೆ ಶಾಸಕರು ಶೀರ್ಷಿಕೆಯಡಿ ಶಾಸಕ ಕೆ.ಹರೀಶ್‌ಗೌಡ ಸೋಮವಾರ ಪಾದಯಾತ್ರೆ ನಡೆಸಿ, ಸಾರ್ವಜನಿಕರ ಕುಂದುಕೊರತೆ ಆಲಿಸಿದರು.



ಮೈಸೂರಿನ ಕುಂಬಾರಕೊಪ್ಪಲಿನಲ್ಲಿ ಸೋಮವಾರ ಶಾಸಕ ಕೆ.ಹರೀಶ್‌ಗೌಡ ಪಾದಯಾತ್ರೆ ನಡೆಸಿದರು.

ಅಧಿಕಾರಿಗಳೊಂದಿಗೆ ಪಾದಯಾತ್ರೆ ನಡೆಸಿದ ಶಾಸಕರು, ಕುಂಬಾರಕೊಪ್ಪಲಿನ ಶ್ರೀ ಆದಿಶಕ್ತಿ ದೇವಸ್ಥಾನ, ಕಾವೇರಿ ಬಡಾವಣೆ, 60 ಅಡಿ ರಸ್ತೆ ಸೇರಿದಂತೆ ಇಲ್ಲಿನ ಸುತ್ತಮುತ್ತಲ ಪ್ರದೇಶದಲ್ಲಿ ಸಾರ್ವಜನಿಕರ ಅಹವಾಲು ಆಲಿಸಿದರು.

ಇದೇ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಶಾಸಕರು, ಅಧಿಕಾರಿ ವರ್ಗವು ಸಾರ್ವಜನಿಕರ ಕೆಲಸ ಕಾರ್ಯಗಳನ್ನು ತ್ವರಿತಗತಿಯಲ್ಲಿ ಮಾಡಬೇಕು. ಹೀಗಾಗಿ ಅವರನ್ನು ಎಚ್ಚರಿಸಲೆಂದೂ ಈ ಪಾದ ಯಾತ್ರೆ ನಡೆಸುತ್ತಿದ್ದೇನೆ. ಎಷ್ಟೋ ಸಮಸ್ಯೆಗಳ ಬಗ್ಗೆ ಸಾರ್ವಜನಿಕರು ಮನವಿ ಸಲ್ಲಿಸಿದ್ದರೂ ಪರಿಹರಿಸುವಲ್ಲಿ ವಿಳಂಬ ಮಾಡುತ್ತಾರೆ. ಹೀಗಾಗಿ ಅಧಿಕಾರಿ ಗಳಿಗೆ ಎಚ್ಚರಿಕೆ ನೀಡುವುದಕ್ಕಾಗಿಯೇ ಪಾದಯಾತ್ರೆ ನಡೆಸುತ್ತಿದ್ದೇನೆ ಎಂದು ಹೇಳಿದರು.

ರಸ್ತೆ ಯುಜಿಡಿ, ಒಳಚರಂಡಿ, ಉದ್ಯಾನವನ, ಕುಡಿಯುವ ನೀರು, ಖಾತೆ, ಕಂದಾಯ, ಸ್ವಚ್ಛತೆ, ಪಿಂಚಣಿ ಹಾಗೂ ಇನ್ನಿತರೆ ಅನೇಕ ಸಮಸ್ಯೆಗಳನ್ನು ಜನರ ಮನೆ ಬಾಗಿಲಿಗೆ ತೆರಳಿ ಆಲಿಸುತ್ತಿದ್ದೇನೆ. ಸಾಧ್ಯವಾದಷ್ಟು ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಹರಿಸುವುದಕ್ಕೆ ಆದ್ಯತೆ ನೀಡುತ್ತೇವೆ. ಈ ಹಿಂದೆ ಕುಂದುಕೊರತೆ ಬಗ್ಗೆ ಸಾರ್ವಜನಿಕರಿಂದ ಅರ್ಜಿಗಳು ಬಂದಿದ್ದವು. ಈ ಸಂಬಂಧ ಪರಿಹರಿಸಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದೆ. ಹಾಗಾಗಿ ಅಧಿಕಾರಿಗಳು ಯಾವ ರೀತಿ ಕೆಲಸ ಮಾಡಿದ್ದಾರೆ ಎಂಬುದನ್ನು ತಿಳಿಯಲೂ ಈ ಪಾದಯಾತ್ರೆ ಸಹಕಾರಿ. ಒಂದು ವೇಳೆ ಅಧಿಕಾರಿಗಳು ಸಮಸ್ಯೆ ಬಗೆಹರಿಸದೇ ಇದ್ದಲ್ಲಿ ಕಾಲಮಿತಿಯಲ್ಲಿ ಪರಿಹರಿಸಲು ಸ್ಥಳದಲ್ಲೇ ಎಚ್ಚರಿಕೆ ನೀಡಲಿದ್ದೇನೆ ಎಂದರು.

ಪಾಲಿಕೆ, ಮುಡಾ, ಚೆಸ್ಕಾಂ, ಕೆ.ಎಸ್.ಆರ್.ಟಿ.ಸಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳ ಜೊತೆಗೂಡಿ ಪಾದಯಾತ್ರೆ ನಡೆಸುತ್ತಿದ್ದೇನೆ. ಪ್ರತಿವಾರ ಒಂದೊಂದು ವಾರ್ಡ್‌ನಲ್ಲಿ ಪಾದಯಾತ್ರೆ ನಡೆಸಲು ಉದ್ದೇಶಿಸಿದ್ದೇನೆ. ಪಕ್ಷಾತೀತವಾಗಿ ಜನರು ಸಮಸ್ಯೆ ಹೇಳಿಕೊಳ್ಳಬಹುದು. ಇನ್ನು ಕ್ಷೇತ್ರದಲ್ಲಿ ಆಗಿರುವ ಕಾಮಗಾರಿ ಹಾಗೂ ಆಗಬೇಕಿರುವ ಅಭಿವೃದ್ಧಿ ಕಾರ್ಯಗಳನ್ನು ಪಟ್ಟಿ ಮಾಡುವ ನಿಟ್ಟಿನಲ್ಲಿಯೂ ಪಾದಯಾತ್ರೆ ವೇಳೆ ಪರಿಶೀಲನೆ ಮಾಡಲಿದ್ದೇನೆ ಎಂದು ತಿಳಿಸಿದರು. ನಗರಪಾಲಿಕೆ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಮತ್ತು ಚಾಮರಾಜ ಕ್ಷೇತ್ರದ ಕಾಂಗ್ರೆಸ್ ಮುಖಂಡರು ಹಾಜರಿದ್ದರು.

ಕುಂಬಾರಕೊಪ್ಪಲಿನ ಸರ್ಕಾರಿ ಪ್ರೌಢಶಾಲೆಯಲ್ಲಿ ಶಾಸಕರಿಂದ ಮೂರು ಕೊಠಡಿ ಉದ್ಘಾಟನೆ

ಮೈಸೂರು, ಆ.19(ಪಿಎಂ)- ಕುಂಬಾರಕೊಪ್ಪಲಿನ ಸರ್ಕಾರಿ ಪ್ರೌಢಶಾಲೆಯಲ್ಲಿ ರಾಜ್ಯ ಸರ್ಕಾರದ ವಿವೇಕ ಶಾಲಾ ಯೋಜನೆಯಡಿ ಅಂದಾಜು 45 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವ ಮೂರು ಶಾಲಾ ಕೊಠಡಿಗಳನ್ನು ಶಾಸಕ ಕೆ.ಹರೀಶ್‌ಗೌಡ ಸೋಮವಾರ ಉದ್ಘಾಟಿಸಿದರು.



ಶಾಲಾ ಕೊಠಡಿಯನ್ನು ಶಾಸಕ ಕೆ.ಹರೀಶ್‌ಗೌಡ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಶಾಸಕರು, ನನ್ನ ಕ್ಷೇತ್ರದಲ್ಲಿ ಅತೀ ಹೆಚ್ಚು ಸರ್ಕಾರಿ ಶಾಲೆ ಮತ್ತು ಕಾಲೇಜುಗಳಿವೆ. ಅವುಗಳಲ್ಲಿ ಹೆಚ್ಚಿನ ವಿದ್ಯಾರ್ಥಿಗಳು ದಾಖಲಾತಿ ಆಗುತ್ತಿರುವುದು ಆಶಾದಾಯಕ ಬೆಳವಣಿಗೆ. ಈ ಹಿನ್ನೆಲೆಯಲ್ಲಿ ಅಗತ್ಯ ಮೂಲ ಸೌಕರ್ಯ ಕಲ್ಪಿಸಲು ರಾಜ್ಯ ಸರ್ಕಾರದ ಅನುದಾನ ಹಾಗೂ ವಿವಿಧ ಕಂಪನಿ ಗಳ ಸಿಎಸ್‌ಆರ್ ನಿಧಿ ಒದಗಿಸಲು ಕ್ರಮ ವಹಿಸಿರುವುದಾಗಿ ತಿಳಿಸಿದರು. ಇದನ್ನು ಮುಖ್ಯ ಶಿಕ್ಷಕರು ಬಳಸಿಕೊಂಡು ಗುಣಮಟ್ಟದ ಶಿಕ್ಷಣ ನೀಡಲು ಕ್ರಮ ವಹಿಸಬೇಕು. ಆ ಮೂಲಕ ಬಡಜನರು ಖಾಸಗಿ ಶಿಕ್ಷಣ ಸಂಸ್ಥೆಗಳ ಮೊರೆ ಹೋಗುವುದನ್ನು ತಪ್ಪಿಸಲು ಸಹಕರಿಸಬೇಕು. ಜೊತೆಗೆ ಇಂದಿನ ಸ್ಪರ್ಧಾತ್ಮಕ ಶಿಕ್ಷಣ ವ್ಯವಸ್ಥೆಯಲ್ಲಿ ಶಿಕ್ಷಣದ ಸವಾಲುಗಳನ್ನು ಅರಿತುಕೊಳ್ಳ ಬೇಕು ಎಂದರು. ಇದೇ ವೇಳೆ ಒಂದು ವರ್ಷಗಳ ಕಾಲ ಸ್ಮಾರ್ಟ್ ಕ್ಲಾಸ್ ನಡೆಸಲು ಬೇಕಾಗುವ ಉಚಿತ ಇಂಟರ್‌ನೆಟ್ ಸೌಲಭ್ಯವನ್ನು ಶಾಸಕರು ವೈಯಕ್ತಿಕವಾಗಿ ಭರಿಸಿಕೊಟ್ಟಿರುವುದಕ್ಕೆ ಶಾಲಾ ಮುಖ್ಯಶಿಕ್ಷಕರು ಹಾಗೂ ಶಿಕ್ಷಕರು ಶಾಸಕರಿಗೆ ಅಭಿನಂದನೆ ಸಲ್ಲಿಸಿದರು. ಬಿಇಓ, ಸಿಡಿಪಿಓ, ಪಿಆರ್‌ಇಡಿ ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಕುಂಬಾರುಕೊಪ್ಪಲು ಗ್ರಾಮದ ಮುಖಂಡರು, ವಿದ್ಯಾರ್ಥಿಗಳ ಪೋಷಕರು, ಚಾಮರಾಜ ಕ್ಷೇತ್ರದ ಕಾಂಗ್ರೆಸ್ ಮುಖಂಡರು ಹಾಜರಿದ್ದರು.

ಕೊಲ್ಕತ್ತಾದ ಕಿರಿಯ ವೈದ್ಯೆ ಅತ್ಯಾಚಾರ-ಹತ್ಯೆ ಖಂಡಿಸಿ ಮೇಣದ ಬತ್ತಿ ಮೆರವಣಿಗೆ



ಕೊಲ್ಕತ್ತಾದ ಕಿರಿಯ ವೈದ್ಯೆಯ ಅತ್ಯಾಚಾರ-ಹತ್ಯೆ ಖಂಡಿಸಿ ಜೆಎಸ್‌ಎಸ್ ಆಸ್ಪತ್ರೆ ವತಿಯಿಂದ ಮೇಣದ ಬತ್ತಿ ಮೆರವಣಿಗೆ ನಡೆಸಲಾಯಿತು.

ಮೈಸೂರು, ಆ.19(ಎಂಕೆ)- ಕೊಲ್ಕತ್ತಾದ ಕಿರಿಯ ವೈದ್ಯೆಯ ಮೇಲೆ ಅತ್ಯಾಚಾರ ನಡೆಸಿ, ಕೊಲೆ ಮಾಡಿರುವ ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಿ, ವೈದ್ಯಕೀಯ ಸಿಬ್ಬಂದಿ ಗಳಿಗೆ ಭದ್ರತೆ ನೀಡುವಂತೆ ಒತ್ತಾಯಿಸಿ ಜೆಎಸ್‌ಎಸ್ ಆಸ್ಪತ್ರೆ ವತಿಯಿಂದ ಮೇಣದ ಬತ್ತಿ ಮೆರವಣಿಗೆ ನಡೆಸಲಾಯಿತು.

ಮೈಸೂರು ಮಹಾರಾಜ ಕಾಲೇಜು ಮೈದಾನದಲ್ಲಿ ಜಮಾವಣೆಗೊಂಡ ಆಸ್ಪತ್ರೆಯ ವೈದ್ಯಕೀಯ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಮೇಣದ ಬತ್ತಿ ಹಾಗೂ ಭದ್ರತೆ ನೀಡಬೇಕೆನ್ನುವ ನಾಮಫಲಕಗಳನ್ನು ಹಿಡಿದು ಕೃಷ್ಣರಾಜ ಬುಲೆವಾರ್ಡ್ ರಸ್ತೆ ಮೂಲಕ ಹಳೇ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಮೌನಾಚರಣೆಯ ಮೆರವಣಿಗೆ ನಡೆಸಿದರು.

ಬಳಿಕ ಮೇಣದ ಬತ್ತಿಗಳನ್ನು ಒಂದೆಡೆ ಇಟ್ಟು ಮೌನಾಚರಣೆ ಮೂಲಕ ಹತ್ಯೆಗೀಡಾದ ಕೊಲ್ಕತ್ತಾದ ವೈದ್ಯಕೀಯ ವಿದ್ಯಾರ್ಥಿನಿಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದರು. ನಂತರ ಕೊಲ್ಕತ್ತಾದ ವೈದ್ಯಕೀಯ ವಿದ್ಯಾರ್ಥಿನಿ ಮೇಲೆ ನಡೆದ ಅಮಾನವೀಯ ಅತ್ಯಾಚಾರವೆಸಗಿ, ಹತ್ಯೆಮಾಡಿರುವ ಅಪರಾಧಿಗಳಿಗೆ ಘೋರ ಶಿಕ್ಷೆ ನೀಡುವಂತೆ ಆಗ್ರಹಿಸಿದರು.

ಒಳಚರಂಡಿ ಕಾಮಗಾರಿ; ವಾಹನ ಸಂಚಾರಕ್ಕೆ ಬದಲಿ ಮಾರ್ಗ

ಮೈಸೂರು, ಆ.19(ಎಸ್‌ಪಿಎನ್)- ಮೈಸೂರು ನಗರ ಪಾಲಿಕೆಯ ಸೂಯೇಜ್ ಫಾರಂನ ವ್ಯಾಪ್ತಿಯ ವಿದ್ಯಾರಣ್ಯ ಪುರಂನ ಮೋರಿ ಬಳಿ ಹಾಲಿ ಇರುವ ಯಂತ್ರಗುಂಡಿಯಿಂದ ಕಂಸಾಳೆ ಮಹದೇವಯ್ಯ ವೃತ್ತದವರೆಗೆ ಹಾಗೂ ರಾಮಾನುಜ ರಸ್ತೆಯ ಹಾಲಿ ಇರುವ ಎನ್‌ಪಿ3 ಕೊಳವೆ ಮಾರ್ಗಕ್ಕೆ ತ್ಯಾಜ್ಯ ನೀರು ನಿರ್ವಹಣೆಗಾಗಿ ಒಳಚರಂಡಿ ಕೊಳವೆಮಾರ್ಗ ಅಳವಡಿಸಿ ಯಂತ್ರಗುಂಡಿ(ಮ್ಯಾನ್‌ಹೋಲ್)ಗಳನ್ನು ನಿರ್ಮಿಸುವ ಕಾಮಗಾರಿ ಹಮ್ಮಿಕೊಳ್ಳಲಾಗಿದೆ. ಹಾಗಾಗಿ ಈ ಮಾರ್ಗದ ಸಾರ್ವಜನಿಕರು, ವಾಹನ ಸವಾರರು ಆ.17ರಿಂದ ಆ.20 ರವರೆಗೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದ್ದು, ಬದಲಿ ಮಾರ್ಗದಲ್ಲಿ ಸಂಚರಿಸುವಂತೆ ಪಾಲಿಕೆ ಆಯುಕ್ತರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಬದಲಿ ಮಾರ್ಗ: ನಂಜನಗೂಡು ರಸ್ತೆಯ ಕಡೆಯಿಂದ ಸಂಚರಿಸುವ ವಾಹನಗಳು ಜೆಎಸ್‌ಎಸ್ ಕಾಲೇಜು ಹತ್ತಿರ ಎಡ ತಿರುವು ಪಡೆದು ಸಂಚರಿಸಬೇಕು. ವಿದ್ಯಾರಣ್ಯಪುರಂ ಕಡೆಯಿಂದ ಸಂಚರಿಸುವ ವಾಹನಗಳು ಬೂತಾಳ ಪಿಚ್ ಆಟದ ಮೈದಾನ ಬಳಿ ನಾರಾಯಣ ಶಾಸ್ತ್ರಿ ರಸ್ತೆಗೆ ಎಡ ತಿರುವು ತೆಗೆದುಕೊಂಡು ಸಂಚರಿಸುವಂತೆ ವಾಹನ ಸವಾರರಲ್ಲಿ ಮನವಿ ಮಾಡಿದ್ದಾರೆ.

ಹಿನಕಲ್‌ನಲ್ಲಿ ಕಾಂಗ್ರೆಸ್ ಮುಖಂಡರಿಂದ ರಸ್ತೆ ತಡೆ



ಮೈಸೂರು, ಆ.19(ಎಂಕೆ)- ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಖಂಡಿಸಿ ಮೈಸೂರಿನ ಹಿನಕಲ್ ಗ್ರಾಮದಲ್ಲಿ ಕಾಂಗ್ರೆಸ್ ಮುಖಂಡರಿಂದ ರಸ್ತೆ ತಡೆದು ಪ್ರತಿಭಟನೆ ನಡೆಸಲಾಯಿತು.

ಮೈಸೂರು-ಹುಣಸೂರು ರಸ್ತೆಯಲ್ಲಿ ಜಮಾಯಿಸಿದ ಕಾಂಗ್ರೆಸ್ ಮುಖಂಡರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಡಳಿತ ವೈಖರಿ ನೋಡಿ ಅಸೂಯೆಯಿಂದ ವಿರೋಧ ಪಕ್ಷಗಳು ಪಿತೂರಿ ನಡೆಸುತ್ತಿವೆ. ರಾಜ್ಯಪಾಲರನ್ನು ಕೈಗೊಂಬೆಯನ್ನಾಗಿ ಮಾಡಿಕೊಂಡು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವಂತೆ ಮಾಡಿದ್ದಾರೆ ಎಂದು ದೂರಿದರಲ್ಲದೆ ಕೂಡಲೇ ಸ್ವತಃ ರಾಜ್ಯಪಾಲರೇ ತಾವು ನೀಡಿರುವ ಅನುಮತಿಯನ್ನು ವಾಪಸ್ ಪಡೆಯಬೇಕು ಎಂದು ಒತ್ತಾಯಿಸಿದರು. ಹಿನಕಲ್ ಗ್ರಾಮದ ಕಾಂಗ್ರೆಸ್ ಮುಖಂಡರಾದ ಹೊನ್ನಪ್ಪ ಶ್ರೀನಿವಾಸ್, ಕೆ.ಜಿ.ನಾಗರಾಜ್, ಶ್ರೀಧರ್, ಮಾಯಪ್ಪ ಮತ್ತಿತರರು ಉಪಸ್ಥಿತರಿದ್ದರು.

ದಲಿತ ರಾಜ್ಯಪಾಲರನ್ನು ನಿಂದಿಸಿದ್ದಕ್ಕೆ ಕಾಂಗ್ರೆಸ್ ಮೇಲೆ ಅಟ್ರಾಸಿಟಿ ಕೇಸ್ ಹಾಕಬೇಕು

ಸಿ.ಟಿ. ರವಿ ಆಗ್ರಹ



ಬೆಂಗಳೂರು: ಉಪ್ಪು ತಿಂದವ ನೀರು ಕುಡಿಯಬೇಕು, ತಪ್ಪು ಮಾಡಿದವನಿಗೆ ಶಿಕ್ಷೆ ಆಗಬೇಕು. ಭ್ರಷ್ಟಾಚಾರ ಮುಚ್ಚಿಕೊಳ್ಳುವ ಮಾತಾಡಬೇಡಿ. ಕಾಂಗ್ರೆಸ್‌ಗೆ ಸೇರಿದ ಮೇಲೆ ಆತ್ಮಸಾಕ್ಷಿ ಮಾರ್ಕೊಂಡಿದ್ದೀರಾ, ಹೈಕಮಾಂಡ್ ಒತ್ತಡಕ್ಕೆ ಭ್ರಷ್ಟಾಚಾರ, ಲೂಟಿ ಮಾಡುವ ಅನಿವಾರ್ಯತೆ ಬಂದಿರಬೇಕು ಎಂದು ಸಿಎಂ ವಿರುದ್ಧ ಸಿ.ಟಿ. ರವಿ ಹರಿಹಾಯ್ದರು.

ಭ್ರಷ್ಟಾಚಾರದ ಕುರಿತಾಗಿ ಸಿಎಂ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ ವೇಳೆ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ರಾಜ್ಯಪಾಲರು ನ್ಯಾಯಯುತ ತನಿಖೆ ನಡೆಯಲಿ ಎಂದು ಅನುಮತಿ ಕೊಟ್ಟಿದ್ದಾರೆ. ಅವರು ತನಿಖೆಗಷ್ಟೇ ಅನುಮತಿ ಕೊಟ್ಟಿದ್ದಾರೆ. ಆದರೆ ಕಾಂಗ್ರೆಸ್‌ನವರು ರಾಜ್ಯಪಾಲರ ಪ್ರತಿಕೃತಿ ದಹಿಸಿ, ಅವಾಚ್ಯ ಶಬ್ದಗಳಿಂದ ನಿಂದಿಸುತ್ತಿದ್ದಾರೆ. ಚೋರ್ ಉಲ್ಟಾ ಕೊತ್ವಾಲ್ ಕೊ ಡಾಂಟಾ ಅನ್ನುವಂತಾಗಿದೆ. ದಲಿತ ಸಮುದಾಯದ ರಾಜ್ಯಪಾಲರನ್ನು ಕಾಂಗ್ರೆಸ್‌ನವರು ನಿಂದಿಸಿದ್ದಾರೆ. ಪೊಲೀಸರು ಕಾಂಗ್ರೆಸ್‌ನವರ ಮೇಲೆ ಅಟ್ರಾಸಿಟಿ ದೂರು ದಾಖಲಿಸಬೇಕು ಎಂದು ಹೇಳಿದರು.

ಯಡಿಯೂರಪ್ಪ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟಾಗ ಸಿದ್ದರಾಮಯ್ಯ ಏನು ಹೇಳಿದರು ಎಂಬುದನ್ನು ನೆನಪಿಸಿಕೊಳ್ಳಲಿ. ರಾಜ್ಯಪಾಲರು ಸಂವಿಧಾನ ಬದ್ಧ ತೀರ್ಮಾನ ತೆಗೆದುಕೊಂಡಿದ್ದಾರೆ. ನ್ಯಾಯಯುತ ತನಿಖೆಗೆ ಯಡಿಯೂರಪ್ಪ ರಾಜೀನಾಮೆ ಕೊಡಬೇಕು ಅಂದಿದ್ದರು. ಸಿಎಂಗೆ ಮರೆವಿನ ಕಾಯಿಲೆ ಇದೆ. ಆವತ್ತು ಅವರು ಆಡಿದ ಮಾತು ಇವತ್ತು ನಾವು ನೆನಪು ಮಾಡಿಕೊಡುತ್ತಿದ್ದೇವೆ. ಅದೇ ರಾಜಭವನ, ಅದೇ ಅಧಿಕಾರ ಇವತ್ತಿನ ರಾಜ್ಯಪಾಲರಿಗೂ ಇದೆ. ಆಗ ಪ್ರಾಸಿಕ್ಯೂಷನ್ ಯಡಿಯೂರಪ್ಪ ಮೇಲಿತ್ತು, ಈಗ ನಿಮ್ಮ ಮೇಲಿದೆ. ಪಾತ್ರಧಾರಿಗಳಷ್ಟೇ ಬದಲು, ಈಗ ನಿಮ್ಮ ಮಾತಿನಂತೆ ನೀವು ರಾಜೀನಾಮೆ ಕೊಡಿ ಎಂದು ಆಗ್ರಹಿಸಿದರು.

ನೀವು ಎರಡು ನಾಲಿಗೆಯವರಾಗಬಾರದು. ನೀವು ಅಧಿಕಾರದಲ್ಲಿದೀರ, ತನಿಖೆ ಪಾರದರ್ಶಕತೆಯಿಂದ ನಡೆಯುವುದಿಲ್ಲ. ನೀವು ರಾಜೀನಾಮೆ ಕೊಡಿ. 136 ಶಾಸಕರು ಇದ್ದಾರಲ್ಲ. ಯಾರನ್ನಾದರೂ ಕೈಗೊಂಬೆ ಮಾಡಿಕೊಂಡು ಸಿಎಂ ಮಾಡಿ. ನಿಮ್ಮ ಸರ್ಕಾರವನ್ನು ನಾವು ಅಸ್ಥಿರಗೊಳಿಸುತ್ತಿಲ್ಲ. ನಮಗೆ ಹೊಟ್ಟೆಯುರಿ ಇಲ್ಲ. ನಿಮ್ಮ ಗ್ಯಾರಂಟಿ ಹೇಗೆ ಜಾರಿಯಾಗುತ್ತಿದೆ ನೋಡುತ್ತಿದ್ದೇವೆ. ಅಹಿಂದ ಸಿಎಂ ಅನ್ನೋ ಮಾತನ್ನು ಆಡುತ್ತಿದ್ದೀರಿ, ಅದೇನು ನಿಮಗೆ ಲೂಟಿ ಹೊಡೆಯುವ ಲೈಸೆನ್ಸಾ ಗ್ಯಾರಂಟಿಗಳು ನಿಮಗೆ ಲೂಟಿಗೆ ಲೈಸೆನ್ಸ್ ಕೊಟ್ಟಿವೆಯಾ ಎಂದು ಪ್ರಶ್ನಿಸಿದರು.

ರಾಷ್ಟ್ರೀಯ ಅಂತರಿಕ್ಷಾ ದಿನಾಚರಣೆ

ಮೈಸೂರು, ಆ.19(ಎಸ್‌ಪಿಎನ್)- ಕಳೆದ ವರ್ಷ ಚಂದ್ರನ ದಕ್ಷಿಣ ಪ್ರದೇಶದಲ್ಲಿ ಚಂದ್ರಯಾನ-3 ಐತಿಹಾಸಿಕ ಯಶಸ್ವಿ ಲ್ಯಾಂಡಿಂಗ್ ಆದ ದಿನವನ್ನು ಸ್ಮರಿಸಲು ಭಾರತೀಯ ಖಗೋಳ ಭೌತವಿಜ್ಞಾನ ಸಂಸ್ಥೆ(ಐಐಎ)ಯ ಕಾಸ್ಮಾಲಾಜಿ ಶಿಕ್ಷಣ ಮತ್ತು ಸಂಶೋಧನಾ ತರಬೇತಿ(ಕಾಸ್ಮೋಸ್) ಕೇಂದ್ರ ಮೈಸೂರು ವಿವಿ ಸಹಯೋಗದೊಂದಿಗೆ ಆ.23ರಂದು ಬೆಳಗ್ಗೆ 11 ಗಂಟೆಗೆ ವಿಜ್ಞಾನ ಭವನದಲ್ಲಿ ರಾಷ್ಟ್ರೀಯ ಅಂತರಿಕ್ಷಾ ದಿನಾಚರಣೆ ನಡೆಯಲಿದೆ. ಹೆಚ್ಚಿನ ವಿವರಗಳಿಗೆ ಎನ್.ಅಮೋಘ ವರ್ಷ ಅವರ ಮೊ.ಸಂ: 63621-59474 ಸಂಪರ್ಕಿಸಬಹುದು.

ಬೈಕಲ್ಲಿ ಮಕ್ಕಳ ಬೆಲ್ಟ್, ಸುರಕ್ಷತಾ ಚೀಲ ಕಡ್ಡಾಯಗೊಳಿಸಲು ಸರ್ಕಾರ ಚಿಂತನೆ..!

ಬೆಂಗಳೂರು: 9 ತಿಂಗಳ ಮೇಲ್ಪಟ್ಟ ಮತ್ತು 4 ವರ್ಷದೊಳಗಿನ ಮಕ್ಕಳೊಂದಿಗೆ ದ್ವಿಚಕ್ರ ವಾಹನಗಳಲ್ಲಿ ಸಂಚರಿಸುವವರು ಸುರಕ್ಷತಾ ಚೀಲ (ಸೇಫ್ಟಿ ಹಾರ್ನೆಸ್) ಗಳಲ್ಲೇ ಕುಳ್ಳಿರಿಸಿಕೊಂಡು ಕರೆದೊಯ್ಯಬೇಕು ಹಾಗೂ ಆ ಚೀಲದ ಬೆಲ್ಟ್‌ಗಳನ್ನು ಚಾಲಕನ ದೇಹಕ್ಕೆ ಅಳವಡಿಸುವ ನಿಯಮವನ್ನು ಕಡ್ಡಾಯ ಮಾಡುವ ಕುರಿತು ರಾಜ್ಯ ಸರ್ಕಾರ ಚಿಂತನೆ ನಡೆಸುತ್ತಿದೆ ಎಂದು ತಿಳಿದುಬಂದಿದೆ.



ಕೇಂದ್ರ ಸರ್ಕಾರ ಈಗಾಗಲೇ ಈ ನಿಯಮವನ್ನು ಕಡ್ಡಾಯಗೊಳಿಸಿದೆ. ಆದರೆ, ರಾಜ್ಯದಲ್ಲಿ ಇನ್ನೂ ಜಾರಿಗೆ ಬಂದಿಲ್ಲ. ಇದನ್ನು ಕಾರ್ಯರೂಪಕ್ಕೆ ತರುವ ಚಿಂತನೆಗಳು ನಡೆಯುತ್ತಿದ್ದು, ಈಗಾಗಲೇ ಜಾಗೃತಿ ಅಭಿಯಾನಗಳು ಆರಂಭವಾಗಿವೆ ಎಂದು ಸಾರಿಗೆ ಇಲಾಖೆಯ ಮೂಲಗಳು ಮಾಹಿತಿ ನೀಡಿದೆ.

ಸುರಕ್ಷತಾ ಹಾರ್ನೆಸ್ ಇಲ್ಲದ ದ್ವಿಚಕ್ರ ವಾಹನಗಳಲ್ಲಿ ಸಂಚರಿಸುವ ಮಕ್ಕಳು ಬೀಳುವ ಸಾಧ್ಯತೆ ಹೆಚ್ಚಿರುತ್ತದೆ. ಮಕ್ಕಳನ್ನು ಸವಾರರು ದ್ವಿಚಕ್ರ ವಾಹನದ ಪೆಟ್ರೋಲ್ ಟ್ಯಾಂಕ್‌ಗಳ ಮೇಲೆ (ಮುಂಭಾಗ) ಕುಳ್ಳಿರಿಸಿಕೊಳ್ಳುವುದು ಅಥವಾ ಫುಟ್ ರೆಸ್ಟ್‌ಗೆ ಮೀಸಲಿಟ್ಟ ಜಾಗದಲ್ಲಿ ನಿಲ್ಲಿಸುತ್ತಾರೆ. ಇದರಿಂದ ಬ್ರೇಕ್ ಹಾಕಿದಾಗ ಮಕ್ಕಳು ಸಮತೋಲನ ಕಳೆದುಕೊಂಡು ಚಾಲನೆಯಲ್ಲಿರುವ ವಾಹನಗಳಿಂದ ಬೀಳುವ ಸಾಧ್ಯತೆಗಳು ಹೆಚ್ಚಿರುತ್ತದೆ. ಕೆಲವು ಸಂದರ್ಭದಲ್ಲಿ ಮಕ್ಕಳು ನಿದ್ರೆಗೆ ಜಾರಿರುತ್ತಾರೆ. ಮಗುವನ್ನು ಕೈಯಲ್ಲಿ ಹಿಡಿದುಕೊಂಡು ವಾಹನ ಸವಾರಿ ಮಾಡುವವರನ್ನೂ ನೋಡುತ್ತಿರುತ್ತೇವೆ. ಇದು ಮಕ್ಕಳಿಗೆ ಅಪಾಯವನ್ನು ತಂದೊಡ್ಡುತ್ತದೆ ಹೀಗಾಗಿ ಸುರಕ್ಷತಾ ಚೀಲಗಳು ಮಕ್ಕಳಿಗೆ ರಕ್ಷಣೆಯನ್ನು ನೀಡುತ್ತವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇದೀಗ ರಾಜ್ಯಾದ್ಯಂತ ಸಾರಿಗೆ ಇಲಾಖೆ ಅಧಿಕಾರಿಗಳು ಸುರಕ್ಷತಾ ಚೀಲ (ಹಾರ್ನೆಸ್) ಮಹತ್ವದ ಕುರಿತು ಜಾಗೃತಿ ಮೂಡಿಸಲು ಆರಂಭಿಸಿದ್ದು, ಕೆಲವು ಜಿಲ್ಲಾಧಿಕಾರಿಗಳ ಕಚೇರಿಗಳಲ್ಲಿ ಜಾಗೃತಿ ಕಾರ್ಯಕ್ರಮಗಳು ನಡೆಸುತ್ತಿದ್ದಾರೆ.

ಶೀಘ್ರದಲ್ಲೇ ರಾಜ್ಯದ ಎಲ್ಲಾ ಡಿಸಿ ಕಚೇರಿಗಳಲ್ಲೂ ಈ ಕಾರ್ಯಕ್ರಮಗಳ ನಡೆಸಲಾಗುವುದು. ಶಿಕ್ಷಣ ಮತ್ತು ಪೊಲೀಸ್ ಇಲಾಖೆಗಳಲ್ಲಿ ಜಾಗೃತಿ ಮೂಡಿಸಲು, ನಿಯಮವನ್ನು ಜಾರಿಗೊಳಿಸಲು ಯೋಜಿಸಲಾಗಿದೆ. ಈ ಜಾಗೃತಿ ಕಾರ್ಯಕ್ರಮದ ಬಳಿಕ ನಿಯಮ ಪಾಲಿಸದವರಿಗೆ ದಂಡ ವಿಧಿಸಲು ಸಾರಿಗೆ ಇಲಾಖೆ ಅಧಿಕಾರಿಗಳು ಚಿಂತನೆ ನಡೆಸುತ್ತಿದ್ದಾರೆ ಎಂದು ಹೇಳಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ವಿರೋಧಿಸಿ

ತಿ.ನರಸೀಪುರ ಬಂದ್ ಸಂಪೂರ್ಣ ಯಶಸ್ವಿ

- ವಿಪಕ್ಷಗಳು, ರಾಜ್ಯಪಾಲರ ವಿರುದ್ಧ 'ಕೈ' ಕಾರ್ಯಕರ್ತರ ಆಕ್ರೋಶ
- ತಹಸೀಲ್ದಾರ್ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಕೆ



ಬಂದ್ ಹಿನ್ನೆಲೆಯಲ್ಲಿ ಲಿಂಕ್ ರಸ್ತೆಯಲ್ಲಿ ಅಂಗಡಿ ಮುಗ್ಗಟ್ಟುಗಳು ಮುಚ್ಚಿದ್ದವು.

ತಿ.ನರಸೀಪುರ, ಆ.19– ರಾಜ್ಯಪಾಲರು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವುದನ್ನು ವಿರೋಧಿಸಿ ಸೋಮವಾರ ಕಾಂಗ್ರೆಸ್ ವತಿಯಿಂದ ಕರೆ ನೀಡಿದ್ದ ತಿ.ನರಸೀಪುರ ಬಂದ್ ಸಂಪೂರ್ಣ ಯಶಸ್ವಿಯಾಗಿದೆ.

ಪಟ್ಟಣದ ವಿದ್ಯೋದಯ ಕಾಲೇಜು ವೃತ್ತದಲ್ಲಿ ಜಮಾಯಿಸಿದ ಸಾವಿರಾರು ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಮುಡಾ ನಿವೇಶನ ಹಂಚಿಕೆ ವಿಚಾರದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಹುನ್ನಾರ ನಡೆಸುತ್ತಿರುವ ವಿಪಕ್ಷಗಳು ಹಾಗೂ ರಾಜ್ಯಪಾಲರ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಅಲ್ಲಿಂದ ಮೆರವಣಿಗೆಯಲ್ಲಿ ಕಾಲೇಜು ರಸ್ತೆ ಹಾಗೂ ಲಿಂಕ್ ರಸ್ತೆ ಮಾರ್ಗವಾಗಿ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಮೂಲಕ ತೇರಿನ ಬೀದಿ, ಕೆನರಾ ಬ್ಯಾಂಕ್ ರಸ್ತೆ ಮೂಲಕ ಸಾಗಿ ತಾಲೂಕು ಕಚೇರಿಗೆ ತೆರಳಿ ತಹಸೀಲ್ದಾರ್ ಟಿ.ಜೆ.ಸುರೇಶ್ ಆಚಾರ್ ಅವರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು.

ಕುರುಬರ ಸಂಘದ ಮಾಜಿ ಅಧ್ಯಕ್ಷ ಟಿ.ಎಸ್.ಪ್ರಶಾಂತ್ ಬಾಬು ಮಾತನಾಡಿ, ಅಹಿಂದ ವರ್ಗದ ನಾಯಕ ಸಿಎಂ ಸಿದ್ದರಾಮಯ್ಯ ಅವರನ್ನು ವಾಮ ಮಾರ್ಗದಿಂದ ಅಧಿಕಾರದಿಂದ ಕೆಳಗಿಳಿಸಿ ಜೆಡಿಎಸ್, ಬಿಜೆಪಿ ಮೈತ್ರಿ ನಾಯಕರಿಗೆ ಅಧಿಕಾರ ನೀಡಲು ಕೇಂದ್ರ ಬಿಜೆಪಿ ನಾಯಕರು ಕುತಂತ್ರ ರಾಜಕಾರಣ ಮಾಡುತ್ತಿದ್ದಾರೆ. ಸಿದ್ದರಾಮಯ್ಯನವರನ್ನು ಹಣಿಯಲು ರಾಜಭವನ ದುರ್ಬಳಕೆ ಮಾಡಿಕೊಳ್ಳುತ್ತಿರುವ ವಿಪಕ್ಷಗಳ ವರ್ತನೆ ಹಾಗೂ ರಾಜ್ಯಪಾಲರ ನಡವಳಿಕೆ ಖಂಡಿಸಿ ರಾಜ್ಯಾದಂತ್ಯ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಒಂದು ವೇಳೆ ಕುತಂತ್ರ ರಾಜಕಾರಣ ನಿಲ್ಲಿಸದಿದ್ದರೇ ಹೋರಾಟ ತೀವ್ರಗೊಳಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

> ಮುಡಾ ನಿವೇಶನ ಹಂಚಿಕೆಯಲ್ಲಿ ಸಿಎಂ ಸಿದ್ದರಾಮಯ್ಯನವರ ಪಾತ್ರವಿಲ್ಲ. ಬಿಜೆಪಿ, ಜೆಡಿಎಸ್ ನಾಯಕರು ತಮ್ಮ ರಾಜಕೀಯ ಲಾಭಕ್ಕಾಗಿ ಸಿದ್ದರಾಮಯ್ಯರನ್ನು ಮುಂದಿಟ್ಟು ಕೊಂಡು ಹೋರಾಟ ಮಾಡುತ್ತಿದ್ದಾರೆ. ರಾಜ್ಯಪಾಲರ ಕ್ರಮ ಸಂವಿಧಾನ ವಿರೋಧಿಯಾಗಿದೆ. ಸಚಿವರು, ಶಾಸಕರು, ಪರಿಷತ್ ಸದಸ್ಯರು ಸಿದ್ದರಾಮಯ್ಯ ಬೆನ್ನ ಹಿಂದೆ ಇದ್ದಾರೆ. ನೀಚ ರಾಜಕಾರಣ ಮಾಡುತ್ತಿರುವ ಜೆಡಿಎಸ್, ಬಿಜೆಪಿ ಪಕ್ಷಕ್ಕೆ ತಕ್ಕ ಪಾಠ ಕಲಿಸಬೇಕಾಗಿದೆ. ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರೆ.
> – ಸಿ.ಪ್ರಕಾಶ್, ಪುರಸಭಾ ಸದಸ್ಯ.

ದಸಂಸ ಜಿಲ್ಲಾ ಸಂಚಾಲಕ ಆಲಗೂಡು ಶಿವಕುಮಾರ್ ಮಾತನಾಡಿ, ಬಡವರು ಮತ್ತು ಮಧ್ಯಮ ವರ್ಗದವರ ಏಳಿಗೆಗಾಗಿ ರಾಜಕಾರಣ ಮಾಡುತ್ತಿರುವ ಸಿದ್ದರಾಮಯ್ಯ ಅವರನ್ನು ಸಹಿಸಿಕೊಳ್ಳಲು ವಿಪಕ್ಷಗಳಿಗೆ ಆಗುತ್ತಿಲ್ಲ. ಹೇಗಾದರೂ ಮಾಡಿ ಅವರನ್ನು ಅಧಿಕಾರದಿಂದ ಕೆಳಗಿಳಿಸಬೇಕು ಎಂಬ ಉದ್ದೇಶದಿಂದ ರಾಜ್ಯಪಾಲರನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿದರು.

ಪುರಸಭೆ ಸದಸ್ಯ ಮದನ್‌ರಾಜ್ ಮಾತನಾಡಿ, ಜನಾದೇಶದ ಮೂಲಕ ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೆ ಬಂದಿರುವ ಸಿದ್ದರಾಮಯ್ಯ ಸರ್ಕಾರ ಕೆಡವಲು ರಾಜ್ಯಪಾಲರು ರಾಜಕೀಯ ದಾಳವಾಗಿ ನಡೆದುಕೊಳ್ಳುತ್ತಿರುವುದರಿಂದ ಮುಂದಿನ ದಿನಗಳಲ್ಲಿ ರಾಜ್ಯಪಾಲರ ಹಠಾವೋ ಹೋರಾಟವನ್ನು ರಾಜಭವನದ ಎದುರು ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.



ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಮುಖಂಡರು ರಾಜ್ಯಪಾಲರ ವಿರುದ್ಧ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕೆ.ಮುದ್ದೇಗೌಡ, ಎಂ.ಡಿ.ಬಸವರಾಜು ಹಾಗೂ ಬಿ.ಚನ್ನಕೇಶವ, ಕುರುಬರ ಸಂಘದ ಅಧ್ಯಕ್ಷ ಮನ್ನೆಹುಂಡಿ ಮಹೇಶ್, ಪಿಕಾರ್ಡ್ ಅಧ್ಯಕ್ಷ ಮಹದೇವಣ್ಣ, ಎಪಿಎಂಸಿ ಮಾಜಿ ಅಧ್ಯಕ್ಷ ಎನ್ ಅನಿಲ್ ಕುಮಾರ್, ತಾಪಂ ಮಾಜಿ ಉಪಾಧ್ಯಕ್ಷ ಬಿ.ಮರಯ್ಯ, ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಎಂ.ರಮೇಶ್, ಮಾಜಿ ಸದಸ್ಯರಾದ ಕುಕ್ಕೂರ್ ಗಣೇಶ್, ರಾಮಲಿಂಗಯ್ಯ, ಮಾಜಿ ಸದಸ್ಯ ಉಕ್ಕಲಗೆರೆ ಬಸವಣ್ಣ, ಜಿಪಂ ಮಾಜಿ ಅಧ್ಯಕ್ಷ ಎಸ್.ಎನ್.ಸಿದ್ದಾರ್ಥ, ಸದಸ್ಯರಾದ ಎಂ.ಸುಧಾ ಮಹದೇವಯ್ಯ, ಕೆ.ಮಹದೇವ್, ಎಂ.ಆರ್.ಸೋಮಣ್ಣ, ತಾಪಂ ಮಾಜಿ ಅಧ್ಯಕ್ಷ ಎಂ.ಮಲ್ಲಿಕಾರ್ಜುನಸ್ವಾಮಿ, ಅಂದಾನಿ, ಸೋಸಲೆ ಪಿಎಸಿಎಸ್ ಅಧ್ಯಕ್ಷ ಎಂ.ಪರಶಿವಮೂರ್ತಿ, ಪುರಸಭಾ ಸದಸ್ಯರಾದ ಟಿ.ಎಂ.ನಂಜುಂಡಸ್ವಾಮಿ, ಎನ್.ಸೋಮು, ಬಾದಾಮಿ ಮಂಜು, ಎಲ್.ಮಂಜುನಾಥ್, ಅಹ್ಮದ್ ಸಯೀದ್, ಮೆಡಿಕಲ್ ಆರ್.ನಾಗರಾಜು, ಮಾಜಿ ಸದಸ್ಯ ಎಂ.ರಾಘವೇಂದ್ರ, ರಜತ್ ಸ್ವಾಮಿ, ಭಗೀರಥ ಉಪ್ಪಾರ ಮಹಾಸಭಾ ಅಧ್ಯಕ್ಷ ಎಸ್.ಮಹದೇವಶೆಟ್ಟಿ, ಡೈರಿ ಮಾಜಿ ಅಧ್ಯಕ್ಷ ಮಂಟೇಲಿಂಗಪ್ಪ, ಮಹಿಳಾ ಘಟಕದ ಅಧ್ಯಕ್ಷೆ ಭಾಗಮ್ಮ, ಪದವೀಧರರ ಘಟಕದ ಅಧ್ಯಕ್ಷ ಉಮೇಶ್, ಮೃಗಾಲಯ ಪ್ರಾಧಿಕಾರದ ಮಾಜಿ ನಿರ್ದೇಶಕ ಅಮ್ಜದ್ ಖಾನ್, ಮುಖಂಡರಾದ ಪಿ.ಸ್ವಾಮಿನಾಥ್ ಗೌಡ, ನಾಗೇಶ್, ಆಪ್ತ ಸಹಾಯಕ ಬಸವರಾಜು, ಅನುಪ್ ಗೌಡ, ಶಿವಸ್ವಾಮಿ ಗ್ರಾಪಂ ಮಾಜಿ ಅಧ್ಯಕ್ಷ ರಮೇಶ್, ಗುರುಸ್ವಾಮಿ, ನಾಗೇಶ್, ಗ್ಯಾಸ್ ಉಮೇಶ್, ಅನುಪ್ ಗೌಡ, ಗುರುಮಲ್ಲ, ತೇಜಸ್‌ಗೌಡ, ಶಿವಕುಮಾರ್, ಕೆ.ಗಣೇಶ್, ಎಂ.ಮಿಥುನ್, ಸೋಮಶೇಖರ್, ಶಾಂತರಾಜು, ಸಿದ್ದಪ್ಪಸ್ವಾಮಿ, ಮಹದೇವಮ್ಮ, ದಿಲೀಪ್, ಡಿ.ಆರ್. ಮೂರ್ತಿ, ಸುಂದರ ನಾಯಕ ಇನ್ನಿತರರಿದ್ದರು.

ಸ್ವಯಂ ಪ್ರೇರಿತರಾಗಿ ಬಂದ್‌ಗೆ ಬೆಂಬಲ

ಪಟ್ಟಣದ ಲಿಂಕ್ ರಸ್ತೆ, ಕಾಲೇಜು ರಸ್ತೆಗಳಲ್ಲಿ ವರ್ತಕರು ಸ್ವಯಂ ಪ್ರೇರಿತರಾಗಿ ಅಂಗಡಿ ಮುಂಗಟ್ಟುಗಳನ್ನು ಮುಚ್ಚಿ ಬೆಂಬಲ ಸೂಚಿಸಿದರು. ಆಟೋ, ಬಸ್‌ಗಳ ಸಂಚಾರವೂ ವಿರಳವಾಗಿತ್ತು. ಮುಂಜಾಗ್ರತಾ ಕ್ರಮವಾಗಿ ಪಟ್ಟಣದ ಹಲವು ಶಾಲೆಗಳಿಗೆ ರಜೆ ಘೋಷಿಸಲಾಗಿತ್ತು. ಇನ್ಸ್‌ಪೆಕ್ಟರ್ ಧನಂಜಯ್ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ಬಂದ್‌ಗೆ ತಾಲೂಕು ಕುರುಬರ ಸಂಘ, ದಲಿತ ಸಂಘರ್ಷ ಸಮಿತಿ, ಸಂಗೊಳ್ಳಿ ರಾಯಣ್ಣ ಯುವಕರು ಬಳಗ, ಸುನೀಲ್ ಬೋಸ್ ಯುವ ಬ್ರಿಗೇಡ್ ಹಾಗೂ ವರುಣ–ತಿ.ನರಸೀಪುರ ಕಾಂಗ್ರೆಸ್ ಕಾರ್ಯಕರ್ತರು ಸಾಥ್ ನೀಡಿದ್ದರು.

ಅಪಘಾತದಲ್ಲಿ ಗಾಯಗೊಂಡಿದ್ದ ವ್ಯಕ್ತಿ ಸಾವು



ಹುಣಸೂರು, ಆ.19– ಅಪಘಾತದಲ್ಲಿ ತೀವ್ರ ಗಾಯಗೊಂಡು ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದ ವ್ಯಕ್ತಿಯೋರ್ವ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾರೆ.

ನಗರದ ಕೆಹೆಚ್‌ಬಿ ಕಾಲೋನಿ ನಿವಾಸಿ, ಸದಾಶಿವನಕೊಪ್ಪಲು ಸರ್ಕಾರಿ ಶಾಲೆ ಮುಖ್ಯಶಿಕ್ಷಕಿ ಅನಿತಾ ಅವರ ಪತಿ ಮೋಹನ್ ದಾಸ್(53) ಸಾವನ್ನಪ್ಪಿದವರು. ಈತ ಭಾನುವಾರ ಮಧ್ಯಾಹ್ನ ತಮ್ಮ ಬೈಕ್ (ಕೆಎ–45, ಇಬಿ–9047) ರಾಷ್ಟ್ರೀಯ ಹೆದ್ದಾರಿಯಲ್ಲಿ ತೆರಳುವಾಗ ಪಿರಿಯಾಪಟ್ಟಣ ಕಡೆಯಿಂದ ಬಂದ ಸ್ವಿಫ್ಟ್ ಕಾರು (ಕೆಎ–07, ಎನ್–9304) ಹಿಂದಿನಿಂದ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮ ತೀವ್ರ ಗಾಯಗೊಂಡ ಮೋಹನ್ ಅವರನ್ನು ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಸೋಮವಾರ ಸಾವನ್ನಪ್ಪಿದ್ದಾರೆ ಎನ್ನಲಾಗಿದೆ. ಈ ಸಂಬಂಧ ಹುಣಸೂರು ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಎರಡೂ ವಾಹನಗಳನ್ನು ವಶಕ್ಕೆ ಪಡೆದಿದ್ದಾರೆ.

ಕೋಟೆ ಛಾಯಾಗ್ರಾಹಕರ ಸಂಘ ರಾಜ್ಯಕ್ಕೆ ಮಾದರಿ: ಶಾಸಕ ಅನಿಲ್



ಹೆಚ್.ಡಿ.ಕೋಟೆಯಲ್ಲಿ ಪದ್ಮಶ್ರೀ ಪುರಸ್ಕೃತ ಆದಿವಾಸಿ ಮುಖಂಡ ಸೋಮಣ್ಣ, ಚೆಸ್ಕಾಂ ಸಿಬ್ಬಂದಿ ನೂರುಲ್ಲಾ, ಮರಣೋತ್ತರ ಪರೀಕ್ಷಕಿ ರಾಜಮ್ಮರವರನ್ನು ಅಭಿನಂದಿಸಲಾಯಿತು.

ಹೆಚ್.ಡಿ.ಕೋಟೆ, ಆ.19– ರಾಜ್ಯದಲ್ಲೇ ತಾಲೂಕಿನ ಛಾಯಾಗ್ರಾಹಕ ಸಂಘ ಮಾದರಿಯಾಗಿ ಗುರ್ತಿಸಿಕೊಂಡಿದೆ ಎಂದು ಶಾಸಕ ಅನಿಲ್ ತಿಳಿಸಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಹೆಚ್.ಡಿ.ಕೋಟೆ, ಸರಗೂರು ತಾಲೂಕು ಛಾಯಾಗ್ರಾಹಕರ ಸಂಘದಿಂದ ಆಯೋಜಿಸಿದ್ದ 185ನೇ ಛಾಯಾಗ್ರಹಣ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ತಾಲೂಕಿನಲ್ಲಿ ಸಂಘದ ಸದಸ್ಯರಿಗೆ ಅನುಕೂಲವಾಗುವಂತಹ ಮಾದರಿ ಯೋಜನೆ ರೂಪಿಸಿದೆ. ಮರಣ ನಿಧಿ, ವಿಮೆ, ಅಪಘಾತ ವಿಮೆ, ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ, ವೃದ್ಧಾಪ್ಯ ವೇತನ, ನೂತನ ವಧು–ವರರಿಗೆ ಉಡುಗೊರೆ ಸೇರಿದಂತೆ ವಿವಿಧ ಯೋಜನೆ ರೂಪಿಸಿರುವುದು ಸಂತಸದ ವಿಚಾರ ಎಂದು ತಿಳಿಸಿದರು.

ಸಂಘಕ್ಕೆ ನಿವೇಶನ ನೀಡುವಂತೆ ಹಲವು ವರ್ಷಗಳಿಂದ ಮನವಿ ಮಾಡುತ್ತಾ ಬಂದಿದ್ದು, ಸಿಎ ನಿವೇಶನ ಮಂಜೂರು ಮಾಡಿಸಲಾಗುವುದು ಎಂದು ಭರವಸೆ ನೀಡಿದರು. ತಹಸೀಲ್ದಾರ್ ಶ್ರೀನಿವಾಸ್ ಮಾತನಾಡಿ ಒಬ್ಬ ವ್ಯಕ್ತಿಯ ಬೆಳವಣಿಗೆಯಲ್ಲಾಗುವ ಬದಲಾವಣೆ ಗಮನಿಸಬೇಕಾದರೆ ಛಾಯಾಗ್ರಹಣ ಮತ್ತು ಛಾಯಾಗ್ರಾಹಕನ ಪಾತ್ರ ಅತಿ ಮುಖ್ಯ ಎಂದರು.

ಹಿರಿಯ ಛಾಯಾಗ್ರಾಹಕರಾದ ಬೆಳತ್ತೂರಿನ ಸೂರ್ಯಕುಮಾರ್, ಅಂತರಸಂತೆ ಕೃಷ್ಣ ಮತ್ತು ಮಹಿಳಾ ಛಾಯಾಗ್ರಾಹಕರಾದ ಮಂಗಳಮ್ಮ, ಮನೋಜ್ ಅವರನ್ನು ಅಭಿನಂದಿಸಲಾಯಿತು.

ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ಛಾಯಾಗ್ರಾಹಕರ ಮಕ್ಕಳನ್ನು ಅಭಿನಂದಿಸಲಾಯಿತು. ಪದ್ಮಶ್ರೀ ಪುರಸ್ಕೃತ ಆದಿವಾಸಿ ಮುಖಂಡ ಸೋಮಣ್ಣ, ಚೆಸ್ಕಾಂ ಸಿಬ್ಬಂದಿ ನೂರುಲ್ಲಾ, ಮರಣೋತ್ತರ ಪರೀಕ್ಷಕಿ ರಾಜಮ್ಮ ಅವರನ್ನು ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ಛಾಯಾಗ್ರಾಹಕ ಸಂಘದ ಅಧ್ಯಕ್ಷ ಬಾಲಸುಬ್ರಹ್ಮಣ್ಯಂ, ಉಪಾಧ್ಯಕ್ಷ ಶಂಕರ್, ವನ್ಯಜೀವಿ ಛಾಯಾಗ್ರಾಹಕ ತೀರ್ಪುಗಾರರಾದ ರವಿಶಂಕರ್, ನಾಗೇಶ್ ಪಾಣತ್ತಲೆ, ಜಿಪಂ ಮಾಜಿ ಸದಸ್ಯ ವೆಂಕಟಸ್ವಾಮಿ, ಕಾವೇರ, ಪುರಸಭಾ ಸದಸ್ಯ ಹೆಚ್.ಸಿ. ನರಸಿಂಹಮೂರ್ತಿ, ಸಿಪಿಐ ಶಬ್ಬೀರ್ ಹುಸೇನ್, ಪ್ರಿನ್ಸ್ ಲ್ಯಾಬ್ ಮಾಲೀಕ ಮಹದೇವಸ್ವಾಮಿ, ಪ್ರಧಾನ ಕಾರ್ಯದರ್ಶಿ ಮನೋಜ್, ಗೌರವಾಧ್ಯಕ್ಷ ಸ್ವಾಮಿ ಲಕ್ಷ್ಮಿ, ಕಾರ್ಯಧ್ಯಕ್ಷ ಹೆಚ್.ಕೆ.ಪ್ರಕಾಶ್, ಖಜಾಂಚಿ ಪ್ರಮೋದ್, ಸಹ ಕಾರ್ಯದರ್ಶಿ ತ್ರಿಶಂಬೋ, ಛಾಯಾಗ್ರಾಹಕ ಸಂಘದ ಪದಾಧಿಕಾರಿಗಳಾದ ರವಿ, ಪ್ರಕಾಶ್, ಸೋಮೇಶ್, ರಘುರಾಮ್, ಸತೀಶ್ ಆರಾಧ್ಯ, ಹೊನ್ನೇಗೌಡ, ರವಿ ಆರಾಧ್ಯ, ನಾಗೇಂದ್ರ ಇನ್ನಿತರರಿದ್ದರು.

ಶ್ರೀಕಂಠೇಶ್ವರನ ದರ್ಶನ ಪಡೆದ ಶಾಸಕ ಜಿಟಿಡಿ



ಶ್ರೀಕಂಠೇಶ್ವರಸ್ವಾಮಿ ದೇವಾಲಯಲಕ್ಕೆ ಪತ್ನಿ ಸಮೇತರಾಗಿ ಶಾಸಕ ಜಿ.ಟಿ.ದೇವೇಗೌಡ ಆಗಮಿಸಿ ವಿಶೇಷ ಪೂಜೆ ಸಲ್ಲಿಸಿದರು.

ನಂಜನಗೂಡು, ಆ.19– ನಗರದ ಶ್ರೀಕಂಠೇಶ್ವರಸ್ವಾಮಿ ದೇವಾಲಯಲಕ್ಕೆ ಸೋಮವಾರ ಶಾಸಕ ಜಿ.ಟಿ.ದೇವೇಗೌಡ ಪತ್ನಿ ಲಲಿತಾ ಅವರೊಂದಿಗೆ ಆಗಮಿಸಿ ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ನಂತರ ಮಾತನಾಡಿದ ಅವರು, ರಾಜ್ಯ ಸರ್ಕಾರದ ಭ್ರಷ್ಟಾಚಾರ ಹಾಗೂ ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಜೆಡಿಎಸ್, ಬಿಜೆಪಿ ನಡೆಸಿದ ಮೈಸೂರು ಚಲೋ ಪಾದಯಾತ್ರೆ ಯಶಸ್ವಿಯಾಗಿದೆ. ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ವಿಚಾರದಲ್ಲಿ ರಾಜ್ಯಪಾಲರು ಅವರ ಕೆಲಸ ಮಾಡಿದ್ದಾರೆ. ಇದೀಗ ಚೆಂಡು ನ್ಯಾಯಾಲಯದ ಅಂಗಳದಲ್ಲಿದೆ. ಹೀಗಾಗಿ ನ್ಯಾಯಾಲಯ ಯಾವ ತೀರ್ಮಾನ ಕೈಗೊಳ್ಳಲಿದೆ ಎಂಬುದನ್ನು ಕಾದು ನೋಡಬೇಕಿದೆ. ನಂಜನಗೂಡು ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆಯಲ್ಲಿ ಜೆಡಿಎಸ್ ಸದಸ್ಯರು ಬಿಜೆಪಿಗೆ ಬೆಂಬಲ ನೀಡಲಿದ್ದಾರೆ. ರಾಜ್ಯದಲ್ಲಿ ಬಿಜೆಪಿ, ಜೆಡಿಎಸ್ ಒಟ್ಟಾಗಿ ಹೋಗಲು ನಿರ್ಧರಿಸಲಾಗಿದೆ ಎಂದರು. ಈ ವೇಳೆ ಜಿಲ್ಲಾ ಜೆಡಿಎಸ್ ಅಧ್ಯಕ್ಷ ನರಸಿಂಹಸ್ವಾಮಿ, ಮುಖಂಡ ಸಂಜಯ್ ಗೌಡ ಉಪಸ್ಥಿತರಿದ್ದರು.

ಶ್ರೀಕಂಠೇಶ್ವರ ದೇವಾಲಯಕ್ಕೆ ಅಶ್ವಿನಿ ಪುನೀತ್ ರಾಜ್‌ಕುಮಾರ್ ಭೇಟಿ



ಶ್ರೀಕಂಠೇಶ್ವರಸ್ವಾಮಿ ದೇವಾಲಯಲಕ್ಕೆ ಅಶ್ವಿನಿ ಪುನೀತ್ ರಾಜ್‌ಕುಮಾರ್ ಆಗಮಿಸಿ ಪೂಜೆ ಸಲ್ಲಿಸಿದರು.

ನಂಜನಗೂಡು, ಆ.19– ನಗರದ ಶ್ರೀಕಂಠೇಶ್ವರ ದೇವಾಲಯಕ್ಕೆ ನಟ ಪುನೀತ್ ರಾಜ್‌ಕುಮಾರ್ ಪತ್ನಿ ಅಶ್ವಿನಿ ಪುನೀತ್ ರಾಜ್‌ಕುಮಾರ್ ಅವರು ಪುತ್ರಿ ವಂದಿತಾ ಅವರೊಂದಿಗೆ ಆಗಮಿಸಿ ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಮೊದಲಿಗೆ ಶ್ರೀಕಂಠೇಶ್ವರನ ದರ್ಶನ ಪಡೆದು ಕುಂಕುಮಾರ್ಚನೆ, ವಿಶೇಷ ಪೂಜೆ ಸಲ್ಲಿಸಿ ಸ್ವಲ್ಪ ಕಾಲ ಧ್ಯಾನಸಕ್ತರಾದರು. ನಂತರ ಪಾರ್ವತಿ ದೇವಿ, ನಾರಾಯಣಸ್ವಾಮಿ, ಚಂಡಿಕೇಶ್ವರಸ್ವಾಮಿ, ಸುಬ್ರಹ್ಮಣ್ಯಸ್ವಾಮಿ ದರ್ಶನ ಪಡೆದರು. ದೇವಾಲಯದ ವತಿಯಿಂದ ವಸ್ತ್ರ ನೀಡಿ ಗೌರವಿಸಲಾಯಿತು. ಇದೇ ಸಂದರ್ಭ ಮುಖಂಡರಾದ ಎನ್.ಟಿ.ಗಿರೀಶ್ ಉಪಸ್ಥಿತರಿದ್ದರು.

ಪಿರಿಯಾಪಟ್ಟಣದಲ್ಲಿ ರಕ್ಷಾ ಬಂಧನ ಆಚರಣೆ



ಪಿರಿಯಾಪಟ್ಟಣದಲ್ಲಿ ಜಿಲ್ಲಾ ಹಾಗೂ ತಾಲೂಕು ಬಿಜೆಪಿ ಮಹಿಳಾ ಮೋರ್ಚಾ, ವಿಶ್ವ ಹಿಂದೂ ಪರಿಷತ್ ವತಿಯಿಂದ ಪಟ್ಟಣದ ಪೊಲೀಸ್ ಠಾಣೆ, ನ್ಯಾಯಾಲಯ ಹಾಗೂ ಆನೆ ಚೌಕೂರು ಕುರುಬರ ಹಾಡಿಗಳಲ್ಲಿ ರಾಖಿ ಕಟ್ಟುವ ಮೂಲಕ ರಕ್ಷಾಬಂಧನ ಆಚರಿಸಲಾಯಿತು. ಈ ವೇಳೆ ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ನಳಿನಿ ಗೌಡ ತಾಲೂಕು ಅಧ್ಯಕ್ಷೆ ಮೀನಾಕ್ಷಿ, ಉಪಾಧ್ಯಕ್ಷೆ ಗಾಯತ್ರಿ, ಜಿಲ್ಲಾ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಶುಭಶ್ರೀ, ಕಾರ್ಯಕರ್ತಗಳಾದ ಆಶಾ, ಗೌರಮ್ಮ, ಭಾಗ್ಯ ವಿಶ್ವ ಹಿಂದೂ ಪರಿಷತ್ ಯಶವಂತ್ ಯಾದವ್ ಇನ್ನಿತರರಿದ್ದರು.

ಅಕ್ರಮವಾಗಿ ಸಾಗಿಸುತ್ತಿದ್ದ ಹಸುಗಳ ರಕ್ಷಣೆ



ನಂಜನಗೂಡು, ಆ.19– ನಗರದ ಶ್ರೀಕಂಠೇಶ್ವರ ದೇವಾಲಯದ ಸಮೀಪ ಭಾನುವಾರ ಟಾಟಾ ಏಸ್‌ನಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ ಹಸುಗಳನ್ನು ರಕ್ಷಣೆ ಮಾಡಿ ಇಬ್ಬರು ಆರೋಪಿಗಳನ್ನು ನಗರ ಠಾಣೆ ಪೊಲೀಸರು ವಶಕ್ಕೆ ಪಡೆದಿದ್ದಾರೆ. ನಂಜನಗೂಡಿನಿಂದ ಚಾಮರಾಜನಗರಕ್ಕೆ ಒಂದು ಹಸು ಹಾಗೂ 5 ಕರುಗಳನ್ನು ಅಕ್ರಮವಾಗಿ ಸಾಗಿಸಲಾಗುತ್ತಿತ್ತು. ಅನುಮಾನಗೊಂಡ ಸಾರ್ವಜನಿಕರು ಪೊಲೀಸರಿಗೆ ವಿಷಯ ತಿಳಿಸಿ, ಜಾನುವಾರುಗಳನ್ನು ರಕ್ಷಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಬಹಿಷ್ಕಾರ ಪದ್ಧತಿ ನಿರ್ಮೂಲನೆಗೆ ಶ್ರಮಿಸಿ

ಜೆಎಂಎಫ್‌ಸಿ ನ್ಯಾಯಾಧೀಶ ಬಿ.ಸಂದೇಶ್ ಪ್ರಭು ಕರೆ



ಕಾರ್ಯಕ್ರಮವನ್ನು ಗಣ್ಯರು ಉದ್ಘಾಟಿಸಿದರು.

ಸರಗೂರು, ಆ.19– ಬಹಿಷ್ಕಾರ ಪದ್ಧತಿ ನಿರ್ಮೂಲನೆಗೆ ಪ್ರತಿಯೊಬ್ಬರೂ ಶ್ರಮಿಸಬೇಕು ಎಂದು ಹಿರಿಯ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶ ಬಿ.ಸಂದೇಶ್ ಪ್ರಭು ಕರೆ ನೀಡಿದರು.

ಪಟ್ಟಣದ ನಾಮಧಾರಿಗೌಡ ಸಮುದಾಯ ಭವನದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ಸರ್ಕಾರಿ ಅಭಿಯೋಜನಾ ಇಲಾಖೆ, ತಾಲೂಕು ಕಚೇರಿ, ಪಪಂ ಹಾಗೂ ಸರಗೂರು ಪೊಲೀಸ್ ಠಾಣೆ ಸಹಯೋಗದಲ್ಲಿ ಆಯೋಜಿಸಿದ್ಧ ಬಹಿಷ್ಕಾರ ಪದ್ಧತಿ ನಿರ್ಮೂಲನೆ ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಗ್ರಾಮಗಳಲ್ಲಿ ಸಮಸ್ಯೆಗಳನ್ನು ನ್ಯಾಯ ಪಂಚಾಯತಿ ಮಾಡಿ ಬಗೆಹರಿಸಿಕೊಳ್ಳುವುದು ಒಳ್ಳೆಯ ಬೆಳವಣಿಗೆ. ಆದರೆ ಪಂಚಾಯಿತಿಯಲ್ಲಿ ಇತ್ಯರ್ಥ ಪಡಿಸಿ ನೀಡಲಾದ ತೀರ್ಪನ್ನು ವ್ಯಕ್ತಿ ಒಪ್ಪದಿದ್ದಾಗ ಅಂತಹ ವ್ಯಕ್ತಿಗೆ ಬಹಿಷ್ಕಾರ ಹಾಕುವುದು ಅಪರಾಧ. ಇದಕ್ಕೆ ಕಾನೂನಿನಲ್ಲಿ ಅವಕಾಶವಿಲ್ಲ. ಬದಲಿಗೆ ನ್ಯಾಯಕ್ಕಾಗಿ ನ್ಯಾಯಾಲಯದ ಮೊರೆ ಹೋಗಬೇಕಿದೆ ಎಂದರು.

ಬಹಿಷ್ಕಾರ ಪದ್ಧತಿ ನಿರ್ಮೂಲನೆಗೆ ಎಲ್ಲರೂ ಪಣ ತೊಡಬೇಕು. ಈ ಬಗ್ಗೆ ಗ್ರಾಮಸ್ಥರಿಗೆ ಅರಿವು ಮೂಡಿಸಬೇಕು. ಕಾನೂನಿನಲ್ಲಿ ಎಲ್ಲರೂ ಸಮಾನರು. ಹೀಗಾಗಿ ಸಮಾಜದಲ್ಲಿನ ಅನಿಷ್ಟ ಪದ್ಧತಿಯನ್ನು ಹೋಗಲಾಡಿಸಬೇಕು ಎಂದು ತಿಳಿಸಿದರು. ಇದೇ ವೇಳೆ ಹೆಚ್.ಡಿ.ಕೋಟೆ ಪ್ರಧಾನ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶ ಕೆ.ಜಿ.ಸತೀಶ್, ಅಪಾರ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶ ಎಸ್.ಎನ್.ಸುರೇಶ್ ಮಾತನಾಡಿದರು.

ಬಹಿಷ್ಕಾರ ಪದ್ಧತಿ ನಿರ್ಮೂಲನೆ ಸಂದರ್ಭ ಕಿರುಚಿತ್ರ ಪ್ರದರ್ಶನ ಮಾಡಲಾಯಿತು. ಎಸ್‌ಐ ನಂದೀಶ್ ಕುಮಾರ್, ಎಎಸ್‌ಐ ಗೋಪಾಲ್, ತಾಲೂಕು ವಕೀಲರ ಸಂಘದ ಅಧ್ಯಕ್ಷ ಎಸ್.ಗಂಗರಾಜು, ವಕೀಲರಾದ ಶಾಂತ, ಸರಸ್ವತಿ, ರಮೇಶ್, ತಾಪಂ ಸಂಯೋಜಕ ಮಹದೇವಸ್ವಾಮಿ, ರವೀಂದ್ರ ಮುಜೀಬ್, ಇಮ್ರಾನ್ ಮಹಮದ್ ಇನ್ನಿತರರಿದ್ದರು.

ಬಸವನಹಳ್ಳಿಯಿಂದ ವ್ಯಕ್ತಿ ನಾಪತ್ತೆ



ಹುಣಸೂರು, ಆ.19– ವ್ಯಕ್ತಿಯೋರ್ವ ನಾಪತ್ತೆಯಾಗಿರುವ ಸಂಬಂಧ ಬಿಳಿಕೆರೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ತಾಲೂಕಿನ ಬಸವನಹಳ್ಳಿ ಗ್ರಾಮದ ನಿವಾಸಿ ರಾಚಾಚಾರಿ (55) ನಾಪತ್ತೆಯಾದವರು. ಈತ ಆ.11ರಂದು ಗದ್ದಿಗೆ ಗ್ರಾಮಕ್ಕೆ ಹೋಗಿ ಬರುವುದಾಗಿ ಹೇಳಿ ಹೋದವರು ಇದುವರೆಗೂ ಮನೆಗೆ ವಾಪಸ್ಸಾಗಿಲ್ಲ ಎಂದು ಪುತ್ರ ಸುಹಾಸ್ ಬಿಳಿಕೆರೆ ಠಾಣೆಗೆ ದೂರು ನೀಡಿದ್ದಾರೆ. ಇವರ ಬಗ್ಗೆ ಸುಳಿವು ಸಿಕ್ಕಲ್ಲಿ ದೂ. 08222–240002, ಮೊ.9480805057 ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

ದಾಸೋಹ ತತ್ವ ರೂಪಿಸಿದ ಮಹಾಶರಣ ನುಲಿಯ ಚಂದಯ್ಯ

ಅನಿಕೇತನ ಪಿಯು ಕಾಲೇಜಿನ ಕಾರ್ಯದರ್ಶಿ ಡಾ.ಜೆ.ಸೋಮಣ್ಣ



ಕಾರ್ಯಕ್ರಮವನ್ನು ಗಣ್ಯರು ಉದ್ಘಾಟಿಸಿದರು.

ಬೆಟ್ಟದಪುರ, ಆ.19– ಕಾಯಕದ ಮೂಲಕ ಜನತೆಯ ಹಸಿವು ನೀಗಿಸಲು ದಾಸೋಹ ತತ್ವ ರೂಪಿಸಿದ ಮಹಾಶರಣ ನುಲಿಯ ಚಂದಯ್ಯ ಎಂದು ಅನಿಕೇತನ ಪಿಯು ಕಾಲೇಜಿನ ಕಾರ್ಯದರ್ಶಿ ಡಾ.ಜೆ.ಸೋಮಣ್ಣ ತಿಳಿಸಿದರು.

ಇಲ್ಲಿಗೆ ಸಮೀಪದ ಹಸುವಿನ ಕಾವಲು ಗ್ರಾಮದಲ್ಲಿ ಸೋಮವಾರ ಕುಳುವ ಸಮಾಜದಿಂದ ಆಯೋಜಿಸಿದ್ದ ನುಲಿಯ ಚಂದಯ್ಯ ಜಯಂತಿಯಲ್ಲಿ ಮುಖ್ಯ ಭಾಷಣ ಮಾಡಿದ ಅವರು, ಬಿಜಾಪುರ ಜಿಲ್ಲೆ ಶಿವಣಿಗೆಯಲ್ಲಿ ಜನಿಸಿದ ನುಲಿಯ ಚಂದಯ್ಯ ಅವರು ಕೆರೆಯಲ್ಲಿ ಬೆಳೆಯುವ ಜೊಂಡು ಕೊಯ್ದು ಹಗ್ಗ ಹೊಸೆದು ಮಾರಾಟ ಮಾಡಿ ಬಂದ ಹಣದಲ್ಲಿ ದಾಸೋಹ ಮಾಡುತ್ತಿದ್ದರು. ದಾಸೋಹ ಚಿಂತನೆ ಇವರ ದೊಡ್ಡ ಸೇವೆಯಾಗಿತ್ತು ಎಂದರು.

ಬಸವಣ್ಣನವರ ತತ್ವಾದರ್ಶಗಳಿಗೆ ಕಟ್ಟು ಬಿದ್ದ ನುಲಿಯ ಚಂದಯ್ಯ ಮೊದಲಾದ ವಚನಕಾರರು ದಾಸೋಹದ ಜೊತೆಗೆ ಜಾತಿ, ಅಸಮಾನತೆ, ಮೂಢನಂಬಿಕೆ ವಿರುದ್ಧ ಹೋರಾಡಿದರು. ಇವರ ತತ್ವಾದರ್ಶಗಳನ್ನು ಮೈಗೂಡಿಸಿಕೊಂಡಾಗ ಮಾತ್ರ ಇಂತಹ ಜಯತಿಗೆ ಸಾರ್ಥಕತೆ ಬರುತ್ತದೆ ಎಂದರು.

ಗ್ರಾಪಂ ಮಾಜಿ ಅಧ್ಯಕ್ಷ ಮೈಲಾರಪ್ಪ ಮಾತನಾಡಿ, ಗ್ರಾಮಗಳಲ್ಲಿ ಯುವಕರು ಸಂಘಟಿರಾದರೆ ಉತ್ತಮ ಕೆಲಸ ಮಾಡಬಹುದು. ಶರಣರು ದಾಸೋಹ ತತ್ವಕ್ಕೆ ಹೆಚ್ಚು ಒತ್ತು ನೀಡಿದಂತೆ ತಾವು ಊರಿನ ಪ್ರಗತಿಗೆ ಶ್ರಮಿಸಬೇಕು. ಯಾವುದೇ ಕೆಲಸವನ್ನು ಶ್ರದ್ಧೆಯಿಂದ ಮಾಡಬೇಕು. ಕಾಯಕದ ಮೂಲಕ ಉತ್ತಮ ಬದುಕು ರೂಪಿಸಿಕೊಳ್ಳಬೇಕು ಎಂದರು.

ತಾಲೂಕು ನುಲಿಯ ಚಂದಯ್ಯ ಜಯಂತಿ ಆಚರಣೆ ಸಮಿತಿ ಅಧ್ಯಕ್ಷ ಸತ್ಯನಾರಾಯಣ ಮಾತನಾಡಿ, ಜನಾಂಗದಲ್ಲಿ ಒಗ್ಗಟ್ಟು ಮತ್ತು ಆತ್ಮವಿಶ್ವಾಸ ಬೆಳೆಸುವುದಕ್ಕಾಗಿ ನುಲಿಯ ಚಂದಯ್ಯ ಜಯಂತಿ ಮಾಡಲಾಗುತ್ತಿದೆ. ಈಗ ವಿವಿಧ ಸಮಾಜದ ಎಲ್ಲರೂ ಒಂದೆಡೆ ಸೇರಿರುವುದೇ ನಿಜವಾದ ವಚನಕಾರರು ಕಂಡ ಕನಸು ಎಂದರು.

ಈ ವೇಳೆ ಚಿಕ್ಕನೇರಳೆ ಗ್ರಾಪಂ ಅಧ್ಯಕ್ಷೆ ಲಕ್ಷ್ಮಿ, ಜಿಲ್ಲಾ ಕುಳುವ ಸಮಾಜದ ಅಧ್ಯಕ್ಷ ಮುತ್ತುರಾಜ, ಅನಿಕೇತನ ಪಿಯು ಕಾಲೇಜಿನ ಅಧ್ಯಕ್ಷ ಅಪ್ಪಣ್ಣ, ಮುಖಂಡರಾದ ದೇವರಾಜು, ವೆಂಕಟೇಶ, ಮಾಜಿ ಯೋಧ ಸುಬ್ರಹ್ಮಣ್ಯ ನಾಯಕ್, ಜ್ಯೋತಿಕುಮಾರ್, ಗೋವಿಂದೇಗೌಡ, ನಾಗರಾಜ್, ಅಕ್ಷಯ್ ಕುಮಾರ್, ಆದಿತ್ಯ, ಗೋವಿಂದರಾಜು, ರೇವಣ್ಣ, ಜೀವನ್, ಸತೀಶ್, ಮಹದೇವ್, ಗೋವಿಂದಯ್ಯ, ಕಾರ್ಯಕ್ರಮ ಸಂಚಾಲಕ ಪ್ರಸನ್ನ ಹಾಗೂ ಕಲಾವಿದ ಮಲ್ಲೇಶ್ ಇತರರಿದ್ದರು.

ಕೆ.ಆರ್.ನಗರ: ಇಂದಿರಾಗಾಂಧಿ ವಸತಿ ಶಾಲೆ ಉದ್ಘಾಟನೆ



ಸ್ಥಳಾಂತರಗೊಂಡ ಇಂಧಿರಾ ಗಾಂಧಿ ವಸತಿ ಶಾಲೆಯನ್ನು ಶಾಸಕ ಡಿ.ರವಿಶಂಕರ್ ಉದ್ಘಾಟಿಸಿದರು.

ಕೆ.ಆರ್.ನಗರ, ಆ.19– ಕ್ಷೇತ್ರ ವ್ಯಾಪ್ತಿಯ 6 ವಸತಿ ಶಾಲೆಗಳು ಕಳೆದ ಶೈಕ್ಷಣಿಕ ವರ್ಷದಲ್ಲಿ ಶೇ.100ರಷ್ಟು ಫಲಿತಾಂಶ ಗಳಿಸಿದ್ದು, ಎಸ್‌ಎಸ್‌ಎಲ್‌ಸಿಯಲ್ಲಿ 4ನೇ ಸ್ಥಾನ ಗಳಿಸಿದ್ದೇವೆ. ಇದು ಎಲ್ಲರೂ ಹೆಮ್ಮೆ ಪಡುವ ವಿಚಾರ ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ಪಟ್ಟಣದ ಆಂಜನೇಯ ಬಡಾವಣೆಯಲ್ಲಿ ಸ್ಥಳಾಂತರಗೊಂಡ ಇಂದಿರಾಗಾಂಧಿ ವಸತಿ ಶಾಲೆ ಉದ್ಘಾಟಿಸಿ ಮಾತನಾಡಿದ ಅವರು, ಈ ಸಾಲಿನ ಎಸ್‌ಎಸ್‌ಎಲ್‌ಸಿಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆಯಲು ಶಿಕ್ಷಕರು ಕಾರ್ಯೋನ್ಮುಖರಾಗಬೇಕು ಎಂದರು. ಎಲ್ಲಾ ವಸತಿ ಶಾಲೆಗಳು ಮತ್ತು ವಿದ್ಯಾರ್ಥಿ ನಿಲಯಗಳಲ್ಲಿ ಮಕ್ಕಳಿಗೆ ಉತ್ತಮ ಆಹಾರ ಮತ್ತು ವಸತಿ ವ್ಯವಸ್ಥೆ ಮಾಡುವ ಜೊತೆಗೆ ಗುಣಮಟ್ಟದ ಶಿಕ್ಷಣ ನೀಡಲು ಕ್ರಮ ಕೈಗೊಂಡಿದ್ದು, ಈ ವಿಚಾರದಲ್ಲಿ ಯಾವುದೇ ದೂರುಗಳಿದ್ದರೂ ವಿದ್ಯಾರ್ಥಿಗಳು ನನಗೆ ನೇರವಾಗಿ ತಿಳಿಸಬೇಕೆಂದು ತಿಳಿಸಿದರು.

ವಸತಿ ನಿಲಯಗಳಲ್ಲಿ ಕಾರ್ಯ ನಿರ್ವಹಿಸುವ ವಾರ್ಡನ್‌ಗಳು ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟವನ್ನು ಆಗಾಗ್ಗೆ ಪರೀಕ್ಷಿಸುವ ಜೊತೆಗೆ ಪೋಷಕರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಮಕ್ಕಳ ವರ್ತನೆ ಮತ್ತು ಅವರ ಕಲಿಕೆ ಬಗ್ಗೆ ಮಾಹಿತಿ ನೀಡಬೇಕೆಂದು ಸೂಚಿಸಿದರು.

ಸಾಲಿಗ್ರಾಮ ಮತ್ತು ಕೆ.ಆರ್.ನಗರ ಗಳಲ್ಲಿ ಮತ್ತಷ್ಟು ವಸತಿ ಶಾಲೆಗಳನ್ನು ಆರಂಭಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸಂಬಂಧಿಸಿದ ಸಚಿವರೊಂದಿಗೆ ಚರ್ಚೆ ನಡೆಸಿ ಕ್ರಮ ಕೈಗೊಳ್ಳುತ್ತೇನೆ ಎಂದು ಭರವಸೆ ನೀಡಿದರು.

ಈ ವೇಳೆ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಮಹೇಶ್, ನಿರ್ದೇಶಕರಾದ ಪ್ರಸನ್ನಕುಮಾರ್, ಸರಿತಾ, ಸೈಯದ್ ಜಾಬೀರ್, ತಾಲೂಕು ಕುರುಬರ ಸಂಘದ ಅಧ್ಯಕ್ಷ ಶಿವಣ್ಣ, ಪುರಸಭೆ ಮಾಜಿ ಅಧ್ಯಕ್ಷ ನರಸಿಂಹರಾಜು, ಸದಸ್ಯರಾದ ನಟರಾಜು, ಶಂಕರಸ್ವಾಮಿ, ಶಂಕರ್ ಮಾಜಿ ಸದಸ್ಯ ಕೆ.ವಿನಯ್, ಟಿಎಪಿಸಿಎಂಎಸ್ ನಿರ್ದೇಶಕ ಹೆಚ್.ಪಿ.ಪ್ರಶಾಂತ್, ಎಸಿ ವಿಜಯಕುಮಾರ್, ಪುರಸಭೆ ಮುಖ್ಯಾಧಿಕಾರಿ ಬಿ.ವಿ.ವೆಂಕಟೇಶ್, ಮೇಲ್ವಿಚಾರಕರಾದ ಲೋಕೇಶ್, ಮಧುಸೂಧನ್, ಪ್ರಾಂಶುಪಾಲೆ ಪವಿತಾ, ಶಿಕ್ಷಕರಾದ ಎಂ.ಟಿ.ಹರೀಶ್, ಮಂಜುನಾಥ್, ಭರತ್, ಸಾಕಮ್ಮ ಮತ್ತಿತರರಿದ್ದರು.

ಮುಖ್ಯಮಂತ್ರಿ ವಿರುದ್ಧ ತನಿಖೆಗೆ ರಾಜ್ಯಪಾಲರ ಅನುಮತಿ ಖಂಡಿಸಿ

ಮೈಸೂರಲ್ಲಿ ಕಾಂಗ್ರೆಸ್ ಕಾನೂನು ಸಮಿತಿ, ವಕೀಲರ ಪಂಜಿನ ಮೆರವಣಿಗೆ



ಮುಖ್ಯಮಂತ್ರಿ ವಿರುದ್ಧ ತನಿಖೆಗೆ ರಾಜ್ಯಪಾಲರ ಅನುಮತಿ ಖಂಡಿಸಿ ಮೈಸೂರಲ್ಲಿ ಕಾಂಗ್ರೆಸ್ ಕಾನೂನು ಘಟಕದ ವತಿಯಿಂದ ಪಂಜಿನ ಮೆರವಣಿಗೆ ನಡೆಸಲಾಯಿತು

ಮೈಸೂರು, ಆ.19(ಎಂಕೆ)– ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಖಂಡಿಸಿ ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿಯ ಕಾನೂನು ಘಟಕ ಹಾಗೂ ಸಿದ್ದರಾಮಯ್ಯ ಅಭಿಮಾನಿಗಳಿಂದ ಪಂಜಿನ ಮೆರವಣಿಗೆಯೊಂದಿಗೆ ಪ್ರತಿಭಟನೆ ನಡೆಸಲಾಯಿತು.

ಜಿಲ್ಲಾ ನ್ಯಾಯಾಲಯದ ಎದುರಿನ ಗಾಂಧಿ ಪುತ್ಥಳಿ ಎದುರು ಜಮಾವಣೆಗೊಂಡ ನೂರಾರು ವಕೀಲರು, ಪಂಜುಗಳನ್ನು ಹಿಡಿದು ಗಾಂಧಿ ಪುತ್ಥಳಿಯಿಂದ ವಾಣಿ ವಿಲಾಸ ರಸ್ತೆಯಲ್ಲಿರುವ ಸರ್ಕಾರಿ ತಮಿಳು ಶಾಲೆಯ(ಜೆಎಸ್‌ಎಸ್ ವಿದ್ಯಾರ್ಥಿನಿಲಯ)ಬಳಿ ತಿರುವು ಪಡೆದುಕೊಂಡು ವಾಪಸ್ ಗಾಂಧಿ ಪುತ್ಥಳಿವರೆಗೆ ಮೆರವಣಿಗೆ ನಡೆಸಿದರು. ತಮಟೆ ಜೊತೆಗೆ ಪಂಜು ಹಿಡಿದು ಸಾಗಿದ ವಕೀಲರು, ಕೇಂದ್ರ ಸರ್ಕಾರ ಹಾಗೂ ರಾಜ್ಯಪಾಲರ ವಿರುದ್ಧ ಧಿಕ್ಕಾರ ಕೂಗಿ, ಆಕ್ರೋಶ ಹೊರಹಾಕಿದರು.

ಈ ವೇಳೆ ಹಿರಿಯ ವಕೀಲ ಸಿ.ಎಂ. ಜಗದೀಶ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದೇ ಅಸಂವಿಧಾನಿಕ. ಯಾವುದೇ ಅಪರಾಧ ಮಾಡದ ಸಿದ್ದರಾಮಯ್ಯ ಅವರ ಸ್ಥಾನಪಲ್ಲಟಗೊಳಿಸುವ ದೃಷ್ಟಿಕೋನದಿಂದ ಮಾಡಿರುವ ಆದೇಶವಾಗಿದೆ ಇದರಲ್ಲಿ ರಾಜ್ಯಪಾಲರು ಮಾತ್ರವಲ್ಲದೆ ಕೇಂದ್ರ ಸರ್ಕಾರ ಹಾಗೂ ವಿರೋಧ ಪಕ್ಷಗಳು ಸೇರಿವೆ. ಸಿದ್ದರಾಮಯ್ಯ ಅವರ ವಿರುದ್ಧ ತನಿಖೆ ಕೈಗೊಳ್ಳಬೇಕಾದರೆ ಎಲ್ಲಿಯಾದರೂ ಪ್ರಕರಣ ದಾಖಲಾಗಬೇಕಿತ್ತು. ಆದರೆ ಎಲ್ಲಿಯೂ ಪ್ರಕರಣ ದಾಖಲಾಗಿಲ್ಲ. ಯಾರೋ ಖಾಸಗಿ ವ್ಯಕ್ತಿ ನೀಡಿದ ದೂರಿಗೆ ವಿಚಾರಣೆ ನಡೆಸಲು ಅನುಮತಿ ನೀಡಿದ್ದಾರೆ. ಅಲ್ಲದೆ ಯಾವುದೇ ಸಕಾರಣಗಳನ್ನು ನೀಡಿಲ್ಲ. ಇದೊಂದು ರಾಜಕೀಯ ಪ್ರೇರಿತ ಎಂದು ಹೇಳಿದರು.

ಹೈಕೋರ್ಟ್ ನೀಡಿರುವ ತಾತ್ಕಾಲಿಕ ಆದೇಶವೂ ಸಿದ್ದರಾಮಯ್ಯ ಅವರ ಪರವಾಗಿದೆ ನ್ಯಾಯಾಲಯವೂ ಸಿದ್ದರಾಮಯ್ಯ ಅವರ ವಿರುದ್ಧ ಮಾಡಿರುವ ವಿಚಾರಣಾ ಆದೇಶ ಸರಿಯಿಲ್ಲ ಎಂಬುದನ್ನು ಮನಗಂಡು ಆದೇಶ ನೀಡಿದೆ. ಇದನ್ನೆಲ್ಲಾ ಗಮನಿಸಿದರೆ ರಾಜ್ಯಪಾಲರು ಸಂವಿಧಾನ ಮತ್ತು ಕಾನೂನು ವಿರುದ್ಧ ನಡೆದುಕೊಂಡಿದ್ದಾರೆ ಎಂಬುದು ಸ್ಪಷ್ಟವಾಗಿದೆ. ಆದ್ದರಿಂದ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರು, ಯಾವುದೇ ಷರತ್ತುಗಳನ್ನು ವಿಧಿಸದೆ ಅನುಮತಿ ವಾಪಸ್ ಪಡೆಯಬೇಕು ಎಂದು ಆಗ್ರಹಿಸಿದರು.

ಕೆಪಿಸಿಸಿ ಕಾನೂನು ವಿಭಾಗದ ಪ್ರಧಾನ ಕಾರ್ಯದರ್ಶಿ ಎ.ಆರ್.ಕಾಂತರಾಜ್ ಮಾತನಾಡಿ, ಸಿದ್ದರಾಮಯ್ಯ ಅವರ ಕಾನೂನು ಹೋರಾಟಕ್ಕೆ ಈಗಾಗಲೇ ಜಯ ಸಿಕ್ಕಿದೆ. ಮುಖ್ಯಮಂತ್ರಿಗಳು ಮುಡಾ ಪ್ರಕರಣದಲ್ಲಿ ಭಾಗಿಯಾಗಿಲ್ಲ ಎಂಬುದು ಎಲ್ಲರಿಗೂ ಗೊತ್ತಿದೆ. ಆದರೆ, ಕೇಂದ್ರದ ಬಿಜೆಪಿ ಸರ್ಕಾರ ದುರುದ್ದೇಶಪೂರ್ವಕವಾಗಿ ಜನಪರ ನಾಯಕ ಸಿದ್ದರಾಮಯ್ಯ ಅವರ ವಿರುದ್ಧ ಯಾವುದೇ ಸಕಾರಣಗಳಿಲ್ಲದೆ ಕಾನೂನು ಪ್ರಕ್ರಿಯೆ ಜಾರಿಗೊಳಿಸಲು ರಾಜ್ಯಪಾಲರ ಮೂಲಕ ಮುಂದಾಗಿದೆ. ಕಾನೂನು ಬಾಹಿರವಾಗಿ ಪೂರ್ವಪರ ವಿಚಾರಿಸದೇ ನೋಟಿಸ್ ಕೊಡುವುದು ಎಷ್ಟು ಸರಿ. ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳನ್ನು ಶ್ಲಾಘಿಸಿದ ಇದೇ ರಾಜ್ಯಪಾಲರು, ಮರುದಿನವೇ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದರಲ್ಲಿಯೇ ಅವರ ನಡೆ ಅಸಂವಿಧಾನಿಕ ಎಂಬುದು ತೋರುತ್ತದೆ ಎಂದು ಕಿಡಿಕಾರಿದರು.

ಮುಂದುವರೆಯುವ ಅರ್ಹತೆ ಇಲ್ಲ: ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿಯ ಕಾನೂನು ಘಟಕ ಅಧ್ಯಕ್ಷ ತಿಮ್ಮಯ್ಯ ಮಾತನಾಡಿ, ಮುಡಾ ಪ್ರಕರಣದಲ್ಲಿ ಮೇಲ್ನೋಟಕ್ಕೆ ಯಾವುದೇ ಸಾಕ್ಷ್ಯಾಧಾರಗಳು ಇಲ್ಲದಿರುವುದರಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಆ.29ರವರೆಗೆ ಯಾವುದೇ ಆದೇಶಗಳನ್ನು ಮಾಡುವಂತಿಲ್ಲ ಎಂದು ಹೈಕೋರ್ಟ್ ಹೇಳಿದೆ. ಆದ್ದರಿಂದ ಈಗಲಾದರೂ ರಾಜ್ಯಪಾಲರು ನೀಡಿರುವ ಅನುಮತಿ ವಾಪಸ್ ಪಡೆಯಬೇಕು. ಅಲ್ಲದೆ ಅವರು, ರಾಜ್ಯಪಾಲರಾಗಿ ಮುಂದುವರೆಯುವ ಅರ್ಹತೆ ಹೊಂದಿಲ್ಲ. ಕೇಂದ್ರದವರು ಕೂಡಲೇ ರಾಜ್ಯಪಾಲರನ್ನು ವಾಪಸ್ ಕರೆಸಿಕೊಂಡು ಬೇರೆ ರಾಜ್ಯಪಾಲರನ್ನು ನೇಮಕ ಮಾಡಬೇಕು ಎಂದು ಒತ್ತಾಯಿಸಿದರು.

ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ವಕೀಲರಾದ ರಾಮಕೃಷ್ಣ(ಆರ್‌ಕೆ), ಗಂಗಾಧರ್, ಪುಟ್ಟಸಿದ್ದೇಗೌಡ, ಉಮೇಶ್, ಶಿವಪ್ರಸಾದ್, ತನುಜಾ ಮಹೇಶ್ ಮತ್ತಿತರರಿದ್ದರು.

ಮೈಸೂರು ವಕೀಲರ ಸಂಘದಿಂದ ಹೋರಾಟ...!

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಖಂಡಿಸಿ ಮೈಸೂರು ವಕೀಲರ ಸಂಘದ ಹಲವು ಸದಸ್ಯರು, ಹೋರಾಟ ನಡೆಸುವುದಾಗಿ ಸಂಘಕ್ಕೆ ಮನವಿ ಮಾಡಿದ್ದಾರೆ. ಅದರಂತೆ ನಾಳೆ(ಆ.20) ನಡೆಯುವ ಸಂಘದ ಸಭೆಯಲ್ಲಿ ಹೋರಾಟದ ಕುರಿತು ಚರ್ಚಿಸಿ ನಿರ್ಧರಿಸಲಾಗುವುದು.

- ಚರಣ್‌ರಾಜ್, ಜಂಟಿ ಕಾರ್ಯದರ್ಶಿ, ಮೈಸೂರು ವಕೀಲರ ಸಂಘ

ರಾಜ್ಯಪಾಲರೇ ರಾಜೀನಾಮೆ ಕೊಡಲಿ...!

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಯಾವುದೇ ಸಕಾರಣಗಳಿಲ್ಲದೆ ವಿಚಾರಣೆಗೆ ಅನುಮತಿ ನೀಡುವ ಮೂಲಕ ಸಂವಿಧಾನಕ್ಕೆ ವಿರುದ್ಧವಾಗಿ ನಡೆದುಕೊಂಡಿರುವ ರಾಜ್ಯಪಾಲರು ಕೂಡಲೇ ತಮ್ಮ ಸ್ಥಾನವನ್ನು ತ್ಯಜಿಸಿ, ರಾಷ್ಟ್ರಪತಿಗಳಿಗೆ ರಾಜೀನಾಮೆ ನೀಡಬೇಕು ಎಂಬುದು ನಮ್ಮೆಲ್ಲರ ಒತ್ತಾಯ.

- ಸಿ.ಎಂ.ಜಗದೀಶ್, ಹಿರಿಯ ವಕೀಲ

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಡಬಲ್ ಐಸ್ಮಾರ್ಟ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಯನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ವೇದ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕೃಷ್ಣಂ ಪ್ರಣಯ ಸಖಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೀಮಾ (ಕ)	4 ಪ್ರದರ್ಶನಗಳು
ರಾಜಕಮಲ್	
ತಂಗಾಲಾನ್ (ತ)	4 ಪ್ರದರ್ಶನಗಳು
ಸಂಗಂ	
ಭೀಮಾ (ಕ)	4 ಪ್ರದರ್ಶನಗಳು
ಲಿಡೋ	
ಗೌರಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಸ್ತ್ರೀ–2 (ಹಿ)	4 ಪ್ರದರ್ಶನಗಳು
ಪ್ರಭಾ	
ಡಬಲ್ ಐಸ್ಮಾರ್ಟ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಭೀಮಾ (ಕ): ಬೆ.10.20ಕ್ಕೆ, ರಾ.10.20ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.1.05ಕ್ಕೆ, ಸಂ.4.10ಕ್ಕೆ, ರಾ.7.15ಕ್ಕೆ.
ಸ್ಕ್ರೀನ್ 2	ಗೌರಿ (ಕ): ಬೆ.10.50ಕ್ಕೆ, ಸಂ.4.30ಕ್ಕೆ, ವೇದಾ (ಹಿಂ): ಮ.1.25ಕ್ಕೆ, ಮಿ. ಬಚ್ಚನ್ (ತೆ): ರಾ.7.10ಕ್ಕೆ, ಡಿಮೊಂಟ್ ಕಾಲೋನಿ 2 (ತ): ರಾ.10.10ಕ್ಕೆ.
ಸ್ಕ್ರೀನ್ 3	ಇಟ್ ಎಂಡ್ಸ್ ವಿಥ್ ಅಸ್ (ಇಂ): ಬೆ.10.50ಕ್ಕೆ, ತಂಗಲಾನ್ (ತ): ಮ.1.25ಕ್ಕೆ, ಡಬಲ್ ಇಸ್ಮಾರ್ಟ್ (ತೆ): ಸಂ.4.25ಕ್ಕೆ, ಖೇಲ್ ಖೇಲ್ ಮೇನ್ (ಹಿ): ರಾ.7.30ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 4	ಸ್ತ್ರೀ 2 (ಹಿಂ): ಬೆ.10.15ಕ್ಕೆ, ರಾ.7ಕ್ಕೆ, ರಾ.10ಕ್ಕೆ, ಭೀಮಾ (ಕ): ಮ.1.15ಕ್ಕೆ, ರಘು ತಾತ (ತ): ಸಂ.4.20ಕ್ಕೆ

ಐನಾಕ್ಸ್ ಮೂವೀಸ್
LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಸ್ತ್ರೀ 2 (ಹಿಂ): ಬೆ.8.05ಕ್ಕೆ, ಭೀಮಾ (ಕ): ಬೆ.10.30ಕ್ಕೆ, ಡಬಲ್ ಇಸ್ಮಾರ್ಟ್ (ತೆ): ಮ.1.25ಕ್ಕೆ, ಗೌರಿ (ಕ): ಸಂ.4.25ಕ್ಕೆ, ನುನಕ್ಕುಳಿ (ಮ): ರಾ.7ಕ್ಕೆ, ರಘು ತಾತ (ತ): ರಾ.9.30ಕ್ಕೆ.
ಸ್ಕ್ರೀನ್ 2	ಸ್ತ್ರೀ 2 (ಹಿಂ): ಬೆ.10ಕ್ಕೆ, ಭೀಮಾ (ಕ): ಮ.12.50ಕ್ಕೆ, ಮ.3.45ಕ್ಕೆ, ಸಂ.6.50ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ರಾ.9.45ಕ್ಕೆ.
ಸ್ಕ್ರೀನ್ 3	ಕೃಷ್ಣಂ ಪ್ರಣಯ ಸಖಿ (ಕ): ಬೆ.10ಕ್ಕೆ, ಮ.1ಕ್ಕೆ, ವೇದ (ಹಿಂ): ಸಂ.4.05ಕ್ಕೆ, ರಾ.9.45ಕ್ಕೆ, ಸ್ತ್ರೀ 2 (ಹಿಂ): ಸಂ.6.55ಕ್ಕೆ.
ಸ್ಕ್ರೀನ್ 4	ತಂಗಲಾನ್ (ತ): ಬೆ.10.05ಕ್ಕೆ, ಸಂ.6.45ಕ್ಕೆ, ಸ್ತ್ರೀ 2 (ಹಿಂ): ಮ.1ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.3.50ಕ್ಕೆ, ಡಬಲ್ ಇಸ್ಮಾರ್ಟ್ (ತೆ): ರಾ.9.40ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿನಿ ಸಾವು



ಮೈಸೂರು, ಆ. 19(ಆರ್‌ಕೆ)– ಅನಾರೋಗ್ಯದಿಂದಾಗಿ ಮೈಸೂರಿನ ಖಾಸಗಿ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ಓದುತ್ತಿದ್ದ ವಿದ್ಯಾರ್ಥಿನಿ ಇಂದು ಮುಂಜಾನೆ ಸಾವನ್ನಪ್ಪಿದ್ದಾಳೆ.

ಮೈಸೂರಿನ ರಿಂಗ್ ರಸ್ತೆಯಲ್ಲಿರುವ ದಕ್ಷ ಪಿಯು ಕಾಲೇಜು ವಿದ್ಯಾರ್ಥಿನಿ ಹೆಚ್.ವಿ. ಜಯಪ್ರಾರ್ಥನಾ(17) ಸಾವನ್ನಪ್ಪಿದವರು. ನಾಗಮಂಗಲ ನಿವಾಸಿ ಕೆ. ವೆಂಕಟೇಶ್ ಪುತ್ರಿಯಾದ ಅವರು, ಮೈಸೂರಿನ ದಕ್ಷ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ (ವಿಜ್ಞಾನ) ಓದುತ್ತಿದ್ದು, ಕಾಲೇಜು ಹಾಸ್ಟೆಲ್‌ನಲ್ಲಿ ವಾಸ್ತವ್ಯ ಹೂಡಿದ್ದಳು.

ನಿನ್ನೆ (ಭಾನುವಾರ) ಮಧ್ಯಾಹ್ನ 3 ಗಂಟೆ ವೇಳೆಗೆ ವಾಂತಿ ಲಕ್ಷಣ ಕಾಣಿಸಿಕೊಂಡ ಜಯಪ್ರಾರ್ಥನಾಳನ್ನು ಹಾಸ್ಟೆಲ್ ವಾರ್ಡನ್ ಹಾಗೂ ನರ್ಸ್ ಹೂಟಗಳ್ಳಿಯ ಆದರ್ಶ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಿ ಮರಳಿ ಹಾಸ್ಟೆಲ್‌ಗೆ ಕರೆತಂದಿದ್ದರು. ರಾತ್ರಿ ಮಲಗಿದ್ದ ಆಕೆ, ಮಧ್ಯರಾತ್ರಿ ವರೆಗೂ ನರಳುತ್ತಿದ್ದರಿಂದ ಮತ್ತೆ ವಿದ್ಯಾರ್ಥಿನಿಯನ್ನು ಅಲ್ಲಿನ ಪ್ರಲಾಕ್ಷ ಆಸ್ಪತ್ರೆಗೆ ಕರೆದೊಯ್ದರಾದರೂ, ಜಯ ಪ್ರಾರ್ಥನಾ ಅಲ್ಲಿ ಕೊನೆಯುಸಿರೆಳೆದಿರುವುದಾಗಿ ಮುಂಜಾನೆ 5.15 ಗಂಟೆಗೆ ವೈದ್ಯರು ದೃಢೀಕರಿಸಿದರು ಎಂದು ಹಾಸ್ಟೆಲ್ ವಾರ್ಡನ್ ತಿಳಿಸಿದ್ದಾರೆ.


ವಿಷಯ ತಿಳಿಯುತ್ತಿದ್ದಂತೆಯೇ ನಾಗಮಂಗಲದಿಂದ ಮೈಸೂರಿಗೆ ಬಂದ ಪೋಷಕರು ಹಾಗೂ ಸಂಬಂಧಿಕರು, ಅನಾರೋಗ್ಯದಿಂದ ನರಳುತ್ತಿದ್ದಾಗಲೇ ಮಾಹಿತಿ ನೀಡದೇ ಸಾವನ್ನಪ್ಪಿದ ಬಳಿಕ ವಿಷಯ ತಿಳಿಸಲಾಗಿದೆ. ಈ ಸಂಸ್ಥೆ ನಿರ್ಲಕ್ಷ್ಯದಿಂದ ತಮ್ಮ ಮಗಳು ಸಾವನ್ನಪ್ಪಿದ್ದಾಳೆ ಎಂದು ಕಾಲೇಜು ಆಡಳಿತ ಮಂಡಳಿ ವಿರುದ್ಧ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಶವಾಗಾರದ ಬಳಿ ಆರೋಪಿಸಿದರು.

ಪೋಷಕರು ನೀಡಿದ ದೂರಿನನ್ವಯ ಅಸಹಜ ಸಾವು (ಯುಡಿಆರ್) ರೀತ್ಯಾ ಪ್ರಕರಣ ದಾಖಲಿಸಿಕೊಂಡ ವಿಜಯನಗರ ಠಾಣೆ ಇನ್ಸ್‌ಪೆಕ್ಟರ್ ಸುರೇಶ್ ಕುಮಾರ್ ತನಿಖೆ ಕೈಗೊಂಡಿದ್ದಾರೆ. ಮರಣೋತ್ತರ ಪರೀಕ್ಷೆ ಬಳಿಕ ಜಯಪ್ರಾರ್ಥನಾ ದೇಹವನ್ನು ಇಂದು ಸಂಜೆ ವಾರಸುದಾರರಿಗೆ ಒಪ್ಪಿಸಲಾಯಿತು.

ವಿದ್ಯಾರ್ಥಿಗಳ ಪ್ರತಿಭಟನೆ: ದಕ್ಷ ಕಾಲೇಜಿನ ವಿದ್ಯಾರ್ಥಿನಿ ಸಾವನ್ನಪ್ಪಿದ ಹಿನ್ನೆಲೆಯಲ್ಲಿ ಕೆರಳಿದ ವಿದ್ಯಾರ್ಥಿಗಳು ಇಂದು ಕಾಲೇಜು ಆವರಣದಲ್ಲಿ ಪ್ರತಿಭಟನೆ ನಡೆಸಿದರು. ಈ ಕಾಲೇಜಿನ ಹಾಸ್ಟೆಲ್‌ನಲ್ಲಿ ವಿದ್ಯಾರ್ಥಿಗಳನ್ನು ಸರಿಯಾಗಿ ನೋಡಿಕೊಳ್ಳುತ್ತಿಲ್ಲ. ವೈದ್ಯಕೀಯ ಶುಲ್ಕ 10,000 ರೂ. ಪಡೆಯುತ್ತಿದ್ದರೂ ಹುಷಾರಿಲ್ಲದೆ ಇದ್ದಾಗ ವಿದ್ಯಾರ್ಥಿಗಳ ಬಗ್ಗೆ ಗಮನ ಹರಿಸುತ್ತಿಲ್ಲ. ಇಂದು ಮೃತಪಟ್ಟ ಜಯ ಪ್ರಾರ್ಥನಾ ನಿನ್ನೆ ಮಧ್ಯಾಹ್ನದಿಂದಲೇ ನಿತ್ರಾಣಳಾಗಿದ್ದಳು. ಎದುರಿನ ಕೊಠಡಿಯಲ್ಲೇ ವಾರ್ಡನ್ ಇದ್ದರೂ ಕೂಡ ಆಕೆಯನ್ನು ಬಂದು ನೋಡಲಿಲ್ಲ. ಅವರ ನಿರ್ಲಕ್ಷ್ಯದಿಂದಲೇ ಒಂದು ಸಾವು ಸಂಭವಿಸಿದೆ. ಕೆಲ ದಿನದ ಹಿಂದೆ ಫುಡ್ ಪಾಯಿಸನ್ ಆಗಿ ಅನೇಕರು ಅನಾರೋಗ್ಯಕ್ಕೆ ತುತ್ತಾದರೂ ಕೂಡ ಆಡಳಿತ ಮಂಡಳಿಯವರು ಗಮನ ಹರಿಸಿಲ್ಲ ಎಂದು ವಿದ್ಯಾರ್ಥಿಗಳು ಆರೋಪಿಸಿದರು.

ವಿಶ್ವ ಛಾಯಾಗ್ರಹಣ ದಿನಾಚರಣೆ

ಮೈಸೂರು ಪತ್ರಿಕಾ ಛಾಯಾಗ್ರಾಹಕರ ಅಪರೂಪದ ಚಿತ್ರಗಳ ಪ್ರದರ್ಶನ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ವಿಶ್ವ ಛಾಯಾಗ್ರಹಣ ದಿನದ ಅಂಗವಾಗಿ ಆಯೋಜಿಸಿದ್ದ ಛಾಯಾಚಿತ್ರ ಪ್ರದರ್ಶನದಲ್ಲಿ ಪಾಲಿಕೆ ಆಯುಕ್ತ ಅಶಾದ್ ಉರ್ ರೆಹಮಾನ್ ಷರೀಫ್ ಅವರಿಗೆ ವಯನಾಡು ದುರಂತದ ಚಿತ್ರಗಳ ವಿವರಣೆ ನೀಡುತ್ತಿರುವ 'ಮೈಸೂರು ಮಿತ್ರ' ಛಾಯಾಗ್ರಾಹಕ ಎಂ.ಎನ್.ಲಕ್ಷ್ಮೀನಾರಾಯಣ ಯಾದವ್.

ಮೈಸೂರು,ಆ.19(ಎಂಟಿವೈ)– ವಿಶ್ವ ಛಾಯಾಗ್ರಹಣ ದಿನದ ಅಂಗವಾಗಿ ಮೈಸೂರು ಜಿಲ್ಲಾ ಪತ್ರಕರ್ತರ ಸಂಘ ಆಯೋಜಿಸಿದ್ದ ಛಾಯಾಗ್ರಹಣ ದಿನಾಚರಣೆಯಲ್ಲಿ ಮೈಸೂರಿನ ಪತ್ರಿಕಾ ಛಾಯಾಗ್ರಾಹಕರು ತೆಗೆದಿರುವ ವಯನಾಡು ಭೂ ಕುಸಿತ, ವನ್ಯಜೀವಿ ಸುದ್ದಿ ಛಾಯಾಚಿತ್ರಗಳನ್ನು ಪ್ರದರ್ಶನಕ್ಕಿಡಲಾಗಿತ್ತು. ಇವು ನೋಡುಗರ ಕಣ್ಮನ ಸೆಳೆದವು.

ಇದಕ್ಕೂ ಮುನ್ನ ವಿಶ್ವ ಛಾಯಾಗ್ರಹಣ ಕಾರ್ಯಕ್ರಮ ಹಾಗೂ ಛಾಯಾಚಿತ್ರ ಪ್ರದರ್ಶನ ಉದ್ಘಾಟಿಸಿದ ಪಾಲಿಕೆ ಆಯುಕ್ತ ಅಶಾದ್ ಉರ್ ರೆಹಮಾನ್ ಷರೀಫ್ ಮಾತನಾಡಿ, ಮೈಸೂರಿನ ಪತ್ರಿಕಾ ಛಾಯಾಗ್ರಾಹಕರು ತೆಗೆದಿರುವ ಚಿತ್ರಗಳು ಉತ್ತಮ ಸಂದೇಶ ನೀಡುತ್ತವೆ. ಮೈಸೂರಿನ ಪತ್ರಕರ್ತರು ಸಾಮಾಜಿಕ ಕಳಕಳಿಯಿಂದ ಕಾರ್ಯನಿರ್ವಹಿಸುತ್ತಿರುವುದು ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿದ ಹಿರಿಯ ಪತ್ರಿಕಾ ಛಾಯಾಗ್ರಾಹಕ ವಿಶ್ವನಾಥ್ ಸುವರ್ಣ ಮಾತನಾಡಿ, ಫಿಲ್ಮ್ ರೋಲ್ ಕ್ಯಾಮರಾ ಇದ್ದಾಗ ಅತಿ ವಿರಳವಾಗಿ ಚಿತ್ರ ಸೆರೆ ಹಿಡಿಯುತ್ತಿದ್ದರೂ ಅವುಗಳು ನೆನಪಿನಲ್ಲಿ ಉಳಿಯುವಂತಹ ಚಿತ್ರಗಳಾಗಿರುತ್ತಿದ್ದವು. ಆದರೆ ಡಿಜಿಟಲ್ ಕ್ಯಾಮರಾ ಬಂದ ಮೇಲೆ ಅತೀ ಶೀಘ್ರ ನೂರಾರು ಚಿತ್ರ ಸೆರೆ ಹಿಡಿದರೂ ಅತ್ಯಂತ ಅಪರೂಪದ್ದವು ಎನಿಸುವ ಚಿತ್ರಗಳು ಅತೀ ವಿರಳ. ಹೀಗಾಗಿ ಪತ್ರಿಕಾ ಛಾಯಾಗ್ರಾಹಕರು ಈ ರೀತಿಯ ಅಂಶಗಳಿಗೂ ಗಮನ ನೀಡಬೇಕೆಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ. ದೀಪಕ್ ವಹಿಸಿದ್ದರು. ಈ ಸಂದರ್ಭದಲ್ಲಿ ಜಿಲ್ಲಾ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಧರ್ಮಾಪುರ ನಾರಾಯಣ್, ಮೈಸೂರು ಫೋಟೋ ಜರ್ನಲಿಸ್ಟ್ ಅಸೋಸಿಯೇಷನ್ ಅಧ್ಯಕ್ಷ ಪತ್ರಕರ್ತ ಪ್ರಗತಿ ಗೋಪಾಲಕೃಷ್ಣ, ಪತ್ರಿಕಾ ಛಾಯಾಗ್ರಾಹಕರಾದ ಅನುರಾಗ್ ಬಸವರಾಜ್, ಎಂ.ಎನ್.ಲಕ್ಷ್ಮೀ ನಾರಾಯಣ ಯಾದವ್, ಎಸ್.ಆರ್.ಮಧುಸೂದನ್, ಕಾರ್ಯಕಾರಿ ಸಮಿತಿ ಸದಸ್ಯರಾದ ಹಂಪಾನಾಗರಾಜ್, ನಾಣಿ ಹೆಬ್ಬಾಳ್, ಹನಗೋಡು ನಟರಾಜ್, ಹುಲ್ಲಹಳ್ಳಿ ಮೋಹನ್, ರವಿಚಂದ್ರ, ಹಂಚ್ಯಾ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಖಂಡಿಸಿ ಚಾ.ಬೆಟ್ಟ ಬಂದ್



ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ಯಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ಕ್ರಮ ವಿರೋಧಿಸಿ ಸೋಮವಾರ ಚಾಮುಂಡಿಬೆಟ್ಟ ಬಂದ್ ಮಾಡಿ ಸಿದ್ದರಾಮಯ್ಯ ಬೆಂಬಲಿಗರು ಹಾಗೂ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಮೈಸೂರು,ಆ.19(ಎಂಟಿವೈ)– ಮುಡಾ ನಿವೇಶನ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ನಡೆ ಖಂಡಿಸಿ ಸೋಮವಾರ ಚಾಮುಂಡಿಬೆಟ್ಟದಲ್ಲಿ ಸ್ವಯಂ ಘೋಷಿತ ಬಂದ್ ಆಚರಿಸಿ, ಬೆಟ್ಟದ ನಿವಾಸಿಗಳು ಪ್ರತಿಭಟನಾ ಮೆರವಣಿಗೆ ನಡೆಸಿದರು.

ಚಾಮುಂಡಿಬೆಟ್ಟದ ದೇವಾಲಯ ಮುಂಭಾಗದಿಂದ ಮಹಿಷಾಸುರ ಪ್ರತಿಮೆವರೆಗೂ ಪ್ರತಿಭಟನಾ ಮೆರವಣಿಗೆ ನಡೆಸಿ, ಸಿಎಂ ಸಿದ್ದರಾಮಯ್ಯ ವಿರುದ್ಧ ನೀಡಿರುವ ಆಧಾರರಹಿತ ದೂರನ್ನು ರದ್ದು ಮಾಡುವಂತೆ ಆಗ್ರಹಿಸಿದರಲ್ಲದೆ, ರಾಜ್ಯಪಾಲರ ನಡೆ ಸಂವಿಧಾನ ಬಾಹಿರವಾಗಿದೆ ಎಂದು ಕಿಡಿಕಾರಿದರು.

ಅಂಗಡಿಗಳು ಬಂದ್: ಸಿಎಂ ಸಿದ್ದರಾಮಯ್ಯ ಅವರಿಗೆ ಬೆಂಬಲ ಸೂಚಿಸುವ ನಿಟ್ಟಿನಲ್ಲಿ ಚಾಮುಂಡಿಬೆಟ್ಟದಲ್ಲಿರುವ ಅಂಗಡಿ, ಹೋಟೆಲ್, ಪೂಜಾ ಸಾಮಗ್ರಿ ಹಾಗೂ ವಿವಿಧ ಆಟಿಕೆ ಮಾರಾಟ ಮಳಿಗೆಗಳನ್ನು ಇಂದು ಬೆಳಗ್ಗೆ ಬಂದ್ ಮಾಡಲಾಗಿತ್ತು ವಿವಿಧ ಸಂಘ–ಸಂಸ್ಥೆಗಳು 'ಮೈಸೂರು ಬಂದ್'ಗೆ ಕರೆ ನೀಡಿದ್ದರಿಂದ ಚಾಮುಂಡಿ ಬೆಟ್ಟ ಬಂದ್ ಮಾಡಲು ಸ್ಥಳೀಯರು ನಿರ್ಧರಿಸಿದ್ದರು. ಆದರೆ ಮೈಸೂರು ಬಂದ್ ರದ್ದಾಗಿದ್ದರೂ ಚಾಮುಂಡಿಬೆಟ್ಟದಲ್ಲಿ ಬಂದ್ ಆಚರಿಸಲಾಯಿತು. ಯಾರ ಒತ್ತಡವೂ ಇಲ್ಲದೆ ವ್ಯಾಪಾರಿಗಳು ಅಂಗಡಿಗಳನ್ನು ಬಂದ್ ಮಾಡಿ ವಿಶ್ರಾಂತಿ ಪಡೆದರು.

ಭಕ್ತರಿಗೆ ಅಡಚಣೆ ಇಲ್ಲ: ಚಾಮುಂಡಿ ಬೆಟ್ಟ ಬಂದ್ ಆಗಿದ್ದರೂ ಚಾಮುಂಡೇಶ್ವರಿ ದೇವಾಲಯ ಎಂದಿನಂತೆ ತೆರೆದಿತ್ತು. ವಿವಿಧೆಡೆಯಿಂದ ಭಕ್ತರು, ಪ್ರವಾಸಿಗರು ಬೆಟ್ಟಕ್ಕೆ ಬಂದು ದೇವಿಯ ದರ್ಶನ ಪಡೆದರು. ಆದರೆ, ಪೂಜಾ ಸಾಮಗ್ರಿ ಸಿಗದೆ ಕಾರಣ ಕೆಲವರು ದರ್ಶನ ಪಡೆದು ಪ್ರಾರ್ಥಿಸಿ ವಾಪಸ್ಸಾದರು.

ಸಿಎಂಗೆ ಬೆಂಬಲ ನೀಡಲು ಬಂದ್: ಗ್ರಾಪಂ ಮಾಜಿ ಸದಸ್ಯ ಭರತ್ ಕಾಳಯ್ಯ ಮಾತನಾಡಿ, ಮೈಸೂರು ಭಾಗದವರಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಯಾವುದೇ ತಪ್ಪು ಮಾಡದೇ ಇದ್ದರೂ, ಬಿಜೆಪಿ ಸರ್ಕಾರವೇ ನಿವೇಶನ ನೀಡಿ ಇದೀಗ ಸಿಎಂ ಅವರ ವಿರುದ್ಧ ಸುಳ್ಳು ಆರೋಪ ಮಾಡುತ್ತಿದ್ದಾರೆ. ಅಲ್ಲದೆ, ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿ ದುಡುಕಿನ ನಿರ್ಧಾರ ಪ್ರಕಟಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳಿಗೆ ನೈತಿಕ ಬೆಂಬಲ ನೀಡುವ ನಿಟ್ಟಿನಲ್ಲಿ ಚಾಮುಂಡಿಬೆಟ್ಟದಲ್ಲಿ ಸ್ವಯಂ ಪ್ರೇರಿತ ಬಂದ್ ಆಚರಿಸಲಾಗಿದೆ. ಬಂದ್ ವೇಳೆ ಪ್ರವಾಸಿಗರಿಗೆ ಹಾಗೂ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಬೆಟ್ಟದ ನಿವಾಸಿಗಳು ಸಹಕರಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಚಾಮುಂಡಿಬೆಟ್ಟ ಗ್ರಾಮ ಪಂಚಾಯತಿ ಅಧ್ಯಕ್ಷೆ ನಾಗಮ್ಮ, ಉಪಾಧ್ಯಕ್ಷ ರವಿ, ನಾಯಕರ ಸಂಘದ ಅಧ್ಯಕ್ಷ ಶಂಭುಲಿಂಗ, ಮುಖಂಡರಾದ ಭರತ್, ಮಂಜುನಾಥ್, ಉತ್ತನಹಳ್ಳಿ ಶಿವಣ್ಣ, ಮಹದೇವಸ್ವಾಮಿ, ಮನಿಕುಮಾರ್, ಚೇತನ್, ಸಣ್ಣ ಮಾದನಾಯ್ಕ, ಶಿವರಾಮ ನಾಯಕ್, ದೊರೆಸ್ವಾಮಿ, ಮೋಹನ್, ಬಸವರಾಜು, ಪ್ರಕಾಶ್, ನಾರಾಯಣ್, ಜೈರಾಮ್, ಕೃಷ್ಣ, ಮಹದೇವ ನಾಯಕ, ಸುಬ್ರಹ್ಮಣ್ಯ ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಸೇವಾ ಕಾರ್ಯಕರ್ತರ ಕಾರ್ಯಾಗಾರ



ಮೈಸೂರಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಸೇವಾ ಕಾರ್ಯಕರ್ತರಿಗಾಗಿ ಆಯೋಜಿಸಿದ್ದ ಕಾರ್ಯಾಗಾರವನ್ನು ಎಸ್‌ಡಿಎಂ ಸಮೂಹ ಸಂಸ್ಥೆಗಳ ಯೋಜನಾ ನಿರ್ದೇಶಕ ಡಿ. ಶ್ರೇಯಸ್‌ಕುಮಾರ್ ಧರ್ಮಸ್ಥಳ ಉದ್ಘಾಟಿಸಿದರು.

ಮೈಸೂರು,ಆ.19(ಎಂಟಿವೈ)– ಗ್ರಾಮೀಣಾಭಿವೃದ್ಧಿ ಹಾಗೂ ಅಲ್ಲಿನ ಜನರ ಆರ್ಥಿಕ ಪರಿಸ್ಥಿತಿ ಸುಧಾರಿಸುವ ನಿಟ್ಟಿನಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಾರಿಗೊಳಿಸಿರುವ ಕಾರ್ಯಕ್ರಮದ ಪ್ರಯೋಜನ ಅರ್ಹರಿಗೆ ತಲುಪುವಂತೆ ಮಾಡಬೇಕು ಎಂದು ಎಸ್.ಡಿ.ಎಂ ಸಮೂಹ ಸಂಸ್ಥೆಗಳ ಯೋಜನಾ ನಿರ್ದೇಶಕ ಶ್ರೇಯಸ್ ಕುಮಾರ್ ಧರ್ಮಸ್ಥಳ ಸಲಹೆ ನೀಡಿದ್ದಾರೆ.

ಮೈಸೂರಿನ ವೈಷ್ಣವಿ ಕನ್ವೆನ್ಷನ್ ಹಾಲ್‌ನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೈಸೂರು ಪ್ರಾದೇಶಿಕ ವ್ಯಾಪ್ತಿಯ ಸಿಬ್ಬಂದಿಗಳಿಗಾಗಿ ಆಯೋಜಿಸಿದ್ದ 'ಯಶಸ್ವಿ ಮೇಲ್ವಿಚಾರಕ ಶ್ರೇಣಿಯ ಕಾರ್ಯಕರ್ತರ ಕಾರ್ಯ ಚಟುವಟಿಕೆಗಳ ಕಾರ್ಯಾಗಾರ'ವನ್ನು ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಯಿಂದ ದೇಶದ ಅಭಿವೃದ್ಧಿ ಸಾಧ್ಯ ಎಂಬ ಉದ್ದೇಶದಿಂದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ವಿವಿಧ ಯೋಜನೆ ಜಾರಿಗೊಳಿಸಿದೆ. ಬೀದರ್‌ನಲ್ಲಿ ನಡೆದ ಕ್ಷೀರಕ್ರಾಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಪ್ರಧಾನಿ ಮೋದಿ ಅವರು ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಕೊಡುಗೆ ಬಗ್ಗೆ ದೇಶಕ್ಕೆ ಮಾದರಿ ಯೋಜನೆ ಎಂದು ಪ್ರಶಂಸೆ ವ್ಯಕ್ತಪಡಿಸಿದ್ದಾರೆ ಎಂದರು.

ನಮ್ಮೂರು ನಮ್ಮ ಕೆರೆ ಯೋಜನೆ, ಪಾಳು ಬಿದ್ದ ದೇವಾಲಯಗಳ ಪುನರ್ ನಿರ್ಮಾಣ, ಶಿಕ್ಷಣ ಕ್ಷೇತ್ರದ ಸಾಧನೆ, ಕೃಷಿ ಕ್ಷೇತ್ರಕ್ಕೆ ಕೊಡುಗೆ, ಶುದ್ಧ ಕುಡಿಯುವ ನೀರಿನ ಯೋಜನೆ ಸೇರಿದಂತೆ ಜನಪರ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದೆ. ಈ ಸಾಧನೆಯ ಬಹುಪಾಲು ಯಶಸ್ಸು ಕಾರ್ಯಕರ್ತರಿಗೆ ಸಲ್ಲುತ್ತದೆ. ನಮ್ಮ ಸಂಸ್ಥೆ ವತಿಯಿಂದ 1.5 ಕೋಟಿ ಜನರಿಗೆ ಜೀವ ವಿಮೆ, 75 ಲಕ್ಷ ಜನರಿಗೆ ಆರೋಗ್ಯ ವಿಮೆ ಮಾಡಿಸಲಾಗಿದ್ದು, ಮಧ್ಯಮ ವರ್ಗದ ಜನರ ಜೀವನಕ್ಕೆ ಭದ್ರತೆಯನ್ನು ಒದಗಿಸಿದೆ. ಖಾಸಗಿ ಸಂಸ್ಥೆಯೊಂದು ಇಷ್ಟು ದೊಡ್ಡ ಸಂಖ್ಯೆಯ ವಿಮೆ ಮಾಡಿಸಿರುವುದು ರಾಷ್ಟ್ರ ಮಟ್ಟದಲ್ಲಿ ದಾಖಲೆ ಎಂದರು.

ಸಂಸ್ಥೆಯ ಪ್ರಾದೇಶಿಕ ನಿರ್ದೇಶಕ ಜಯರಾಮ ನೆಲ್ಲಿತ್ತಾಯ ಮಾತನಾಡಿ, ಮೈಸೂರು ಪ್ರಾದೇಶಿಕ ವ್ಯಾಪ್ತಿಯಲ್ಲಿ ಒಟ್ಟು 1,18,000 ಸ್ವಸಹಾಯ ಸಂಘಗಳಿದ್ದು, 10,02,000 ಸದಸ್ಯರಿದ್ದಾರೆ. ಇದುವರೆಗೆ 524.40 ಕೋಟಿ ಉಳಿತಾಯ ಮಾಡಿದ್ದಾರೆ. ಸಂಸ್ಥೆ ವತಿಯಿಂದ 130 ಕೆರೆಗಳ ಅಭಿವೃದ್ಧಿ, 385 ಶಾಲೆಗಳಿಗೆ ಪೀಠೋಪಕರಣ ವಿತರಣೆ, 7822 ವಿದ್ಯಾರ್ಥಿಗಳಿಗೆ ಸುಜ್ಞಾನ ನಿಧಿ ಶಿಷ್ಯ ವೇತನ, 42 ಮಂದಿ ವಯೋವೃದ್ಧರಿಗೆ ವಾತ್ಸಲ್ಯ ಮನೆ ನಿರ್ಮಾಣ, 3635 ಸದಸ್ಯರಿಗೆ ಮಾಸಾಶನ ವಿತರಣೆ, ಸಾಮಾನ್ಯ ಸೇವಾ ಕೇಂದ್ರಗಳ ಮೂಲಕ 10,90,011 ಸೌಲಭ್ಯ ನೀಡಲಾಗಿದೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಜಿಲ್ಲಾ ನಿರ್ದೇಶಕರಾದ ವಿಜಯಕುಮಾರ್ ನಾಗನಾಳ, ಮಮತಾ ಹರೀಶ್‌ರಾವ್, ಮುರಳೀಧರ್, ಜಯಕರ ಶೆಟ್ಟಿ, ಕೇಶವ ದೇವಾಂಗ, ಚೇತನಾ, ಲತಾ ಬಂಗೇರ, ಚಿದಾನಂದ ಹಾಗೂ ಪ್ರಾದೇಶಿಕ ಕಚೇರಿಯ ಯೋಜನಾಧಿಕಾರಿಗಳು, ಎಲ್ಲಾ ಸಿಬ್ಬಂದಿ ಉಪಸ್ಥಿತರಿದ್ದರು.

ಕೇವಲ 720 ಗ್ರಾಂ ತೂಕದಲ್ಲಿ ಜನಿಸಿ ಬದುಕುಳಿದ ಮಗು!

ನಾರಾಯಣ ಆಸ್ಪತ್ರೆ ವೈದ್ಯರ ತಂಡದ ಚಿಕಿತ್ಸೆಯಿಂದ ಮಗುವಿಗೆ ಮರುಜನ್ಮ

ಮೈಸೂರು,ಆ.19(ಪಿಎಂ)– ಕೇವಲ 720 ಗ್ರಾಂ ತೂಕದೊಂದಿಗೆ ಅಕಾಲಿಕವಾಗಿ ಜನಿಸಿದ್ದ ಮಗುವಿಗೆ ಸೂಕ್ತ ಆರೈಕೆ ನೀಡಿ, ತೂಕ ಹೆಚ್ಚಿಸಿ ಬದುಕುಳಿಸುವಲ್ಲಿ ನಗರದ ನಾರಾಯಣ ಆಸ್ಪತ್ರೆಯ ವೈದ್ಯರ ತಂಡ ಯಶಸ್ವಿಯಾಗಿದೆ.

ಭ್ರೂಣಕ್ಕೆ ರಕ್ತ ಪೂರೈಕೆಯು ಗಣನೀಯವಾಗಿ ಕಡಿಮೆಯಾದ ಕಾರಣ ತಮ್ಮ ಗರ್ಭಾವಸ್ಥೆಯನ್ನು ಮುಂದುವರಿಸಲು ಸಾಧ್ಯವಿಲ್ಲವೆಂದು ಮೈಸೂರಿನ ದಂಪತಿಗೆ ವೈದ್ಯರು ತಿಳಿಸಿದಾಗ ಅವರು ಆಘಾತಗೊಂಡರು. ತೀವ್ರ ಅಪಕ್ವ ಮತ್ತು ಕಡಿಮೆ ಜನನ ತೂಕದ ಕಾರಣದಿಂದ ಮಗು ಬದುಕುಳಿಯುವ ಸಾಧ್ಯತೆ ಇಲ್ಲದ ಕಾರಣ ಖಾಸಗಿ ಆಸ್ಪತ್ರೆಯೊಂದರ ವೈದ್ಯರು ಗರ್ಭಾವಸ್ಥೆ ಅಂತ್ಯಗೊಳಿಸಲು ಸಲಹೆ ನೀಡಿದ್ದರು. ಎರಡನೇ ಅಭಿಪ್ರಾಯ ಪಡೆಯಲು ಸದರಿ ದಂಪತಿ ನಾರಾಯಣ ಆಸ್ಪತ್ರೆಗೆ ಬಂದರು. ಆ ಬಳಿಕ ವೈದ್ಯರ ತಂಡ ಮಗುವನ್ನು ಉಳಿಸುವಲ್ಲಿ ಸಫಲವಾಯಿತು.

ಜು.8ರಂದು ಮಗು ಅಕಾಲಿಕವಾಗಿ ಜನಿಸಿತು. ಕೇವಲ 720 ಗ್ರಾಂ ತೂಕವಿದ್ದ ಮಗುವು 28 ವಾರಗಳ ಗರ್ಭಾವಸ್ಥೆಯನ್ನು ಪೂರ್ಣಗೊಳಿಸಿದ್ದರೂ ಅದು ಗರ್ಭಾಶಯದ ಬೆಳವಣಿಗೆಯ ನಿರ್ಬಂಧದಿಂದ ಬಳಲುತ್ತಿತ್ತು. ಜನಿಸಿದ ಮಗುವನ್ನು ತೀವ್ರ ನಿಗಾ ಘಟಕದಲ್ಲಿ ಇರಿಸಲಾಯಿತು. ಆರಂಭದಲ್ಲಿ ಒಂದು ವಾರದವರೆಗೆ ವೆಂಟಿಲೇಟರ್‌ನಲ್ಲಿ ಇರಿಸಲಾಗಿತ್ತು. ಆಸ್ಪತ್ರೆಯ ವೈದ್ಯಕೀಯ ಸಿಬ್ಬಂದಿಯ ಆರೈಕೆಯೊಂದಿಗೆ ಮಗು ಕ್ರಮೇಣ ಸುಧಾರಿಸಲು ಮತ್ತು ತೂಕವನ್ನು ಹೆಚ್ಚಿಸಿಕೊಳ್ಳಲು ಪ್ರಾರಂಭಿಸಿತು ಎಂದು ಆಸ್ಪತ್ರೆಯ ಪ್ರಕಟಣೆ ತಿಳಿಸಿದೆ.

ಮಗುವಿನ ಬದುಕುಳಿಯುವಿಕೆ ಮತ್ತು ಪ್ರಗತಿಯು ಸವಾಲಾಗಿತ್ತು ಆದರೆ ನಮ್ಮ ಸಮಗ್ರ ಚಿಕಿತ್ಸಾ ಯೋಜನೆಗೆ ಉತ್ತಮವಾಗಿ ಸ್ಪಂದಿಸಿತು. ನವಜಾತ ಶಿಶುಗಳ ಆರೈಕೆಗಾಗಿ ಮೀಸಲಾದ ನಮ್ಮ ತಂಡವು ನಿರಂತರ ಆರೈಕೆ ಒದಗಿಸಿತು. ಎರಡು ತಿಂಗಳ ಅವಧಿಯಲ್ಲಿ ಆಸ್ಪತ್ರೆಯ ಮಕ್ಕಳ ತಜ್ಞ ವೈದ್ಯರ ತಂಡವು ಮಗುವಿಗೆ ನಿರಂತರ ಆರೈಕೆ ಮಾಡಿತು. ವೆಂಟಿಲೇಟರ್‌ನಿಂದ ಪ್ರಾರಂಭವಾದ ಮಗುವಿನ ಆರೈಕೆಯ ಪಯಣ ಕ್ರಮೇಣ ಪೂರಕ ಆಮ್ಲಜನಕದ ಸಹಾಯದೊಂದಿಗೆ ಹಾಲುಣಿಸಲು ಪ್ರಾರಂಭಿಸಲಾಯಿತು. ನಂತರ ಮಗು ಸ್ವತಂತ್ರವಾಗಿ ಉಸಿರಾಡಲು ಪ್ರಾರಂಭಿಸಿತು. ಆ.3ರಂದು 1.5 ಕಿಲೋ ಗ್ರಾಂಗಳಷ್ಟು ತೂಕ ಹೆಚ್ಚಿಸಿಕೊಂಡ ಮಗು ಸ್ಥಿರವಾಸ್ತೆ ತಲುಪಿತು ಎಂದು ನಾರಾಯಣ ಆಸ್ಪತ್ರೆ ಮಕ್ಕಳ ತಜ್ಞರಾದ ಡಾ.ಮೋನ ಕುಸ್ಲೂವ್ ತಿಳಿಸಿದ್ದಾರೆ.

ಸವಾಲಿನ ನಡುವೆ ನಾವು ತಾಯಿ ಮತ್ತು ಮಗುವಿಗೆ ಅಗತ್ಯವಾದ ಆರೈಕೆ ಮತ್ತು ಬೆಂಬಲವನ್ನು ನೀಡಿದ್ದೇವೆ. ಈ ಯಶಸ್ವಿ ಪ್ರಕರಣವು ನಮ್ಮ ರೋಗಿಗಳಿಗೆ ಸಾಧ್ಯವಾದಷ್ಟು ಉತ್ತಮವಾದ ಆರೈಕೆ ಒದಗಿಸುವಲ್ಲಿ ನಮ್ಮ ಬದ್ಧತೆ ಪುನರುಚ್ಚರಿಸುತ್ತದೆ ಎಂದು ಆಸ್ಪತ್ರೆಯ ಸ್ತ್ರೀರೋಗ ತಜ್ಞೆ ಡಾ.ಆರತಿ ಸಂತೋಷ್ ಉಲ್ಲೇಖಿಸಿದ್ದಾರೆ. ಈ ಯಶಸ್ಸು ನಮ್ಮ ವೈದ್ಯಕೀಯ ತಂಡದ ಸಮರ್ಪಣೆ ಮತ್ತು ಪರಿಣತಿಗೆ ಸಾಕ್ಷಿ. ಇಂತಹ ಸಂಕೀರ್ಣ ಪ್ರಕರಣಗಳನ್ನು ನಿಭಾಯಿಸಲು ನಮ್ಮ ಆಸ್ಪತ್ರೆಯಲ್ಲಿ ಸಮರ್ಪಿತ ವೈದ್ಯಕೀಯ ತಂಡ ಸಜ್ಜುಗೊಳಿಸಲಾಗಿದೆ. ನಮ್ಮ ಸಮಗ್ರ ಆರೈಕೆ ವಿಧಾನದಿಂದ ನಮ್ಮ ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಲು ನಾವು ಬದ್ಧರಾಗಿರುತ್ತೇವೆ ಎಂದು ಆಸ್ಪತ್ರೆಯ ಸೌಲಭ್ಯ ನಿರ್ದೇಶಕ ಪವನ್ ಕುಮಾರ್ ಸದರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ವಿವಿಯಲ್ಲಿ ಬುದ್ಧನ ಬೆಳದಿಂಗಳು



'ಬುದ್ಧ ಬೆಳದಿಂಗಳು' ಕಾರ್ಯಕ್ರಮದಲ್ಲಿ ಮಾಜಿ ಸಚಿವ ಎನ್.ಮಹೇಶ್ ಗೌತಮ ಬುದ್ಧರ ಪ್ರತಿಮೆಗೆ ಪುಷ್ಪಾರ್ಚನೆ ನೆರವೇರಿಸಿದರು.

ಮೈಸೂರು, ಆ.19(ಎಸ್‌ಪಿಎನ್)– ಮೈಸೂರು ವಿವಿ ಮಾನಸ ಗಂಗೋತ್ರಿ ಆವರಣದಲ್ಲಿ ಧಮ್ಮ ದೀಪ ಪ್ರತಿಷ್ಠಾನ ಚಾರಿಟಬಲ್ ಟ್ರಸ್ಟ್ ವಿದ್ಯಾರ್ಥಿ ಘಟಕ ಆಯೋಜಿಸಿದ್ದ 'ಬುದ್ಧ ಬೆಳದಿಂಗಳು' ಸೋಮವಾರ ನಡೆಯಿತು.

ಈ ವೇಳೆ ಹಿರಿಯ ಜಾನಪದ ಕಲಾವಿದ ಡಾ.ಮೈಸೂರು ಗುರುರಾಜ್ ಅವರ ತಂಡ ಮಂಟೇಸ್ವಾಮಿ ಕಥಾ ಪ್ರಸಂಗವನ್ನು ವಿವರಿಸಿ, ಪ್ರೇಕ್ಷಕರ ಮನ ಗೆದ್ದರು. ನಂತರ ವೇದಿಕೆಯಲ್ಲಿ ನೆರೆದಿದ್ದ ಗಣ್ಯರು ಗೌತಮ ಬುದ್ಧರ ಪ್ರತಿಮೆಗೆ ಪುಷ್ಪಾರ್ಚನೆ ನೆರವೇರಿಸಿದರು.

ನಂತರ ಮಾಜಿ ಸಚಿವ ಎನ್.ಮಹೇಶ್ ಮಾತನಾಡಿ, ಬುದ್ಧನ ತತ್ತ್ವಾದರ್ಶನಗಳನ್ನು ಅಳವಡಿಸಿಕೊಂಡರೆ ಒತ್ತಡರಹಿತ ಬದುಕು ರೂಪಿಸಿಕೊಳ್ಳಲು ಸಾಧ್ಯವಿದೆ. ಹಾಗಾಗಿ ಬುದ್ಧನ ಮೌಲ್ಯಗಳನ್ನು ಅಳವಡಿಸಿಕೊಳ್ಳುವಂತೆ ಮನವಿ ಮಾಡಿದರು.

ಈ ವೇಳೆ ಹನೂರು ಜೇತವನ ಬುದ್ಧವಿಹಾರದ ಮನೋರಕ್ಷಿತ ಭಂತೆ, ಲಾವೋಸ್ ಭಂತೆ ರ್‍ಯಾಂಡಿ ಸೋಂಟಾ, ಮೈಸೂರು ವಿವಿ ಸಂಶೋಧಕರ ಸಂಘದ ಅಧ್ಯಕ್ಷ ಶಿವಶಂಕರ್, ಬೌದ್ಧ ಉಪನ್ಯಾಸಕ ಡಾ.ನಾಗೇಶ್ ಮೌರ್ಯ ಗೌತಮ ಬುದ್ಧರ ಚಿಂತನೆಗಳ ಅಗತ್ಯತೆ ಕುರಿತು ಮಾತನಾಡಿದರು. ಸಭೆಯಲ್ಲಿ ಹೆಚ್.ವಿ.ದಿವ್ಯಾಶ್ರೀ, ಡಾ.ಚಿಂ.ಬ.ಬಸವರಾಜು, ಎಂ.ಅಭಿಷೇಕ್, ನಾಗೇಶ್ ಕಸುವಿನಹಳ್ಳಿ ಸೇರಿದಂತೆ ಇತರರಿದ್ದರು.

ಉಕ್ರೇನ್‌ಗೆ ಆ. 23ರಂದು ಪ್ರಧಾನಿ ನರೇಂದ್ರ ಮೋದಿ ಭೇಟಿ

ನವದೆಹಲಿ: ಯುದ್ಧ ಪೀಡಿತ ಉಕ್ರೇನ್‌ಗೆ ಪ್ರಧಾನಿ ನರೇಂದ್ರ ಮೋದಿ ಅವರು ಆ. 23ರಂದು ಭೇಟಿ ನೀಡಲಿದ್ದಾರೆ.



ಈ ಭೇಟಿಯು ಯುದ್ಧ ಪೀಡಿತ ರಾಷ್ಟ್ರದಲ್ಲಿ ಶಾಂತಿ ನೆಲೆಸುವಂತೆ ಮಾಡುವ ಮಾರ್ಗೋಪಾಯವನ್ನು ಕಂಡುಕೊಳ್ಳುವುದಾಗಿದೆ ಎಂದು ಅವರು ಹೇಳಿದ್ದಾರೆ. ತಮ್ಮ ಭೇಟಿಯ ಸಂದರ್ಭದಲ್ಲಿ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್‌ಸ್ಕಿ ಅವರೊಂದಿಗೆ ಪ್ರಧಾನಿ ಮೋದಿ ಮಾತುಕತೆ ನಡೆಸಲಿದ್ದಾರೆ. ರಾಜತಾಂತ್ರಿಕತೆ ಹಾಗೂ ಮಾತುಕತೆ ಮೂಲಕ ಉಕ್ರೇನ್‌ನಲ್ಲಿನ ಬಿಕ್ಕಟ್ಟು ಶಮನಕ್ಕೆ ಭಾರತ ಸದಾ ಬೆಂಬಲ ನೀಡಲಿದೆ ಎಂದು ವಿದೇಶಾಂಗ ಸಚಿವಾಲಯದ ಪಶ್ಚಿಮ ವಿಭಾಗದ ಕಾರ್ಯ ದರ್ಶಿ ತನ್ಮಯಾ ಲಾಲ್ ಹೇಳಿದ್ದಾರೆ.

ಭಾರತವು ರಷ್ಯಾ ಮತ್ತು ಉಕ್ರೇನ್‌ನೊಂದಿಗೆ ಸಮಾನ ಸಂಬಂಧವನ್ನು ಹೊಂದಿದೆ. ಉಕ್ರೇನ್ ಪ್ರವಾಸಕ್ಕೂ ಮೊದಲು ಪ್ರಧಾನಿ ಮೋದಿ ಅವರು ಪೋಲೆಂಡ್ ಪ್ರವಾಸ ಕೈಗೊಳ್ಳಲಿದ್ದಾರೆ ಎಂದಿದ್ದಾರೆ.

ಪ್ರತಿಭಟನೆ ವೇಳೆ ಬೆಂಕಿ ಹಚ್ಚಿಕೊಳ್ಳಲು ಯತ್ನಿಸಿದ ಸಿದ್ದರಾಮಯ್ಯ ಬೆಂಬಲಿಗ

ಬಾಗಲಕೋಟೆ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಭಿಮಾನಿಯೋರ್ವ ಬೆಂಕಿ ಹಚ್ಚಿಕೊಳ್ಳಲು ಯತ್ನಿಸಿ ಗಾಯಗೊಂಡಿರುವ ಘಟನೆ ಬಾಗಲಕೋಟೆಯಲ್ಲಿ ಸೋಮವಾರ ನಡೆದಿದೆ. ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರ ಕ್ರಮವನ್ನು ಖಂಡಿಸಿ ಕಾಂಗ್ರೆಸ್ ಸೋಮವಾರ ಆಯೋಜಿಸಿದ್ದ ಪ್ರತಿಭಟನೆ ವೇಳೆಯಲ್ಲಿ ಈ ಘಟನೆ ನಡೆದಿದೆ. ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಭಟನಾಕಾರರು ಟೈರ್‌ಗಳಿಗೆ ಬೆಂಕಿ ಹಚ್ಚಿ, ಕೇಂದ್ರೀಯ ಬಿಜೆಪಿ ನಾಯಕರ ಭಾವಚಿತ್ರಗಳಿಗೆ ಚಪ್ಪಲಿಯಿಂದ ಹೊಡೆದು ಆಕ್ರೋಶ ವ್ಯಕ್ತಪಡಿಸುತ್ತಿದ್ದಾಗ ಇದ್ದಕ್ಕಿದ್ದಂತೆ ಪೆಟ್ರೋಲ್ ಕ್ಯಾನ್‌ವೊಂದನ್ನು ತೆಗೆದುಕೊಂಡ ಸಿದ್ದರಾಮಯ್ಯ ಬೆಂಬಲಿಗ, ತನ್ನ ಮೇಲೆ ಸುರಿದುಕೊಂಡು ಬೆಂಕಿ ಹಚ್ಚಿಕೊಳ್ಳಲು ಯತ್ನಿಸಿದ್ದಾನೆ. ಇದರಿಂದ ಅಲ್ಲಿಯೇ ಇದ್ದ ಇತರ ಪ್ರತಿಭಟನಾಕಾರನಿಗೂ ಆಕಸ್ಮಿಕವಾಗಿ ಬೆಂಕಿ ತಗುಲಿದ್ದು, ಸಣ್ಣ ಪ್ರಮಾಣದಲ್ಲಿ ಗಾಯಗೊಂಡಿದ್ದಾರೆ.



ಸ್ಥಳದಲ್ಲಿದ್ದ ಪೊಲೀಸರು ಹಾಗೂ ಪ್ರತ್ಯಕ್ಷದರ್ಶಿಗಳು ಮಧ್ಯಪ್ರವೇಶಿಸಿ ಇಬ್ಬರನ್ನು ಬೆಂಕಿಯಿಂದ ರಕ್ಷಿಸಿದ್ದಾರೆ. ಗಾಯಾಳುಗಳನ್ನು ಗುಳೇದಗುಡ್ಡ ಬಳಿಯ ನಾಗರಾಲ್ ನಿವಾಸಿ ದ್ಯಾವಪ್ಪ ಮಾಗಿ ಮತ್ತು ಬಿಳಗಿ ತಾಲೂಕಿನ ಗಿರಿಸಾಗರದ ಹನುಮಂತ್ ಎಂದು ಗುರುತಿಸಲಾಗಿದೆ. ಮಾಗಿ ಅವರ ಹಣೆ, ಮುಖ, ಕುತ್ತಿಗೆ, ಎದೆ ಮತ್ತು ಬೆನ್ನಿನ ಹಿಂಭಾಗ ಸೇರಿದಂತೆ ಜಾಸ್ತಿ ಪ್ರಮಾಣದಲ್ಲಿ ಗಾಯವಾಗಿದೆ. ಅವರನ್ನು ಚಿಕಿತ್ಸೆಗಾಗಿ ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಅವರ ಪರಿಸ್ಥಿತಿ ಸದ್ಯ ಸ್ಥಿರವಾಗಿರುವುದಾಗಿ ವರದಿಯಾಗಿದೆ.

ಸಿ. ಸಂತೋಷಗೆ ಪಿಹೆಚ್.ಡಿ



ಮೈಸೂರು, ಆ.19– ಡಾ. ಎಂ. ಇಂದಿರಾ ಅವರ ಮಾರ್ಗದರ್ಶನದಲ್ಲಿ ಸಿ. ಸಂತೋಷ ಅವರು ಅರ್ಥಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾ ಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಚಂದ್ರಶೇಖರ್ ನಿಧನ



ಮೈಸೂರು, ಆ.19– ಹೆಚ್.ಡಿ. ಕೋಟೆ ತಾಲೂಕಿನ ನೂರಲಕುಪ್ಪೆ ಗ್ರಾಮದ ನಿವಾಸಿ, ಪತ್ರಕರ್ತ ಪುಟ್ಟರಾಜು ಅವರ ಸಹೋದರ ಚಂದ್ರಶೇಖರ್(38) ಸೋಮವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ನಾಳೆ(ಆ.20) ಅವರ ಜಮೀನಿನಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.





ಹಸಿರು ನಮ್ಮ ಉಸಿರು

IN THE COURT OF THE PRL. SENIOR CIVIL JUDGE AND CJM AT MYSORE

0. S. No. 1060/2024
Plaintiff: Riyaz Khan.
V/S
Defendants: Prashanth. M. Uchil & Others.

PUBLIC NOTICE

The plaintiff has filed the above case for the relief of specific performance of contract against the defendants in pursuance of the sale agreement dated 11-08-2015 executed by them. Further, the plaintiff has got an order of temporary injunction against the defendants restraining them or anybody on their behalf from alienating the schedule property.

It is therefore, the public at large are hereby informed not to do any transaction with the defendants in respect of the schedule property mentioned hereunder.

SCHEDULE PROPERTY-I

All the piece and parcel of dry land measuring 24 acres marked as "E" as enclosed in the Blueprint out of the Sy. No. 4 of Kurubarahally village, Mysore Taluk, bounded on:- East by Block No. C. ; West by : Champaji Road and remaining portion of Sy. No. 4 ; North by: Block No. D ; South by: Champaji Road leading towards Chamundi Hill.

SCHEDULE PROPERTY-II

All the piece and parcel of dry land measuring 1 acres marked as "E" as enclosed in the Blueprint out of the Sy. No. 4 of Kurubarahally village, Mysore Taluk, bounded on:- East by : Remaining portion of Sy. No. 4 ; West by: Remaining portion of Sy. No. 4.
North by : Champaji Road leading towards Chamundi Hill ; South by : Remaining portion of Sy. No. 4.

Advocate for the Plaintiff.
Sd/- CHANDRASHEKAR,
Advocate Roll No.KAR/101/1994,
No.116/3, D. Banumaiah Chowka K.R. Mohalla, Mysuru - 570 004 Mob: 94485 57009
MYSORE.
Dated: 20-08-2024.

ಮೈಸೂರು ಮಿತ್ರ
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಚಾಮರಾಜನಗರ
ಸತ್ತಿ ರಸ್ತೆ, ಚಾಮರಾಜನಗರ–571313
ಇ–ಮೇಲ್: apmccrnagar@rediffmail.com, apmccrnagar@gmail.com ದೂ: 08226-222103,225665

ಸಂಖ್ಯೆ: ಕೃಉಮಾಸ(ಚಾ): 272 : 2024–25 ದಿನಾಂಕ: 13–8–2024

ಸಂಕ್ಷಿಪ್ತ ಇ–ಪ್ರೊಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ

2024–25 ನೇ ಸಾಲಿಗಾಗಿ (ಆದೇಶ ನೀಡಿದ ದಿನಾಂಕದಿಂದ 31–05–2025 ರವರೆಗೆ) ಚಾಮರಾಜನಗರ ಮುಖ್ಯ ಮಾರುಕಟ್ಟೆ ಪ್ರಾಂಗಣ, ಉಪ ಪ್ರಾಂಗಣ ಹಾಗೂ ಸಂತೇಮರಳ್ಳಿ ಉಪ ಮಾರುಕಟ್ಟೆ ಪ್ರಾಂಗಣಗಳಲ್ಲಿ ಸ್ವಚ್ಛತೆ ಮಾಡಲು ಸ್ವಚ್ಛತಾಗಾರರನ್ನು ಪೂರೈಸಲು ಹಾಗೂ ಕಸವನ್ನು ಹೊರ ಸಾಗಿಸಲು ಕಾರ್ಮಿಕ ಇಲಾಖೆಯಲ್ಲಿ ನೊಂದಾಯಿಸಲ್ಪಟ್ಟ ಭದ್ರತಾ ಏಜೆನ್ಸಿಯವರಿಂದ ನಿಯಮಾನುಸಾರ ಕನಿಷ್ಠ ವೇತನ ಕಾಯ್ದೆಯನ್ವಯ ಇ–ಪ್ರೊಕ್ಯೂರ್‌ಮೆಂಟ್ https://kppp.karnataka.gov.in/ ಮೂಲಕ ಟೆಂಡರ್‌ನ್ನು ಆಹ್ವಾನಿಸಲಾಗಿದೆ.

* ವೆಬ್‌ಸೈಟ್‌ನಲ್ಲಿ ಭರ್ತಿ ಮಾಡಿದ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ: 10/09/2024 ಸಾಯಂಕಾಲ 4:30 ಗಂಟೆಯ ವರೆಗೆ
* ತಾಂತ್ರಿಕ ಬಿಡ್ ತೆರೆಯುವ ದಿನಾಂಕ: 13/09/2024 ಬೆಳಗ್ಗೆ 11:30 ಗಂಟೆಗೆ
* ಆರ್ಥಿಕ ಬಿಡ್ ತೆರೆಯುವ ದಿನಾಂಕ: 17/09/2024 ಬೆಳಗ್ಗೆ 11:30 ಗಂಟೆಗೆ
* ಟೆಂಡರ್‌ನ್ನು ಸ್ವೀಕರಿಸುವ ಅಥವಾ ರದ್ದುಪಡಿಸುವ ಅಧಿಕಾರವನ್ನು ಸಮಿತಿಯು ಕಾಯ್ದಿರಿಸಿಕೊಂಡಿರುತ್ತದೆ.
* ಉಳಿದ ಷರತ್ತು–ಷ–ನಿಬಂಧನೆಗಳನ್ನು ಕಛೇರಿ ವೇಳೆಯಲ್ಲಿ ಪಡೆಯಬಹುದು ಅಥವಾ ಮೇಲಿನ ವೆಬ್‌ಸೈಟ್‌ನಲ್ಲಿ ಪಡೆಯಬಹುದು.

ಸಹಿ/– (ಶ್ರೀ. ಹೆಚ್.ಎನ್ ಮಹದೇವಸ್ವಾಮಿ ಉರುಫ್ ಸೋಮೇಶ್)
ಅಧ್ಯಕ್ಷರು ಕೃ.ಉ.ಮಾ.ಸ., ಚಾಮರಾಜನಗರ
ಸಹಿ/– (ಶ್ರೀ. ಪ್ರಕಾಶ್‌ಕುಮಾರ್ ಟಿ. ವಿ)
ಕಾರ್ಯದರ್ಶಿ ಕೃ.ಉ.ಮಾ.ಸ., ಚಾಮರಾಜನಗರ

ಸಂ: ವಾಸಾಸಂಇ:ಚಾನಗರ:179:2024–25